# ವಾರ್ಷಿಕ ವರದಿ 2005–06

**ವಿಷಯಸೂಚಿ**


| ಅಧ್ಯಾಯ | ವಿವರಗಳು | ಪುಟಸಂಖ್ಯೆಗಳು |
|---|---|---|
| 01. | ಪ್ರಸ್ತಾವನೆ | |
| 02. | ಆಯೋಗದ ವಿವರ | |
| 03. | ಅಧಿನಿಯಮದ ಅನುಷ್ಠಾನ | |
| 04. | ಶಿಫಾರಸುಗಳು | |
| **ಅನುಬಂಧಗಳು** | | |
| ಎ. | ಕೋಷ್ಠಕಗಳು ಮತ್ತು ಚಾರ್ಟ್‌ಗಳು | |
| ಬಿ. | ಆಯೋಗ ರಚನೆಯ ಅಧಿಸೂಚನೆ | |
| ಸಿ. | ರಾ.ಮು.ಮಾ.ಕ ಮತ್ತು ರಾ.ಮಾ.ಕ. ರ ನೇಮಕಾತಿ ಅಧಿಸೂಚನೆಗಳು | |
| ಡಿ. | ನಿಯಮಗಳು, ಆದೇಶಗಳು ಅಧಿಸೂಚನೆಗಳು ಇತ್ಯಾದಿ | |
| ಇ. | ಮಾಹಿತಿ ಹಕ್ಕು ಅಧಿನಿಯಮ | |

ಕರ್ನಾಟಕ ಮಾಹಿತಿ ಆಯೋಗ – ವಾರ್ಷಿಕ ವರದಿ 2005–06

# ಅಧ್ಯಾಯ – I

## ಪೀಠಿಕೆ

1.1 ಮಾಹಿತಿ ಹಕ್ಕು ಅಧಿನಿಯಮ, 2005ಕ್ಕೆ 2005ರ ಜೂನ್ 15ರಂದು ರಾಷ್ಟ್ರಪತಿಯವರ ಸಮ್ಮತಿಯನ್ನು ಪಡೆಯಲಾಯಿತು. ಅಧಿನಿಯಮದ 1(3)ನೇ ಪ್ರಕರಣವು, 4ನೇ ಪ್ರಕರಣದ (1)ನೇ ಉಪಪ್ರಕರಣದ, 5ನೇ ಪ್ರಕರಣದ (1) ಮತ್ತು (2)ನೇ ಉಪಪ್ರಕರಣಗಳ ಹಾಗೂ 12, 13, 15, 16, 24, 27 ಮತ್ತು 28ನೇ ಪ್ರಕರಣಗಳ ಉಪಬಂಧಗಳು ಕೂಡಲೇ ಜಾರಿಗೆ ಬರತಕ್ಕದೆಂದು, ಆದರೆ, ಅಧಿನಿಯಮದ ಉಳಿದ ಉಪಬಂಧಗಳು ಅದು ಅಧಿನಿಯಮಿತಗೊಂಡ ಒಂದುನೂರ ಇಪ್ಪತ್ತನೇ ದಿನದಂದು ಜಾರಿಗೆ ಬರತಕ್ಕದೆಂದು ಉಪಬಂಧ ಕಲ್ಪಿಸಿದೆ.

1.2 ಅಧಿನಿಯಮದ 15ನೇ ಪ್ರಕರಣವು ಕೂಡಲೇ ಜಾರಿಗೆ ಬಂದಿರುತ್ತದೆ. ರಾಜ್ಯ ಮಾಹಿತಿ ಆಯೋಗಗಳ ರಚನೆಗೆ ಅದು ಅವಕಾಶ ಕಲ್ಪಿಸಿದೆ. ತದನುಸಾರವಾಗಿ, ಕರ್ನಾಟಕ ಮಾಹಿತಿ ಆಯೋಗವು ರಾಜ್ಯ ಮುಖ್ಯ ಮಾಹಿತಿ ಆಯುಕ್ತರಾಗಿ ಶ್ರೀ ಕೆ.ಕೆ. ಮಿಶ್ರಾರವರು ಪ್ರಮಾಣವಚನ ಸ್ವೀಕರಿಸುವುದರೊಂದಿಗೆ 2005ರ ಜುಲೈ 31ರ ಅಪರಾಹ್ನ ಅಸ್ತಿತ್ವಕ್ಕೆ ಬಂದಿತು. ಶ್ರೀ ಕೆ.ಎ. ತಿಪ್ಪೇಸ್ವಾಮಿ ಅವರು 2005ರ ಅಕ್ಟೋಬರ್ 28ರಂದು ರಾಜ್ಯ ಮಾಹಿತಿ ಆಯುಕ್ತರಾಗಿ ಪ್ರಮಾಣವಚನ ಸ್ವೀಕರಿಸಿದರು.

1.3 ಅಧಿನಿಯಮದ ಉಳಿದ ಉಪಬಂಧಗಳು 12.10.2005ರಂದು ಜಾರಿಗೆ ಬಂದಿರುವುದರಿಂದ, ಆಯೋಗವು ಆ ದಿನಾಂಕದಂದು ಪೂರ್ಣವಾಗಿ ಕಾರ್ಯರೂಪಕ್ಕೆ ಬಂದಿದೆ.

1.4 ಕರ್ನಾಟಕವು, ಕೇಂದ್ರ ಅಧಿನಿಯಮವನ್ನು ಅಂಗೀಕರಿಸುವುದಕ್ಕೂ ಮುಂಚೆ ಈಗಾಗಲೇ ಮಾಹಿತಿ ಹಕ್ಕು ಕುರಿತು ಒಂದು ರಾಜ್ಯ ಶಾಸನವನ್ನು ಎಂದರೆ ಕರ್ನಾಟಕ ಮಾಹಿತಿ ಹಕ್ಕು ಅಧಿನಿಯಮ, 2000ನ್ನು ಹೊಂದಿದ್ದಂತಹ ರಾಜ್ಯಗಳಲ್ಲಿ ಒಂದಾಗಿತ್ತು. ಹೊಸ ಕೇಂದ್ರ ಅಧಿನಿಯಮದ ಉಪಬಂಧಗಳಿಗೆ ಮತ್ತು ಈಗಿರುವ ರಾಜ್ಯ ಅಧಿನಿಯಮದ ಉಪಬಂಧಗಳಿಗೆ ಬಹುಮಟ್ಟಿಗೆ ಮಾಹಿತಿ ಹಕ್ಕಿನ ಚಲಾವಣೆಗೆ ಸಂಬಂಧಿಸಿದಂತೆ ಬಹುಮಟ್ಟಿಗೆ ಪರಸ್ಪರ ಹೋಲಿಕೆ ಇದೆ. ಆದ್ದರಿಂದ, ಹೊಸ ಅಧಿನಿಯಮದ ಉಪಬಂಧಗಳ ಪರಿಪಾಲನೆಯನ್ನು ಸುನಿಶ್ಚಿತಪಡಿಸಿಕೊಳ್ಳುವಲ್ಲಿ ರಾಜ್ಯಕ್ಕೆ ಕೆಲವು ಆರಂಭಿಕ ಅನುಕೂಲ ಇದೆ. ರಾಜ್ಯ ಅಧಿನಿಯಮವು 2005ರ ಅಕ್ಟೋಬರ್ 17 ರಂದು ನಿರಸನಗೊಂಡಿದೆ.

1.5. ಕರ್ನಾಟಕ ಸರ್ಕಾರವು ಕೇಂದ್ರ ಅಧಿನಿಯಮದ ಮೇರೆಗೆ ನಿಯಮಗಳನ್ನು ರೂಪಿಸುವಾಗ ಬಳಕೆದಾರ ಸ್ನೇಹಿ ದೃಷ್ಟಿಕೋನವನ್ನು ಅಳವಡಿಸಿಕೊಂಡಿದೆ. ಹಾಗಾಗಿ, ಮಾಹಿತಿ ಕೋರುವವರಿಗಾಗಿ ಒಂದು ಅರ್ಜಿ ನಮೂನೆಯನ್ನು ಸೂಚಿಸಿದ್ದರೂ ಸಹ, ಅದನ್ನೇ ಕಡ್ಡಾಯ ಮಾಡಿಲ್ಲ.

1.6. ಆರಂಭಿಕ ಶುಲ್ಕವನ್ನು ಕೇವಲ 10 ರೂಪಾಯಿಗಳಷ್ಟು ಕಡಿಮೆ ಮೊತ್ತಕ್ಕೆ ನಿಗದಿಪಡಿಸಲಾಗಿದೆ. ಸಂದಾಯ ಮಾಡಬೇಕಾದ ಹೆಚ್ಚುವರಿ ಶುಲ್ಕವನ್ನು ಎ4 ಅಳತೆಯ ಒಂದು ದಸ್ತಾವೇಜಿಗಾಗಿ ಪ್ರತಿ ಪುಟಕ್ಕೆ 2ರೂ.ನಂತೆ ನಿಗದಿಪಡಿಸಲಾಗಿದೆ ಮತ್ತು ಇದನ್ನು ಪ್ರಕರಣ 4(1)(ಬಿ) ಮೇರೆಗೆ ತಾನಾಗಿಯೇ ಮಾಹಿತಿಯನ್ನು ತಿಳಿಸುವುದಕ್ಕಾಗಿ ಪ್ರತಿ ಪುಟಕ್ಕೆ 1 ರೂಪಾಯಿಗೆ ಮತ್ತಷ್ಟು ಕಡಿಮೆ ಮಾಡಲಾಗಿದೆ.

1.7 ದಸ್ತಾವೇಜುಗಳ ತಪಾಸಣೆಯು ಮೊದಲನೆಯ ಒಂದು ಗಂಟೆಯವರೆಗೆ ಉಚಿತವಾಗಿರುತ್ತದೆ. ಆಯೋಗದ ಮುಂದೆ ದೂರುಗಳನ್ನು ಅಥವಾ ಅಪೀಲುಗಳನ್ನು ಸಲ್ಲಿಸುವುದಕ್ಕೆ ಯಾವುದೇ ಶುಲ್ಕವನ್ನು ನಿಗದಿಪಡಿಸಿಲ್ಲ. ಅಲ್ಲದೆ, ಸಮನ್ಸ್‌ಗಳನ್ನು ಹೊರಡಿಸುವುದಕ್ಕಾಗಿ ಅಪೀಲುದಾರ/ಫಿರ್ಯಾದುದಾರನು ಯಾವುದೇ ಶುಲ್ಕವನ್ನು ಸಂದಾಯ ಮಾಡಬೇಕಾಗಿಲ್ಲ. ಆಯೋಗವು ಹೊರಡಿಸಿದ ಆದೇಶದ ಒಂದು ಪ್ರತಿಯನ್ನು ಮಾತ್ರ ಉಚಿತವಾಗಿ ಪಕ್ಷದಾರರಿಗೆ

ಕಳುಹಿಸಲಾಗುತ್ತದೆ. ವಿಚಾರಣೆಗಳಲ್ಲಿ ಅಪೀಲುದಾರ / ಫಿರ್ಯಾದುದಾರನ ಹಾಜರಾತಿಯನ್ನು ಕಡ್ಡಾಯ ಮಾಡಿಲ್ಲ.

1.8 ಆಯೋಗವು ತನ್ನ ನಡೆವಳಿಗಳಲ್ಲಿ ಕೂಡ ಕಡಿಮೆ ಔಪಚಾರಿಕ ದೃಷ್ಟಿಕೋನವನ್ನು ಅಳವಡಿಸಿಕೊಂಡಿದೆ. ಆಯುಕ್ತರು ಮತ್ತು ಪಕ್ಷದಾರರು ಒಂದೇ ಟೇಬಲಿನ ಮೇಲೆ ಕುಳಿತುಕೊಳ್ಳುತ್ತಾರೆ. ಎಲ್ಲಾ ಪ್ರಕರಣಗಳನ್ನು ಅಂತಿಮ ಇತ್ಯರ್ಥಕ್ಕಾಗಿ ಕಳುಹಿಸಿಕೊಡಲಾಗುತ್ತದೆ ಮತ್ತು ಮೊದಲ ವಿಚಾರಣೆಯ ದಿನದಂದೇ ವಿಚಾರಣೆಯನ್ನು ಪೂರ್ಣಗೊಳಿಸುವುದಕ್ಕೆ ಮತ್ತು ಆ ಸ್ಥಳದಲ್ಲೇ ಅಂತಿಮ ಆದೇಶಗಳನ್ನು ಓದಿಹೇಳುವುದಕ್ಕೆ ಒತ್ತು ನೀಡಲಾಗಿದೆ.

1.9 ಕರ್ನಾಟಕ ಮಾಹಿತಿ ಆಯೋಗವು, ಸಾರ್ವಜನಿಕ ಮಾಹಿತಿ ಅಧಿಕಾರಿಯು ಅರ್ಜಿದಾರನಿಗೆ ಮಾಹಿತಿ ಪಡೆಯುವ ಅವಕಾಶವನ್ನು ನಿರಾಕರಿಸಿದರೆ ಆ ಅರ್ಜಿದಾರನು ಅಧಿನಿಯಮದ 19(1)ನೇ ಪ್ರಕರಣದ ಮೇರೆಗೆ ಅಪೀಲು ಅರ್ಜಿಯ ಮುಖಾಂತರ ಮೊದಲ ಅಪೀಲು ಪ್ರಾಧಿಕಾರಕ್ಕೆ ಅಪೀಲು ಸಲ್ಲಿಸುವುದಕ್ಕೆ ಬದಲಾಗಿ 18(1)(ಬಿ) ಪ್ರಕರಣದ ಮೇರೆಗೆ ದೂರಿನ ರೂಪದಲ್ಲಿ ನೇರವಾಗಿ ಆಯೋಗಕ್ಕೆ ದೂರು ಸಲ್ಲಿಸಬಹುದೆಂದು ನಿರ್ಣಯಿಸಿದೆ. ಕೆಲವು ಇತರ ಆಯೋಗಗಳು ಹಾಗೆ ಮಾಡಿಲ್ಲ.

1.10 ಆಯೋಗವು ಅನೇಕ ಕಾರಣಗಳಿಗಾಗಿ ಈ ದೃಷ್ಟಿಕೋನವನ್ನು ಅಳವಡಿಸಿಕೊಂಡಿದೆ. ಮೊದಲನೆಯದಾಗಿ, ಅಧಿನಿಯಮವು ಹಾಗೆ ದೂರು ಸಲ್ಲಿಸಲು ಅವಕಾಶ ಕಲ್ಪಿಸಿದೆ. ಎರಡನೆಯದಾಗಿ, ಒಬ್ಬ ವ್ಯಕ್ತಿಯ ಜೀವ ಮತ್ತು / ಅಥವಾ ಸ್ವಾತಂತ್ರ್ಯಕ್ಕೆ ಅಪಾಯವಿರುವ ತುರ್ತು ಸಂದರ್ಭಗಳಲ್ಲಿ, ಆತನು ಮೊದಲನೆಯ ಅಪೀಲು ಪ್ರಾಧಿಕಾರಕ್ಕೆ ಹೋಗುವಲ್ಲಿ ಆಗುವ ವಿಳಂಬದಿಂದ ಅನಾವಶ್ಯಕ ತೊಂದರೆಗೆ ಒಳಗಾಗಬೇಕಾಗುತ್ತದೆ. ಮೂರನೆಯದಾಗಿ, ಈ ಆಯೋಗವು, ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಸಾಮಾನ್ಯವಾಗಿ ಮಾಹಿತಿ ಪಡೆಯುವ ಅವಕಾಶವನ್ನು ನಿರಾಕರಿಸುವುದಕ್ಕೂ ಮುಂಚೆ ಔಪಚಾರಿಕವಾಗಿ ಅಥವಾ ಅನೌಪಚಾರಿಕವಾಗಿ ತಮ್ಮ ಮೇಲಿನ ಅಧಿಕಾರಿಗಳೊಂದಿಗೆ ಸಮಾಲೋಚಿಸುತ್ತಾರೆ. ಹಾಗಾಗಿ ಯಾವ ಅಧಿಕಾರಿಯು ಮಾಹಿತಿಯನ್ನು ನಿರಾಕರಿಸುತ್ತಾರೋ ಆ ಅಧಿಕಾರಿಗೇ ಅಪೀಲು ಸಲ್ಲಿಸುವುದು ನಿರರ್ಥಕವಾಗುತ್ತದೆಂಬುದನ್ನು ಗಮನಿಸಿದೆ.

1.11 ನಾಲ್ಕನೆಯದಾಗಿ, ಮೊದಲನೆಯ ಅಪೀಲು ಪ್ರಾಧಿಕಾರಿಗಳು ಮೂವತ್ತು ದಿನಗಳ ನಿಗದಿತ ಅವಧಿಯೊಳಗಾಗಿ ಅಪೀಲುಗಳನ್ನು ಇತ್ಯರ್ಥಪಡಿಸುತ್ತಿಲ್ಲ. ಹಾಗಾಗಿ ಅವರ ತೀರ್ಪುಗಳಿಗಾಗಿ ಕಾಯುವುದು ನಷ್ಟವಲ್ಲದೇ ಬೇರೇನೂ ಅಲ್ಲ ಮತ್ತು ಐದನೆಯದಾಗಿ, ಸಾಮಾನ್ಯವಾಗಿ ಯಾವ ವ್ಯಕ್ತಿಯ ಪ್ರಕರಣವನ್ನು ತಿರಸ್ಕರಿಸಲಾಗಿದೆಯೋ ಆ ವ್ಯಕ್ತಿಯು ಕನಿಷ್ಠಪಕ್ಷ ಎರಡು ಅಪೀಲುಗಳನ್ನು ಸಲ್ಲಿಸಲು ಅವಕಾಶ ಇರಬೇಕಾಗುತ್ತದೆಯಾದ್ದರಿಂದ ಅಧಿನಿಯಮದ ಮೇರೆಗೆ ಎರಡು ಅಪೀಲುಗಳಿಗೆ ಅವಕಾಶ ಕಲ್ಪಿಸಲಾಗಿದೆ. ಅಪೀಲುದಾರನು ಮೊದಲನೆಯ ಅಪೀಲಿನ ತನ್ನ ಹಕ್ಕನ್ನು ತಾನೇ ಸ್ವ ಇಚ್ಛೆಯಿಂದ ಬಿಟ್ಟುಕೊಟ್ಟರೆ, ಪ್ರತಿವಾದಿಯು ಅದನ್ನು ಆಕ್ಷೇಪಿಸುವಂತಿಲ್ಲ. ಆದರೆ, ಮೂರನೆಯ ಪಕ್ಷಧಾರರ ಹಕ್ಕುಗಳು ಏನಾದರೂ ಇದ್ದರೆ, ಆಯೋಗವು ಎರಡನೆಯ ಅಪೀಲಿನ ಮುಖಾಂತರ ಮಾತ್ರವೇ ಆಯೋಗಕ್ಕೆ ದೂರು ಸಲ್ಲಿಸಬೇಕೆಂದು ಸೂಚಿಸುತ್ತದೆ.

1.12 ಮಾಹಿತಿಗಾಗಿ ಸಲ್ಲಿಸಿದ್ದ ಯಾವ ಅರ್ಜಿದಾರನ ಕೋರಿಕೆಯನ್ನು ತಿರಸ್ಕರಿಸಲಾಗಿದೆಯೋ ಆ ಅರ್ಜಿದಾರನು ಮಾಹಿತಿಯನ್ನು ಪಡೆಯುವುದಕ್ಕಾಗಿ 19(1)ನೇ ಪ್ರಕರಣದ ಮೇರೆಗೆ ಮೊದಲನೆಯ ಅಪೀಲು ಪ್ರಾಧಿಕಾರಕ್ಕೆ ಹೋಗಬಹುದೆಂದು ಆಯೋಗದ ಮುಂದೆ ವಾದಿಸಲಾಗಿದೆ. ಆದರೆ, ಆಯೋಗ ಮಾತ್ರವೇ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನು ದಂಡನೆಗೆ ಗುರಿಪಡಿಸುವ ಹಕ್ಕನ್ನು ಹೊಂದಿರುವುದರಿಂದ ಮಾಹಿತಿ ಮೊದಲಾದವುಗಳನ್ನು ನೀಡಲು ವಿಳಂಬ ಮಾಡಿರುವುದಕ್ಕಾಗಿ ಯಾವುದೇ ಯುಕ್ತ ಕಾರಣವನ್ನು ನೀಡದೆ, ಮಾಹಿತಿ ನೀಡಲು ನಿರಾಕರಿಸಿರುವುದಕ್ಕಾಗಿ ಅಧಿನಿಯಮದ 18(1)ನೆ ಪ್ರಕರಣದ ಮೇರೆಗೆ ಸಾರ್ವಜನಿಕ ಮಾಹಿತಿ ಅಧಿಕಾರಿಯ ವಿರುದ್ಧ ಕ್ರಮ ಕೈಗೊಳ್ಳುವುದಕ್ಕಾಗಿ ಏಕಕಾಲದಲ್ಲಿ ಆಯೋಗದ ಮುಂದೆ ದೂರನ್ನು ಸಲ್ಲಿಸಲು ಆತನಿಗೆ ಯಾವ ತಡೆಯೂ ಇರುವುದಿಲ್ಲ.

1.13 ಆಯೋಗವು ಸಾಮಾನ್ಯ ಹಿತಾಸಕ್ತಿಯ ಮಾಹಿತಿಯನ್ನು ಕೋರುವಲ್ಲಿ ಮತ್ತು ಸಾರ್ವಜನಿಕವಾಗಿ ಅದನ್ನು ತಿಳಿಸುವಲ್ಲಿ ಕ್ರಿಯಾಶೀಲ ಕಾರ್ಯಕರ್ತರು ವಹಿಸಿದ ಸಕಾರಾತ್ಮಕ ಪಾತ್ರವನ್ನು ಕೃತಜ್ಞತೆಯಿಂದ ಸ್ಮರಿಸಲು ಈ ಅವಕಾಶವನ್ನು ಬಳಸಿಕೊಳ್ಳಲಿಚ್ಛಿಸುತ್ತದೆ, ಅವರು ಕೆಲವು ಅತ್ಯಂತ ಉಪಯುಕ್ತ ಸಲಹೆಗಳನ್ನು ನೀಡುವ ಮೂಲಕ ಕೂಡ ಆಯೋಗಕ್ಕೆ ನೆರವಾಗಿದ್ದಾರೆ.

1.14 ಆಯೋಗವು ರಾಜ್ಯ ಸರ್ಕಾರಕ್ಕೆ ಮತ್ತು ವಿಶೇಷವಾಗಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಗೆ ಕೂಡ ಕೃತಜ್ಞತೆಯನ್ನು ಸಲ್ಲಿಸಲಿಚ್ಛಿಸುತ್ತದೆ.

# ಅಧ್ಯಾಯ – II
# ಆಯೋಗ ಕುರಿತು

2.1 ಕರ್ನಾಟಕ ಮಾಹಿತಿ ಆಯೋಗವನ್ನು ದಿನಾಂಕ 30/07/2005ರ ಆದೇಶಗಳ ಮೂಲಕ ರಚಿಸಲಾಯಿತು. ಇದು ವಿಧಾನಸೌಧದಲ್ಲಿ ಮೊದಲು ಕಾರ್ಯಾರಂಭ ಮಾಡಿತು. ಆಯೋಗವು ಈಗ, ಮೂರನೇ ಮಹಡಿ, ಎರಡನೇ ಗೇಟ್, ಬಹುಮಹಡಿಗಳ ಕಟ್ಟಡ, ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು – 560001 – ಇಲ್ಲಿ ಕಾರ್ಯ ನಿರ್ವಹಿಸುತ್ತಿದೆ.

2.2 ಪ್ರಾರಂಭದ ವರ್ಷದಲ್ಲಿ, ಆಯೋಗವು ರಾಜ್ಯ ಮುಖ್ಯ ಮಾಹಿತಿ ಆಯುಕ್ತರು (ಎಸ್‌ಸಿಐಸಿ), ಒಬ್ಬರು ರಾಜ್ಯ ಮಾಹಿತಿ ಆಯುಕ್ತರು (ಎಸ್‌ಐಸಿ) ಒಬ್ಬರು ಅಧೀನ ಕಾರ್ಯದರ್ಶಿ ಮತ್ತು ಕೆಲವು ಸಹಾಯಕ ಸಿಬ್ಬಂದಿಯೊಂದಿಗೆ ಕಾರ್ಯ ನಿರ್ವಹಿಸಿತು.

## ಮುಖ್ಯ ಕಾರ್ಯಗಳು ಮತ್ತು ಕರ್ತವ್ಯಗಳು

2.3 ಮಾಹಿತಿ ಆಯೋಗಗಳ ಅಧಿಕಾರಗಳು ಮತ್ತು ಕಾರ್ಯಗಳು ಮಾ.ಹ. ಅಧಿನಿಯಮದ ಅಧ್ಯಾಯ 5ರಲ್ಲಿ ಇವೆ. ಅಧಿನಿಯಮದ ಉಪಬಂಧಗಳ ಮೇರೆಗೆ, ಆಯೋಗವು, ಸಾ.ಮಾ.ಅ. ಗಳನ್ನು ನೇಮಕ ಮಾಡದಿರುವುದಕ್ಕೆ, ಮಾಹಿತಿಯನ್ನು ಕೋರುವ ಅರ್ಜಿಯನ್ನು ಅಪೀಲನ್ನು ಅಂಗೀಕರಿಸಲು / ರವಾನಿಸಲು ಸಾ.ಮಾ.ಅ./ಸ.ಸಾ.ಮಾ.ಅ. ಗಳು ನಿರಾಕರಿಸುವುದಕ್ಕೆ, ಕೋರಲಾದ ಮಾಹಿತಿಯನ್ನು ಪಡೆಯಲು ಅವಕಾಶವನ್ನು ನಿರಾಕರಿಸುವುದಕ್ಕೆ, ಮಾಹಿತಿಗಾಗಿ ಮಾಡಿಕೊಂಡ ಕೋರಿಕೆಗೆ ನಿರ್ದಿಷ್ಟಪಡಿಸಿದ ಕಾಲ ಪರಿಮಿತಿಯೊಳಗೆ ಉತ್ತರ ದೊರೆಯದಿರುವುದಕ್ಕೆ ಅಥವಾ ಮಾಹಿತಿಯನ್ನು ಒದಗಿಸಿಲ್ಲದಿರುವುದಕ್ಕೆ ಅಸಂಬದ್ಧವೆಂದು ಪರಿಗಣಿಸುವ ಶುಲ್ಕ ಪಾವತಿಯನ್ನು ಅಗತ್ಯಪಡಿಸುವುದಕ್ಕೆ, ಮಾ.ಆ.ಹ. ಅಧಿನಿಯಮದ ಮೇರೆಗೆ ಅಪೂರ್ಣವಾದ, ತಪ್ಪುದಾರಿಗೆ ಎಳೆಯುವ ಅಥವಾ ಸುಳ್ಳು ಮಾಹಿತಿಯನ್ನು ನೀಡುವುದಕ್ಕೆ ಅಥವಾ ಮಾ.ಹ. ಅಧಿನಿಯಮದ ಮೇರೆಗೆ ದಾಖಲೆಗಳನ್ನು ಕೋರುವುದಕ್ಕೆ ಅಥವಾ ಪಡೆಯುವುದಕ್ಕೆ ಸಂಬಂಧಪಟ್ಟ ಯಾವುದೇ ಇತರ ವಿಷಯಕ್ಕೆ ಸಂಬಂಧಪಟ್ಟಂತೆ ದೂರುಗಳನ್ನು ಸ್ವೀಕರಿಸುವುದು ಮತ್ತು ತನಿಖೆ ಮಾಡುವುದು.

2.4 18ನೇ ಪ್ರಕರಣದ ಮೇರೆಗೆ ದೂರನ್ನು ವಿಚಾರಣೆ ಮಾಡುವಾಗ ಆಯೋಗವು, ವ್ಯಕ್ತಿಗಳ ಹಾಜರಾತಿಗಾಗಿ ಸಮನ್ಸ್ ಮಾಡುವ ಮತ್ತು ವ್ಯಕ್ತಿಗಳ ಹಾಜರಾತಿಗೆ ಒತ್ತಾಯಪಡಿಸುವುದಕ್ಕೆ ದಾಖಲೆಗಳ ಶೋಧನೆಗೆ ಹಾಗೂ ಪರಿಶೀಲನೆಗೆ, ಅಫಿಡೆವಿಟ್‌ನ ಮೇಲೆ ಸಾಕ್ಷ್ಯವನ್ನು ಸ್ವೀಕರಿಸುವುದಕ್ಕೆ, ಯಾವುದೇ ಸಾರ್ವಜನಿಕ ದಾಖಲೆಗಳನ್ನು ಕಡ್ಡಾಯವಾಗಿ ಕೋರುವುದಕ್ಕೆ, ಸಾಕ್ಷಿದಾರರ ಅಥವಾ ದಾಖಲೆಗಳ ಇತ್ಯಾದಿಗಳ ಪರೀಕ್ಷೆಗಾಗಿ ಸಮನ್ಸ್‌ಗಳನ್ನು ಹೊರಡಿಸುವುದಕ್ಕೆ ಸಂಬಂಧಪಟ್ಟಂತೆ 1908ರ ಸಿವಿಲ್ ಪ್ರಕ್ರಿಯಾ ಸಂಹಿತೆಯ ಮೇರೆಗೆ ದಾವೆಯನ್ನು ಅಧಿವಿಚಾರಣೆ ಮಾಡುವಾಗ ಸಿವಿಲ್ ನ್ಯಾಯಾಲಯದಲ್ಲಿ ನಿಹಿತಗೊಳಿಸಲಾದಂತಹುದೇ ಅಧಿಕಾರಗಳನ್ನು ಹೊಂದಿರತಕ್ಕದ್ದೆಂದು ಅಧಿನಿಯಮವು ಉಪಬಂಧಿಸಿದೆ. ಪುನರ್ ಅವಲೋಕನ ವರ್ಷದಲ್ಲಿ ಆಯೋಗವು 24 ದೂರುಗಳನ್ನು ವಿಲೇ ಮಾಡಿದೆ.

2.5 19(3)ನೇ ಪ್ರಕರಣದ ಮೇರೆಗೆ ಆಯೋಗವು ಎರಡನೇ ಅಪೀಲು ಪ್ರಾಧಿಕಾರವೂ (ಮೊದಲನೇ ಅಪೀಲು ಪ್ರಾಧಿಕಾರದ ಆದೇಶದ ವಿರುದ್ಧ) ಆಗಿದೆ. ಅಧಿನಿಯಮದ 19(8)ನೇ ಪ್ರಕರಣದ ಮೇರೆಗೆ, ಆಯೋಗಕ್ಕೆ ಅಧಿನಿಯಮದ ಉಪಬಂಧಗಳನ್ನು ಪಾಲಿಸುವಂತೆ ಮಾಡಲು ಅವಶ್ಯವಾಗಬಹುದಾದಂಥ ಕ್ರಮಗಳನ್ನು ಕೈಗೊಳ್ಳಲು, ಸಾರ್ವಜನಿಕ ಪ್ರಾಧಿಕಾರಗಳನ್ನು ಅಗತ್ಯತೆಯ ಅನುಸಾರವಾಗಿ ಕ್ರಮಕೈಗೊಳ್ಳುವ ಅಧಿಕಾರವನ್ನೂ ಸಹ ನೀಡಲಾಗಿದೆ. ಪುನರ್ ಅವಲೋಕನದ ವರ್ಷದಲ್ಲಿ ಆಯೋಗವು 15 ಅಪೀಲುಗಳನ್ನು ಇತ್ಯರ್ಥಗೊಳಿಸಿದೆ.

2.6 ಅಧಿನಿಯಮದ 20ನೇ ಪ್ರಕರಣವು ಆಯೋಗಕ್ಕೆ ರಾಜ್ಯ ಸಾ.ಮಾ.ಅ.ಗಳು / ಸ.ಸಾ.ಮಾ.ಅ.ಗಳ ಮೇಲೆ ದಂಡನೆಗಳನ್ನು ವಿಧಿಸಲು ಅಧಿಕಾರ ನೀಡುತ್ತದೆ. ಅಷ್ಟೇ ಅಲ್ಲದೆ ಅವರ ವಿರುದ್ಧ ಶಿಸ್ತುಕ್ರಮವನ್ನು ತೆಗೆದುಕೊಳ್ಳಲು ಶಿಫಾರಸ್ಸನ್ನೂ ಸಹ ಮಾಡುತ್ತದೆ. ಅಧಿನಿಯಮದ ಮೇರೆಗಿನ

ದಂಡನೆಗಳನ್ನು "0070-60-118-0-03-ಅಧಿನಿಯಮದ ಮೇರೆಗಿನ ದಂಡನೆಗಳು" ಶೀರ್ಷಿಕೆಯ ಅಡಿಯಲ್ಲಿ ಸೇರಿಸಬಹುದೆಂದು ಸರ್ಕಾರವು ನಿರ್ದೇಶಿಸಿದೆ.

2.7 ಅಧಿನಿಯಮದ 25ನೇ ಪ್ರಕರಣದ ಮೇರೆಗೆ ಆಯೋಗವು ಅಧಿನಿಯಮದ ಅನುಷ್ಠಾನದ ಬಗೆಗಿನ ತನ್ನ ವಾರ್ಷಿಕ ವರದಿಯನ್ನು ಸಿದ್ಧಪಡಿಸಬೇಕು ಮತ್ತು ರಾಜ್ಯ ಸರ್ಕಾರವು ಆಯೋಗದ ವರದಿಯ ಪ್ರತಿಯನ್ನು, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ ಮಂಡಿಸುವಂತೆ ಮಾಡಬೇಕು.

2.8 15 (4)ನೇ ಪ್ರಕರಣದ ಮೇರೆಗೆ, ರಾಜ್ಯ ಮಾಹಿತಿ ಆಯೋಗದ ವ್ಯವಹಾರಗಳ ಸಾಮಾನ್ಯ ಉಸ್ತುವಾರಿ, ನಿರ್ದೇಶನ ಮತ್ತು ನಿರ್ವಹಣೆಯು ರಾಜ್ಯ ಮುಖ್ಯ ಮಾಹಿತಿ ಆಯುಕ್ತರಲ್ಲಿ ನಿಹಿತವಾಗಿರತಕ್ಕದ್ದು. ಅವರಿಗೆ ರಾಜ್ಯ ಮಾಹಿತಿ ಆಯುಕ್ತರುಗಳು ಸಹಾಯ ನೀಡತಕ್ಕದ್ದು ಮತ್ತು ಈ ಅಧಿನಿಯಮದ ಮೇರೆಗೆ ಯಾವುದೇ ಇತರ ಪ್ರಾಧಿಕಾರವು ನೀಡುವ ನಿರ್ದೇಶನಗಳಿಗೆ ಒಳಪಡದೆ, ರಾಜ್ಯ ಮಾಹಿತಿ ಆಯೋಗವು ಚಲಾಯಿಸಬಹುದಾದಂತಹ ಎಲ್ಲ ಅಧಿಕಾರಗಳನ್ನು ಸ್ವತಂತ್ರವಾಗಿ ಚಲಾಯಿಸುವುದು ಮತ್ತು ನಿರ್ವಹಿಸಬಹುದಾದಂಥ ಎಲ್ಲಾ ಅಂತಹ ಕಾರ್ಯಗಳನ್ನು ಮತ್ತು ವಿಷಯಗಳನ್ನು ನಿರ್ವಹಿಸಬಹುದು.

2.9 ಆಯೋಗವು ಮಾಹಿತಿ ಹಕ್ಕು ಅಧಿನಿಯಮ, 2005 ಮತ್ತು ಸದರಿ ಅಧಿನಿಯಮದ ಮೇರೆಗೆ ಸರ್ಕಾರವು ರಚಿಸಿರುವ ನಿಯಮಗಳ ಮೇರೆಗೆ ಕಾರ್ಯ ನಿರ್ವಹಿಸುತ್ತದೆ. 1908ರ ಆಯೋಗವು ಸಿವಿಲ್ ಪ್ರಕ್ರಿಯಾ ಸಂಹಿತೆಯ ಮೇರೆಗೆ ನ್ಯಾಯಾಲಯಗಳ ಕೆಲವು ಅಧಿಕಾರಗಳನ್ನೂ ಸಹ ಚಲಾಯಿಸುತ್ತದೆ.

## ವೇತನಗಳು ಮತ್ತು ಭತ್ಯೆಗಳು

2.10 ಈ ಕೆಳಗಿನವರಿಗೆ ಪಾವತಿಸಬಹುದಾದ ವೇತನಗಳು ಮತ್ತು ಭತ್ಯೆಗಳು ಹಾಗೂ ಅವರ ಸೇವೆಯ ಇತರ ನಿಬಂಧನೆಗಳು ಮತ್ತು ಷರತ್ತುಗಳು:

(i) **ರಾಜ್ಯ ಮುಖ್ಯ ಮಾಹಿತಿ ಆಯುಕ್ತರಿಗೆ ಚುನಾವಣಾ ಆಯುಕ್ತರಿಗೆ ಇರುವಂತಹದೇ ಇರತಕ್ಕದ್ದು.**

(ii) ಮಾಹಿತಿ ಆಯುಕ್ತರಿಗೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಗೆ ಇರುವಂತಹದೇ ಇರತಕ್ಕದ್ದು.

(iii) ಕರ್ನಾಟಕ ಮಾಹಿತಿ ಆಯೋಗದ ಇತರ ಅಧಿಕಾರಿಗಳಿಗೆ ಮತ್ತು ನೌಕರರಿಗೆ ಪಾವತಿಸಬಹುದಾದ ವೇತನಗಳು ಮತ್ತು ಭತ್ಯೆಗಳು ಸಮಾನ ಶ್ರೇಣಿಯ ಇತರ ರಾಜ್ಯ ಸರ್ಕಾರಿ ನೌಕರರಿಗೆ ಸಮಾನವಾಗಿರತಕ್ಕದ್ದು. ಹೊರಗುತ್ತಿಗೆ ಸಿಬ್ಬಂದಿಯು ಗುತ್ತಿಗೆ ದರಗಳಲ್ಲಿ ಪಾವತಿಗಳಿಗೆ ಹಕ್ಕನ್ನು ಹೊಂದಿರುತ್ತಾರೆ. ಆ ದರಗಳು ಕನಿಷ್ಠ ಮಜೂರಿಗಿಂತ ಕಡಿಮೆ ಇರತಕ್ಕದ್ದಲ್ಲ.

## 2005-2006ರ ವರ್ಷಕ್ಕಾಗಿ ಆಯವ್ಯಯ ಹಂಚಿಕೆ ಮತ್ತು ವೆಚ್ಚ

2.11 2005-2006ರ ವರ್ಷಕ್ಕಾಗಿ, ರಾಜ್ಯ ಸರ್ಕಾರವು ಆಯವ್ಯಯ ಶೀರ್ಷಿಕೆ 2251-00-090-0-03-101 ಸಚಿವಾಲಯ - ಸಮಾಜ ಸೇವೆಗಳು ಕರ್ನಾಟಕ ಮಾಹಿತಿ ಆಯೋಗ - ಇದರ ಅಡಿಯಲ್ಲಿ ರೂ. 50,00,000 (ಐವತ್ತು ಲಕ್ಷ ರೂ.ಗಳು ಮಾತ್ರ) ಗಳ ಮೊತ್ತವನ್ನು ಏರ್ಪಾಡು ಮಾಡಿತ್ತು.

ಮುಖ್ಯವಾಗಿ ಆಪ್ತಶಾಖೆಗಳು, ವೇತನಗಳು, ಕಚೇರಿ ಸಜ್ಜುಗೊಳಿಸುವಿಕೆ ಮತ್ತು ಪೀಠೋಪಕರಣಗಳಿಗಾಗಿ ವೆಚ್ಚವಾಗಿದೆ.

## ವೆಬ್‌ಸೈಟ್ ಮತ್ತು ಇ-ಮೇಲ್ ವಿಳಾಸಗಳು

2.12 ಆಯೋಗದ ವೆಬ್‌ಸೈಟ್: **www.kic.gov.in** ಕಾರ್ಯ ನಿರ್ವಹಿಸುತ್ತದೆ. ಅಪೀಲುಗಳು ಮತ್ತು ದೂರುಗಳನ್ನು ಕುರಿತಂತೆ ಆಯೋಗವು ಹೊರಡಿಸಿದ ವ್ಯಾಜ್ಯಪಟ್ಟಿಗಳನ್ನು ಹಾಗೂ

ಆಜ್ಞೆಗಳನ್ನೂ ಸಹ ವೆಬ್‌ಸೈಟ್‌ನಲ್ಲಿ ದಾಖಲಿಸಲಾಗುತ್ತಿದೆ. ಈ ವೆಬ್‌ಸೈಟನ್ನು ನ್ಯಾಷನಲ್ ಇನ್‌ಫಾರ್ಮೆಟಿಕ್ಸ್ ಸೆಂಟರ್, ಕರ್ನಾಟಕ – ಇದರ ನಿಯಂತ್ರಣದಲ್ಲಿ ರಚಿಸಲಾಗಿದೆ. ರಾಜ್ಯ ಮುಖ್ಯ ಮಾಹಿತಿ ಆಯುಕ್ತರು, ರಾಜ್ಯ ಮಾಹಿತಿ ಆಯುಕ್ತರು ಹಾಗೂ ಆಯೋಗದ ಕಾರ್ಯದರ್ಶಿಯವರ ಇ–ಮೇಲ್ ವಿಳಾಸಗಳು ಹೀಗಿವೆ:

- **scic@karnataka.gov.in**
- **sic.kic@karnataka.gov.in**
- **secy-kic@karnataka.gov.in**

# ಅಧ್ಯಾಯ –III
# ಅಧಿನಿಯಮದ ಅನುಷ್ಠಾನ

## 3.1 ಅಧಿನಿಯಮದ ಅನುಷ್ಠಾನಕ್ಕೆ ಸಂಬಂಧಿಸಿದ ಮಾಹಿತಿಯನ್ನು ಈ ಮುಂದಿನ ಕೋಷ್ಠಕಗಳಲ್ಲಿ ನೀಡಲಾಗಿದೆ:

| | |
|---|---|
| ಕೋಷ್ಠಕ 1: | ಇಲಾಖಾವಾರು ಸಾರ್ವಜನಿಕ ಪ್ರಾಧಿಕಾರಗಳ ಸಂಖ್ಯೆ ಮತ್ತು ನೇಮಕಗೊಂಡಿರುವ ಸಾರ್ವಜನಿಕ ಮಾಹಿತಿ ಅಧಿಕಾರಿಗಳು. |
| ಕೋಷ್ಠಕ 2: | ಮಾಹಿತಿ ಹಕ್ಕು ಅಧಿನಿಯಮದ 6ನೇ ಪ್ರಕರಣದ ಮೇರೆಗೆ ದಾಖಲಿಸಿದ ಮಾಹಿತಿಗಾಗಿನ ಕೋರಿಕೆಗಳು ಮತ್ತು ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಂದ ಅವುಗಳ ವಿಲೇವಾರಿ. |
| ಕೋಷ್ಠಕ 3: | ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಂದ ತಿರಸ್ಕೃತವಾದ ಕೋರಿಕೆಗಳ ಉಪಬಂಧವಾರು ಸಂಖ್ಯೆ. |
| ಕೋಷ್ಠಕ 4: | ಅಧಿನಿಯಮದ 19(1)ನೇ ಪ್ರಕರಣದ ಮೇರೆಗೆ ಮೊದಲ ಅಪೀಲು ಪ್ರಾಧಿಕಾರಗಳಿಂದ ಅಪೀಲುಗಳ ವಿಲೇವಾರಿ. |
| ಕೋಷ್ಠಕ 5: | ಕರ್ನಾಟಕ ಮಾಹಿತಿ ಆಯೋಗದಿಂದ ದೂರುಗಳ ವಿಲೇವಾರಿ. |
| ಕೋಷ್ಠಕ 6: | ಆಯೋಗಕ್ಕೆ ನೀಡಿದ ದೂರುಗಳಿಗಾಗಿ ಕಾರಣಗಳು ಮತ್ತು ಅವುಗಳ ವಿಲೇವಾರಿ. |
| ಕೋಷ್ಠಕ 7: | ಕರ್ನಾಟಕ ಮಾಹಿತಿ ಆಯೋಗದಿಂದ ಎರಡನೇ ಅಪೀಲುಗಳ ವಿಲೇವಾರಿ. |
| ಕೋಷ್ಠಕ 8: | ಸಾರ್ವಜನಿಕ ಪ್ರಾಧಿಕಾರಗಳು ಸಂಗ್ರಹಿಸಿದ ವೆಚ್ಚಗಳು, ಶುಲ್ಕಗಳು ಮತ್ತು ಚಾರ್ಜುಗಳ ಸಾರಾಂಶ. |

## 3.2 ಇಲಾಖಾವಾರು ಮಾಹಿತಿಯನ್ನು ಸಂಬಂಧಪಟ್ಟ ಇಲಾಖೆಗಳು ಸಂಗ್ರಹಿಸಿವೆ ಸಾರ್ವಜನಿಕ ಪ್ರಾಧಿಕಾರಗಳು ಮತ್ತು ಸಾರ್ವಜನಿಕ ಮಾಹಿತಿ ಅಧಿಕಾರಿಗಳು:

3.3 ಇಲಾಖೆಗಳಿಂದ ಸ್ವೀಕರಿಸಿದ ಅಂಕಿಅಂಶಗಳಿಗನುಸಾರವಾಗಿ, ರಾಜ್ಯದಲ್ಲಿರುವ ಸಾರ್ವಜನಿಕ ಪ್ರಾಧಿಕಾರಗಳ ಒಟ್ಟು ಸಂಖ್ಯೆ 65,717 ಮತ್ತು ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಒಟ್ಟು ಸಂಖ್ಯೆ 73,512. ಹೆಚ್ಚಿನ ಸಂಖ್ಯೆಯ ಸಾರ್ವಜನಿಕ ಪ್ರಾಧಿಕಾರಗಳು ಮತ್ತು ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಶಿಕ್ಷಣ ಇಲಾಖೆಯ ಅನುದಾನಿತ ಸಂಸ್ಥೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿರುವುದರಿಂದ ಈ ಇಲಾಖೆಯು ಅ ರೀತಿ ವರದಿ ಮಾಡಿದೆ.

3.4 ಸಹಕಾರ ಇಲಾಖೆಯು 315 ಸಾರ್ವಜನಿಕ ಪ್ರಾಧಿಕಾರಗಳು ಮತ್ತು 213 ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಇರುವ ಬಗ್ಗೆ ವರದಿ ಮಾಡಿದೆ. ಸಹಕಾರ ಸಂಘಗಳ ರಿಜಿಸ್ಟ್ರಾರ್‌ರವರು ಆ ಬಗ್ಗೆ ಅಧಿಸೂಚನೆಯನ್ನು ಹೊರಡಿಸಿದ್ದರೂ, ಇಲಾಖೆಯು ಸಾರ್ವಜನಿಕ ಪ್ರಾಧಿಕಾರಗಳಂತೆ ಎಲ್ಲಾ ಸಹಕಾರಿ ಸಂಘಗಳನ್ನು ಸೇರಿಸಿಕೊಂಡಿರುವಂತೆ ಕಂಡುಬರುವುದಿಲ್ಲ. ಆದರೆ, ಆಯೋಗವು ಸದರಿ ಅಧಿಸೂಚನೆಯನ್ನು ಎತ್ತಿಹಿಡಿದಿದ್ದರೂ, ಸದರಿ ವಿಷಯವನ್ನು ಕರ್ನಾಟಕ ಉಚ್ಚ ನ್ಯಾಯಾಲಯದ ಮುಂದೆ ಪ್ರಶ್ನಿಸಲಾಗಿದೆಯೆಂಬುದನ್ನು ಹೇಳಬೇಕು.

3.5 ಒಳಾಡಳಿತ ಇಲಾಖೆಯು ಕೇವಲ 7 ಸಾರ್ವಜನಿಕ ಪ್ರಾಧಿಕಾರಗಳನ್ನು ಮತ್ತು ಪೊಲೀಸ್ ಸೂಪರಿಂಟೆಂಡೆಂಟ್ ದರ್ಜೆಯ ಅಧಿಕಾರಿಗಳನ್ನು ಸಾರ್ವಜನಿಕ ಮಾಹಿತಿ ಅಧಿಕಾರಿಗಳಂತೆ ನೇಮಕ ಮಾಡಿಕೊಂಡಿದ್ದರಿಂದ 123 ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನು ವರದಿ ಮಾಡಿದೆ. ಇಲಾಖೆಯ ಎಲ್ಲಾ ಠಾಣೆ ಅಧಿಕಾರಿಗಳನ್ನು ಸಾರ್ವಜನಿಕ ಮಾಹಿತಿ ಅಧಿಕಾರಿಗಳಂತೆ ನೇಮಕ ಮಾಡಿಕೊಳ್ಳಬೇಕೆಂಬುದು ಆಯೋಗದ ಅಭಿಪ್ರಾಯವಾಗಿದೆ. ಇದು

ಕಾರ್ಯಸಾಧ್ಯವಲ್ಲವೆಂದು ಕಂಡುಬಂದಲ್ಲಿ ಅವರನ್ನು ಕಡೇಪಕ್ಷ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗಳಂತೆ ನೇಮಕ ಮಾಡಿಕೊಳ್ಳಬೇಕು.

3.6 ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು 5861 ಸಾರ್ವಜನಿಕ ಪ್ರಾಧಿಕಾರಗಳು ಮತ್ತು 6090 ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಇರುವ ಬಗ್ಗೆ ವರದಿ ಮಾಡಿದೆ. ಅವುಗಳನ್ನು ಸಾರ್ವಜನಿಕ ಪ್ರಾಧಿಕಾರಗಳಂತೆ ಎಲ್ಲಾ ಗ್ರಾಮಪಂಚಾಯಿತಿಗಳಲ್ಲಿ ನಿಖರವಾಗಿ ಸೇರಿಸಲಾಗಿದೆ.

3.7 ಕಂದಾಯ ಇಲಾಖೆಯು, ಸಾರ್ವಜನಿಕ ಮಾಹಿತಿ ಅಧಿಕಾರಿಗಳಂತೆ ಎಲ್ಲಾ ತಹಸೀಲ್ದಾರರನ್ನು ನಿಖರವಾಗಿ ಅಧಿಸೂಚಿಸಿದ್ದಾರೆ. ಆದರೂ ತಹಸೀಲ್ದಾರರನ್ನು ಸಾರ್ವಜನಿಕ ಪ್ರಾಧಿಕಾರಗಳಂತೆ ಅಧಿಸೂಚಿಸಿದ್ದರೆ, ಇನ್ನೂ ಉತ್ತಮವಾಗಿರುತ್ತಿತ್ತು

3.8. ಕಾನೂನು ಮತ್ತು ಮಾನವ ಹಕ್ಕುಗಳ ಇಲಾಖೆಯು (ನ್ಯಾಯಾಲಯಗಳೂ ಸೇರಿದಂತೆ) 34 ಸಾರ್ವಜನಿಕ ಪ್ರಾಧಿಕಾರಗಳನ್ನು ಮತ್ತು 42 ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನು ಒಳಗೊಂಡಿದೆಯೆಂದು ವರದಿ ಮಾಡಿದೆ.

3.9 ಸಾರ್ವಜನಿಕ ಉದ್ಯಮಗಳ ಇಲಾಖೆಯು ಒಂದೇ ಒಂದು ಸಾರ್ವಜನಿಕ ಪ್ರಾಧಿಕಾರ ಮತ್ತು ಒಬ್ಬರು ಸಾರ್ವಜನಿಕ ಮಾಹಿತಿ ಅಧಿಕಾರಿ ಇರುವ ಬಗ್ಗೆ ವರದಿ ಮಾಡಿದೆ.

3.10 ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇಲಾಖೆಯು ಕೇವಲ 8 ಸಾರ್ವಜನಿಕ ಪ್ರಾಧಿಕಾರಗಳನ್ನು ಮತ್ತು 108 ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನು ಒಳಗೊಂಡಿದೆಯೆಂದು ವರದಿ ಮಾಡಿದೆ. ಈ ಸಂಖ್ಯೆಯು ಗಣನೀಯವಾಗಿ ಇನ್ನೂ ಹೆಚ್ಚಾಗಿರಬೇಕಾಗಿತ್ತು ಎಂದು ಆಯೋಗವು ಅಭಿಪ್ರಾಯಪಟ್ಟಿದೆ.

## ಕೋರಿಕೆಗಳ ಸಂಖ್ಯೆ ಮತ್ತು ಅವುಗಳ ವಿಲೇವಾರಿ

3.11 ಸ್ವೀಕರಿಸಿದ ಕೋರಿಕೆಗಳ ಸಂಖ್ಯೆಗೆ ಸಂಬಂಧಿಸಿದಂತೆ, ಕಂದಾಯ ಇಲಾಖೆಯ 3220 ಎಂದು ವರದಿ ಮಾಡಿದ್ದರೆ ಅತ್ಯಂತ ಹೆಚ್ಚಿನ ಸಂಖ್ಯೆ 3952 ನ್ನು ನಗರಾಭಿವೃದ್ಧಿ ಇಲಾಖೆಯು ವರದಿ ಮಾಡಿದೆ. ಇಲಾಖೆಗಳು ಒದಗಿಸಿದ ಅಂಕಿಅಂಶಗಳಿಂದ, ಕೋರಿಕೆಗಳ ವಿಲೇವಾರಿಯು ತಕ್ಕಮಟ್ಟಿಗೆ ತೃಪ್ತಿಕರವಾಗಿದೆ ಎಂದು ಕಂಡುಬರುತ್ತದೆ.

3.12 ಒದಗಿಸಿದ ಅಂಕಿಅಂಶಗಳಿಗನುಸಾರವಾಗಿ, ಅತ್ಯಂತ ಹೆಚ್ಚಿನ ಸಂಖ್ಯೆಯ ಕೋರಿಕೆಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯಲ್ಲಿ ತಿರಸ್ಕರಿಸಲಾಗಿದೆ. (18) ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್‌ನಲ್ಲಿನ 9 ಕೋರಿಕೆಗಳನ್ನು ತಿರಸ್ಕರಿಸಿದೆ. ಕೋರಿಕೆಗಳನ್ನು ತಿರಸ್ಕರಿಸಿರುವ ಬಗ್ಗೆ ವರದಿ ಮಾಡಿದಂಥ ಇತರೆ ಇಲಾಖೆಗಳೆಂದರೆ, ವಾಣಿಜ್ಯ ಮತ್ತು ಕೈಗಾರಿಕೆಗಳ ಇಲಾಖೆ (4), ಹಣಕಾಸು ಇಲಾಖೆ (1), ಕಾರ್ಮಿಕ ಇಲಾಖೆ (3) ಮತ್ತು ಕರ್ನಾಟಕ ವಿಧಾನಸಭೆ (1). ಹಾಗಾಗಿ ವರದಿ ವರ್ಷದಲ್ಲಿ ತಿರಸ್ಕರಿಸಿದ ಕೋರಿಕೆಗಳ ಒಟ್ಟು ಸಂಖ್ಯೆ 36, ವಿಲೇವಾರಿ ಮಾಡಿದ ಕೋರಿಕೆಗಳ ಒಟ್ಟು ಸಂಖ್ಯೆ 8576. ಇದರಿಂದ ಬಹುತೇಕ ಪ್ರಕರಣಗಳಲ್ಲಿ ಮಾಹಿತಿಯನ್ನು ಒದಗಿಸಿರುವುದು ಕಂಡುಬರುತ್ತದೆ.

## ಮೊದಲ ಅಪೀಲುಗಳು ಮತ್ತು ಅವುಗಳ ವಿಲೇವಾರಿ

3.13 ಇಲಾಖೆಗಳು ಒದಗಿಸಿದ ಮಾಹಿತಿಗೆ ಅನುಸಾರವಾಗಿ, ಆದ್ಯತೆ ನೀಡಿದ ಮೊದಲ ಅಪೀಲುಗಳ ಸಂಖ್ಯೆ 471, ಇದರಲ್ಲಿ 428ನ್ನು ವಿಲೇವಾರಿ ಮಾಡಲಾಗಿದೆ. 15 ಅಪೀಲುಗಳನ್ನು ವರದಿ ವರ್ಷದಲ್ಲಿ ತಿರಸ್ಕರಿಸಲಾಗಿದೆ.

3.14 ಮಾಹಿತಿಗಾಗಿನ ಕೆಲವೇ ಕೆಲವು ಕೋರಿಕೆಗಳನ್ನು ತಿರಸ್ಕರಿಸಿರುವುದರಿಂದ, ಮಾಹಿತಿ ಒದಗಿಸುವಲ್ಲಿ ವಿಳಂಬ ಉಂಟಾದ ಕಾರಣದಿಂದ ತಿರಸ್ಕರಿಸಲಾಗಿದೆ ಎಂದು ಭಾವಿಸಿರುವುದರಿಂದ ಹೆಚ್ಚಿನ ಸಂಖ್ಯೆಯ ಮೊದಲ ಅಪೀಲುಗಳನ್ನು ದಾಖಲಿಸಿದ್ದಿರಬಹುದು.

## ಆಯೋಗಕ್ಕೆ ಎರಡನೇ ಅಪೀಲುಗಳು ಮತ್ತು ದೂರುಗಳು:

3.15 ವರ್ಷಾವಧಿಯಲ್ಲಿ, ಆಯೋಗವು ಒಟ್ಟು 56 ಎರಡನೇ ಅಪೀಲುಗಳನ್ನು ಮತ್ತು 151 ದೂರುಗಳನ್ನು ಸ್ವೀಕರಿಸಿದ್ದರೆ, ಇದರಲ್ಲಿ 15 ಅಪೀಲುಗಳನ್ನು ಮತ್ತು 24 ದೂರುಗಳನ್ನು ವಿಲೇವಾರಿ ಮಾಡಿದೆ. ವರದಿಯ ಅವಧಿಯು 2005ರ ಅಕ್ಟೋಬರ್‌ನಿಂದ 2006ರ ಮಾರ್ಚ್‌ವರೆಗೆ ಇರುವುದರಿಂದ ವಿಲೇವಾರಿಯು ಕಡಿಮೆಯಾಗಿದೆ. ಅಧಿನಿಯಮವು, 2005ರ ಅಕ್ಟೋಬರ್ 12ರಿಂದ ಸಂಪೂರ್ಣವಾಗಿ ಜಾರಿಗೆ ಬಂದಿರುವುದರಿಂದ, ಬಹುತೇಕ ದೂರುಗಳನ್ನು ಮತ್ತು ಅಪೀಲುಗಳನ್ನು 2006ರ ಜನವರಿ–ಮಾರ್ಚ್ ಅವಧಿಯಲ್ಲಿ ಮಾತ್ರವೇ ಸ್ವೀಕರಿಸಲಾಗಿದೆ. ಅದರಿಂದಾಗಿ 31ನೇ ಮಾರ್ಚ್ 2006ಕ್ಕಿಂತ ಮೊದಲು ವಿಲೇವಾರಿ ಮಾಡಲು ಆಗಲಿಲ್ಲ.

3.16 ಯಾವುದೇ ಅಪೀಲುಗಳನ್ನು ಮತ್ತು ದೂರುಗಳನ್ನು ಆಯೋಗ ತಿರಸ್ಕರಿಸಿಲ್ಲ ಮತ್ತು ವರ್ಷದ ಅವಧಿಯಲ್ಲಿ ಆಯೋಗವು ವಿಲೇವಾರಿ ಮಾಡಿದ ಎಲ್ಲಾ ಪ್ರಕರಣಗಳಲ್ಲಿ ಮಾಹಿತಿಯನ್ನು ಒದಗಿಸಬೇಕೆಂದು ಆಜ್ಞಾಪಿಸಲಾಗಿದೆ.

# ಅಧ್ಯಾಯ – IV
# ಶಿಫಾರಸುಗಳು

4.1 ಕರ್ನಾಟಕ ಮಾಹಿತಿ ಆಯೋಗವು ದಿನಾಂಕ 31.07.2005ರ ಮಧ್ಯಾಹ್ನದಿಂದ ಕಾರ್ಯಾರಂಭ ಮಾಡಿದೆ. ಆದರೆ, ಮಾಹಿತಿ ಹಕ್ಕು ಅಧಿನಿಯಮ, 2005ರ ಎಲ್ಲಾ ಉಪಬಂಧಗಳು 2005ರ ಅಕ್ಟೋಬರ್ 12ರಿಂದಷ್ಟೇ ಜಾರಿಗೆ ಬಂದಿವೆ. ಆದ್ದರಿಂದ ಆ ತರುವಾಯವೇ ದೂರುಗಳನ್ನು ಮತ್ತು ಅಪೀಲುಗಳನ್ನು ಸಲ್ಲಿಸುವುದು ಆರಂಭವಾಯಿತು. ಈ ವರದಿಯ ಭಾಗವಾಗಿರುವ ಅಂಕಿಅಂಶಗಳಿಂದ, ಅನೇಕ ಪ್ರಕರಣಗಳನ್ನು (ದೂರುಗಳು ಮತ್ತು ಅಪೀಲುಗಳು) 31.03.2006ರ ವರೆಗೆ ಆಯೋಗದ ಮುಂದೆ ಸಲ್ಲಿಸಿಲ್ಲವೆಂಬುದನ್ನು ಕಾಣಬಹುದಾಗಿದೆ.

4.2 ಈ ವರದಿಯು 2005–06ರ ವರ್ಷಕ್ಕೆ ಸಂಬಂಧಿಸಿದ್ದಾಗ್ಯೂ, ಆಯೋಗವು ಆ ತರುವಾಯ ಪಡೆದ ತನ್ನ ಅನುಭವದಿಂದಲೂ ಸಹ ಈ ಶಿಫಾರಸುಗಳನ್ನು ಮಾಡಿದೆ.

4.3 ಅಲ್ಲದೆ, ಕೇಂದ್ರ ಮಾಹಿತಿ ಆಯೋಗವು ನವದೆಹಲಿಯಲ್ಲಿ 2006ರ ಅಕ್ಟೋಬರ್ 13ರಿಂದ 15ರವರೆಗೆ ಮಾಹಿತಿ ಹಕ್ಕುಗಳ ಒಂದು ವರ್ಷಕ್ಕೆ ಸಂಬಂಧಿಸಿದಂತೆ ರಾಷ್ಟ್ರೀಯ ಸಮಾವೇಶವೊಂದನ್ನು ಏರ್ಪಡಿಸಿತ್ತು. ಅಂದಿನ ಸನ್ಮಾನ್ಯ ಭಾರತದ ರಾಷ್ಟ್ರಪತಿಗಳಾದ ಡಾ ॥ ಎ.ಪಿ.ಜೆ. ಅಬ್ದುಲ್ ಕಲಾಂ ಅವರು ಅದನ್ನು 2006ರ ಅಕ್ಟೋಬರ್ 13ರಂದು ಉದ್ಘಾಟಿಸಿದರು ಮತ್ತು ಭಾರತದ ಮಾನ್ಯ ಪ್ರಧಾನಮಂತ್ರಿಗಳಾದ ಡಾ॥ ಮನಮೋಹನ್ ಸಿಂಗ್ ಅವರು 2006ರ ಅಕ್ಟೋಬರ್ 15ರಂದು ಸಮಾವೇಶದಲ್ಲಿ ಸಮಾರೋಪ ಭಾಷಣ ಮಾಡಿದರು.

4.4 ಸಮಾವೇಶದ ಅವಧಿಯಲ್ಲಿ, ನಾಲ್ಕು ತಜ್ಞ ತಂಡಗಳನ್ನು ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಸಮಾಲೋಚಿಸಲು ರಚಿಸಲಾಗಿತ್ತು. ಕರ್ನಾಟಕ ತಂಡದಲ್ಲಿ (1) ಶ್ರೀ ಕೆ.ಕೆ. ಮಿಶ್ರಾ, ರಾಜ್ಯ ಮುಖ್ಯ ಮಾಹಿತಿ ಆಯುಕ್ತರು (2) ಡಾ ॥ ಆರ್. ಎಸ್. ಉತ್ತರಾಂಚಲರವರ ತಂಡದಲ್ಲಿ ತೊಲಿಯಾ, ರಾಜ್ಯ ಮುಖ್ಯ ಮಾಹಿತಿ ಆಯುಕ್ತರು, (3) ಶ್ರೀ ಅಣ್ಣಾ ಹಜಾರೆ ಮತ್ತು ತಂಡ (4) ಶ್ರೀ ಎಸ್. ರಾಮಕೃಷ್ಣ, ರಾಜ್ಯ ಮುಖ್ಯ ಮಾಹಿತಿ ಆಯುಕ್ತರು, ತಮಿಳುನಾಡು ಅವರು ಮುಖ್ಯಸ್ಥರಾಗಿದ್ದರು.

4.5 ಈ ತಂಡಗಳು ದೂರಗಾಮಿ ಶಿಫಾರಸುಗಳನ್ನು ಮಾಡಿವೆ. ಸಮ್ಮೇಳನವು ಅವುಗಳನ್ನು ಅಳವಡಿಸಿಕೊಂಡ ನಂತರ ಪರ್ಯಾಲೋಚನೆಗಾಗಿ ಕೇಂದ್ರ ಸರ್ಕಾರಕ್ಕೆ ಕಳುಹಿಸಿಕೊಡಲಾಗಿದೆ. ಆಯೋಗವು – ರಾಜ್ಯ ಸರ್ಕಾರದ ಪರ್ಯಾಲೋಚನೆಗಾಗಿ ಈ ಅಧ್ಯಾಯದಲ್ಲಿ ಈ ಶಿಫಾರಸುಗಳಲ್ಲಿ ಕೆಲವನ್ನು ಸೇರಿಸಿದೆ.

## (ಎ) ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಹೆಸರು, ಇತ್ಯಾದಿಗಳ ಪ್ರಕಟಣೆ:

4.6 ಬಹುತೇಕ ಇಲಾಖೆಗಳು ತಮ್ಮ ಅಧೀನದಲ್ಲಿ ಬರುವ ಸಾರ್ವಜನಿಕ ಪ್ರಾಧಿಕಾರಿಗಳ, ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಮತ್ತು ಪ್ರಥಮ ಅಪೀಲು ಪ್ರಾಧಿಕಾರಗಳ ಹೆಸರುಗಳನ್ನು, ದೂರವಾಣಿ ಸಂಖ್ಯೆಗಳನ್ನು ಮತ್ತು ವಿಳಾಸಗಳನ್ನು ಪ್ರಕಟಿಸಿಲ್ಲ. ಈ ಕಾರಣಗಳು ನಾಗರಿಕರಿಗೆ ನಿಜವಾಗಲೂ ಕಷ್ಟಕರವಾಗಿವೆ. ಎಲ್ಲಾ ಇಲಾಖೆಗಳು ಮತ್ತು ಸಾರ್ವಜನಿಕ ಪ್ರಾಧಿಕಾರಗಳು ನಾಗರಿಕರ ಪ್ರಯೋಜನಕ್ಕಾಗಿ ಈ ವಿವರಗಳನ್ನು ಪ್ರಕಟಿಸಬೇಕು.

## (ಬಿ) ದಾಖಲೆಗಳನ್ನು ಸರಿಯಾಗಿ ಇಡುವುದು

4.7 ಈ ಅಧಿನಿಯಮವು ಮಾಹಿತಿಗೆ ದಾಖಲೆಗಳು, ದಸ್ತಾವೇಜುಗಳು, ಸುತ್ತೋಲೆಗಳು, ಆದೇಶಗಳು, ಕರಾರುಗಳು, ಕಾಗದಪತ್ರಗಳು ಇತ್ಯಾದಿಗಳೆಂದು ಅರ್ಥವಿವರಣೆ ನೀಡಿದೆ. ಅತ್ಯಂತ ಹೆಚ್ಚಿನ ಪ್ರಕರಣಗಳಲ್ಲಿ, ಅರ್ಜಿದಾರರು ಅಂಥ ದಾಖಲೆಗಳು ಮತ್ತು ದಸ್ತಾವೇಜುಗಳನ್ನು ಪಡೆಯುವ ಅವಕಾಶವನ್ನು ಕೋರಬಹುದು. ಅಂಥ ಅವಕಾಶಕ್ಕೆ ಅನುವು ಮಾಡಿಕೊಡಲು, ದಾಖಲೆಗಳನ್ನು ಇಡುವುದು ಮತ್ತು ಅವುಗಳನ್ನು ನಿರ್ವಹಿಸುವುದು ಬಹಳ ಮುಖ್ಯ.

4.8 ಆದ್ದರಿಂದ ಅಧಿನಿಯಮದ 4 (1) (ಎ) ಪ್ರಕರಣವು, ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರವನ್ನು ಅದರ ದಾಖಲೆಗಳನ್ನು ಕ್ರಮಬದ್ಧ ಸೂಚಿಪಟ್ಟಿ ಮಾಡಿ ಸೂಚಿಕರಣಗೊಳಿಸಿ ನಿರ್ವಹಿಸುವಂತೆ ಅಗತ್ಯಪಡಿಸಿದೆ. ಹಾಗಿದ್ದರೂ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ದಾಖಲೆಗಳನ್ನು ಇಡುವ ಮತ್ತು ನಿರ್ವಹಿಸುವ ಕಾರ್ಯವನ್ನು ಬಹಳದೀರ್ಘ ಕಾಲದಿಂದಲೂ ನಿರ್ಲಕ್ಷಿಸಲಾಗಿದೆಯೆಂಬುದನ್ನು ಆಯೋಗವು ಗಮನಿಸಿದೆ.

4.9 ಅಗತ್ಯಪಡಿಸಿದ ದಾಖಲೆಗಳನ್ನು ಶೀಘ್ರವಾಗಿ, ಪತ್ತೆಹಚ್ಚಲು ಅನುಕೂಲ ಕಲ್ಪಿಸಲು ಒಮ್ಮೆಗೆ ದಾಖಲೆ ಕೊಠಡಿಗಳ ಸಂರಕ್ಷಣೆಯ ವಿಧಾನವನ್ನು ಸುಧಾರಿಸಬೇಕಾದ ಅಗತ್ಯವಿದೆ. ಅರ್ಜಿದಾರರು ಕೋರಿರುವ ಹಲವಾರು ಪ್ರಮುಖ ದಾಖಲೆಗಳು ಕಾಣೆಯಾಗಿವೆಯೆಂದು ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಹೆಚ್ಚುಹೆಚ್ಚಾಗಿ ವರದಿ ಮಾಡುತ್ತಿದ್ದಾರೆ. ಅವುಗಳ ಸಂಖ್ಯೆಯು ಭೂಮಿಗಳಿಗೆ ಸಂಬಂಧಿಸಿದ ಕಾಯಂ ದಾಖಲೆಗಳಾಗಿವೆ ಮತ್ತು ಅಂಥ ದಾಖಲೆಗಳು ಕಳೆದುಹೋಗಿರುವುದರಿಂದಾಗಿ ಮೋಸದ ಕ್ಲೇಮುಗಳನ್ನು ಮಾಡುವುದಕ್ಕೆ ಆಸ್ಪದವಾಗಬಹುದು.

4.10 ಕೇಂದ್ರ ಸರ್ಕಾರವು, ಸಾರ್ವಜನಿಕ ದಾಖಲೆಗಳ ನಿರ್ವಹಣೆ, ವ್ಯವಸ್ಥೆ ಮತ್ತು ಸಂರಕ್ಷಣೆಯನ್ನು ಕ್ರಮಬದ್ಧಗೊಳಿಸಲು ಸಾರ್ವಜನಿಕ ದಾಖಲೆಗಳ ಅಧಿನಿಯಮ, 1993ನ್ನು ಅಧಿನಿಯಮಿಸಿದೆ. ಸದರಿ ಅಧಿನಿಯಮವು ದಾಖಲೆಗಳನ್ನು ಅನಧಿಕೃತವಾಗಿ ನಾಶಗೊಳಿಸಿದ್ದಕ್ಕಾಗಿ 5 ವರ್ಷಗಳವರೆಗೆ ಶಿಕ್ಷೆ ನೀಡಲು ಉಪಬಂಧ ಕಲ್ಪಿಸಿದೆ. ಕರ್ನಾಟಕದಲ್ಲಿ ಯಾವುದೇ ಅಂಥ ಶಾಸನ ಇಲ್ಲ. ರಾಜ್ಯ ಸರ್ಕಾರವು, ಕಾಣೆಯಾಗುವ ಸಾರ್ವಜನಿಕ ದಾಖಲೆಗಳ ಹಾವಳಿಯು ಹೆಚ್ಚುತ್ತಿರುವ ಬಗ್ಗೆ ಕ್ರಮ ಕೈಗೊಳ್ಳಲು ಅದೇ ರೀತಿಯಾದರೆ ಅತ್ಯಂತ ವ್ಯಾಪಕವಾದ ಶಾಸನವನ್ನು ಪರಿಗಣಿಸಬೇಕೆಂದು ಆಯೋಗವು ಶಿಫಾರಸು ಮಾಡಿದೆ.

4.11 ಯಾವುದೇ ಸಾರ್ವಜನಿಕ ದಾಖಲೆ / ದಸ್ತಾವೇಜು ಕಾಣೆಯಾಗಿದೆಯೆಂದು ವರದಿಯಾಗುವಲ್ಲೆಲ್ಲಾ, ಅದು ಇಲ್ಲದಿರುವ ಬಗ್ಗೆ ದಾಖಲೆಗಳನ್ನು ನಾಶಪಡಿಸುವುದಕ್ಕೆ ಅವಕಾಶ ಕಲ್ಪಿಸಿರುವ ನಿಯಮಗಳಿಗೆ ಅನುಸಾರವಾಗಿಯೇ ವಿವರಿಸಬೇಕು. ಅಂಥ ಎಲ್ಲಾ ಪ್ರಕರಣಗಳಲ್ಲಿ, ಆಯೋಗವು (1) ಜವಾಬ್ದಾರಿಯನ್ನು ನಿಗದಿಪಡಿಸುವ ಬಗ್ಗೆ ಆಂತರಿಕ ವಿಚಾರಣೆಯನ್ನು ನಡೆಸುವಂತೆ ಮತ್ತು (2) ಅಧಿಕಾರವ್ಯಾಪ್ತಿ ಪೊಲೀಸರಿಗೆ ದೂರನ್ನು ದಾಖಲಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದೆ.

4.12 ಪೊಲೀಸರು ಆ ದೂರುಗಳ ಆಧಾರದ ಮೇಲೆ ಪ್ರಥಮ ಮಾಹಿತಿ ವರದಿಗಳನ್ನು ದಾಖಲು ಮಾಡಿಕೊಳ್ಳುತ್ತಿಲ್ಲವೇಂದರೆ ಅವರ ಪ್ರಕಾರ ಸಾರ್ವಜನಿಕ ದಾಖಲೆಗಳ ನಷ್ಟವು ವಿಚಾರಣೀಯವಲ್ಲವೆಂದು ಆಯೋಗಕ್ಕೆ ತಿಳಿಸಲಾಗಿದೆ. ಸಮಗ್ರ ಶಾಸನವೊಂದನ್ನು ಅಧಿನಿಯಮಿಸುವ ಕಾಲದವರೆಗೆ, ಸರ್ಕಾರವು ಸರ್ಕಾರದ ದಾಖಲೆಗಳು ನಷ್ಟವಾಗಿರುವುದನ್ನು ಕಳವಾಗಿದೆಯೆಂದು ಮತ್ತು / ಅಥವಾ ಅಪರಾಧಿಕ ನಂಬಿಕೆ ದ್ರೋಹವೆಂದು ಮತ್ತು ಪೋಲೀಸರು ಪ್ರಥಮ ಮಾಹಿತಿ ವರದಿಯನ್ನು ದಾಖಲಿಸಿ ಪ್ರಮುಖ ಸಾರ್ವಜನಿಕ ದಾಖಲೆಗಳ ನಷ್ಟವನ್ನು ಒಳಗೊಂಡಿರುವ ಎಲ್ಲಾ ವರದಿಯಾಗಿರುವ ಪ್ರಕರಣಗಳಲ್ಲಿ ತನಿಖೆಯನ್ನು ಪ್ರಾರಂಭಿಸಬೇಕೆಂದು ನಿರ್ದೇಶನ ನೀಡುವಂತೆ ಆಯೋಗ ಶಿಫಾರಸು ಮಾಡಿದೆ.

## (ಸಿ) 4(1) (ಬಿ) ಪ್ರಕರಣದ ಮೇರೆಗೆ ನಾಗರಿಕ ಸನ್ನದು ಸ್ವಯಂ ಘೋಷಣೆಯ ಭಾಗವಾಗಿರಬೇಕು ಮತ್ತು ಜಾರಿಗೊಳಿಸುವಂತಿರಬೇಕು:

4.13 ಮಾಹಿತಿ ಹಕ್ಕಿಗೆ ಸಂಬಂಧಿಸಿದ ಬಹುತೇಕ ಕೋರಿಕೆಗಳು, ಸಾರ್ವಜನಿಕ ಅಧಿಕಾರಿಗಳು ಒದಗಿಸಬೇಕಾದ ಸೇವೆಗಳನ್ನು ಒದಗಿಸುವುದಕ್ಕೆ ವಿಫಲವಾಗಿರುವುದಕ್ಕೆ ಸಂಬಂಧಪಟ್ಟಿವೆ. ಮಾಹಿತಿ ಹಕ್ಕು ಅಧಿನಿಯಮ, 2005ರ 4(1)(ಬಿ)(೧) ಯಿಂದ (೧೩) ರವರೆಗಿನ ಪ್ರಕರಣದ ಮೇರೆಗೆ ತಾನಾಗಿಯೇ ತಿಳಿಸಬೇಕಾದ ಮಾಹಿತಿಯನ್ನು ಎಂದರೆ ಕಾರ್ಯಗಳು, ಕರ್ತವ್ಯಗಳು, ಕಾರ್ಯವಿಧಾನಗಳು, ಹೊಣೆಗಾರಿಕೆ ಮತ್ತು ಸಾರ್ವಜನಿಕ ಪ್ರಾಧಿಕಾರಿಗಳು ತಮ್ಮ ಕಾರ್ಯಗಳನ್ನು ನಿರ್ವಹಿಸಲು ತಾವು ರೂಪಿಸಿಕೊಂಡಿರುವ ಸೂತ್ರಗಳನ್ನು ತನ್ನಿಂದ

ತಿಳಿಸುವುದು ನಾಗರಿಕ ಸನ್ನದಿನ ಎಲ್ಲ ಗುಣಲಕ್ಷಣಗಳನ್ನು ಹೊಂದಿದೆಯೆಂದು ಆಯೋಗವು ಅಭಿಪ್ರಾಯಪಟ್ಟಿದೆ.

4.14 ಹೀಗಾಗಿ ನಾಗರಿಕ ಸನ್ನದು 4(1) (ಬಿ) ಪ್ರಕರಣವು ಪ್ರಕಟಣೆಗಳ ಒಂದು ಅವಿಭಾಜ್ಯ ಅಂಗವಾಗಿರಬೇಕು. ಇದರಿಂದ ನಾಗರಿಕರ ಬಗ್ಗೆ ಒಬ್ಬ ಸಾರ್ವಜನಿಕ ಪ್ರಾಧಿಕಾರಕ್ಕೆ ಇರುವ ಹೊಣೆಗಾರಿಕೆಗಳು ಏನು ಎಂಬುದು ಸಾರ್ವಜನಿಕರಿಗೆ ತಿಳಿಯುತ್ತವೆ. ಎಲ್ಲ ಸಾರ್ವಜನಿಕ ಪ್ರಾಧಿಕಾರಗಳು, ಅಗತ್ಯವಿರುವ ಕಡೆಗಳಲ್ಲಿ ತಮ್ಮ ಕಾರ್ಯವಿಧಾನಗಳನ್ನು ಮರು ಪರಿಶೀಲಿಸಿಕೊಳ್ಳಬೇಕು. ಬೇಸರ ತರುವ ಕಾರ್ಯವಿಧಾನಗಳ ಬಗ್ಗೆ ಬಹಿರಂಗವಾಗಿ ಸಾರ್ವಜನಿಕರೊಂದಿಗೆ ಚರ್ಚಿಸಬೇಕು ಮತ್ತು ಅದನ್ನು ಹೆಚ್ಚು ನಾಗರಿಕ ಸ್ನೇಹಿಯನ್ನಾಗಿ ಮಾಡಬೇಕು. ಅಗತ್ಯವಿರುವ ಕಡೆಗಳಲ್ಲಿ ಮಾಹಿತಿ ಹಕ್ಕು ಅಧಿನಿಯಮದ ಮೇರೆಗೆ ಪ್ರಕಟಿಸಿದ ಸೂತ್ರಗಳನ್ನು ನಾಗರಿಕರು ಜಾರಿಗೆ ತರುವಂತಿರಬೇಕು.

4.15 4 (1)(ಬಿ) ಪ್ರಕರಣದ ಮೇರೆಗಿನ ಪ್ರಕಟಣೆಗಳು ಈ ಅಧಿನಿಯಮದ ಮೇರೆಗೆ ಅಗತ್ಯಪಡಿಸಿದ ಎಲ್ಲ ವಿವರಗಳು ಇರಬೇಕು ಮತ್ತು ಈ ವಿವರಗಳನ್ನು ನಿಯತಕಾಲಿಕವಾಗಿ ತಹಲ್‌ವರೆಗೆ ಇಡಬೇಕು. ಈ ಪ್ರಕರಣದ ಮೇರೆಗೆ ಅಗತ್ಯಪಡಿಸಿದ ವಿವರಗಳನ್ನು ಅಸಮರ್ಪಕವಾಗಿ ತಿಳಿಸುವುದಕ್ಕೆ ಅಥವಾ ತಿಳಿಸದಲೇ ಇರುವುದಕ್ಕಾಗಿ ಸಾರ್ವಜನಿಕ ಪ್ರಾಧಿಕಾರಗಳಿಗೆ ದಂಡ ವಿಧಿಸಲು ಆಯೋಗಗಳಿಗೆ ಅಧಿಕಾರ ಇರಬೇಕು.

4.16 ಸಾರ್ವಜನಿಕ ಪ್ರಾಧಿಕಾರಗಳು ಈ ಪ್ರಕಟಣೆಗಳನ್ನು ತಮ್ಮ ವಾರ್ಷಿಕ ವರದಿಗಳಲ್ಲಿ ಕಡ್ಡಾಯವಾಗಿ ಪ್ರಕಟಿಸಬೇಕು.

## (ಡಿ) ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ತರಬೇತಿ

4.17 ಸಾರ್ವಜನಿಕ ಮಾಹಿತಿ ಅಧಿಕಾರಿಗಳು ನಾಗರಿಕರ ಅಗತ್ಯತೆಗಳಿಗೆ ಸ್ಪಂದಿಸುವಂತೆ ತರಬೇತಿ ನೀಡುವುದು ಅಗತ್ಯವಾಗಿದೆ. ಆದ್ದರಿಂದ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಈ ಅಧಿನಿಯಮದ ಮೇರೆಗೆ ತಮಗೆ ವಹಿಸಿರುವ ಜವಾಬ್ದಾರಿಗಳನ್ನು ಅವರು ಸಮರ್ಥವಾಗಿ ನಿರ್ವಹಿಸಲು ಸಾಧ್ಯವಾಗುವಂತೆ ಮಾಡಲು ಅವರಿಗೆ ಬೃಹತ್ ರೀತಿಯ ತರಬೇತಿ ಕೊಡಬೇಕು.

## (ಇ) ನಿಂದನೆಗಾಗಿ ಶಿಕ್ಷಿಸುವ ಅಧಿಕಾರ:

4.18 ಆಯೋಗಗಳಿಗೆ ತಮ್ಮ ತೀರ್ಮಾನಗಳನ್ನು ಜಾರಿಗೊಳಿಸುವ ಹಾಗೂ ತಮ್ಮ ಆಜ್ಞೆಗಳನ್ನು ಅನುಷ್ಠಾನಗೊಳಿಸದೇ ಇರುವುದಕ್ಕಾಗಿ ನಿಂದನಾ ವ್ಯವಹಾರಗಳನ್ನು ಆರಂಭಿಸುವ ಅಧಿಕಾರವನ್ನು ಕೊಡಬೇಕು. ಮಾಹಿತಿ ಹಕ್ಕು ಅಧಿನಿಯಮ, 2005ರ 27ನೇ ಪ್ರಕರಣದ ಮೇರೆಗಿನ ನಿಯಮಗಳನ್ನು ರೂಪಿಸಿ ಅಥವಾ ನಿಂದನೆಗೆ ಸಂಬಂಧಪಟ್ಟಂತೆ ಸಿವಿಲ್ ನ್ಯಾಯಾಲಯಗಳಿಗೆ ಇರುವಂತಹುವೇ ಅಧಿಕಾರಗಳನ್ನು ಮಾಹಿತಿ ಹಕ್ಕು ಅಧಿನಿಯಮ, 2005ರ 18ನೇ ಪ್ರಕರಣದ (3)ನೇ ಉಪಪ್ರಕರಣದ (ಎಫ್) ಖಂಡದ ಮೇರೆಗೆ ಆಯೋಗಗಳಿಗೆ ನಿಹಿತಗೊಳಿಸುವ ಮೂಲಕ ಆ ಅಧಿಕಾರವನ್ನು ಕೊಡಬಹುದಾಗಿದೆ.

## (ಎಫ್) 19(8) (ಬಿ) ಪ್ರಕರಣದ ಮೇರೆಗಿನ ಪರಿಹಾರ:

4.19 19(8) (ಬಿ) ಪ್ರಕರಣವು ಫಿರ್ಯಾದಿಯು ಯಾವುದೇ ನಷ್ಟ ಅಥವಾ ಅನುಭವಿಸಿದ ಹಾನಿಗಾಗಿ ಅವನಿಗೆ ನಷ್ಟ ಪರಿಹಾರ ನೀಡುವಂತೆ ಸಾರ್ವಜನಿಕ ಪ್ರಾಧಿಕಾರಗಳನ್ನು ಅಗತ್ಯಪಡಿಸಲು ಆಯೋಗಗಳಿಗೆ ಅಧಿಕಾರ ನೀಡಿದೆ. ಈ ಉದ್ದೇಶಕ್ಕಾಗಿ ಸಾರ್ವಜನಿಕ ಹಣವನ್ನು ಬಳಸಕೂಡದೆಂದೂ, ಏಕೆಂದರೆ ವಿಳಂಬ ಮತ್ತು ತತ್ಪರಿಣಾಮವಾದ ನಷ್ಟ / ಹಾನಿಯು ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಎಸಗುವ ತಪ್ಪಿನಿಂದ ಉಂಟಾಗುತ್ತದೆಯೆಂದೂ ಕೆಲವು ಕ್ರಿಯಾಶೀಲ ಕಾರ್ಯಕರ್ತರು ಎತ್ತಿತೋರಿಸಿದ್ದಾರೆ. ಅಂಥ ಆಯೋಗಗಳು ಸಂಬಂಧಪಟ್ಟ ಸಾರ್ವಜನಿಕ ಮಾಹಿತಿ ಅಧಿಕಾರಿಗೆ / ಭಾವಿತ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಜವಾಬ್ದಾರಿಯನ್ನು ನಿಗದಿಪಡಿಸಬೇಕೆಂದು ಮತ್ತು ಅಂಥ ಪರಿಹಾರವನ್ನು ಸ್ವತಃ ಅವರೇ ಸಂದಾಯ ಮಾಡುವಂತೆ ನಿರ್ದೇಶನ ನೀಡಬೇಕೆಂದು ಅವರು ಸಲಹೆ ಮಾಡಿದ್ದಾರೆ.

4.20 ಆ ಹಣವನ್ನು ಸಾರ್ವಜನಿಕ ಪ್ರಾಧಿಕಾರಗಳು ಸಂದಾಯ ಮಾಡಬೇಕೆಂದು ಆದೇಶ ಮಾಡಿರುವ ಅನೇಕ ಪ್ರಕರಣಗಳಲ್ಲಿ ಅಂಥ ಸಾರ್ವಜನಿಕ ಪ್ರಾಧಿಕಾರಗಳು ಸಂಬಂಧಪಟ್ಟ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಂದ ಆ ಮೊತ್ತವನ್ನು ವಸೂಲು ಮಾಡಲು ತೀರ್ಮಾನಿಸಿದ್ದಾರೆಂಬುದನ್ನು ಸಹಾ ಎತ್ತಿ ತೋರಿಸಿದ್ದಾರೆ. ಹಾಗಾಗಿ ಆಯೋಗವು ನಷ್ಟ ಪರಿಹಾರವನ್ನು ನೀಡುವಂತೆ ಆದೇಶ ಮಾಡುವಾಗ ವಸೂಲು ಮಾಡಬೇಕೆಂದು ಪರಿಹಾರವನ್ನು ತಪ್ಪಿತಸ್ಥ ಅಧಿಕಾರಿಗಳಿಂದ ಸಹಾ ನಿರ್ದೇಶನ ನೀಡಲು ಉಪಬಂಧ ಕಲ್ಪಿಸಲು ಅಧಿನಿಯಮವನ್ನು ಸೂಕ್ತವಾಗಿ ತಿದ್ದುಪಡಿ ಮಾಡಬೇಕೆಂದು ಅವರು ಸಲಹೆ ಮಾಡಿದ್ದಾರೆ. ಈ ಸಲಹೆಗೆ ಆಯೋಗವು ಬೆಂಬಲ ನೀಡಿದೆ.

## (ಜಿ) ಜಾಗೃತಿ ಮೂಡಿಸುವುದು:

4.21 ಮಾಹಿತಿ ಹಕ್ಕು ಅಧಿನಿಯಮದ 26ನೇ ಪ್ರಕರಣದ ಮೇರೆಗೆ, ರಾಜ್ಯ ಸರ್ಕಾರವು ಈ ಅಧಿನಿಯಮದ ಮೇರೆಗೆ ತಮ್ಮ ಹಕ್ಕುಗಳನ್ನು ಚಲಾಯಿಸಲು ಇಚ್ಛಿಸಿರುವ ವ್ಯಕ್ತಿಗಳಿಗಾಗಿ ಒಂದು ಮಾರ್ಗದರ್ಶಿ ಹೊತ್ತಿಗೆ/ಪುಸ್ತಕವನ್ನು ಪ್ರಕಟಿಸುವ ಅಗತ್ಯವಿದೆ. ಅಂಥ ಮಾರ್ಗದರ್ಶಿ ಹೊತ್ತಿಗೆಯಲ್ಲಿ ಸಾರ್ವಜನಿಕ ಪ್ರಾಧಿಕಾರಗಳ ಮತ್ತು ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಪಟ್ಟಿ, ಅವರ ವಿಳಾಸ, ಇತ್ಯಾದಿಗಳು ಇರಬೇಕು. ಹಾಗೂ ಅಂಥ ಸಾರ್ವಜನಿಕ ಪ್ರಾಧಿಕಾರಗಳ ಮತ್ತು ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಪಟ್ಟಿಯನ್ನು ಸಂಕಲಿಸುವ ಕೆಲವು ಪ್ರಯತ್ನಗಳನ್ನು ಮಾಡಲಾಗಿದೆ. ಆದರೆ, ಅಂಥ ಪೂರ್ಣ ಮತ್ತು ಸಮಗ್ರವಾದ ಪಟ್ಟಿಯನ್ನು ಇದುವರೆಗೆ ಪ್ರಕಟಿಸಿಲ್ಲ. ಈ ಕಾರ್ಯವನ್ನು ತ್ವರಿತವಾಗಿ ಪೂರ್ಣಗೊಳಿಸುವ ಅಗತ್ಯವಿದೆ.

4.22 ಕೆಲವು ಸ್ವಯಂ ಸೇವಾ ಸಂಘಸಂಸ್ಥೆಗಳು, ಮಾಹಿತಿ ಹಕ್ಕಿನ ಬಗ್ಗೆ ಕಲಿಕಾ ಸಾಮಗ್ರಿಗಳನ್ನು ಸಿದ್ಧಪಡಿಸಿವೆ. (ಕನ್ನಡ ಮತ್ತು ಇಂಗ್ಲೀಷ್ ಭಾಷೆಯಲ್ಲಿ) ಸರ್ಕಾರ ಮತ್ತು ಸಾರ್ವಜನಿಕ ಪ್ರಾಧಿಕಾರಗಳು ಈ ಪ್ರಯತ್ನಗಳಿಗೆ ಪ್ರೋತ್ಸಾಹ ನೀಡಬೇಕು.

## (ಹೆಚ್) ಕಾರ್ಯ ನಿರ್ವಹಣೆಯ ಪರಿಶೀಲನೆ

4.23 ಅಧಿಕಾರಿಗಳ ವಾರ್ಷಿಕ ರಹಸ್ಯ ವರದಿಗಳಲ್ಲಿ ಮಾಹಿತಿ ಹಕ್ಕು ಅಧಿನಿಯಮವನ್ನು ಅನುಷ್ಠಾನಗೊಳಿಸುವ ಬಗ್ಗೆ ಅವರ ಮನೋವೃತ್ತಿಗೆ ಸಂಬಂಧಿಸಿದ ನಿರ್ದಿಷ್ಟ ಅಂಕಣಗಳು ಇರಬೇಕೆಂದು ಸಲಹೆ ಮಾಡಲಾಗಿದೆ. ಸಾರ್ವಜನಿಕ ಮಾಹಿತಿ ಅಧಿಕಾರಿಯು ಮಾಡುವ ಸ್ವಯಂ ನಿರ್ಧರಣಾ ವರದಿಯಲ್ಲಿ, ಆ ಅಧಿಕಾರಿಯು ಸ್ವೀಕರಿಸಿದ ಮತ್ತು ವಿಲೇವಾರಿ ಮಾಡಿದ ಅರ್ಜಿಗಳಿಗೆ ಸಂಬಂಧಿಸಿದ ಮಾಹಿತಿಯು ಇರಲೇಬೇಕು.

# ಆಡಳಿತ ವ್ಯವಸ್ಥೆ ನಕ್ಷೆ



# ಆಡಳಿತ ವ್ಯವಸ್ಥೆ ನಕ್ಷೆ



# ಕಾರ್ಯಗತಿ ನಕ್ಷೆ


ಸ್ವೀಕೃತಿಗಳು
ಅಪೀಲುಗಳು ಮತ್ತು ದೂರುಗಳು
ಆರ್ಐಆರ್
ವಿಚಾರಣೆಗಾಗಿ ಕಡತಗಳು
ನ್ಯಾಯಾಲಯ ಘಟಕ
ಸಿವಿಲ್ ಪ್ರಕ್ರಿಯಾ ಸಂಹಿತೆಯ 30ನೇ ಪ್ರಕರಣದ ಮೇರೆಗೆ
ಆದೇಶಗಳ / ಹೊಸ ಸಮನ್‌ಗಳ/ ಸಮನ್‌ಗಳ ಜಾರಿ
ಪರಿಶೀಲನೆ
ಮಧ್ಯಕಾಲೀನ ಆದೇಶಗಳು
ನ್ಯಾಯಾಲಯ ಘಟಕ
ಮಧ್ಯಕಾಲೀನ ಆದೇಶಗಳು
ರಾಜ್ಯ ಮುಖ್ಯ ಮಾಹಿತಿ ಆಯುಕ್ತರು / ರಾಜ್ಯ ಮಾಹಿತಿ ಆಯುಕ್ತರು
ವಿಷಯಸಂಬಂಧಿ
ನ್ಯಾಯಿಕ
ವಿಚಾರಣೆಗಾಗಿ
ನ್ಯಾಯಾಲಯ ಘಟಕ
ಮಾಹಿತಿಗಾಗಿ ಕೋರಿಕೆಗಳು
ಸಾರ್ವಜನಿಕ ಮಾಹಿತಿ ಅಧಿಕಾರಿ
ಇತರ ಟಪಾಲುಗಳು
ಅಧೀನ ಕಾರ್ಯದರ್ಶಿ
ಕಾರ್ಯದರ್ಶಿ
ರಾಜ್ಯ ಮಾಹಿತಿ ಆಯುಕ್ತರು
ರಾಜ್ಯ ಮುಖ್ಯ ಮಾಹಿತಿ ಆಯುಕ್ತರುಗಳು

# ಅನುಬಂಧಗಳು

**ಕೋಷ್ಟಕ –1**

ಸಾರ್ವಜನಿಕ ಮಾಹಿತಿ ಅಧಿನಿಯಮಗಳ ಪದನಾಮ (5 (1) ಪ್ರಕರಣ ನೋಡಿ)

ವರದಿ ವರ್ಷ: 2005–06

[ಆಧಾರ: ಇಲಾಖೆಗಳ ವರದಿಗಳು]

| ಕ್ರ. ಸಂ. | ಇಲಾಖೆಗಳ ಹೆಸರು | ಸಾರ್ವಜನಿಕ ಪ್ರಾಧಿಕಾರಗಳ ಸಂಖ್ಯೆ | ನಿಯೋಜಿತ ಸಾರ್ವಜನಿಕ ಮಾಹಿತಿ ಅಧಿನಿಯಮಗಳ ಸಂಖ್ಯೆ |
|---|---|---|---|
| 1 | 2 | 3 | 4 |
| 1 | ತೋಟಗಾರಿಕೆ ಮತ್ತು ಆಹಾರ ಸಂಸ್ಕರಣೆ ಸೇರಿದಂತೆ ಕೃಷಿ | 189 | 276 |
| 2 | ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ | 12 | 3732 |
| 3 | ಗಣಿಗಳು, ಜವಳಿ ಮತ್ತು ಸಣ್ಣ ಪ್ರಮಾಣದ ಕೈಗಾರಿಕೆಗಳು ಸೇರಿದಂತೆ ವಾಣಿಜ್ಯ ಮತ್ತು ಕೈಗಾರಿಕೆಗಳು | 32 | 218 |
| 4 | ಸಹಕಾರ ಇಲಾಖೆ | 315* | 213* |
| 5 | ಡಿಪಿಎಆರ್ (ವಾರ್ಷಿಕ ವರದಿ), ವಿದ್ಯುನ್ಮಾನ ಆಡಳಿತ ಸಾರ್ವಜನಿಕ ಕುಂದುಕೊರತೆ ಮತ್ತು ಕರ್ನಾಟಕ ಮಾಹಿತಿ ಆಯೋಗ ಸೇರಿದಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ | 28 | 53 |
| 6 | ಉನ್ನತ ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಸೇರಿದಂತೆ ಶಿಕ್ಷಣ | 56277 | 56227 |
| 7 | ಇಂಧನ ಇಲಾಖೆ | 11 | 486 |
| 8 | ಆರ್ಥಿಕ ಇಲಾಖೆ | 1796* | 1664* |
| 9 | ಪರಿಸರ ಮತ್ತು ಜೀವಿಶಾಸ್ತ್ರ ಸೇರಿದಂತೆ ಅರಣ್ಯ | 11 | 108 |
| 10 | ಆಹಾರ ಮತ್ತು ನಾಗರೀಕ ಸರಬರಾಜುಗಳ ಇಲಾಖೆ | 383 | 417 |
| 11 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | 8 | 108 |
| 12 | ಕಾರಾಗೃಹ ಸೇರಿದಂತೆ ಒಳಾಡಳಿತ | 7 | 123 |
| 13 | ವಸತಿ ಇಲಾಖೆ | 5 | 45 |
| 14 | ಮಾಹಿತಿ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ | 12 | 12 |
| 15 | ಮೂಲ ಸೌಕರ್ಯ ಅಭಿವೃದ್ಧಿ ಇಲಾಖೆ | 1 | 3 |
| 16 | ಕನ್ನಡ ಮತ್ತು ಸಂಸ್ಕೃತಿ ಮತ್ತು ವಾರ್ತಾ ಇಲಾಖೆ | 14 | 120 |
| 17 | ಕರ್ನಾಟಕ ವಿಧಾನಸಭೆ ಮತ್ತು ಪರಿಷತ್ತು | 2 | 2 |
| 18 | ನ್ಯಾಯಾಲಯಗಳು ಸೇರಿದಂತೆ ಕಾನೂನು ಮತ್ತು ಮಾನವ ಹಕ್ಕುಗಳ ಇಲಾಖೆ | 34 | 42 |
| 19 | ಕಾರ್ಮಿಕ ಇಲಾಖೆ | 5 | 123 |
| 20 | ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ | 2 | 2 |
| 21 | ಯೋಜನಾ ಮತ್ತು ಸಾಂಖ್ಯಿಕ ಇಲಾಖೆ | 5 | 36 |
| 22 | ಸಾರ್ವಜನಿಕ ಉದ್ಯಮಗಳ ಇಲಾಖೆ | 1 | 1 |
| 23 | ಲೋಕೋಪಯೋಗಿ ಇಲಾಖೆ ಮತ್ತು ರಾಷ್ಟ್ರೀಯ ಹೆದ್ದಾರಿಗಳು | 9 | 350 |
| 24 | ಮುಜರಾಯಿ, ಸ್ಟ್ಯಾಂಪ್‌ಗಳು ಮತ್ತು ನೋಂದಣಿ ಮತ್ತು ಕರ್ನಾಟಕ | 36 | 1096 |

| ಕ್ರ. ಸಂ. | ಇಲಾಖೆಗಳ ಹೆಸರು | ಸಾರ್ವಜನಿಕ ಪ್ರಾಧಿಕಾರಗಳ ಸಂಖ್ಯೆ | ನಿಯೋಜಿತ ಸಾರ್ವಜನಿಕ ಮಾಹಿತಿ ಅಧಿನಿಯಮಗಳ ಸಂಖ್ಯೆ |
|---|---|---|---|
| | ಅಪೀಲು ನ್ಯಾಯಾಧೀಕರಣ ಸೇರಿದಂತೆ ಕಂದಾಯ ಇಲಾಖೆ | | |
| 1 | 2 | 3 | 4 |
| 25 | ಪಂಚಾಯತ್ ರಾಜ್ ಸೇರಿದಂತೆ ಗ್ರಾಮೀಣ ಅಭಿವೃದ್ಧಿ | 5861 | 6090 |
| 26 | ಅಲ್ಪಸಂಖ್ಯಾತರ ಕಲ್ಯಾಣ ಸೇರಿದಂತೆ ಸಮಾಜ ಕಲ್ಯಾಣ ಇಲಾಖೆ | 8 | 279 |
| 27 | ಸಾರಿಗೆ ಇಲಾಖೆ | 6 | 175 |
| 28 | ಭಾರಿ, ಮಧ್ಯಮ ಮತ್ತು ಸಣ್ಣ ನೀರಾವರಿ ಸೇರಿದಂತೆ ಜಲ ಸಂಪನ್ಮೂಲಗಳು | 10 | 367 |
| 29 | ಮಹಿಳೆ ಮತ್ತು ಮಕ್ಕಳ ಕಲ್ಯಾಣ ಇಲಾಖೆ | 358 | 358 |
| 30 | ಯುವಜನ ಸೇವೆಗಳು | 5 | 10 |
| 31 | ರಾಜ್ಯಪಾಲರ ಸಚಿವಾಲಯ | 1 | 2 |
| 32 | ಮುಖ್ಯ ಚುನಾವಣಾಧಿಕಾರಿ ಮತ್ತು ಸರ್ಕಾರದ ಪದನಿಮಿತ್ತ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ | 1 | 2 |
| 33 | ಪೌರಾಡಳಿತ ಮತ್ತು ನಿಗಮ ಸೇರಿದಂತೆ ನಗರಾಭಿವೃದ್ಧಿ | 323 | 773 |
| | ಒಟ್ಟು | 65,717 | 73,512 |

* ಇಲ್ಲಿ ವರದಿ ಮಾಡಿರುವ ಸಾ.ಮಾ.ಅ.ಗಳ ಸಂಖ್ಯೆಯು ಸಾರ್ವಜನಿಕ ಪ್ರಾಧಿಕಾರಗಳ ಸಂಖ್ಯೆಗಿಂತ ಕಡಿಮೆ ಇದೆ. ಏಕೆಂದರೆ, ಕೆಲವು ಸಾರ್ವಜನಿಕ ಪ್ರಾಧಿಕಾರಗಳು ತಾವು ನೇಮಕ ಮಾಡಿರುವ ಸಾ.ಮಾ.ಅ.ಗಳ ಸಂಖ್ಯೆಯನ್ನು ವರದಿ ಮಾಡಿಲ್ಲ.

**ಕೋಷ್ಟಕ – 2**

ಮಾಹಿತಿ ಹಕ್ಕು ಅಧಿನಿಯಮದ 6ನೇ ಪ್ರಕರಣದ ಮೇರೆಗೆ ಮಾಹಿತಿಗಾಗಿ ಸಲ್ಲಿಸಿರುವ ಕೋರಿಕೆಗಳು ಮತ್ತು ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಂದ ಅವುಗಳ ವಿಲೇವಾರಿ

[ಆಧಾರ: ಇಲಾಖೆಗಳ ವರದಿಗಳು]

| ಕ್ರ. ಸಂ | ಇಲಾಖೆಗಳ ಹೆಸರು | ಕಳೆದ ವರ್ಷಾಂತ್ಯದಲ್ಲಿ ಬಾಕಿ ಇದ್ದ ಕೋರಿಕೆಗಳ ಸಂಖ್ಯೆ | ಆ ವರ್ಷದಲ್ಲಿ ಸ್ವೀಕೃತವಾದ ಕೋರಿಕೆಗಳ ಸಂಖ್ಯೆ | ಕೋರಿಕೆಗಳ ಒಟ್ಟು ಸಂಖ್ಯೆ | ವಿಲೇ ಮಾಡಲಾದ ಕೋರಿಕೆಗಳ ಸಂಖ್ಯೆ |
|---|---|---|---|---|---|
| 1 | 2 | 3 | 4 | 5 | 6 |
| **1** | ತೋಟಗಾರಿಕೆ ಮತ್ತು ಆಹಾರ ಸಂಸ್ಕರಣೆ ಸೇರಿದಂತೆ ಕೃಷಿ | **0** | **44** | **44** | **40** |
| **2** | ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ | **0** | **29** | **29** | **28** |
| **3** | ಗಣಿಗಳು, ಜವಳಿ ಮತ್ತು ಸಣ್ಣ ಪ್ರಮಾಣದ ಕೈಗಾರಿಕೆಗಳು ಸೇರಿದಂತೆ ವಾಣಿಜ್ಯ ಮತ್ತು ಕೈಗಾರಿಕೆಗಳು | **0** | **395** | **395** | **384** |
| **4** | ಸಹಕಾರ ಇಲಾಖೆ | **0** | **74** | **74** | **69** |
| **5** | ಡಿಪಿಎಆರ್ (ವಾರ್ಷಿಕ ವರದಿ), ವಿದ್ಯುನ್ಮಾನ ಆಡಳಿತ ಸಾರ್ವಜನಿಕ ಕುಂದುಕೊರತೆ ಮತ್ತು ಕರ್ನಾಟಕ ಮಾಹಿತಿ ಆಯೋಗ ಸೇರಿದಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ | **0** | **127** | **127** | **122** |
| **6** | ಉನ್ನತ ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಸೇರಿದಂತೆ ಶಿಕ್ಷಣ | **0** | **183** | **183** | **168** |
| **7** | ಇಂಧನ ಇಲಾಖೆ | **0** | **24** | **24** | **21** |
| **8** | ಆರ್ಥಿಕ ಇಲಾಖೆ | **0** | **61** | **61** | **54** |
| **9** | ಪರಿಸರ ಮತ್ತು ಜೀವಿಶಾಸ್ತ್ರ ಸೇರಿದಂತೆ ಅರಣ್ಯ | **0** | **238** | **238** | **236** |
| **10** | ಆಹಾರ ಮತ್ತು ನಾಗರೀಕ ಸರಬರಾಜುಗಳ ಇಲಾಖೆ | **0** | **123** | **123** | **123** |
| **11** | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | **0** | **63** | **63** | **63** |
| **12** | ಕಾರಾಗೃಹ ಸೇರಿದಂತೆ ಒಳಾಡಳಿತ | **0** | **768** | **768** | **759** |
| **13** | ವಸತಿ ಇಲಾಖೆ | **0** | **9** | **9** | **9** |
| **14** | ಮಾಹಿತಿ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ | **0** | **2** | **2** | **2** |
| **15** | ಮೂಲ ಸೌಕರ್ಯ ಅಭಿವೃದ್ಧಿ ಇಲಾಖೆ | **0** | **1** | **1** | **1** |
| **16** | ಕನ್ನಡ ಮತ್ತು ಸಂಸ್ಕೃತಿ ಮತ್ತು ವಾರ್ತಾ ಇಲಾಖೆ | **0** | **1505** | **1505** | **1499** |
| **17** | ಕರ್ನಾಟಕ ವಿಧಾನಸಭೆ ಮತ್ತು ಪರಿಷತ್ತು | **0** | **55** | **55** | **53** |
| **18** | ನ್ಯಾಯಾಲಯಗಳು ಸೇರಿದಂತೆ ಕಾನೂನು ಮತ್ತು ಮಾನವ ಹಕ್ಕುಗಳ ಇಲಾಖೆ | **0** | **0** | **0** | **0** |
| **19** | ಕಾರ್ಮಿಕ ಇಲಾಖೆ | **0** | **28** | **28** | **28** |
| **20** | ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ | **0** | **0** | **0** | **0** |
| **21** | ಯೋಜನಾ ಮತ್ತು ಸಾಂಖ್ಯಿಕ ಇಲಾಖೆ | **0** | **5** | **5** | **4** |
| **22** | ಸಾರ್ವಜನಿಕ ಉದ್ಯಮಗಳ ಇಲಾಖೆ | **0** | **0** | **0** | **0** |
| **23** | ಲೋಕೋಪಯೋಗಿ ಇಲಾಖೆ ಮತ್ತು ರಾಷ್ಟ್ರೀಯ ಹೆದ್ದಾರಿಗಳು | **0** | **89** | **89** | **76** |
| **24** | ಮುಜರಾಯಿ, ಸ್ಟ್ಯಾಂಪ್‌ಗಳು ಮತ್ತು ನೋಂದಣಿ ಮತ್ತು ಕರ್ನಾಟಕ ಅಪೀಲು ನ್ಯಾಯಾಧೀಕರಣ ಸೇರಿದಂತೆ ಕಂದಾಯ ಇಲಾಖೆ | | **3220** | **3220** | **3180** |
| **25** | ಪಂಚಾಯತ್ ರಾಜ್ ಸೇರಿದಂತೆ ಗ್ರಾಮೀಣ ಅಭಿವೃದ್ಧಿ | **0** | **288** | **288** | **283** |
| **26** | ಅಲ್ಪಸಂಖ್ಯಾತರ ಕಲ್ಯಾಣ ಸೇರಿದಂತೆ ಸಮಾಜ ಕಲ್ಯಾಣ ಇಲಾಖೆ | **0** | **26** | **26** | **25** |

| ಕ್ರ. ಸಂ | ಇಲಾಖೆಗಳ ಹೆಸರು | ಕಳೆದ ವರ್ಷಾಂತ್ಯದಲ್ಲಿ ಬಾಕಿ ಇದ್ದ ಕೋರಿಕೆಗಳ ಸಂಖ್ಯೆ | ಆ ವರ್ಷದಲ್ಲಿ ಸ್ವೀಕೃತವಾದ ಕೋರಿಕೆಗಳ ಸಂಖ್ಯೆ | ಕೋರಿಕೆಗಳ ಒಟ್ಟು ಸಂಖ್ಯೆ | ವಿಲೇ ಮಾಡಲಾದ ಕೋರಿಕೆಗಳ ಸಂಖ್ಯೆ |
|---|---|---|---|---|---|
| 27 | ಸಾರಿಗೆ ಇಲಾಖೆ | 0 | 23 | 23 | 22 |
| 28 | ಭಾರಿ, ಮಧ್ಯಮ ಮತ್ತು ಸಣ್ಣ ನೀರಾವರಿ ಸೇರಿದಂತೆ ಜಲ ಸಂಪನ್ಮೂಲಗಳು | 0 | 108 | 108 | 88 |
| 29 | ಮಹಿಳೆ ಮತ್ತು ಮಕ್ಕಳ ಕಲ್ಯಾಣ ಇಲಾಖೆ | 0 | 40 | 40 | 40 |
| 30 | ಯುವಜನ ಸೇವೆಗಳು | 0 | 2 | 2 | 2 |
| 31 | ರಾಜ್ಯಪಾಲರ ಸಚಿವಾಲಯ | 0 | 9 | 9 | 9 |
| 32 | ಮುಖ್ಯ ಚುನಾವಣಾಧಿಕಾರಿ ಮತ್ತು ಸರ್ಕಾರದ ಪದನಿಮಿತ್ತ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ | 0 | 0 | 0 | 0 |
| 33 | ಪೌರಾಡಳಿತ ಮತ್ತು ನಿಗಮ ಸೇರಿದಂತೆ ನಗರಾಭಿವೃದ್ಧಿ | 0 | 3952 | 3952 | 3726 |
| | ಒಟ್ಟು | | 10014 | 10014 | 8576 |

ಟಿಪ್ಪಣಿ: ಸಚಿವರ ಆಡಳಿತ ವರ್ಗಗಳು ಸ್ವತಂತ್ರ ಇಲಾಖೆಗಳಲ್ಲದ ಕಾರಣ ಅವುಗಳನ್ನು ಪ್ರತ್ಯೇಕವಾಗಿ ತೋರಿಸಿಲ್ಲ. ಅವುಗಳನ್ನು ಸಂಬಂಧಪಟ್ಟ ಇಲಾಖೆಗಳ ಅಡಿಯಲ್ಲಿ ಬರುವ ಸಾರ್ವಜನಿಕ ಪ್ರಾಧಿಕಾರಗಳೆಂದು ಭಾವಿಸಲಾಗಿದೆ.

## ಕೋಷ್ಟಕ –3

### ಅಧಿನಿಯಮದ ಯಾವ ಉಪಬಂಧಗಳ ಮೇರೆಗೆ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಂದ ಕೋರಿಕೆಗಳನ್ನು ತಿರಸ್ಕರಿಸಲಾಗಿದೆಯೋ ಆ ಉಪಬಂಧಗಳು

ವರದಿ ವರ್ಷ: 2005–06

[ಆಧಾರ: ಇಲಾಖೆಗಳಿಂದ ವರದಿಗಳು]

| ಕ್ರ. ಸಂ. | ಇಲಾಖೆಗಳ ಹೆಸರು | ಪ್ರಕರಣ 8(1) (ಎ) | ಪ್ರಕರಣ 8(1) (ಬಿ) | ಪ್ರಕರಣ 8(1) (ಸಿ) | ಪ್ರಕರಣ 8(1) (ಡಿ) | ಪ್ರಕರಣ 8(1) (ಇ) | ಪ್ರಕರಣ 8(1) (ಎಫ್) | ಪ್ರಕರಣ 8(1) (ಜಿ) | ಪ್ರಕರಣ 8(1) (ಹೆಚ್) | ಪ್ರಕರಣ 8(1) (ಐ) | ಪ್ರಕರಣ 8(1) (ಜೆ) | ಇತರೆ ಪ್ರಕರಣಗಳು | ಒಟ್ಟು |
|---|---|---|---|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 | 11 | 12 | 13 | 14 |
| 1 | ತೋಟಗಾರಿಕೆ ಮತ್ತು ಆಹಾರ ಸಂಸ್ಕರಣೆ ಸೇರಿದಂತೆ ಕೃಷಿ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 2 | ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 3 | ಗಣಿಗಳು, ಜವಳಿ ಮತ್ತು ಸಣ್ಣ ಪ್ರಮಾಣದ ಕೈಗಾರಿಕೆಗಳು ಸೇರಿದಂತೆ ವಾಣಿಜ್ಯ ಮತ್ತು ಕೈಗಾರಿಕೆಗಳು | 0 | 0 | 0 | 4 | 0 | 0 | 0 | 0 | 0 | 0 | 0 | 4 |
| 4 | ಸಹಕಾರ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 5 | ಡಿಪಿಎಆರ್ (ವಾರ್ಷಿಕ ವರದಿ), ವಿದ್ಯುನ್ಮಾನ ಆಡಳಿತ ಸಾರ್ವಜನಿಕ ಕುಂದುಕೊರತೆ ಮತ್ತು ಕರ್ನಾಟಕ ಮಾಹಿತಿ ಆಯೋಗ ಸೇರಿದಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ | 9 | 0 | 0 | 3 | 1 | 0 | 0 | 0 | 0 | 1 | 4 | 18 |
| 6 | ಉನ್ನತ ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಸೇರಿದಂತೆ ಶಿಕ್ಷಣ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 7 | ಇಂಧನ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 8 | ಆರ್ಥಿಕ ಇಲಾಖೆ | 0 | 0 | 0 | 0 | 0 | 0 | 0 | 0 | 0 | 1 | 0 | 1 |
| 9 | ಪರಿಸರ ಮತ್ತು ಜೀವಿಶಾಸ್ತ್ರ ಸೇರಿದಂತೆ ಅರಣ್ಯ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 10 | ಆಹಾರ ಮತ್ತು ನಾಗರೀಕ ಸರಬರಾಜುಗಳ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 11 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 12 | ಕಾರಾಗೃಹ ಸೇರಿದಂತೆ ಒಳಾಡಳಿತ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 13 | ವಸತಿ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 14 | ಮಾಹಿತಿ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 15 | ಮೂಲ ಸೌಕರ್ಯ ಅಭಿವೃದ್ಧಿ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |

| 1 | 2 | 3 | 4 | 5 | 6 | 7 | 8 | 9 | 10 | 11 | 12 | 13 | 14 |
|---|---|---|---|---|---|---|---|---|---|---|---|---|---|
| 16 | ಕನ್ನಡ ಮತ್ತು ಸಂಸ್ಕೃತಿ ಮತ್ತು ವಾರ್ತಾ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 17 | ಕರ್ನಾಟಕ ವಿಧಾನಸಭೆ ಮತ್ತು ಪರಿಷತ್ತು | 0 | 0 | 1 | 0 | 0 | 0 | 0 | 0 | 0 | 0 | 0 | 1 |
| 18 | ನ್ಯಾಯಾಲಯಗಳು ಸೇರಿದಂತೆ ಕಾನೂನು ಮತ್ತು ಮಾನವ ಹಕ್ಕುಗಳ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 19 | ಕಾರ್ಮಿಕ ಇಲಾಖೆ | 0 | 0 | 0 | 0 | 0 | 0 | 0 | 0 | 0 | 3 | 0 | 3 |
| 20 | ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 21 | ಯೋಜನಾ ಮತ್ತು ಸಾಂಖ್ಯಿಕ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 22 | ಸಾರ್ವಜನಿಕ ಉದ್ಯಮಗಳ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 23 | ಲೋಕೋಪಯೋಗಿ ಇಲಾಖೆ ಮತ್ತು ರಾಷ್ಟ್ರೀಯ ಹೆದ್ದಾರಿಗಳು | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 24 | ಮುಜರಾಯಿ, ಸ್ಟ್ಯಾಂಪ್‌ಗಳು ಮತ್ತು ನೋಂದಣಿ ಮತ್ತು ಕರ್ನಾಟಕ ಅಪೀಲು ನ್ಯಾಯಾಧೀಕರಣ ಸೇರಿದಂತೆ ಕಂದಾಯ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 25 | ಪಂಚಾಯತ್ ರಾಜ್ ಸೇರಿದಂತೆ ಗ್ರಾಮೀಣ ಅಭಿವೃದ್ಧಿ | 0 | 0 | 0 | 0 | 0 | 0 | 0 | 0 | 0 | 0 | 9 | 9 |
| 26 | ಅಲ್ಪಸಂಖ್ಯಾತರ ಕಲ್ಯಾಣ ಸೇರಿದಂತೆ ಸಮಾಜ ಕಲ್ಯಾಣ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 27 | ಸಾರಿಗೆ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 28 | ಭಾರಿ, ಮಧ್ಯಮ ಮತ್ತು ಸಣ್ಣ ನೀರಾವರಿ ಸೇರಿದಂತೆ ಜಲ ಸಂಪನ್ಮೂಲಗಳು | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 29 | ಮಹಿಳೆ ಮತ್ತು ಮಕ್ಕಳ ಕಲ್ಯಾಣ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 30 | ಯುವಜನ ಸೇವೆಗಳು | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 31 | ರಾಜ್ಯಪಾಲರ ಸಚಿವಾಲಯ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 32 | ಮುಖ್ಯ ಚುನಾವಣಾಧಿಕಾರಿ ಮತ್ತು ಸರ್ಕಾರದ ಪದನಿಮಿತ್ತ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| 33 | ಪೌರಾಡಳಿತ ಮತ್ತು ನಿಗಮ ಸೇರಿದಂತೆ ನಗರಾಭಿವೃದ್ಧಿ | 0 | 0 | 0 | 0 | 0 | 0 | 0 | 0 | 0 | 0 | 0 | 0 |
| | ಒಟ್ಟು | 9 | 0 | 1 | 7 | 1 | 0 | 0 | 0 | 0 | 5 | 13 | 36 |

ಟಿಪ್ಪಣಿ: ಒಂದಕ್ಕಿಂತ ಹೆಚ್ಚಿನ ಮಾಹಿತಿ ಕೋರಿಕೆಗಳನ್ನು ತಿರಸ್ಕರಿಸಬಹುದಾಗಿದೆ.

## ಕೋಷ್ಟಕ 4

### ಸದರಿ ಅಧಿನಿಯಮದ 19 (1)ನೇ ಪ್ರಕರಣದ ಮೇರೆಗೆ ಮೊದಲ ಅಪೀಲು ಪ್ರಾಧಿಕಾರಗಳಿಂದ ಅಪೀಲುಗಳ ವಿಲೇವಾರಿ ವರದಿ ವರ್ಷ 2005–06

[ಆಧಾರ: ಇಲಾಖೆಗಳ ವರದಿಗಳು]

| ಕ್ರ. ಸಂ. | ಇಲಾಖೆಗಳ ಹೆಸರು | ಅಪೀಲು ಅಧಿಕಾರಿಗಳ ಬಳಿ ಬಾಕಿಯಿರುವ ಮೊದಲ ಅಪೀಲುಗಳ ಸಂಖ್ಯೆ | ಈ ವರ್ಷದಲ್ಲಿ ಸಲ್ಲಿಸಿದ ಮೊದಲ ಅಪೀಲುಗಳ ಸಂಖ್ಯೆ | ಅಪೀಲು ಅಧಿಕಾರಿಗಳ ಬಳಿ ಬಾಕಿಯಿರುವ ಮೊದಲ ಅಪೀಲುಗಳ ಒಟ್ಟು ಸಂಖ್ಯೆ | ವಿಲೆ ಮಾಡಲಾದ ಮೊದಲ ಅಪೀಲುಗಳ ಸಂಖ್ಯೆ | ತಿರಸ್ಕೃತ ವಾದ ಮೊದಲ ಅಪೀಲುಗಳ ಸಂಖ್ಯೆ | ತಿರಸ್ಕೃತವಾದ ಮೊದಲ ಅಪೀಲುಗಳ ಶೇಕಡಾ ಪ್ರಮಾಣ | 30 ದಿನಗಳನ್ನು ಮೀರಿ ಬಾಕಿಯಿರುವ ಮೊದಲ ಅಪೀಲುಗಳ ಸಂಖ್ಯೆ |
|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 |
| 1 | ತೋಟಗಾರಿಕೆ ಮತ್ತು ಆಹಾರ ಸಂಸ್ಕರಣೆ ಸೇರಿದಂತೆ ಕೃಷಿ | 0 | 14 | 14 | 14 | 0 | 0 | 0 |
| 2 | ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ | 0 | 0 | 0 | 0 | 0 | 0 | 0 |
| 3 | ಗಣಿಗಳು, ಜವಳಿ ಮತ್ತು ಸಣ್ಣ ಪ್ರಮಾಣದ ಕೈಗಾರಿಕೆಗಳು ಸೇರಿದಂತೆ ವಾಣಿಜ್ಯ ಮತ್ತು ಕೈಗಾರಿಕೆಗಳು | 0 | 4 | 4 | 0 | 0 | 0 | 4 |
| 4 | ಸಹಕಾರ ಇಲಾಖೆ | 0 | 3 | 3 | 3 | 0 | 0 | 0 |
| 5 | ಡಿಪಿಎಆರ್ (ವಾರ್ಷಿಕ ವರದಿ), ವಿದ್ಯುನ್ಮಾನ ಆಡಳಿತ ಸಾರ್ವಜನಿಕ ಕುಂದುಕೊರತೆ ಮತ್ತು ಕರ್ನಾಟಕ ಮಾಹಿತಿ ಆಯೋಗ ಸೇರಿದಂತೆ ಸಿಬ್ಬಂದಿ ಮತ್ತುಆಡಳಿತ ಸುಧಾರಣಾ ಇಲಾಖೆ | 0 | 9 | 9 | 7 | 0 | 0 | 2 |
| 6 | ಉನ್ನತ ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಸೇರಿದಂತೆ ಶಿಕ್ಷಣ | 0 | 1 | 1 | 0 | 0 | 0 | 1 |
| 7 | ಇಂಧನ ಇಲಾಖೆ | 0 | 0 | 0 | 0 | 0 | 0 | 0 |
| 8 | ಆರ್ಥಿಕ ಇಲಾಖೆ | 0 | 2 | 2 | 2 | 0 | 0 | 0 |
| 9 | ಪರಿಸರ ಮತ್ತು ಜೀವಿಶಾಸ್ತ್ರ ಸೇರಿದಂತೆ ಅರಣ್ಯ | 0 | 1 | 0 | 0 | 0 | 0 | 1 |
| 10 | ಆಹಾರ ಮತ್ತು ನಾಗರೀಕ ಸರಬರಾಜುಗಳ ಇಲಾಖೆ | 0 | 17 | 17 | 17 | 0 | 0 | 0 |
| 11 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | 0 | 0 | 0 | 0 | 0 | 0 | 0 |
| 12 | ಕಾರಾಗೃಹ ಸೇರಿದಂತೆ ಒಳಾಡಳಿತ | 0 | 1 | 1 | 1 | 0 | 0 | 0 |
| 13 | ವಸತಿ ಇಲಾಖೆ | 0 | 2 | 2 | 2 | 0 | 0 | 0 |
| 14 | ಮಾಹಿತಿ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ | 0 | 2 | 2 | 2 | 0 | 0 | 0 |
| 15 | ಮೂಲ ಸೌಕರ್ಯ ಅಭಿವೃದ್ಧಿ ಇಲಾಖೆ | 0 | 0 | 0 | 0 | 0 | 0 | 0 |
| 16 | ಕನ್ನಡ ಮತ್ತು ಸಂಸ್ಕೃತಿ ಮತ್ತು ವಾರ್ತಾ ಇಲಾಖೆ | 0 | 0 | 0 | 0 | 0 | 0 | 0 |
| 17 | ಕರ್ನಾಟಕ ವಿಧಾನಸಭೆ ಮತ್ತು ಪರಿಷತ್ತು | 0 | 1 | 1 | 1 | 0 | 0 | 0 |
| 18 | ನ್ಯಾಯಾಲಯಗಳು ಸೇರಿದಂತೆ ಕಾನೂನು ಮತ್ತು ಮಾನವ ಹಕ್ಕುಗಳ ಇಲಾಖೆ | 0 | 0 | 0 | 0 | 0 | 0 | 0 |
| 19 | ಕಾರ್ಮಿಕ ಇಲಾಖೆ | 0 | 3 | 3 | 3 | 0 | 0 | 0 |

| ಕ್ರ. ಸಂ. | ಇಲಾಖೆಗಳ ಹೆಸರು | ಅಪೀಲು ಅಧಿಕಾರಿಗಳ ಬಳಿ ಬಾಕಿಯಿರುವ ಮೊದಲ ಅಪೀಲುಗಳ ಸಂಖ್ಯೆ | ಈ ವರ್ಷದಲ್ಲಿ ಸಲ್ಲಿಸಿದ ಮೊದಲ ಅಪೀಲುಗಳ ಸಂಖ್ಯೆ | ಅಪೀಲು ಅಧಿಕಾರಿಗಳ ಬಳಿ ಬಾಕಿಯಿರುವ ಮೊದಲ ಅಪೀಲುಗಳ ಒಟ್ಟು ಸಂಖ್ಯೆ | ವಿಲೆ ಮಾಡಲಾದ ಮೊದಲ ಅಪೀಲುಗಳ ಸಂಖ್ಯೆ | ತಿರಸ್ಕೃತ ವಾದ ಮೊದಲ ಅಪೀಲುಗಳ ಸಂಖ್ಯೆ | ತಿರಸ್ಕೃತವಾದ ಮೊದಲ ಅಪೀಲುಗಳ ಶೇಕಡಾ ಪ್ರಮಾಣ | 30 ದಿನಗಳನ್ನು ಮೀರಿ ಬಾಕಿಯಿರುವ ಮೊದಲ ಅಪೀಲುಗಳ ಸಂಖ್ಯೆ |
|---|---|---|---|---|---|---|---|---|
| 20 | ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ | 0 | 0 | 0 | 0 | 0 | 0 | 0 |
| 21 | ಯೋಜನಾ ಮತ್ತು ಸಾಂಖ್ಯಿಕ ಇಲಾಖೆ | 0 | 4 | 4 | 4 | 0 | 0 | 0 |
| 22 | ಸಾರ್ವಜನಿಕ ಉದ್ಯಮಗಳ ಇಲಾಖೆ | 0 | 0 | 0 | 0 | 0 | 0 | 0 |
| 23 | ಲೋಕೋಪಯೋಗಿ ಇಲಾಖೆ ಮತ್ತು ರಾಷ್ಟ್ರೀಯ ಹೆದ್ದಾರಿಗಳು | 0 | 12 | 12 | 6 | 0 | 0 | 6 |
| 24 | ಮುಜರಾಯಿ, ಸ್ಟ್ಯಾಂಪ್‌ಗಳು ಮತ್ತು ನೋಂದಣಿ ಮತ್ತು ಕರ್ನಾಟಕ ಅಪೀಲು ನ್ಯಾಯಾಧೀಕರಣ ಸೇರಿದಂತೆ ಕಂದಾಯ ಇಲಾಖೆ | 0 | 0 | 0 | 0 | 0 | 0 | 0 |
| 25 | ಪಂಚಾಯತ್ ರಾಜ್ ಸೇರಿದಂತೆ ಗ್ರಾಮೀಣ ಅಭಿವೃದ್ಧಿ | 0 | 57 | 57 | 57 | 0 | 0 | 0 |
| 26 | ಅಲ್ಪಸಂಖ್ಯಾತರ ಕಲ್ಯಾಣ ಸೇರಿದಂತೆ ಸಮಾಜ ಕಲ್ಯಾಣ ಇಲಾಖ | 0 | 0 | 0 | 0 | 0 | 0 | 0 |
| 27 | ಸಾರಿಗೆ ಇಲಾಖೆ | 0 | 0 | 0 | 0 | 0 | 0 | 0 |
| 28 | ಭಾರಿ, ಮಧ್ಯಮ ಮತ್ತು ಸಣ್ಣ ನೀರಾವರಿ ಸೇರಿದಂತೆ ಜಲ ಸಂಪನ್ಮೂಲಗಳು | 0 | 23 | 23 | 2 | 0 | 0 | 21 |
| 29 | ಮಹಿಳೆ ಮತ್ತು ಮಕ್ಕಳ ಕಲ್ಯಾಣ ಇಲಾಖೆ | 0 | 0 | 0 | 0 | 0 | 0 | 0 |
| 30 | ಯುವಜನ ಸೇವೆಗಳು | 0 | 1 | 1 | 1 | 0 | 0 | 1 |
| 31 | ರಾಜ್ಯಪಾಲರ ಸಚಿವಾಲಯ | 0 | 0 | 0 | 0 | 0 | 0 | 0 |
| 32 | ಮುಖ್ಯ ಚುನಾವಣಾಧಿಕಾರಿ ಮತ್ತು ಸರ್ಕಾರದ ಪದನಿಮಿತ್ತ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ | 0 | 0 | 0 | 0 | 0 | 0 | 0 |
| 33 | **ನಗರಾಭಿವೃದ್ಧಿ ಇಲಾಖೆ** | 0 | 314 | 314 | 306 | 0 | 0 | 8 |
| | **ಒಟ್ಟು** | 0 | 471 | 471 | 428 | 0 | 0 | 43 |

**ಕೋಷ್ಟಕ–5**

ಕರ್ನಾಟಕ ಮಾಹಿತಿ ಆಯೋಗದಿಂದ ದೂರಗಳ ವಿಲೇವಾರಿ

ವರದಿ ವರ್ಷ: 2005–06

[ಆಧಾರ: ಕ.ಮಾ.ಆ]

| ಕ್ರ. ಸಂ. | ಇಲಾಖೆಗಳ ಹೆಸರು | ಕಳೆದ ವರ್ಷದ ಕೊನೆಯಲ್ಲಿದ್ದ ದೂರುಗಳ ಸಂಖ್ಯೆ | ವರ್ಷದ ಅವಧಿಯಲ್ಲಿ ಸಲ್ಲಿಸಿದ ದೂರುಗಳ ಸಂಖ್ಯೆ | ದೂರುಗಳ ಒಟ್ಟು ಸಂಖ್ಯೆ | ವಿಲೇವಾರಿ ಮಾಡಲಾದ ದೂರುಗಳ ಸಂಖ್ಯೆ | ತಿರಸ್ಕೃತವಾದ ದೂರುಗಳ ಸಂಖ್ಯೆ | ತಿರಸ್ಕೃತವಾದ ದೂರುಗಳ ಶೇಕಡಾ ಪ್ರಮಾಣ | 90 ದಿನಗಳನ್ನು ಮೀರಿ ಬಾಕಿಯಿರುವ ಸಂಖ್ಯೆ |
|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 |
| 1 | ತೋಟಗಾರಿಕೆ ಮತ್ತು ಆಹಾರ ಸಂಸ್ಕರಣೆ ಸೇರಿದಂತೆ ಕೃಷಿ | 0 | 0 | 0 | 0 | 0 | 0 | 0 |
| 2 | ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ | 0 | 0 | 0 | 0 | 0 | 0 | 0 |
| 3 | ಗಣಿಗಳು, ಜವಳಿ ಮತ್ತು ಸಣ್ಣ ಪ್ರಮಾಣದ ಕೈಗಾರಿಕೆಗಳು ಸೇರಿದಂತೆ ವಾಣಿಜ್ಯ ಮತ್ತು ಕೈಗಾರಿಕೆಗಳು | 0 | 0 | 0 | 0 | 0 | 0 | 0 |
| 4 | ಸಹಕಾರ ಇಲಾಖೆ | 0 | 8 | 8 | 0 | 0 | 0 | 0 |
| 5 | ಡಿಪಿಎಆರ್ (ವಾರ್ಷಿಕ ವರದಿ), ವಿದ್ಯುನ್ಮಾನ ಆಡಳಿತ ಸಾರ್ವಜನಿಕ ಕುಂದುಕೊರತೆ ಮತ್ತು ಕರ್ನಾಟಕ ಮಾಹಿತಿ ಆಯೋಗ ಸೇರಿದಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ | 0 | 7 | 7 | 2 | 0 | 0 | 0 |
| 6 | ಉನ್ನತ ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಸೇರಿದಂತೆ ಶಿಕ್ಷಣ | 0 | 13 | 13 | 1 | 0 | 0 | 0 |
| 7 | ಇಂಧನ ಇಲಾಖೆ | 0 | 8 | 8 | 0 | 0 | 0 | 0 |
| 8 | ಆರ್ಥಿಕ ಇಲಾಖೆ | 0 | 2 | 2 | 0 | 0 | 0 | 0 |
| 9 | ಪರಿಸರ ಮತ್ತು ಜೀವಿಶಾಸ್ತ್ರ ಸೇರಿದಂತೆ ಅರಣ್ಯ | 0 | 1 | 1 | 0 | 0 | 0 | 0 |
| 10 | ಆಹಾರ ಮತ್ತು ನಾಗರೀಕ ಸರಬರಾಜುಗಳ ಇಲಾಖೆ | 0 | 0 | 0 | 0 | 0 | 0 | 0 |
| 11 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | 0 | 6 | 6 | 1 | 0 | 0 | 0 |
| 12 | ಕಾರಾಗೃಹ ಸೇರಿದಂತೆ ಒಳಾಡಳಿತ | 0 | 7 | 7 | 0 | 0 | 0 | 0 |
| 13 | ವಸತಿ ಇಲಾಖೆ | 0 | 2 | 2 | 0 | 0 | 0 | 0 |
| 14 | ಮಾಹಿತಿ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ | 0 | 0 | 0 | 0 | 0 | 0 | 0 |
| 15 | ಮೂಲ ಸೌಕರ್ಯ ಅಭಿವೃದ್ಧಿ ಇಲಾಖೆ | 0 | 0 | 0 | 0 | 0 | 0 | 0 |
| 16 | ಕನ್ನಡ ಮತ್ತು ಸಂಸ್ಕೃತಿ ಮತ್ತು ವಾರ್ತಾ ಇಲಾಖೆ | 0 | 1 | 1 | 0 | 0 | 0 | 0 |
| 17 | ಕರ್ನಾಟಕ ವಿಧಾನಸಭೆ ಮತ್ತು ಪರಿಷತ್ತು | 0 | 0 | 0 | 0 | 0 | 0 | 0 |
| 18 | ನ್ಯಾಯಾಲಯಗಳು ಸೇರಿದಂತೆ ಕಾನೂನು ಮತ್ತು ಮಾನವ ಹಕ್ಕುಗಳ ಇಲಾಖೆ | 0 | 2 | 2 | 1 | 0 | 0 | 0 |
| 19 | ಕಾರ್ಮಿಕ ಇಲಾಖೆ | 0 | 3 | 3 | 1 | 0 | 0 | 0 |
| 20 | ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ | 0 | 0 | 0 | 0 | 0 | 0 | 0 |

| ಕ್ರ. ಸಂ. | ಇಲಾಖೆಗಳ ಹೆಸರು | ಕಳೆದ ವರ್ಷದ ಕೊನೆಯಲ್ಲಿದ್ದ ದೂರುಗಳ ಸಂಖ್ಯೆ | ವರ್ಷದ ಅವಧಿಯಲ್ಲಿ ಸಲ್ಲಿಸಿದ ದೂರುಗಳ ಸಂಖ್ಯೆ | ದೂರುಗಳ ಒಟ್ಟು ಸಂಖ್ಯೆ | ವಿಲೇವಾರಿ ಮಾಡಲಾದ ದೂರುಗಳ ಸಂಖ್ಯೆ | ತಿರಸ್ಕೃತವಾದ ದೂರುಗಳ ಸಂಖ್ಯೆ | ತಿರಸ್ಕೃತವಾದ ದೂರುಗಳ ಶೇಕಡಾ ಪ್ರಮಾಣ | 90 ದಿನಗಳನ್ನು ಮೀರಿ ಬಾಕಿಯಿರುವ ಸಂಖ್ಯೆ |
|---|---|---|---|---|---|---|---|---|
| 21 | ಯೋಜನಾ ಮತ್ತು ಸಾಂಖ್ಯಿಕ ಇಲಾಖೆ | 0 | 0 | 0 | 0 | 0 | 0 | 0 |
| 22 | ಸಾರ್ವಜನಿಕ ಉದ್ಯಮಗಳ ಇಲಾಖೆ | 0 | 0 | 0 | 0 | 0 | 0 | 0 |
| 23 | ಲೋಕೋಪಯೋಗಿ ಇಲಾಖೆ ಮತ್ತು ರಾಷ್ಟ್ರೀಯ ಹೆದ್ದಾರಿಗಳು | 0 | 4 | 4 | 1 | 0 | 0 | 0 |
| 24 | ಮುಜರಾಯಿ, ಸ್ಟ್ಯಾಂಪ್‌ಗಳು ಮತ್ತು ನೋಂದಣಿ ಮತ್ತು ಕರ್ನಾಟಕ ಅಪೀಲು ನ್ಯಾಯಾಧೀಕರಣ ಸೇರಿದಂತೆ ಕಂದಾಯ ಇಲಾಖೆ | 0 | 14 | 14 | 0 | 0 | 0 | 0 |
| 25 | ಪಂಚಾಯತ್ ರಾಜ್ ಸೇರಿದಂತೆ ಗ್ರಾಮೀಣ ಅಭಿವೃದ್ಧಿ | 0 | 15 | 15 | 3 | 0 | 0 | 0 |
| 26 | ಅಲ್ಪಸಂಖ್ಯಾತರ ಕಲ್ಯಾಣ ಸೇರಿದಂತೆ ಸಮಾಜ ಕಲ್ಯಾಣ ಇಲಾಖೆ | 0 | 0 | 0 | 0 | 0 | 0 | 0 |
| 27 | ಸಾರಿಗೆ ಇಲಾಖೆ | 0 | 2 | 2 | 2 | 0 | 0 | 0 |
| 28 | ಭಾರಿ, ಮಧ್ಯಮ ಮತ್ತು ಸಣ್ಣ ನೀರಾವರಿ ಸೇರಿದಂತೆ ಜಲ ಸಂಪನ್ಮೂಲಗಳು | 0 | 2 | 2 | 0 | 0 | 0 | 0 |
| 29 | ಮಹಿಳೆ ಮತ್ತು ಮಕ್ಕಳ ಕಲ್ಯಾಣ ಇಲಾಖೆ | 0 | 0 | 0 | 0 | 0 | 0 | 0 |
| 30 | ಯುವಜನ ಸೇವೆಗಳು | 0 | 0 | 0 | 0 | 0 | 0 | 0 |
| 31 | ರಾಜ್ಯಪಾಲರ ಸಚಿವಾಲಯ | 0 | 4 | 4 | 1 | 0 | 0 | 0 |
| 32 | ಮುಖ್ಯ ಚುನಾವಣಾಧಿಕಾರಿ ಮತ್ತು ಸರ್ಕಾರದ ಪದನಿಮಿತ್ತ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ | 0 | 0 | 0 | 0 | 0 | 0 | 0 |
| 33 | **ನಗರಾಭಿವೃದ್ಧಿ ಇಲಾಖೆ** | 0 | 50 | 50 | 11 | 0 | 0 | 0 |
| ಒಟ್ಟು | | 0 | 151 | 151 | 24 | 0 | 0 | 0 |

**ಕೋಷ್ಟಕ – 6**

ಆಯೋಗಕ್ಕೆ ದೂರುಗಳನ್ನು ನೀಡಲು ಕಾರಣಗಳು ಮತ್ತು ಅವುಗಳ ವಿಲೇವಾರಿ

[ಆಧಾರ: ಕ.ಮಾ.ಆ. ದಿಂದ ವಿಶ್ಲೇಷಣೆ]

| **ದೂರುಗಳ ವರ್ಗೀಕರಣ** | **ಕಳೆದ ವರ್ಷದ ಕೊನೆಗೆ ಬಾಕಿಯಿದ್ದ ದೂರುಗಳ ಸಂಖ್ಯೆ** | **ವರ್ಷದಲ್ಲಿ ಸಲ್ಲಿಸಲಾದ ದೂರುಗಳ ಸಂಖ್ಯೆ** | **ದೂರುಗಳ ಒಟ್ಟು ಸಂಖ್ಯೆ** | **ವಿಲೇಯಾದ ದೂರುಗಳ ಸಂಖ್ಯೆ** | **ತಿರಸ್ಕೃತವಾದ ದೂರುಗಳ ಸಂಖ್ಯೆ** | **90 ದಿನಗಳನ್ನು ಮೀರಿ ಬಾಕಿ ಇರುವ ದೂರುಗಳ ಸಂಖ್ಯೆ** |
|---|---|---|---|---|---|---|
| 1 | 2 | 3 | 4 | 5 | 6 | 7 |
| ಪ್ರಕರಣ 18.1 (ಎ) | 0 | 2 | 2 | 0 | 0 | 0 |
| ಪ್ರಕರಣ 18.1 (ಬಿ) | 0 | 4 | 4 | 0 | 0 | 0 |
| ಪ್ರಕರಣ 18.1 (ಸಿ) | 0 | 92 | 92 | 17 | 0 | 0 |
| ಪ್ರಕರಣ 18.1 (ಡಿ) | 0 | 3 | 3 | 0 | 0 | 0 |
| ಪ್ರಕರಣ 18.1 (ಇ) | 0 | 14 | 14 | 1 | 0 | 0 |
| ಪ್ರಕರಣ 18.1 (ಎಫ್) | 0 | 36 | 36 | 6 | 0 | 0 |
| **ರಾಜ್ಯದಲ್ಲಿನ ಒಟ್ಟು ದೂರುಗಳು** | **0** | **151** | **151** | **24** | **0** | **0** |

**ಕೋಷ್ಟಕ 7**

ಕ.ಮಾ.ಆಯೋಗದಿಂದ ಎರಡನೇ ಅಪೀಲುಗಳ ವಿಲೆ

ವರದಿ ವರ್ಷ: 2005–06

[ಆಧಾರ: ಕ.ಮಾ.ಆ.ದಿಂದ ವರದಿಗಳು]

| ಕ್ರ. ಸಂ. | ಇಲಾಖೆ ಹೆಸರು | ಹಿಂದಿನ ವರ್ಷದ ಕೊನೆಯಲ್ಲಿ ಮಾಹಿತಿ ಆಯೋಗದಲ್ಲಿ ಬಾಕಿಯಿದ್ದ ಅಪೀಲುಗಳ ಎರಡನೇ ಸಂಖ್ಯೆ | ವರ್ಷದಲ್ಲಿ ಸಲ್ಲಿಸಲಾದ ಎರಡನೇ ಅಪೀಲುಗಳ ಸಂಖ್ಯೆ | ಮಾಹಿತಿ ಆಯೋಗ ದಲ್ಲಿರುವ ಎರಡನೇ ಅಪೀಲುಗಳ ಒಟ್ಟು ಸಂಖ್ಯೆ | ವಿಲೇವಾರಿ ಮಾಡಲಾದ ಎರಡನೇ ಅಪೀಲುಗಳ ಸಂಖ್ಯೆ | ತಿರಸ್ಕೃತವಾದ ಎರಡನೇ ಅಪೀಲುಗಳ ಸಂಖ್ಯೆ | ತಿರಸ್ಕೃತವಾದ ಎರಡನೇ ಅಪೀಲುಗಳ ಶೇಕಡಾ ಪ್ರಮಾಣ |
|---|---|---|---|---|---|---|---|
| 1 | 2 | 3 | 4 | 5 | 6 | 7 | 8 |
| 1 | ತೋಟಗಾರಿಕೆ ಮತ್ತು ಆಹಾರ ಸಂಸ್ಕರಣೆ ಸೇರಿದಂತೆ ಕೃಷಿ | 0 | 0 | 0 | 0 | 0 | 0 |
| 2 | ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ | 0 | 0 | 0 | 0 | 0 | 0 |
| 3 | ಗಣಿಗಳು, ಜವಳಿ ಮತ್ತು ಸಣ್ಣ ಪ್ರಮಾಣದ ಕೈಗಾರಿಕೆಗಳು ಸೇರಿದಂತೆ ವಾಣಿಜ್ಯ ಮತ್ತು ಕೈಗಾರಿಕೆಗಳು | 0 | 0 | 0 | 0 | 0 | 0 |
| 4 | ಸಹಕಾರ ಇಲಾಖೆ | 0 | 4 | 4 | 2 | 0 | 0 |
| 5 | ಡಿಪಿಎಆರ್ (ವಾರ್ಷಿಕ ವರದಿ), ವಿದ್ಯುನ್ಮಾನ ಆಡಳಿತ ಸೇರಿದಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ | 0 | 1 | 1 | 1 | 0 | 0 |
| 6 | ಉನ್ನತ ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಸೇರಿದಂತೆ ಶಿಕ್ಷಣ | 0 | 5 | 5 | 2 | 0 | 0 |
| 7 | ಇಂಧನ ಇಲಾಖೆ | 0 | 4 | 4 | 2 | 0 | 0 |
| 8 | ಆರ್ಥಿಕ ಇಲಾಖೆ | 0 | 1 | 1 | 0 | 0 | 0 |
| 9 | ಪರಿಸರ ಮತ್ತು ಜೀವಿಶಾಸ್ತ್ರ ಸೇರಿದಂತೆ ಅರಣ್ಯ | 0 | 0 | 0 | 0 | 0 | 0 |
| 10 | ಆಹಾರ ಮತ್ತು ನಾಗರೀಕ ಸರಬರಾಜುಗಳ ಇಲಾಖೆ | 0 | 0 | 0 | 0 | 0 | 0 |
| 11 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | 0 | 5 | 5 | 0 | 0 | 0 |
| 12 | ಕಾರಾಗೃಹ ಸೇರಿದಂತೆ ಒಳಾಡಳಿತ | 0 | 1 | 1 | 1 | 0 | 0 |
| 13 | ವಸತಿ ಇಲಾಖೆ | 0 | 0 | 0 | 0 | 0 | 0 |
| 14 | ಮಾಹಿತಿ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ | 0 | 0 | 0 | 0 | 0 | 0 |
| 15 | **ಮೂಲ ಸೌಕರ್ಯ ಅಭಿವೃದ್ಧಿ ಇಲಾಖೆ** | 0 | 0 | 0 | 0 | 0 | 0 |
| 16 | ಕನ್ನಡ ಮತ್ತು ಸಂಸ್ಕೃತಿ ಮತ್ತು ವಾರ್ತಾ ಇಲಾಖೆ | 0 | 2 | 2 | 1 | 0 | 0 |
| 17 | ಕರ್ನಾಟಕ ವಿಧಾನಸಭೆ ಮತ್ತು ಪರಿಷತ್ತು | 0 | 0 | 0 | 0 | 0 | 0 |
| 18 | ನ್ಯಾಯಾಲಯಗಳು ಸೇರಿದಂತೆ ಕಾನೂನು ಮತ್ತು ಮಾನವ ಹಕ್ಕುಗಳ ಇಲಾಖೆ | 0 | 0 | 0 | 0 | 0 | 0 |
| 19 | ಕಾರ್ಮಿಕ ಇಲಾಖೆ | 0 | 3 | 3 | 1 | 0 | 0 |
| 20 | ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ | 0 | 0 | 0 | 0 | 0 | 0 |
| 21 | ಯೋಜನಾ ಮತ್ತು ಸಾಂಖ್ಯಿಕ ಇಲಾಖೆ | 0 | 0 | 0 | 0 | 0 | 0 |
| 22 | ಸಾರ್ವಜನಿಕ ಉದ್ಯಮಗಳ ಇಲಾಖೆ | 0 | 0 | 0 | 0 | 0 | 0 |
| 23 | ಲೋಕೋಪಯೋಗಿ ಇಲಾಖೆ ಮತ್ತು ರಾಷ್ಟ್ರೀಯ ಹೆದ್ದಾರಿಗಳು | 0 | 0 | 0 | 1 | 0 | 0 |

| ಕ್ರ. ಸಂ. | ಇಲಾಖೆ ಹೆಸರು | ಹಿಂದಿನ ವರ್ಷದ ಕೊನೆಯಲ್ಲಿ ಮಾಹಿತಿ ಆಯೋಗದಲ್ಲಿ ಬಾಕಿಯಿದ್ದ ಅಪೀಲುಗಳ ಎರಡನೇ ಸಂಖ್ಯೆ | ವರ್ಷದಲ್ಲಿ ಸಲ್ಲಿಸಲಾದ ಎರಡನೇ ಅಪೀಲುಗಳ ಸಂಖ್ಯೆ | ಮಾಹಿತಿ ಆಯೋಗ ದಲ್ಲಿರುವ ಎರಡನೇ ಅಪೀಲುಗಳ ಒಟ್ಟು ಸಂಖ್ಯೆ | ವಿಲೇವಾರಿ ಮಾಡಲಾದ ಎರಡನೇ ಅಪೀಲುಗಳ ಸಂಖ್ಯೆ | ತಿರಸ್ಕೃತವಾದ ಎರಡನೇ ಅಪೀಲುಗಳ ಸಂಖ್ಯೆ | ತಿರಸ್ಕೃತವಾದ ಎರಡನೇ ಅಪೀಲುಗಳ ಶೇಕಡಾ ಪ್ರಮಾಣ |
|---|---|---|---|---|---|---|---|
| 24 | ಮುಜರಾಯಿ, ಸ್ಟ್ಯಾಂಪ್‌ಗಳು ಮತ್ತು ನೋಂದಣಿ ಮತ್ತು ಕೆ.ಎ.ಟಿ. (ಕರ್ನಾಟಕ ಅಪೀಲು ನ್ಯಾಯಾಧೀಕರಣ) ಸೇರಿದಂತೆ ಕಂದಾಯ ಇಲಾಖೆ | 0 | 5 | 5 | 0 | 0 | 0 |
| 25 | ಪಂಚಾಯತ್ ರಾಜ್ ಸೇರಿದಂತೆ ಗ್ರಾಮೀಣ ಅಭಿವೃದ್ಧಿ | 0 | 4 | 4 | 0 | 0 | 0 |
| 26 | ಅಲ್ಪಸಂಖ್ಯಾತರ ಕಲ್ಯಾಣ ಸೇರಿದಂತೆ ಸಮಾಜ ಕಲ್ಯಾಣ ಇಲಾಖೆ | 0 | 0 | 0 | 0 | 0 | 0 |
| 27 | ಸಾರಿಗೆ ಇಲಾಖೆ | 0 | 0 | 0 | 0 | 0 | 0 |
| 28 | ಭಾರಿ, ಮಧ್ಯಮ ಮತ್ತು ಸಣ್ಣ ನೀರಾವರಿ ಸೇರಿದಂತೆ ಜಲ ಸಂಪನ್ಮೂಲಗಳು | 0 | 0 | 0 | 0 | 0 | 0 |
| 29 | ಮಹಿಳೆ ಮತ್ತು ಮಕ್ಕಳ ಕಲ್ಯಾಣ ಇಲಾಖೆ | 0 | 0 | 0 | 0 | 0 | 0 |
| 30 | ಯುವಜನ ಸೇವೆಗಳು | 0 | 0 | 0 | 0 | 0 | 0 |
| 31 | ರಾಜ್ಯಪಾಲರ ಸಚಿವಾಲಯ | 0 | 0 | 0 | 0 | 0 | 0 |
| 32 | ಮುಖ್ಯ ಚುನಾವಣಾಧಿಕಾರಿ ಮತ್ತು ಸರ್ಕಾರದ ಪದನಿಮಿತ್ತ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ | 0 | 0 | 0 | 0 | 0 | 0 |
| 33 | **ನಗರಾಭಿವೃದ್ಧಿ ಇಲಾಖೆ** | 0 | 21 | 21 | 4 | 0 | 0 |
| | **ಒಟ್ಟು** | 0 | 56 | 56 | 15 | 0 | 0 |

**ಕೋಷ್ಟಕ – 8**

ಸಾರ್ವಜನಿಕ ಪ್ರಾಧಿಕಾರಗಳಿಂದ ಸಂಗ್ರಹಿಸಲಾದ ವೆಚ್ಚಗಳು, ಶುಲ್ಕಗಳು ಮತ್ತು ಚಾರ್ಜುಗಳ ವಿವರ

ವರದಿ ವರ್ಷ: 2005–06

[ಆಧಾರ: ಇಲಾಖೆಗಳಿಂದ ವರದಿಗಳು]

| ಕ್ರ. ಸಂ. | ಇಲಾಖೆಯ ಹೆಸರು | ಸಂಗ್ರಹಿಸಲಾದ ವೆಚ್ಚ ಪ್ರಕರಣ 4(4) | ಸಂಗ್ರಹಿಸಲಾದ ಶುಲ್ಕ ಪ್ರಕರಣ (6(1) | ಸಂಗ್ರಹಿಸಲಾದ ಶುಲ್ಕ ಪ್ರಕರಣ 7(1) | ಸಂಗ್ರಹಿಸಲಾದ ಶುಲ್ಕ ಪ್ರಕರಣ 7(5) | ಸಂಗ್ರಹಿಸಲಾದ ಇತರೆ ಖರ್ಚುಗಳು (ನಿರ್ದಿಷ್ಟಪಡಿಸಿ) | ಒಟ್ಟು ವಸೂಲಿ |
|---|---|---|---|---|---|---|---|
| 1 | ತೋಟಗಾರಿಕೆ ಮತ್ತು ಆಹಾರ ಸಂಸ್ಕರಣೆ ಸೇರಿದಂತೆ ಕೃಷಿ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **2669.00** |
| 2 | ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **969.00** |
| 3 | ಗಣಿಗಳು, ಜವಳಿ ಮತ್ತು ಸಣ್ಣ ಪ್ರಮಾಣದ ಕೈಗಾರಿಕೆಗಳು ಸೇರಿದಂತೆ ವಾಣಿಜ್ಯ ಮತ್ತು ಕೈಗಾರಿಕೆಗಳು | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **19011.00** |
| 4 | ಸಹಕಾರ ಇಲಾಖೆ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **6830.00** |
| 5 | ಡಿಪಿಎಆರ್ (ವಾರ್ಷಿಕ ವರದಿ), ವಿದ್ಯುನ್ಮಾನ ಆಡಳಿತ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **21968.00** |
| 6 | ಉನ್ನತ ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಸೇರಿದಂತೆ ಶಿಕ್ಷಣ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **6742.00** |
| 7 | ಇಂಧನ ಇಲಾಖೆ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **1425.00** |
| 8 | ಆರ್ಥಿಕ ಇಲಾಖೆ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **1722.00** |
| 9 | ಪರಿಸರ ಮತ್ತು ಜೀವಿಶಾಸ್ತ್ರ ಸೇರಿದಂತೆ ಅರಣ್ಯ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **8247.00** |
| 10 | ಆಹಾರ ಮತ್ತು ನಾಗರೀಕ ಸರಬರಾಜುಗಳ ಇಲಾಖೆ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **4424.00** |
| 11 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **2759.00** |
| 12 | ಕಾರಾಗೃಹ ಸೇರಿದಂತೆ ಒಳಾಡಳಿತ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **40498.00** |
| 13 | ವಸತಿ ಇಲಾಖೆ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **620.00** |
| 14 | ಮಾಹಿತಿ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **20.00** |
| 15 | ಮೂಲ ಸೌಕರ್ಯ ಅಭಿವೃದ್ಧಿ ಇಲಾಖೆ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **0.00** |
| 16 | ಕನ್ನಡ ಮತ್ತು ಸಂಸ್ಕೃತಿ ಮತ್ತು ವಾರ್ತಾ ಇಲಾಖೆ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **46043.00** |
| 17 | ಕರ್ನಾಟಕ ವಿಧಾನಸಭೆ ಮತ್ತು ಪರಿಷತ್ತು | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **2477.00** |
| 18 | ನ್ಯಾಯಾಲಯಗಳು ಸೇರಿದಂತೆ ಕಾನೂನು ಮತ್ತು ಮಾನವ ಹಕ್ಕುಗಳ ಇಲಾಖೆ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **0.00** |
| 19 | ಕಾರ್ಮಿಕ ಇಲಾಖೆ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **1406.00** |
| 20 | ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **0.00** |
| 21 | ಯೋಜನಾ ಮತ್ತು ಸಾಂಖ್ಯಿಕ ಇಲಾಖೆ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **100.00** |
| 22 | ಸಾರ್ವಜನಿಕ ಉದ್ಯಮಗಳ ಇಲಾಖೆ | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **0.00** |
| 23 | ಲೋಕೋಪಯೋಗಿ ಇಲಾಖೆ ಮತ್ತು ರಾಷ್ಟ್ರೀಯ ಹೆದ್ದಾರಿಗಳು | ಎನ್ಎ | ಎನ್ಎ | ಎನ್ಎ | ಎನ್ಎ | ಎನ್ಎ | **2443.00** |

| ಕ್ರ. ಸಂ. | ಇಲಾಖೆಯ ಹೆಸರು | ಸಂಗ್ರಹಿಸಲಾದ ವೆಚ್ಚ ಪ್ರಕರಣ 4(4) | ಸಂಗ್ರಹಿಸಲಾದ ಶುಲ್ಕ ಪ್ರಕರಣ (6(1) | ಸಂಗ್ರಹಿಸಲಾದ ಶುಲ್ಕ ಪ್ರಕರಣ 7(1) | ಸಂಗ್ರಹಿಸಲಾದ ಶುಲ್ಕ ಪ್ರಕರಣ 7(5) | ಸಂಗ್ರಹಿಸಲಾದ ಇತರೆ ಖರ್ಚುಗಳು (ನಿರ್ದಿಷ್ಟಪಡಿಸಿ) | ಒಟ್ಟು ವಸೂಲಿ |
|---|---|---|---|---|---|---|---|
| 24 | ಮುಜರಾಯಿ, ಸ್ಟಾಂಪ್‌ಗಳು ಮತ್ತು ನೋಂದಣಿ ಮತ್ತು ಕರ್ನಾಟಕ ಅಪೀಲು ನ್ಯಾಯಾಧೀಕರಣ ಸೇರಿದಂತೆ ಕಂದಾಯ ಇಲಾಖೆ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | 36705.00 |
| 25 | ಪಂಚಾಯತ್ ರಾಜ್ ಸೇರಿದಂತೆ ಗ್ರಾಮೀಣ ಅಭಿವೃದ್ಧಿ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | 11437.00 |
| 26 | ಅಲ್ಪಸಂಖ್ಯಾತರ ಕಲ್ಯಾಣ ಸೇರಿದಂತೆ ಸಮಾಜ ಕಲ್ಯಾಣ ಇಲಾಖೆ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | 986.00 |
| 27 | ಸಾರಿಗೆ ಇಲಾಖೆ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | 906.00 |
| 28 | ಭಾರಿ, ಮಧ್ಯಮ ಮತ್ತು ಸಣ್ಣ ನೀರಾವರಿ ಸೇರಿದಂತೆ ಜಲ ಸಂಪನ್ಮೂಲಗಳು | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | 6745.00 |
| 29 | ಮಹಿಳೆ ಮತ್ತು ಮಕ್ಕಳ ಕಲ್ಯಾಣ ಇಲಾಖೆ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | 600.00 |
| 30 | ಯುವಜನ ಸೇವೆಗಳು | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | 1000.00 |
| 31 | ರಾಜ್ಯಪಾಲರ ಸಚಿವಾಲಯ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | 185.00 |
| 32 | ಮುಖ್ಯ ಚುನಾವಣಾಧಿಕಾರಿ ಮತ್ತು ಸರ್ಕಾರದ ಪದನಿಮಿತ್ತ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | 0.00 |
| 33 | ನಗರಾಭಿವೃದ್ಧಿ ಇಲಾಖೆ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | 158839.00 |
| | ಒಟ್ಟು | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | ಎನ್‌ಎ | 388162.00 |

ವರ್ಗೀಕೃತ ಮಾಹಿತಿ ಲಭ್ಯವಿರುವುದಿಲ್ಲ.

**ಗ್ರಾಫ್ –1**

**ಮೂಲ ಮಾಹಿತಿ ಅಧಿಕಾರಿಗಳಿಂದ ಕೋರಿಕೆಗಳ ವಿವರಗಳು**

**ವರದಿ ವರ್ಷ 2005–06**

ಕೋರಿಕೆಯ ಸಂಖ್ಯೆಗಳು




| | ಒಟ್ಟು ಕೋರಿಕೆಗಳು | ವಿಲೇಯಾದ ಕೋರಿಕೆಗಳು | ಕಾಲ ಪರಿಮಿತಿಯ ನಂತರದ ವಿಲೆ |
|---|---|---|---|
| **ಶ್ರೇಣಿ 1** | **10014** | **8576** | **553** |

ಆಧಾರ: ಸರ್ಕಾರಿ ಇಲಾಖೆಗಳಿಂದ ವರದಿಗಳು

## ಗ್ರಾಫ್ –III

### ಮೊದಲ ಅಪೀಲು ಪ್ರಾಧಿಕಾರಗಳಿಂದ ಅಪೀಲು ವಿಲೆ

### ವರದಿ ವರ್ಷ 2005–06




| | ಅಪೀಲುಗಳ ಒಟ್ಟು ಸಂಖ್ಯೆ | ಕಾಲ ಪರಿಮಿತಿಯೊಳಗೆ ವಿಲೆಯಾದ ಅಪೀಲುಗಳು | ಕಾಲ ಪರಿಮಿತಿಯ ತರುವಾಯ ವಿಲೆಯಾದ ಅಪೀಲುಗಳು |
|---|---|---|---|
| **ಶ್ರೇಣಿ 1** | **471** | **428** | **7** |

ಆಧಾರ: ಸರ್ಕಾರಿ ಇಲಾಖೆಗಳಿಂದ ವರದಿಗಳು

ಕರ್ನಾಟಕ ಸರ್ಕಾರ

ಸಂಖ್ಯೆ ಡಿಪಿಎಆರ್ 109 ಆರ್‌ಟಿಐ 2005

ಕರ್ನಾಟಕ ಸರ್ಕಾರದ ಸಚಿವಾಲಯ,

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ,
ಜನಸ್ಪಂದನ ಕೋಶ, ಬೆಂಗಳೂರು
ದಿನಾಂಕ: 5.8.2005.

ಅಧಿಸೂಚನೆ

ಮಾಹಿತಿ ಹಕ್ಕು ಅಧಿನಿಯಮ, 2005 (2005ರ ಕೇಂದ್ರ ಅಧಿನಿಯಮ 22)ರ 15ನೇ ಪ್ರಕರಣದ (1)ನೇ ಉಪ ಪ್ರಕರಣದ ಮೇರೆಗೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಸರ್ಕಾರವು ಅಧಿನಿಯಮದ ಮೇರೆಗೆ "ಕರ್ನಾಟಕ ಮಾಹಿತಿ ಆಯೋಗ" ವನ್ನು ಅದಕ್ಕೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಲು ಮತ್ತು ಅದಕ್ಕೆ ವಹಿಸಿದ ಪ್ರಕಾರ್ಯಗಳನ್ನು ನೆರವೇರಿಸಲು ದಿನಾಂಕ 30.7.2005ರಿಂದ ಜಾರಿಗೆ ಬರುವಂತೆ ರಚಿಸಿದೆ.

ಸದರಿ ಅಧಿನಿಯಮದ 15ನೇ ಪ್ರಕರಣದ (7)ನೇ ಉಪ ಪ್ರಕರಣದ ಮೇರೆಗೆ ಕರ್ನಾಟಕ ಮಾಹಿತಿ ಆಯೋಗದ ಮುಖ್ಯ ಕಚೇರಿಯು ಬೆಂಗಳೂರಿನಲ್ಲಿ ಇರತಕ್ಕದ್ದೆಂದು ಈ ಮೂಲಕ ಅಧಿಸೂಚಿಸಲಾಗಿದೆ.

ಸಹಿ
ಟಿ.ಎನ್. ಚತುರ್ವೇದಿ,
ಕರ್ನಾಟಕ ರಾಜ್ಯಪಾಲರು.
ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಕೆ.ಆರ್. ಬಡಿಗೇರ್
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
(ಜನಸ್ಪಂದನ ಕೋಶ)

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ ಇಲಾಖೆ

ಅಧಿಸೂಚನೆ

ಸಂಖ್ಯೆ. ಡಿಪಿಎಆರ್ 77 ಆರ್‌ಟಿಐ, 2005, ಬೆಂಗಳೂರು ದಿನಾಂಕ 30ನೇ ಜುಲೈ, 2005

ಮಾಹಿತಿ ಹಕ್ಕು ಅಧಿನಿಯಮ, 2005 (2005ರ ಸಂಖ್ಯೆ 22) ರ 15ನೇ ಪ್ರಕರಣದ (3)ನೇ ಉಪ ಪ್ರಕರಣದ ಮೂಲಕ ನನಗೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ರಾಜ್ಯಪಾಲನಾದ ಟಿ.ಎನ್.ಚತುರ್ವೇದಿ ಎಂಬ ನಾನು ಶ್ರೀ ಕೆ.ಕೆ. ಮಿಶ್ರಾ ಇವರನ್ನು ರಾಜ್ಯ ಮುಖ್ಯ ಮಾಹಿತಿ ಆಯುಕ್ತರನ್ನಾಗಿ ಈ ಮೂಲಕ ನೇಮಕ ಮಾಡಿದ್ದೇನೆ.

ಅಧಿನಿಯಮದ 16ನೇ ಪ್ರಕರಣದ (1)ನೇ ಉಪ–ಪ್ರಕರಣದ ಅಡಿಯಲ್ಲಿ ಆಯುಕ್ತರ ಪದಾವಧಿಯು ಅವರು ತಮ್ಮ ಪದವನ್ನು ಧಾರಣ ಮಾಡಿದ ದಿನಾಂಕದಿಂದ ಐದು ವರ್ಷಗಳವರೆಗೆ ಅಥವಾ ಅವರಿಗೆ 65 ವರ್ಷ ವಯಸ್ಸಾಗುವವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಇರತಕ್ಕದ್ದು.

ಸಹಿ

ಟಿ.ಎನ್. ಚತುರ್ವೇದಿ,<br>
ಕರ್ನಾಟಕ ರಾಜ್ಯಪಾಲರು.<br>
ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ<br>
ಮತ್ತು ಅವರ ಹೆಸರಿನಲ್ಲಿ,

ಕೆ.ಆರ್. ಬಡಿಗೇರ್<br>
ಸರ್ಕಾರದ ಅಧೀನ ಕಾರ್ಯದರ್ಶಿ<br>
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ<br>
(ಜನಸ್ಪಂದನ ಕೋಶ)

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ ಇಲಾಖೆ

ಅಧಿಸೂಚನೆ

ಸಂಖ್ಯೆ. ಡಿಪಿಎಆರ್: 77 ಆರ್‌ಟಿಐ: 2005

ಕರ್ನಾಟಕ ಸರ್ಕಾರದ ಸಚಿವಾಲಯ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ,
ಜನಸ್ಪಂದನ ಕೋಶ,
ಬೆಂಗಳೂರು ದಿನಾಂಕ 21.10.2005.

ಮಾಹಿತಿ ಹಕ್ಕು ಅಧಿನಿಯಮ, 2005 (2005ರ ಸಂಖ್ಯೆ 22) ರ 15ನೇ ಪ್ರಕರಣದ (3)ನೇ ಉಪ ಪ್ರಕರಣದ ಮೂಲಕ ನನಗೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಕರ್ನಾಟಕ ರಾಜ್ಯಪಾಲನಾದ ಟಿ.ಎನ್. ಚತುರ್ವೇದಿ ಎಂಬ ನಾನು ಶ್ರೀ ಕೆ.ಎ. ತಿಪ್ಪೇಸ್ವಾಮಿ ಇವರನ್ನು ರಾಜ್ಯ ಮಾಹಿತಿ ಆಯುಕ್ತರನ್ನಾಗಿ ಈ ಮೂಲಕ ನೇಮಕ ಮಾಡಿದ್ದೇನೆ.

ಅಧಿನಿಯಮದ 16ನೇ ಪ್ರಕರಣದ (1)ನೇ ಉಪ–ಪ್ರಕರಣದ ಮೇರೆಗೆ ಆಯುಕ್ತರ ಪದಾವಧಿಯು ಅವರು ತಮ್ಮ ಪದವನ್ನು ಧಾರಣ ಮಾಡಿದ ದಿನಾಂಕದಿಂದ ಐದು ವರ್ಷಗಳವರೆಗೆ ಅಥವಾ ಅವರಿಗೆ 65 ವರ್ಷ ವಯಸ್ಸಾಗುವವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಇರತಕ್ಕದ್ದು.

ಟಿ.ಎನ್. ಚತುರ್ವೇದಿ,
ಕರ್ನಾಟಕ ರಾಜ್ಯಪಾಲರು.
ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಕೆ.ಆರ್. ಬಡಿಗೇರ್
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
(ಜನಸ್ಪಂದನ ಕೋಶ)

ಕರ್ನಾಟಕ ಮಾಹಿತಿ ಆಯೋಗ

ಸಂಖ್ಯೆ ಎಸ್‌ಸಿಐಸಿ (ವೇತನ)/082/05

ಕೊಠಡಿ ಸಂಖ್ಯೆ 302
3ನೇ ಮಹಡಿ, ವಿಧಾನಸೌಧ,
ಬೆಂಗಳೂರು–560001
ದಿನಾಂಕ 6.10.2005

ಕಚೇರಿ ಆದೇಶ

ಶ್ರೀ ಕೆ.ಕೆ. ಮಿಶ್ರಾ ಇವರು ದಿನಾಂಕ 31.7.2005ರಂದು ಅಪರಾಹ್ನದಿಂದ ಜಾರಿಗೆ ಬರುವಂತೆ ಕರ್ನಾಟಕ ಮಾಹಿತಿ ಆಯೋಗದ ರಾಜ್ಯ ಮುಖ್ಯ ಮಾಹಿತಿ ಆಯುಕ್ತರ ಹುದ್ದೆಯನ್ನು ವಹಿಸಿಕೊಂಡಿರುತ್ತಾರೆ.

2. ಮಾಹಿತಿ ಹಕ್ಕು ಅಧಿನಿಯಮ, 2005ರ 16ನೇ ಪ್ರಕರಣದ (5)ನೇ ಉಪ ಪ್ರಕರಣದ ಮೇರೆಗೆ ರಾಜ್ಯ ಮುಖ್ಯ ಮಾಹಿತಿ ಆಯುಕ್ತರಿಗೆ ಸಂದಾಯ ಮಾಡಬಹುದಾದ ವೇತನಗಳು ಮತ್ತು ಭತ್ಯಗಳು ಚುನಾವಣಾ ಆಯುಕ್ತರಿಗೆ ಇರುವಂತಹುದೇ ಆಗಿರತಕ್ಕದ್ದು. ಮುಖ್ಯ ಚುನಾವಣಾ ಆಯುಕ್ತರ ಮತ್ತು ಇತರ ಚುನಾವಣಾ ಆಯುಕ್ತರರ (ಸೇವಾ ಷರತ್ತುಗಳ) ಅಧಿನಿಯಮ, 1991 (1991ರ 11)ರ ನಿಬಂಧನೆಗಳಿಗನುಸಾರವಾಗಿ 1994ರ ಅಧಿನಿಯಮ 4ರ ತಿದ್ದುಪಡಿಯಂತೆ ಶ್ರೀ ಕೆ.ಕೆ. ಮಿಶ್ರಾ ಅವರ ವೇತನ ಉಪಲಬ್ದಿಗಳು 1.8.2005ರಿಂದ ಜಾರಿಗೆ ಬರುವಂತೆ ಈ ಮುಂದಿನಂತೆ ನಿಗದಿಪಡಿಸಲಾಗಿದೆ:

| | |
|---|---|
| 2.1 ರಾಜ್ಯ ಮುಖ್ಯ ಮಾಹಿತಿ ಆಯುಕ್ತರ ವೇತನ | |
| ನಿವೃತ್ತಿ ವೇತನ ಸಂದಾಯ ಆದೇಶಕ್ಕನುಸಾರವಾಗಿ ನಿವೃತ್ತಿ ವೇತನವನ್ನು ಕಳೆಯಬೇಕು ರೂ. | 30,000/– ಪ್ರ.ತಿಂ. |
| (ಎ) ಪರಿವರ್ತನೆಯ (ಕಮ್ಯೂಟೇಷನ್) ನಂತರದ ನಿವೃತ್ತಿ ವೇತನ (–) ರೂ. | 11,700/– ಪ್ರ.ತಿಂ. |
| (ಬಿ) ಪರಿವರ್ತಿಸಿದ ನಿವೃತ್ತಿ ವೇತನದ ಮೊಬಲಗು (–) ರೂ. | 7800/– ಪ್ರ.ತಿಂ. |
| ಒಟ್ಟು (ಎ+ಬಿ) (–) ರೂ. | 19,500/– ಪ್ರ.ತಿಂ. |
| 1.8.2005ರಿಂದ ಜಾರಿಗೆ ಬರುವಂತೆ ಸಂದಾಯವಾಗಬಹುದಾದ ನಿವ್ವಳ ವೇತನ ರೂ. | 10,500/– ಪ್ರ.ತಿಂ. |
| 2.2. ತುಟ್ಟಿಭತ್ಯ | 15,000/– ಪ್ರ.ತಿಂ. |
| 2.3 ದಿ.ಭ.(ಶೇಕಡಾ 17 ರಂತೆ 45000 ರೂ. ಗಳು) | 7,650/– ಪ್ರ.ತಿಂ. |
| 2.4 ನ.ಪ.ಬಖ್ವ | 300/– ಪ್ರ.ತಿಂ. |
| 2.5 ಆತಿಥ್ಯ ಭತ್ಯ ರೂ. | 7,500/– ಪ್ರ.ತಿಂ. |

3. ಶ್ರೀ ಕೆ.ಕೆ. ಮಿಶ್ರಾ ಅವರು ಈ ಮುಂದಿನ ಸೌಲಭ್ಯಗಳಿಗೂ ಸಹ

ಹಕ್ಕುಳ್ಳವರಾಗಿರುತ್ತಾರೆ:

3.1 ಮನೆ ಬಾಡಿಗೆ ಭತ್ಯ (5.9.2005ರಿಂದ ಜಾರಿಗೆ ಬರುವಂತೆ) 13,500/– ಪ್ರ.ತಿಂ.

3.2 ಪ್ರತಿ ತಿಂಗಳು 250 ಲೀ.ಗಳವರೆಗೆ ಅಥವಾ ವಾಸ್ತವಿಕ ಬಳಕೆ (ಇದರಲ್ಲಿ ಯಾವುದು ಕಡಿಮೆಯೋ ಅದು) ಉಚಿತ ಇಂಧನ ಬಳಕೆ

4. ಶ್ರೀ. ಕೆ.ಕೆ. ಮಿಶ್ರಾ ಅವರಿಗೆ ನೀಡಲಾದ ಮನೆ ಬಾಡಿಗೆ ಭತ್ಯ, ಸಾರಿಗೆ ಸೌಲಭ್ಯಗಳ ಮೊತ್ತ, ಮತ್ತು ಆತಿಥ್ಯ ಭತ್ಯೆಯು "ವೇತನ" ಶೀರ್ಷಿಕೆ ಅಡಿಯಲ್ಲಿ ಆದಾಯ ಲೆಕ್ಕ ಹಾಕುವಾಗ ಸೇರಿಸತಕ್ಕದ್ದಲ್ಲ.

5. ಶ್ರೀ ಕೆ.ಕೆ. ಮಿಶ್ರಾ ಅವರು ಸಾಮಾನ್ಯ ಭವಿಷ್ಯ ನಿಧಿಗೆ ವಂತಿಗೆ ನೀಡಲೂ ಸಹ ಹಕ್ಕುಳ್ಳವರಾಗಿರತಕ್ಕದ್ದು. ಶ್ರೀ ಕೆ.ಕೆ. ಮಿಶ್ರಾ ಅವರಿಗೆ ಕರ್ನಾಟಕದ ಮಹಾಲೇಖಪಾಲರು ನೀಡಿದ ಹೊಸ ಸಾಮಾನ್ಯ ಭವಿಷ್ಯ ನಿಧಿ ಸಂಖ್ಯೆ ಜಿ.ಎ.30297 ಆಗಿರುತ್ತದೆ.

ಎಸ್.ಆರ್. ಸಾಯಿನಾಥ ಪ್ರಕಾಶ
ಅಧೀನ ಕಾರ್ಯದರ್ಶಿ

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಸಚಿವಾಲಯ

ಅಧಿಸೂಚನೆ

**ಸಂ. ಡಿಪಿಎಎಲ್ 62 ಶಾಸನ 2005, ಬೆಂಗಳೂರು, ದಿನಾಂಕ 17ನೇ ಅಕ್ಟೋಬರ್, 2005**

ಭಾರತ ಗಣರಾಜ್ಯದ ಐವತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯಪಾಲರು ಹೊರಡಿಸಿದ ಕರ್ನಾಟಕ ಮಾಹಿತಿ ಹಕ್ಕು (ನಿರಸನ) ಅಧ್ಯಾದೇಶ, 2005 ಅನ್ನು ಸಾರ್ವಜನಿಕರ ಮಾಹಿತಿಗಾಗಿ ಕರ್ನಾಟಕ ರಾಜ್ಯಪತ್ರದಲ್ಲಿ 2005ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 3 ಎಂದು ಪ್ರಕಟಿಸತಕ್ಕದ್ದು.

2005ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 3.

ಕರ್ನಾಟಕ ಮಾಹಿತಿ ಹಕ್ಕು (ನಿರಸನ) ಅಧ್ಯಾದೇಶ. 2005

(ಭಾರತ ಗಣರಾಜ್ಯದ ಐವತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯಪಾಲರು ಪ್ರಖ್ಯಾಪಿಸಿದ 2005ರ ಅಕ್ಟೋಬರ್ ಹದಿನೇಳನೇ ದಿನದಂದು ಕರ್ನಾಟಕ ವಿಶೇಷ ರಾಜಪತ್ರದಲ್ಲಿ ಮೊದಲು ಪ್ರಕಟಿಸಲಾಗಿದೆ)

ಕರ್ನಾಟಕ ಮಾಹಿತಿ ಹಕ್ಕು ಅಧಿನಿಯಮ, 2000, ಇದನ್ನು ನಿರಸನಗೊಳಿಸುವ ಒಂದು ಅಧ್ಯಾದೇಶ.

ಕರ್ನಾಟಕ ರಾಜ್ಯ ವಿಧಾನ ಮಂಡಲದ ಎರಡು ಸದನಗಳು ಅಧಿವೇಶನದಲ್ಲಿ ಇಲ್ಲದಿರುವುದರಿಂದ ಮತ್ತು ಕರ್ನಾಟಕ ರಾಜ್ಯಪಾಲರು ಇದರಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಪ್ರಸ್ತುತ ಸಂದರ್ಭಗಳಲ್ಲಿ ಕರ್ನಾಟಕ ಮಾಹಿತಿ ಹಕ್ಕು ಅಧಿನಿಯಮ, 2000 (2000ದ ಕರ್ನಾಟಕ ಅಧಿನಿಯಮ ಸಂಖ್ಯೆ 28) ಅದನ್ನು ನಿರಸನಗೊಳಿಸುವುದಕ್ಕೆ ಅವರು ಕೂಡಲೇ ಕ್ರಮ ಕೈಗೊಳ್ಳುವುದು ಅವಶ್ಯಕವೆಂದು ಮನಗಂಡಿರುವುದರಿಂದ;

ಸಂವಿಧಾನದ 213ನೇ ಅನುಚ್ಛೇದದ (1)ನೇ ಖಂಡದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ ಕರ್ನಾಟಕ ಸರ್ಕಾರವು ಈ ಕೆಳಕಂಡ ಅಧ್ಯಾದೇಶವನ್ನು ಹೊರಡಿಸಿದೆ ಎಂದರೆ,–

1. ಚಿಕ್ಕ ಹೆಸರು ಮತ್ತು ಪ್ರಾರಂಭ.–

(1) ಈ ಅಧ್ಯಾದೇಶವನ್ನು ಕರ್ನಾಟಕ ಮಾಹಿತಿ ಹಕ್ಕು (ನಿರಸನ) ಅಧ್ಯಾದೇಶ, 2005 ಎಂದು ಕರೆಯತಕ್ಕದ್ದು.

(2) ಇದು, ಒಮ್ಮೆಗೆ ಜಾರಿಗೆ ಬರತಕ್ಕದ್ದು.

2. 2000ರ ಕರ್ನಾಟಕ ಅಧಿನಿಯಮ ಸಂಖ್ಯೆ 28ರ ನಿರಸನ.– ಕರ್ನಾಟಕ ಮಾಹಿತಿ ಹಕ್ಕು ಅಧಿನಿಯಮ 2000 (2000ರ ಕರ್ನಾಟಕ ಅಧಿನಿಯಮ ಸಂಖ್ಯೆ 28) ಇದನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

ಪರಂತು, ಕರ್ನಾಟಕ ಸಾಮಾನ್ಯ ಖಂಡಗಳ ಅಧಿನಿಯಮ, 1899ರ 6ನೇ ಪ್ರಕರಣದ ಉಪಬಂಧಗಳು ಸದರಿ ಅಧಿನಿಯಮಿತಿಯ ನಿರಸನದ ಸಂಬಂಧದಲ್ಲಿ ಅನ್ವಯವಾಗತಕ್ಕದ್ದು.

ಟಿ.ಎನ್. ಚತುರ್ವೇದಿ,
ಕರ್ನಾಟಕ ರಾಜ್ಯಪಾಲರು.
ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ.ಕೆ. ಬೋರೇಗೌಡ)
ಸರ್ಕಾರದ ಕಾರ್ಯದರ್ಶಿ (ಪ್ರಭಾರ)
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನಾ ಇಲಾಖೆ.

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ ಇಲಾಖೆ

ಅಧಿಸೂಚನೆ

ಸಂಖ್ಯೆ. ಡಿಪಿಎಆರ್ / 44 / ಆರ್‌ಟಿಐ, 2004, ಬೆಂಗಳೂರು ದಿನಾಂಕ 05.12.2005

ಮಾಹಿತಿ ಹಕ್ಕು ಅಧಿನಿಯಮ, 2005 (2005ರ ಕೇಂದ್ರ ಅಧಿನಿಯಮ 22)ರ 24(4)ನೇ ಪ್ರಕರಣದ ಮೇರೆಗೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಸದರಿ ಅಧಿನಿಯಮವು ಕರ್ನಾಟಕ ಸರ್ಕಾರದ ಈ ಮುಂದಿನ ಗುಪ್ತವಾರ್ತಾ ಮತ್ತು ಭದ್ರತಾ ಸಂಸ್ಥೆಗಳಿಗೆ ಅನ್ವಯವಾಗತಕ್ಕದ್ದಲ್ಲವೆಂದು ಈ ಮೂಲಕ ಅಧಿಸೂಚಿಸಲಾಗಿದೆ.

1. ಕರ್ನಾಟಕ ರಾಜ್ಯ ಪೋಲೀಸ್ ಇಲಾಖೆಯ ರಾಜ್ಯ ಗುಪ್ತವಾರ್ತಾ ಸಂಸ್ಥೆ.
2. ರಾಜ್ಯದ ಪೊಲೀಸ್ ಇಲಾಖೆಯ ಆಯುಕ್ತರ ಕಚೇರಿಗಳ ಮತ್ತು ಜಿಲ್ಲಾ ಪೊಲೀಸ್ ಕಚೇರಿಗಳ ವಿಶೇಷ ಶಾಖೆಗಳು.
3. ಪೊಲೀಸ್ ಇಲಾಖೆಯ ಗುಪ್ತಚಾರದಳ (ಸಿ.ಓ.ಡಿ.)

ಆದರೆ ಭ್ರಷ್ಟಾಚಾರ ಮತ್ತು ಮಾನವ ಹಕ್ಕುಗಳ ಉಲ್ಲಂಘನೆಯ ಆರೋಪಗಳಿಗೆ ಸಂಬಂಧಿಸಿದ ಮಾಹಿತಿಗೆ ಈ ಅಧಿಸೂಚನೆಯ ಮೇರೆಗೆ ವಿನಾಯಿತಿ ನೀಡಿರುವುದಿಲ್ಲ.

ಈ ಅಧಿಸೂಚನೆಯನ್ನು ಅನಧಿಕೃತ ಟಿಪ್ಪಣಿ ಸಂಖ್ಯೆ ಹೆಚ್‌ಡಿ 31 ಸಶಾಶಾ 2003, ದಿನಾಂಕ 5.10.2005ರ ಮೂಲಕ ಗೃಹ ಇಲಾಖೆಯ ಸಹಮತಿಯೊಡನೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಕೆ.ಆರ್. ಬಡಿಗೇರ್
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
(ಜನಸ್ಪಂದನ)

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ ಇಲಾಖೆ

ಅಧಿಸೂಚನೆ

ಸಂಖ್ಯೆ. ಸಿಆಸುಇ 74 ಮಾಹಅ 2005(ಭಾಗ – 2), ಬೆಂಗಳೂರು ದಿನಾಂಕ 11ನೇ ಅಕ್ಟೋಬರ್, 2005

ಮಾಹಿತಿ ಹಕ್ಕು ಅಧಿನಿಯಮ, 2005 (2005ರ ಕೇಂದ್ರ ಅಧಿನಿಯಮ ಸಂ.22)ರ 27ನೇ ಪ್ರಕರಣದ (1) ಮತ್ತು (2)ನೇ ಉಪ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಈ ಮುಂದಿನ ನಿಯಮಗಳನ್ನು ರಚಿಸಿದೆ.

1. ಹೆಸರು ಮತ್ತು ಪ್ರಾರಂಭ.– (1) ಈ ನಿಯಮಗಳನ್ನು ಕರ್ನಾಟಕ ಮಾಹಿತಿ ಹಕ್ಕು ನಿಯಮಗಳು, 2005 ಎಂದು ಕರೆಯತಕ್ಕದ್ದು.

(2) ಇವುಗಳು ಅಧಿಕೃತ ರಾಜಪತ್ರದಲ್ಲಿ ಪ್ರಕಟಣೆಯಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. ಪರಿಭಾಷೆಗಳು.– ಈ ನಿಯಮಗಳಲ್ಲಿ, ಸಂದರ್ಭಕ್ಕೆ ಬೇರೆ ಅರ್ಥದ ಅಗತ್ಯವಿದ್ದ ಹೊರತು:–

(i) "ಅಧಿನಿಯಮ" ಎಂದರೆ ಮಾಹಿತಿ ಹಕ್ಕು ಅಧಿನಿಯಮ, 2005 (2005ರ ಕೇಂದ್ರ ಅಧಿನಿಯಮ 22)

(ii) "ಪ್ರಕರಣ" ಎಂದರೆ ಅಧಿನಿಯಮದ ಪ್ರಕರಣ.

3. 4ನೇ ಪ್ರಕರಣದ ಮೇರೆಗೆ ಕೆಲವು ಇತರೆ ಮಾಹಿತಿ, ಮುಂತಾದವುಗಳ ಪ್ರಕಟಣೆ.– (1) 4(4)ನೇ ಪ್ರಕರಣದ ಮೇರೆಗೆ ಸಾರ್ವಜನಿಕರಿಗೆ ಮಾಹಿತಿಯನ್ನು ಸುಲಭವಾಗಿ ಪಡೆಯುವ ಅವಕಾಶವಿರತಕ್ಕದ್ದು. ಈ ವಿವರಗಳನ್ನು ದೊರೆಯುವೆಡೆಗಳಲ್ಲಿ ಇದನ್ನು ಸಾರ್ವಜನಿಕ ಮಾಹಿತಿ ಅಧಿಕಾರಿಯು ಸೂಚನಾ ಫಲಕದ ಮೇಲೆ ಸೂಚಿಸತಕ್ಕದ್ದು. ಅಲ್ಲದೆ, ಸಾರ್ವಜನಿಕ ಪ್ರಾಧಿಕಾರಗಳು ಮಾಹಿತಿಯನ್ನು ಪ್ರಸಾರ ಮಾಡುವುದಕ್ಕಾಗಿ ಅಧಿನಿಯಮದ ಮೇರೆಗೆ ಉಪಬಂಧಿಸಿರುವ ಯಾವುದೇ ವಿಧಾನಗಳನ್ನಾದರೂ ಅಳವಡಿಸಿಕೊಳ್ಳಬಹುದು.

(2) ಹಾಗೆ ಪ್ರಸಾರ ಮಾಡಿದ ಮಾಹಿತಿಯಲ್ಲಿ ಉಲ್ಲೇಖಿತ ಕಚೇರಿಯ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಹಾಗೂ ಸಹಾಯಕ ರಾಜ್ಯ ಸಾರ್ವಜನಿಕ ಅಧಿಕಾರಿಗಳ ದೂರವಾಣಿ ಸಂಖ್ಯೆ, ಫ್ಯಾಕ್ಸ್ ಸಂಖ್ಯೆ ಮುಂತಾದ ವಿವರಗಳು ಇರತಕ್ಕದ್ದು.

4. ಶುಲ್ಕ.– (1) ಅಧಿನಿಯಮದ 6ನೇ ಪ್ರಕರಣದ (1)ನೇ ಉಪ ಪ್ರಕರಣದ ಮೇರೆಗೆ ಮಾಹಿತಿಯನ್ನು ಪಡೆಯಲು ಅಪೇಕ್ಷಿಸುವ ಯಾರೇ ವ್ಯಕ್ತಿಯು, ಆತನ ಅರ್ಜಿಯೊಂದಿಗೆ ನಮೂನೆ–ಎ ನಲ್ಲಿ ಅಥವಾ ನಮೂನೆಯ ಮೇರೆಗೆ ನಿರ್ದಿಷ್ಟಪಡಿಸಿರುವ ವಿವರಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಒಳಗೊಂಡಿರಬಹುದಾದಂಥ ಯಾವುದೇ ಇತರ ನಮೂನೆಯಲ್ಲಿ 10 ರೂ.ಗಳ ಆರಂಭಿಕ ಶುಲ್ಕದೊಂದಿಗೆ ಸಂದರ್ಭಾನುಸಾರವಾಗಿ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅರ್ಜಿಯನ್ನು ಸಲ್ಲಿಸತಕ್ಕದ್ದು. ಅಧಿನಿಯಮದಡಿಯಲ್ಲಿ ಕೋರಿಕೆಗಳನ್ನು ಸ್ವೀಕರಿಸುವ ಪ್ರತಿಯೊಬ್ಬ ಅಧಿಕಾರಿಯು ಸ್ವೀಕೃತಿಪತ್ರವನ್ನು ನೀಡತಕ್ಕದ್ದು.

(2) (ಎ) 7ನೇ ಪ್ರಕರಣದ (1)ನೇ ಉಪ ಪ್ರಕರಣದ ಮೇರೆಗೆ ಮಾಹಿತಿಯನ್ನು ಒದಗಿಸುವುದಕ್ಕಾಗಿ, ಮಾಹಿತಿ ಪೂರೈಕೆಗಾಗಿ ಎ4 ಅಳತೆಯ ಕಾಗದದಲ್ಲಿನ ವಿಷಯದ ಸಂಬಂಧದಲ್ಲಿ ಪ್ರತಿ ಪುಟಕ್ಕೆ 2 ರೂ.ಗಳಂತೆ ಶುಲ್ಕವನ್ನು ವಿಧಿಸತಕ್ಕದ್ದು.

(ಬಿ) ನಕ್ಷೆಗಳು, ಯೋಜನೆಗಳು, ಭಾಗಶಃ ದಾಖಲೆಯ ವರದಿಗಳು ಅಥವಾ ಯಾವುದೇ ತಾಂತ್ರಿಕ ಮಾಹಿತಿಗಳು ಅಥವಾ ಮಾದರಿಗಳು ಅಥವಾ ಪ್ರತಿ ರೂಪಗಳಾಗಿದ್ದಲ್ಲಿ 7ನೇ ಪ್ರಕರಣದ (1)ನೇ ಉಪ ಪ್ರಕರಣದ ಮೇರೆಗೆ ಮಾಹಿತಿಯನ್ನು ಒದಗಿಸುವುದಕ್ಕಾಗಿ, ಬಳಸಿಕೊಳ್ಳಬೇಕಾಗಿರುವ ಕಾರ್ಮಿಕ ಮತ್ತು ಸಾಮಗ್ರಿಯ ವೆಚ್ಚವನ್ನು ಅವಲಂಬಿಸಿ ಪ್ರತಿ ಸಂದರ್ಭದಲ್ಲಿ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಯುಕ್ತ ಶುಲ್ಕವನ್ನು ನಿಗದಿಗೊಳಿಸತಕ್ಕದ್ದು.

(ಸಿ) ದಾಖಲೆಗಳು ಮತ್ತು ದಸ್ತಾವೇಜುಗಳ ಪರಿಶೀಲನೆಗೆ ಸಂಬಂಧಿಸಿದಂತೆ, ಮೊದಲ ಒಂದು ಗಂಟೆಗೆ ಯಾವುದೇ ಶುಲ್ಕವಿರುವುದಿಲ್ಲ. ಆ ನಂತರದ ಪ್ರತಿ ಅರ್ಧ ಗಂಟೆಗೆ ಅಥವಾ ಅದರ ಭಾಗಕ್ಕಾಗಿ 20 ರೂ.ಗಳನ್ನು ಮೇಲಿನ 4(1)ನೇ ನಿಯಮದ ಮೇರೆಗೆ ನಿಗದಿಪಡಿಸಿರುವ ಆರಂಭಿಕ ಸಂದಾಯದ ಸಹಿತ ಅರ್ಜಿಯನ್ನು ಸಲ್ಲಿಸುವ ವ್ಯಕ್ತಿಗಳಿಂದ ಭರಿಸತಕ್ಕದ್ದು. ಕೆಲಸದ ಪರಿಶೀಲನೆಗಾಗಿ, 4(1)ನೇ ನಿಯಮದ ಮೇರೆಗೆ ನಿಗದಿಪಡಿಸಿರುವ ಆರಂಭಿಕ ಶುಲ್ಕವೇ ಅಲ್ಲದೇ ಬಳಸಿಕೊಳ್ಳಬೇಕಾಗಿರುವ ಕಾರ್ಮಿಕ ಮತ್ತು ಸಾಮಗ್ರಿ ವೆಚ್ಚವನ್ನು ಅವಲಂಬಿಸಿ ಪ್ರತಿ ಸಂದರ್ಭದಲ್ಲೂ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಯುಕ್ತ ಶುಲ್ಕವನ್ನು ನಿಗದಿಗೊಳಿಸತಕ್ಕದ್ದು.

(3) ಡಿಸ್ಕ್ ಅಥವಾ ಫ್ಲಾಪಿ ಅಥವಾ ಸಿ.ಡಿ ಅಥವಾ ಯಾವುದೇ ಇತರ ವಿದ್ಯುನ್ಮಾನ ಸಾಧನಗಳಿಂದ 7ನೇ ಪ್ರಕರಣದ (5)ನೇ ಉಪ ಪ್ರಕರಣದ ಮೇರೆಗೆ ಮಾಹಿತಿಯನ್ನು ಒದಗಿಸುವುದಕ್ಕಾಗಿನ ಶುಲ್ಕವು 50 ರೂಪಾಯಿ ಆಗಿರತಕ್ಕದ್ದು.

(4) ಶುಲ್ಕವನ್ನು, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯವರ ಹೆಸರಿನಲ್ಲಿ ಪಡೆದ ಇಂಡಿಯನ್ ಪೋಸ್ಟಲ್ ಆರ್ಡರ್ ಅಥವಾ ಡಿ.ಡಿ ಅಥವಾ ಬ್ಯಾಂಕರ್ಸ್ ಚೆಕ್ ಅಥವಾ ಪೇ ಆರ್ಡರ್‌ಗಳ ರೂಪದಲ್ಲಿ ಅಥವಾ ನಗದಿನ ರೂಪದಲ್ಲಿ ಅಥವಾ ಕರ್ನಾಟಕ ಆರ್ಥಿಕ ಸಂಹಿತೆ ಪ್ರಕಾರ ಖಜಾನೆಗೆ ಇದನ್ನು ಜಮೆ ಮಾಡುವ ಮೂಲಕ ಸಂಗ್ರಹಿಸತಕ್ಕದ್ದು.

(5) 7ನೇ ಪ್ರಕರಣದ (5)ನೇ ಉಪ ಪ್ರಕರಣದ ಪರಂತುಕದ ಮೇರೆಗೆ ವಿನಾಯಿತಿಯನ್ನು ಕ್ಲೇಮು ಮಾಡುವ ವ್ಯಕ್ತಿಯು, ಆತ/ಆಕೆ ಬಡತನ ರೇಖೆಗಿಂತ ಕೆಳಗೆ ಇರುವವರೆಂದು ಸಂಬಂಧಪಟ್ಟ ಅಧಿಕಾರಿಯು ನೀಡಿರುವ ಸಿಂಧುವಾದ ಪ್ರಮಾಣಪತ್ರವನ್ನು ಹಾಜರುಪಡಿಸತಕ್ಕದ್ದು.

5. ರಾಜ್ಯ ಮಾಹಿತಿ ಆಯೋಗದ ಅಧಿಕಾರಿಗಳು ಮತ್ತು ನೌಕರರ ಸಂಬಳಗಳು ಮತ್ತು ಭತ್ಯೆಗಳು ಹಾಗೂ ಸೇವಾ ಷರತ್ತುಗಳು.– (1) ರಾಜ್ಯ ಮಾಹಿತಿ ಆಯೋಗದ ಅಧಿಕಾರಿಗಳು ಮತ್ತು ಉದ್ಯೋಗಿಗಳಿಗೆ ಸಂದಾಯವಾಗಬಹುದಾದ ವೇತನಗಳು ಮತ್ತು ಭತ್ಯೆಗಳು ಸಮಾನ ದರ್ಜೆಯ ಇತರೆ ರಾಜ್ಯ ಸರ್ಕಾರಿ ನೌಕರರಿಗೆ ಸಮಾನವಾಗಿರತಕ್ಕದ್ದು.

(2) ರಾಜ್ಯ ಸರ್ಕಾರೀ ನೌಕರರ ಸೇವಾ ಷರತ್ತುಗಳನ್ನು ಮತ್ತು ಶಿಸ್ತುಪಾಲನಾ ವಿಷಯಗಳನ್ನು ನಿಯಂತ್ರಿಸುವ ನಿಯಮಗಳನ್ನು, ಈ ನಿಯಮಗಳಿಗೆ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ಮಾರ್ಪಾಟುಗಳಿಗೆ ಒಳಪಟ್ಟು ರಾಜ್ಯ ಮಾಹಿತಿ ಆಯೋಗದ ನೌಕರರಿಗೆ ಯಥೋಚಿತ ವ್ಯತ್ಯಾಸಗಳೊಂದಿಗೆ ಅನ್ವಯಿಸತಕ್ಕದ್ದು.

(3) ನೇಮಕಾತಿಯ ವಿಧಾನವು, ಸರ್ಕಾರಿ ನೌಕರರನ್ನು ಅಥವಾ ಯಾವುದೇ ರಾಜ್ಯ ಸಿವಿಲ್ ಸೇವೆಗಳಿಂದ ಸಮಾನ ದರ್ಜೆಯ ಅಥವಾ ಸರ್ಕಾರಿ ವಲಯ ಉದ್ದಿಮೆಗಳ ನೌಕರರನ್ನು ಪ್ರತಿನಿಯೋಜನೆ

ಮಾಡಿಕೊಳ್ಳುವ ಮೂಲಕ ಅಥವಾ ಹೊರಗುತ್ತಿಗೆಗೆ ಕೊಡುವ ಮೂಲಕ ಕ.ಸಿ.ಸೇ. (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ಮೇರೆಗಿನ ಉಪಬಂಧಗಳಿಗೆ ಅನುಸಾರವಾಗಿ ಇರತಕ್ಕದ್ದು:

ಪರಂತು, ಹೊರಗುತ್ತಿಗೆಯನ್ನು ಸ್ವಚ್ಛ ಮಾಡುವ, ಗೃಹಕೃತ್ಯ ನೋಡಿಕೊಳ್ಳುವ, ಮನೆಗೆಲಸ ಮಾಡುವ (ಹೋಮ್ ಆರ್ಡರ್‌ಲಿ) ಮತ್ತು ಭದ್ರತಾ ಸಿಬ್ಬಂದಿಯ ಹುದ್ದೆಗಳಿಗೆ ಮಾತ್ರ ಸೀಮಿತಗೊಳಿಸತಕ್ಕದ್ದು.

6. 19ನೇ ಪ್ರಕರಣದ (1)ನೇ ಉಪ ಪ್ರಕರಣದ ಮೇರೆಗೆ ಅಪೀಲು.– (1) ಸಾರ್ವಜನಿಕ ಪ್ರಾಧಿಕಾರವು, ಅಧಿಸೂಚನೆಯ ಮೂಲಕ 19ನೇ ಪ್ರಕರಣದ (1)ನೇ ಉಪ ಪ್ರಕರಣದ ಮೇರೆಗೆ ಯಾವ ಅಧಿಕಾರಿಗೆ ಅಪೀಲುಗಳನ್ನು ಸಲ್ಲಿಸಬೇಕೋ ಆ ಅಧಿಕಾರಿಯ ಪದನಾಮವನ್ನು ನಿರ್ದಿಷ್ಟಪಡಿಸತಕ್ಕದ್ದು.

(2) ಅಂಥ ಪ್ರತಿಯೊಂದು ಅಪೀಲಿಗೆ ಯಾವ ಆದೇಶದ ವಿರುದ್ಧ ಅಪೀಲು ಸಲ್ಲಿಸಲಾಗಿದೆಯೋ ಅಂಥ ಆದೇಶದ ಪ್ರತಿಯನ್ನು ಲಗತ್ತಿಸಿರತಕ್ಕದ್ದು ಮತ್ತು ಇದರಲ್ಲಿ:–

(i) ಅರ್ಜಿದಾರನ ಹೆಸರು ಮತ್ತು ವಿಳಾಸ ಹಾಗೂ ರಾಜ್ಯ ಯಾರ ವಿರುದ್ಧ ಅಪೀಲು ಸಲ್ಲಿಸಲಾಗಿದೆಯೋ ಅಂಥ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಸಂಬಂಧಿಸಿದ ವಿವರಗಳು;

(ii) ಯಾರ ವಿರುದ್ಧ ಅಪೀಲು ಸಲ್ಲಿಸಿದೆಯೋ ಅಂಥ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಂದ ಸ್ವೀಕರಿಸಿದ ಆದೇಶ ಯಾವುದಾದರೂ ಇದ್ದರೆ ಅದನ್ನು ಸ್ವೀಕರಿಸಿದ ದಿನಾಂಕ;

(iii) ಅಪೀಲಿನ ಕಾರಣಗಳು; ಮತ್ತು

(iv) ಅರ್ಜಿದಾರನು ಕ್ಲೇಮು ಮಾಡಿದ ಪರಿಹಾರ;

–ಇವುಗಳನ್ನು ನಿರ್ದಿಷ್ಟಪಡಿಸತಕ್ಕದ್ದು.

(3) 19ನೇ ಪ್ರಕರಣದ (1)ನೇ ಉಪ ಪ್ರಕರಣದ ಮೇರೆಗೆ ಅಪೀಲು ಪ್ರಾಧಿಕಾರವು ಅಪೀಲಿನ ವಿಚಾರಣೆಗಾಗಿ ದಿನವನ್ನು ನಿಗದಿಪಡಿಸತಕ್ಕದ್ದು. ಅಪೀಲಿನ ವಿಚಾರಣೆಗಾಗಿ ನಿಗದಿಪಡಿಸಿದ ದಿನಾಂಕದಂದು ಅಥವಾ ಮುಂದಕ್ಕೆ ಹಾಕಬಹುದೆಂದು ಕಂಡುಬಂದ ಮುಂದಿನ ದಿನಾಂಕದಂದು ಅಪೀಲು ಪ್ರಾಧಿಕಾರವು ಪಕ್ಷಕಾರರನ್ನು ವಿಚಾರಣೆ ಮಾಡಿದ ನಂತರ ತಾನು ಸೂಕ್ತವೆಂದು ಭಾವಿಸಿದಂಥ ಆದೇಶಗಳನ್ನು ಅಪೀಲುಗಳ ಬಗ್ಗೆ ಹೊರಡಿಸತಕ್ಕದ್ದು.

7. 19ನೇ ಪ್ರಕರಣದ (3)ನೇ ಉಪ ಪ್ರಕರಣದ ಮೇರೆಗೆ ಅಪೀಲಿನಲ್ಲಿನ ಕಾರ್ಯವಿಧಾನ.– 6ನೇ ನಿಯಮದ ಉಪಬಂಧಗಳನ್ನು 19(3)ನೇ ಪ್ರಕರಣದ ಮೇರೆಗೆ ಸಲ್ಲಿಸಿರುವ ಅಪೀಲಿಗೆ ಯಥೋಚಿತ ವ್ಯತ್ಯಾಸಗಳೊಂದಿಗೆ ಅನ್ವಯಿಸತಕ್ಕದ್ದು.

| ಅನುಸೂಚಿ | | | | |
|---|---|---|---|---|
| ಹುದ್ದೆಗಳ ದರ್ಜೆ | ನೇಮಕ ಮಾಡಿಕೊಳ್ಳಲು ಅಧಿಕೃತವಾದ ಪ್ರಾಧಿಕಾರಿ | ದಂಡಗಳನ್ನು ವಿಧಿಸುವುದಕ್ಕೆ ಅಧಿಕೃತನಾದ ಪ್ರಾಧಿಕಾರಿ ಮತ್ತು ಇವನು ವಿಧಿಸಬಹುದಾದ ದಂಡಗಳು | | ಅಪೀಲು ಪ್ರಾಧಿಕಾರ |
| | | ಪ್ರಾಧಿಕಾರಿ | ದಂಡಗಳು | |
| 1 | 2 | 3 | 4 | 5 |
| ಹಿರಿಯ ಶೀಘ್ರಲಿಪಿಗಾರರು/ ಶೀಘ್ರಲಿಪಿಗಾರರು/ ಹಿರಿಯ ಸಹಾಯಕರು / ಸಹಾಯಕರು/ ಕಿರಿಯ ಸಹಾಯಕರು / ಚಾಲಕರು ಮತ್ತು ಯಾವುದೇ ಇತರೆ 'ಸಿ' ದರ್ಜೆಯ ಹುದ್ದೆಗಳು. | ರಾಜ್ಯ ಮಾಹಿತಿ ಆಯೋಗದ ಕಾರ್ಯದರ್ಶಿ | ರಾಜ್ಯ ಮಾಹಿತಿ ಆಯೋಗದ ಕಾರ್ಯದರ್ಶಿ, ಸಂಬಂಧಪಟ್ಟ ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ/ ಮಾತೃ ಇಲಾಖೆಗಳಲ್ಲಿ ಸಂಬಂಧಪಟ್ಟ ಶಿಸ್ತು ಪ್ರಾಧಿಕಾರಿ ಆಯಾ ಸಾರ್ವಜನಿಕ ವಲಯ ಉದ್ದಿಮೆಗಳ ಮುಖ್ಯ ಕಾರ್ಯ ನಿರ್ವಾಹಕರು. | ಕರ್ನಾಟಕ ಸಿವಿಲ್ ಸೇವಾ ನಿಯಮಗಳು (ಸಿಸಿಎ) 1957ರ 8ನೇ ನಿಯಮದ (ii)ರಿಂದ (ivಎ) ಕರ್ನಾಟಕ ಸಿವಿಲ್ ಸೇವಾ (ಸಿಸಿಎ) ನಿಯಮಗಳು, 1957ರ ನಿಯಮ 8ರ (v) ರಿಂದ (viii) | ರಾಜ್ಯ ಮುಖ್ಯ ಮಾಹಿತಿ ಆಯುಕ್ತರು. ಸರ್ಕಾರದ ಮುಖ್ಯ ಕಾರ್ಯದರ್ಶಿ/ಮಾತೃ ಇಲಾಖೆಯಲ್ಲಿ ಸಂಬಂಧಪಟ್ಟ ಅಪೀಲು ಪ್ರಾಧಿಕಾರ/ ಸಂಬಂಧಪಟ್ಟ ಸಾರ್ವಜನಿಕ ವಲಯ ಉದ್ದಿಮೆಗಳ ಮಂಡಳಿ |
| ಆಪ್ತ ಕಾರ್ಯದರ್ಶಿ/ ಶಾಖಾ ಅಧಿಕಾರಿಗಳು/ ಅಧೀನ ಕಾರ್ಯದರ್ಶಿಗಳು | ರಾಜ್ಯ ಮಾಹಿತಿ ಆಯೋಗದ ಕಾರ್ಯದರ್ಶಿ | ರಾಜ್ಯ ಮುಖ್ಯ ಮಾಹಿತಿ ಆಯುಕ್ತರು, ಸಂಬಂಧಪಟ್ಟ ಮಾತೃ ಇಲಾಖೆಯಲ್ಲಿನ ಸರ್ಕಾರಿ/ಶಿಸ್ತು ಪಾಲನಾ ಪ್ರಾಧಿಕಾರಿ/ಆಯಾ ಸಾರ್ವಜನಿಕ ವಲಯ ಉದ್ದಿಮೆಗಳ ಮುಖ್ಯ ಕಾರ್ಯ ನಿರ್ವಾಹಕರು | ಕರ್ನಾಟಕ ಸಿವಿಲ್ ಸೇವಾ ನಿಯಮ (ಸಿಸಿಎ) ಗಳು,1957ರ (ii) ರಿಂದ (ivಎ) ಕರ್ನಾಟಕ ಸಿವಿಲ್ ಸೇವಾ (ಸಿಸಿಎ) ನಿಯಮಗಳು 1957ರ ನಿಯಮ 8ರ (v) ರಿಂದ (viii) | ಸರ್ಕಾರ ರಾಜ್ಯಪಾಲರು/ಮಾತೃ ಇಲಾಖೆಯಲ್ಲಿನ ಸಂಬಂಧಪಟ್ಟ ಅಪೀಲು ಪ್ರಾಧಿಕಾರ/ಸಂಬಂಧಪಟ್ಟ ಸಾರ್ವಜನಿಕ ವಲಯ ಉದ್ದಿಮೆಗಳ ಮಂಡಳಿ. |
| ದಲಾಯತರು/ ಇತರೆ 'ಡಿ' ದರ್ಜೆ ನೌಕರರು | ಮಾಹಿತಿ ಆಯೋಗದ ಅಧೀನ ಕಾರ್ಯದರ್ಶಿ | ಮಾಹಿತಿ ಆಯೋಗದ ಅಧೀನ ಕಾರ್ಯದರ್ಶಿ ಸಂಬಂಧಪಟ್ಟ ಮಾತೃ ಇಲಾಖೆಯ ನೇಮಕಾತಿ ಪ್ರಾಧಿಕಾರ | ಕರ್ನಾಟಕ ಸಿವಿಲ್ ಸೇವಾ (ಸಿಸಿಎ) ನಿಯಮಗಳು 1957ರ (ii) | ಮಾಹಿತಿ ಆಯೋಗದ ಕಾರ್ಯದರ್ಶಿ ಮಾತೃ ಇಲಾಖೆಯಲ್ಲಿ ಸಂಬಂಧಪಟ್ಟ ಅಪೀಲು ಪ್ರಾಧಿಕಾರ. |

| | | | | |
|---|---|---|---|---|
| | | | ರಿಂದ (ivಎ) ಕರ್ನಾಟಕ ಸಿವಿಲ್ ಸೇವೆ (ಸಿಸಿಎ) ನಿಯಮಗಳು, 1957ರ 8ನೇ ನಿಯಮದ (v) ರಿಂದ (viii) | |

ಮಾಹಿತಿ ಹಕ್ಕು ಅಧಿನಿಯಮ 2005ರ 6(1) ಮತ್ತು 7(1)ನೇ (ಪ್ರಕರಣ) ನಮೂನೆ 'ಎ'

1. ಅರ್ಜಿದಾರನ ಪೂರ್ಣ ಹೆಸರು:
2. ವಿಳಾಸ:
3. ಅಗತ್ಯವಾದ ದಸ್ತಾವೇಜು/ಪರಿಶೀಲನೆ/ಮಾದರಿಗಳ ವಿವರ:
4. ಯಾವ ವರ್ಷಕ್ಕೆ ಮೇಲಿನವು ಸೇರಿವೆ
5. ಯಾರಿಂದ ಮಾಹಿತಿಯು ಬೇಕಾಗಿದೆಯೋ ಆ ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಹುದ್ದೆ ಮತ್ತು ವಿಳಾಸ:

ಸ್ಥಳ:
ದಿನಾಂಕ: ಅರ್ಜಿದಾರನ ಸಹಿ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಕೆ.ಆರ್.ಬಡಿಗೇರ್,
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ,
(ಜನಸ್ಪಂದನ ಕೋಶ)

## ಸಿಬ್ಬಂದಿ ಮತ್ತು ಆಡಳಿತ ಸುಧಾರಣೆಗಳ ಸಚಿವಾಲಯ

## ಅಧಿಸೂಚನೆ

## ಸಂ.ಡಿಪಿಎಆರ್ 74 ಆರ್ ಟಿ ಐ 2005 (ಭಾಗ –ಋ) ದಿನಾಂಕ 15ನೇ ಜುಲೈ 2006

ಮಾಹಿತಿ ಹಕ್ಕು ಅಧಿನಿಯಮ, 2005 (2005ರ ಕೇಂದ್ರ ಅಧಿನಿಯಮ 22)ರ 27ನೇ ಪ್ರಕರಣದ (1)ನೇ ಹಾಗೂ (2)ನೇ ಉಪ ಪ್ರಕರಣಗಳ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಕರ್ನಾಟಕ ಮಾಹಿತಿ ನಿಯಮಗಳು, 2005ಕ್ಕೆ ತಿದ್ದುಪಡಿ ಮಾಡಲು ಈ ಮೂಲಕ ಈ ಕೆಳಕಂಡ ನಿಯಮಗಳನ್ನು ರಚಿಸಿದೆ. ಎಂದರೆ:–

1. ಹೆಸರು ಮತ್ತು ಪ್ರಾರಂಭ.– ಈ ನಿಯಮಗಳನ್ನು ಕರ್ನಾಟಕ ಮಾಹಿತಿ ಹಕ್ಕು (ತಿದ್ದುಪಡಿ) ನಿಯಮಗಳು, 2006 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು, ಅಧಿಕೃತ ರಾಜಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಅವು ಜಾರಿಗೆ ಬರತಕ್ಕದ್ದು.

2. 7ನೇ ನಿಯಮದ ತಿದ್ದುಪಡಿ.– ಕರ್ನಾಟಕ ಮಾಹಿತಿ ಹಕ್ಕು ನಿಯಮಗಳು, 2005 (ಇನ್ನು ಮುಂದೆ ಸದರಿ ನಿಯಮಗಳೆಂದು ಉಲ್ಲೇಖಿಸಲಾಗಿದೆ) ರ 7ನೇ ನಿಯಮದ ಬದಲಾಗಿ ಈ ಮುಂದಿನಂತೆ ಪ್ರತಿಯೋಜಿಸತಕ್ಕದ್ದು ಎಂದರೆ:–

"7. 19ನೇ ಪ್ರಕರಣದ (3)ನೇ ಉಪ– ಪ್ರಕರಣದ ಮೇರೆಗೆ ಮನವಿ:– 19ನೇ ಪ್ರಕರಣದ (3)ನೇ ಉಪ–ಪ್ರಕರಣದ ಮೇರೆಗೆ ರಾಜ್ಯ ಮಾಹಿತಿ ಆಯೋಗಕ್ಕೆ ಸಲ್ಲಿಸುವ ಅಪೀಲು ಈ ಮುಂದಿನ ಮಾಹಿತಿಯನ್ನು ಒಳಗೊಂಡಿರತಕ್ಕದ್ದು ಎಂದರೆ:–

(i) ಅಪೀಲುದಾರನ ಹೆಸರು ಮತ್ತು ವಿಳಾಸ;

(ii) ಯಾರ ತೀರ್ಮಾನದ ವಿರುದ್ಧ ಅಪೀಲು ಸಲ್ಲಿಸಲಾಗಿದೆಯೋ ಆ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ಹೆಸರು ಮತ್ತು ವಿಳಾಸ;

(iii) ಯಾವ ಆದೇಶದ ವಿರುದ್ಧ ಅಪೀಲು ಸಲ್ಲಿಸಲಾಗಿದೆಯೋ ಆ ಆದೇಶದ ಸಂಖ್ಯೆ (ಯಾವುದಾದರೂ ಇದ್ದರೆ) ಸಹಿತ ವಿವರಗಳು;

(iv) ಅಪೀಲಿಗೆ ಕಾರಣವಾದ ಸಂಕ್ಷಿಪ್ತ ಅಂಶಗಳು;

(v) ನಿರಾಕರಿಸಲಾಗಿದೆಯೆಂದು ಭಾವಿಸಿಕೊಂಡು ಅಪೀಲು ಸಲ್ಲಿಸಿದ್ದರೆ, ಸಂಖ್ಯೆ ಮತ್ತು ದಿನಾಂಕ ಸೇರಿದಂತೆ ಅರ್ಜಿಯ ವಿವರಗಳು ಹಾಗೂ ಅರ್ಜಿಯನ್ನು ಯಾರಿಗೆ ಸಲ್ಲಿಸಲಾಗಿತ್ತೋ ಆ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ಹೆಸರು ಮತ್ತು ವಿಳಾಸ;

(vi) ಕೋರಲಾದ ಬೇಡಿಕೆ ಅಥವಾ ಪರಿಹಾರ;

(vii) ಬೇಡಿಕೆ ಅಥವಾ ಪರಿಹಾರಕ್ಕೆ ಆಧಾರಗಳು;

(viii) ಅಪೀಲುದಾರನಿಂದ ಪರಿಶೀಲನೆ; ಮತ್ತು

(ix) ಅಪೀಲನ್ನು ನಿರ್ಧರಿಸಲು ಅವಶ್ಯಕವೆಂದು ಆಯೋಗವು ಭಾವಿಸಬಹುದಾದ ಯಾವುದೇ ಇತರ ಮಾಹಿತಿ"

3. 8, 9, 10, 11 ಮತ್ತು 12ನೇ ಹೊಸ ನಿಯಮಗಳ ಸೇರ್ಪಡೆ:– ಸದರಿ ನಿಯಮಗಳ 7ನೇ ನಿಯಮದ ತರುವಾಯ ಈ ಮುಂದಿನ ಹೊಸ ನಿಯಮಗಳನ್ನು ಸೇರಿಸತಕ್ಕದ್ದು, ಎಂದರೆ:–

"8. ಅಪೀಲಿನ ಜೊತೆಗೆ ಇರಬೇಕಾದ ದಸ್ತಾವೇಜುಗಳು:– ರಾಜ್ಯ ಮಾಹಿತಿ ಆಯೋಗಕ್ಕೆ ಸಲ್ಲಿಸಿದ ಪ್ರತಿಯೊಂದು ಅಪೀಲು ಈ ಮುಂದಿನ ದಸ್ತಾವೇಜುಗಳ ಜೊತೆಗೆ ತ್ರಿಪ್ರತಿಯಲ್ಲಿ ಇರತಕ್ಕದ್ದು.

(i) ಯಾವುದರ ವಿರುದ್ಧ ಅಪೀಲು ಸಲ್ಲಿಸಲಾಗುತ್ತಿದೆಯೋ ಆ ಆದೇಶಗಳ ಅಥವಾ ದಸ್ತಾವೇಜುಗಳ ಸ್ವಯಂ ದೃಢೀಕೃತ ಪ್ರತಿಗಳು;

(ii) ಅಪೀಲುದಾರನು ಅವಲಂಬಿಸಿರುವ ಮತ್ತು ಅಪೀಲಿನಲ್ಲಿ ಉಲ್ಲೇಖಿಸಿರುವ ದಸ್ತಾವೇಜುಗಳ ಪ್ರತಿಗಳು; ಮತ್ತು

(iii) ಅಪೀಲಿನಲ್ಲಿ ಉಲ್ಲೇಖಿಸಿರುವ ದಸ್ತಾವೇಜುಗಳ ಸೂಚಿ;

9. ಅಪೀಲನ್ನು ನಿರ್ಧರಿಸುವಾಗಿನ ಪ್ರಕ್ರಿಯೆ:- ಅಪೀಲನ್ನು ನಿರ್ಧರಿಸುವಾಗ, ರಾಜ್ಯ ಮಾಹಿತಿ ಆಯೋಗವು:-

(i) ಸಂಬಂಧಪಟ್ಟ ಅಥವಾ ಆಸಕ್ತ ವ್ಯಕ್ತಿಯ ಮೌಖಿಕ ವಿಚಾರಣೆ ಮಾಡಬಹುದು ಅಥವಾ ಅವನು ಸಲ್ಲಿಸಿದ ಲಿಖಿತ ಸಾಕ್ಷ್ಯವನ್ನು ಪ್ರಮಾಣ ಮಾಡಿಸಿ ಅಥವಾ ಶಪಥಪತ್ರದ ಮೇಲೆ ವಿಚಾರಣೆ ಮಾಡಬಹುದು;

(ii) ದಸ್ತಾವೇಜುಗಳನ್ನು ಸಾರ್ವಜನಿಕ ದಾಖಲೆಗಳನ್ನು ಅಥವಾ ಅದರ ಪ್ರತಿಗಳನ್ನು ಪರಿಶೀಲಿಸಬಹುದು ಅಥವಾ ತಪಾಸಣೆ ಮಾಡಬಹುದು.

(iii) ಹೆಚ್ಚಿನ ವಿವರಗಳನ್ನು ಅಥವಾ ವಿಷಯಗಳನ್ನು ಅಧಿಕೃತ ಅಧಿಕಾರಿಗಳ ಮೂಲಕ ವಿಚಾರಣೆ ಮಾಡಬಹುದು.

(iv) ಮೊದಲ ಅಪೀಲನ್ನು ನಿರ್ಧರಿಸಿದ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ, ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಹಿರಿಯ ಅಧಿಕಾರಿಯನ್ನು ಅಥವಾ ಸಂದರ್ಭಾನುಸಾರ ಯಾರ ವಿರುದ್ಧ ದೂರು ನೀಡಲಾಗಿದೆಯೋ ಆ ವ್ಯಕ್ತಿಯ ವಿಚಾರಣೆ ಮಾಡಬಹುದು;

(v) ಮೂರನೆ ಪಕ್ಷಕಾರನನ್ನು ವಿಚಾರಣೆ ಮಾಡಬಹುದು; ಮತ್ತು

(vi) ಮೊದಲ ಅಪೀಲನ್ನು ನಿರ್ಧರಿಸಿದ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ, ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ, ಅಂಥ ಇತರೆ ಹಿರಿಯ ಅಧಿಕಾರಿಯಿಂದ, ಅಥವಾ ಯಾರ ವಿರುದ್ಧ ದೂರು ನೀಡಲಾಗಿದೆಯೋ ಆ ವ್ಯಕ್ತಿಯಿಂದ ಅಥವಾ ಮೂರನೇ ವ್ಯಕ್ತಿಯಿಂದ ಶಪಥಪತ್ರಗಳ ಮೂಲಕ ಸಾಕ್ಷ್ಯವನ್ನು ಸ್ವೀಕರಿಸಬಹುದು.

10. ಆಯೋಗದ ಮೂಲಕ ನೋಟೀಸು ಜಾರಿ:- ರಾಜ್ಯ ಮಾಹಿತಿ ಆಯೋಗವು ಹೊರಡಿಸಬೇಕಾದ ನೋಟೀಸನ್ನು ಈ ಮುಂದಿನ ಯಾವುದೇ ವಿಧಾನದಲ್ಲಿ ಜಾರಿಗೊಳಿಸಬಹುದು; ಎಂದರೆ:-

(i) ಪಕ್ಷಕಾರನಿಗೆ ಜಾರಿ ಮಾಡುವುದು;

(ii) ಸಮನು ಜವಾನರ ಮೂಲಕ ಕೈಗೆ ಕೊಡುವುದು;

(iii) ತಲುಪೊಪ್ಪಿಗೆಯುಳ್ಳ ನೋಂದಾಯಿತ ಅಂಚೆಯ ಮೂಲಕ ತಲುಪಿಸುವುದು;

(iv) ಕಚೇರಿ ಅಥವಾ ಇಲಾಖೆಯ ಮುಖ್ಯಸ್ಥರ ಮೂಲಕ ತಿಳಿಸುವುದು.

(v) ಫ್ಯಾಕ್ಸ್ ಮೂಲಕ ತಿಳಿಸುವುದು;

(vi) ಇ-ಮೇಲ್ ಮೂಲಕ ತಿಳಿಸುವುದು

11. ಅಪೀಲುದಾರನ ಅಥವಾ ಫಿರ್ಯಾದಿದಾರನ ವೈಯಕ್ತಿಕ ಹಾಜರಾತಿ,-

(1) ಪ್ರತಿಯೊಂದು ಪ್ರಕರಣದಲ್ಲಿ ಸಂದರ್ಭಾನುಸಾರ ಅಪೀಲುದಾರನಿಗೆ ಮತ್ತು ಫಿರ್ಯಾದುದಾರನಿಗೆ ವಿಚಾರಣೆಯ ದಿನಾಂಕವನ್ನು ಆ ದಿನಾಂಕಕ್ಕಿಂತ ಕನಿಷ್ಠಪಕ್ಷ ಸ್ಪಷ್ಟ ಹತ್ತು ದಿನಗಳ ಮುಂಚೆ ತಿಳಿಸತಕ್ಕದ್ದು.

(2) ಸಂದರ್ಭಾನುಸಾರ ಅಪೀಲುದಾರನು ಅಥವಾ ಫಿರ್ಯಾದುದಾರನು ರಾಜ್ಯ ಮಾಹಿತಿ ಆಯೋಗವು ಅಪೀಲನ್ನು ಅಥವಾ ಫಿರ್ಯಾದನ್ನು ವಿಚಾರಣೆ ಮಾಡುವ ಸಮಯದಲ್ಲಿ, ತನ್ನ

ವಿವೇಚನೆಯ ಅನುಸಾರ ಖುದ್ದಾಗಿ ಅಥವಾ ತನ್ನ ಯುಕ್ತ ಅಧಿಕೃತ ಪ್ರತಿನಿಧಿಯ ಮೂಲಕ ಹಾಜರಾಗಬಹುದು ಅಥವಾ ಹಾಜರಾಗದೆ ಇರಬಹುದು.

(3) ಸಂದರ್ಭಾನುಸಾರ ಅಪೀಲುದಾರ ಅಥವಾ ಫಿರ್ಯದುದಾರನು, ರಾಜ್ಯ ಮಾಹಿತಿ ಆಯೋಗದ ಮುಂದೆ ವಿಚಾರಣೆಗೆ ಹಾಜರಾಗುವುದಕ್ಕೆ ಆಸ್ಪದಕೊಡದಂಥ ಸಂದರ್ಭ ಸನ್ನಿವೇಶಗಳು ಇದ್ದವೆಂದು ರಾಜ್ಯ ಮಾಹಿತಿ ಆಯೋಗಕ್ಕೆ ಮನವರಿಕೆಯಾದಲ್ಲಿ, ಆಗ ರಾಜ್ಯ ಮಾಹಿತಿ ಆಯೋಗವು ಸಂದರ್ಭಾನುಸಾರ ಅಪೀಲುದಾರನಿಗೆ ಅಥವಾ ಫಿರ್ಯಾದುದಾರನಿಗೆ, ಅಂತಿಮ ತೀರ್ಮಾನವನ್ನು ತೆಗೆದುಕೊಳ್ಳುವುದಕ್ಕೆ ಮುಂಚೆ ಅಹವಾಲನ್ನು ಹೇಳಿಕೊಳ್ಳಲು ಮತ್ತೊಂದು ಅವಕಾಶವನ್ನು ನೀಡಬಹುದು ಅಥವಾ ಸೂಕ್ತವೆಂದು ತಾನು ಭಾವಿಸಬಹುದಾದಂಥ ಇತರೆ ಕ್ರಮವನ್ನು ತೆಗೆದುಕೊಳ್ಳಬಹುದು.

(4) ಸಂದರ್ಭಾನುಸಾರ ಅಪೀಲುದಾರ ಅಥವಾ ಫಿರ್ಯಾದುದಾರನು ತನ್ನ ವಾದಗಳನ್ನು ಮಂಡಿಸುವಾಗ ಅಪೀಲಿನ ಪ್ರಕ್ರಿಯೆಯಲ್ಲಿ ಯಾರೇ ವ್ಯಕ್ತಿಯ ಸಹಾಯವನ್ನು ಕೋರಬಹುದು ಮತ್ತು ಅವನ್ನು ಪ್ರತಿನಿಧಿಸುವ ವ್ಯಕ್ತಿಯು ನ್ಯಾಯವಾದಿ ಆಗದೆ ಇರಬಹುದು.

12. ರಾಜ್ಯ ಮಾಹಿತಿ ಆಯೋಗದ ಆದೇಶ:– ರಾಜ್ಯ ಮಾಹಿತಿ ಆಯೋಗದ ಆದೇಶವು ಲಿಖಿತದಲ್ಲಿರತಕ್ಕದ್ದು ಮತ್ತು ಅದನ್ನು ಮುಕ್ತವಾಗಿ ಅಲ್ಲೇ ಓದಿ ಹೇಳತಕ್ಕದ್ದು. ಅಂಥ ಆದೇಶವು ಈ ಉದ್ದೇಶಕ್ಕಾಗಿಯೇ ರಾಜ್ಯ ಮಾಹಿತಿ ಆಯೋಗವು ಅಧಿಕೃತಗೊಳಿಸಿರುವ ಅಧೀನ ಕಾರ್ಯದರ್ಶಿ ಅಥವಾ ಯಾರೇ ಇತರ ಅಧಿಕಾರಿಯಿಂದ ಯುಕ್ತವಾಗಿ ದೃಢೀಕರಿಸಲ್ಪಟ್ಟಿರತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಸಗುಣ ಬಾಯಿ
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
(ಜನಸ್ಪಂದನ ಕೋಶ)

## ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

## ಅಧಿಸೂಚನೆ

ಸಂ. ಡಿಪಿಎಆರ್ 90 ಆರ್‌ಟಿಐ 2005, ಬೆಂಗಳೂರು, ದಿನಾಂಕ 30 ಜುಲೈ, 2005

ಈ ಮುಂದಿನ ಹುದ್ದೆಗಳನ್ನು ಕೂಡಲೆ ಜಾರಿಗೆ ಬರುವಂತೆ ಮತ್ತು ಮುಂದಿನ ಆದೇಶದವರೆಗೆ ರಾಜ್ಯ ಮಾಹಿತಿ ಆಯೋಗಕ್ಕಾಗಿ ಸೃಜಿಸಲಾಗಿದೆ.

1. ರಾಜ್ಯ ಮುಖ್ಯ ಮಾಹಿತಿ ಆಯುಕ್ತರ ಕಚೇರಿ:

(i) ಆಪ್ತ ಸಹಾಯಕರು (ಶೀಘ್ರಲಿಪಿಗಾರರು/ ಹಿರಿಯ
2 ಶೀಘ್ರಲಿಪಿಗಾರರ ಉದ್ಯೋಗಿ ವೃಂದದಲ್ಲಿ)

(ii) ಸಹಾಯಕ/ಕಿರಿಯ ಸಹಾಯಕರು (ಸಚಿವಾಲಯ ಉದ್ಯೋಗಿ ವೃಂದದಲ್ಲಿ) 1

(iii) ವಾಹನ ಚಾಲಕ 1

(iv) ದಲಾಯತ್ 1

2. ರಾಜ್ಯ ಮಾಹಿತಿ ಆಯುಕ್ತರ ಕಚೇರಿ:

(i) ಆಪ್ತ ಸಹಾಯಕರು (ಶೀಘ್ರಲಿಪಿಕಾರರ ಉದ್ಯೋಗಿ ವೃಂದದಲ್ಲಿ) 1

(ii) ಸಹಾಯಕರು/ಕಿರಿಯ ಸಹಾಯಕರು (ಸಚಿವಾಲಯ ಉದ್ಯೋಗಿ ವೃಂದದಲ್ಲಿ) 1

(iii) ವಾಹನ ಚಾಲಕ

(iv) ದಲಾಯತ್ 1

3. ರಾಜ್ಯ ಮಾಹಿತಿ ಆಯೋಗಕ್ಕೆ ಬೆಂಬಲ ಸಿಬ್ಬಂದಿ:

(i) ಒಬ್ಬ ಕಾರ್ಯದರ್ಶಿ (ಸರ್ಕಾರದ ಕಾರ್ಯದರ್ಶಿಯ ದರ್ಜೆ) 1

(ii) ಆಪ್ತ ಕಾರ್ಯದರ್ಶಿ (ಶಾಖಾಧಿಕಾರಿಗಳ ಅಥವಾ ಸಮಾನ ದರ್ಜೆಯ ದರ್ಜೆ) 1

(iii) ಆಪ್ತ ಸಹಾಯಕ 1

(iv) ಸಹಾಯಕರು/ಕಿರಿಯ ಸಹಾಯಕರು 1

(v) ವಾಹನ ಚಾಲಕ

(vi) ದಲಾಯತ್ 1

ಆಯೋಗದಲ್ಲಿ ಈ ಮುಂದಿನ ಸಿಬ್ಬಂದಿಯೊಂದಿಗೆ ಒಂದು ಶಾಖೆ ಇರತಕ್ಕದ್ದು:–

(i) ಅಧೀನ ಕಾರ್ಯದರ್ಶಿ (ಸಚಿವಾಲಯ ಉದ್ಯೋಗಿ ವೃಂದದಲ್ಲಿ) 1

(ii) ಶಾಖಾ ಅಧಿಕಾರಿ (ಸಚಿವಾಲಯ ಉದ್ಯೋಗಿ ವೃಂದದಲ್ಲಿ) 1

(iii) ಹಿರಿಯ ಸಹಾಯಕರು/ಸಹಾಯಕರು (ಸಚಿವಾಲಯ ಉದ್ಯೋಗಿ ವೃಂದದಲ್ಲಿ) 1

(iv) ಕಿರಿಯ ಸಹಾಯಕರು (ಸಚಿವಾಲಯ ಉದ್ಯೋಗಿ ವೃಂದದಲ್ಲಿ) 1

(v) ಜವಾನ 1

ಮೇಲಿನ ಸಿಬ್ಬಂದಿಯನ್ನು ಪ್ರತಿನಿಯೋಜನೆಯ ಮೇಲೆ ಮಾತ್ರ ತೆಗೆದುಕೊಳ್ಳತಕ್ಕದ್ದು.

ರಾಜ್ಯ ಮಾಹಿತಿ ಆಯೋಗದ ಅಧೀನ ಕಾರ್ಯದರ್ಶಿಯು ಹಣ ತೆಗೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಯಾಗಿದ್ದು ಅವರು ಬಜೆಟನ್ನು ನಿರ್ವಹಿಸುತ್ತಾರೆ ಮತ್ತು ಸಂಬಳ ಇತ್ಯಾದಿಯನ್ನು ಬಟವಾಡೆ ಮಾಡುತ್ತಾರೆ. ಬಜೆಟ್ ಲೆಕ್ಕ ಶೀರ್ಷಿಕೆಯು "2251–00–090–0–02 ಕರ್ನಾಟಕ ರಾಜ್ಯ ಮಾಹಿತಿ ಆಯೋಗ" ಆಗಿರತಕ್ಕದ್ದು.

ರಾಜ್ಯ ಮಾಹಿತಿ ಆಯೋಗದ ಕೇಂದ್ರ ಕಚೇರಿಯು ಬೆಂಗಳೂರಿನಲ್ಲಿ ಇರತಕ್ಕದ್ದು.

ಈ ಅಧಿಸೂಚನೆಯನ್ನು ಹಣಕಾಸು ಇಲಾಖೆಯು ಅನಧಿಕೃತ ಟಿಪ್ಪಣಿ ಸಂ. ಎಫ್‌ಡಿ 1339 ವೆಚ್ಚ–5/ 2005 ದಿನಾಂಕ 29.7.2005 ಹಾಗೂ ಎಫ್‌ಡಿ ಸಂ. 1401 ವೆಚ್ಚ – 2005 ದಿನಾಂಕ 28.7.2005ರ ಅಡಿಯಲ್ಲಿ ಅದರ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ಕೆ.ಆರ್. ಬಡಿಗೇರ್
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
(ಜನಸ್ಪಂದನ ಕೋಶ)

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ರಾಜ್ಯ ಮಾಹಿತಿ ಆಯೋಗದಲ್ಲಿ ಹೊಸ ಹುದ್ದೆಗಳನ್ನು ಸೃಜಿಸುವ ಬಗ್ಗೆ.

ಓದಲಾಗಿದೆ : 1. ಅಧಿಸೂಚನೆ ಸಂಖ್ಯೆ : ಸಿಆಸುಇ 90 ಆರ್‌ಟಿಐ 2005, ದಿ : 30.07.2005.

2. ರಾಜ್ಯ ಮಾಹಿತಿ ಆಯೋಗದ ಪತ್ರ ಸಂಖ್ಯೆ: ಕೆಐಸಿ/42/ಜಿಆರ್‌ಆರ್/2006, ದಿ: 30.11.2006.

ಪ್ರಸ್ತಾವನೆ :

ಮೇಲೆ ಓದಲಾಗಿರುವ (1) ರಲ್ಲಿ ಅಧಿಸೂಚನೆಯಲ್ಲಿ ರಾಜ್ಯ ಮಾಹಿತಿ ಆಯೋಗಕ್ಕೆ ಕೆಲವು ಹುದ್ದೆಗಳನ್ನು ಸೃಜಿಸಿರುವುದು ಸರಿಯಷ್ಟೆ. ಮೇಲೆ ಓದಲಾಗಿರುವ (2)ರಲ್ಲಿನ ಪತ್ರದಲ್ಲಿ ರಾಜ್ಯ ಮಾಹಿತಿ ಆಯೋಗವು ಈಗಾಗಲೇ ಸೃಜಿಸಿರುವ ಹುದ್ದೆಗಳನ್ನು ಹೊರತುಪಡಿಸಿ, ಆಯೋಗದಲ್ಲಿ ಈಗ ಹೆಚ್ಚಿನ ಕಾರ್ಯಭಾರವಿರುವುದರಿಂದ ಈ ಕೆಳಕಂಡ ಹೊಸ ಹುದ್ದೆಗಳನ್ನು ಸೃಜಿಸಲು ಕೋರಿದ್ದಾರೆ.

1. ಅಕೌಂಟೆಂಟ್
2. ಲೆಕ್ಕ ಅಧೀಕ್ಷಕರು
3. ಜಡ್ಜ್‌ಮೆಂಟ್ ಬರಹಗಾರರು

ಮೇಲಿನ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶ.

ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ 05 ಆರ್‌ಟಿಐ 2006, ಬೆಂಗಳೂರು, ದಿನಾಂಕ : 03.02.2006

ಮೇಲೆ ವಿವರಿಸಲಾದ ಹಿನ್ನಲೆಯಲ್ಲಿ ರಾಜ್ಯ ಮಾಹಿತಿ ಆಯೋಗದಲ್ಲಿ ಈ ಕೆಳಕಂಡ ಹುದ್ದೆಗಳನ್ನು ಈ ಕೂಡಲೇ ಜಾರಿಗೆ ಬರುವಂತೆ ಅಥವಾ ಮುಂದಿನ ಆದೇಶದವರೆಗೆ ಸೃಜಿಸಿ ಆವುಗಳ ಮುಂದೆ ತೋರಿಸಲಾದ ಸಂಖ್ಯೆ ಮತ್ತು ರೀತಿಯಲ್ಲಿ ತುಂಬಲು ಆದೇಶಿಸಿದೆ.

| | | | |
|---|---|---|---|
| ಲೆಕ್ಕ ವಿಭಾಗ | | | |
| 1. | ಅಕೌಂಟೆಂಟ್ | 01 ಹುದ್ದೆ | ರಾಜ್ಯ ಲೆಕ್ಕಪತ್ರ ಇಲಾಖೆಯಿಂದ ಪ್ರತಿನಿಯೋಜನೆಯಿಂದ ಭರ್ತಿ ಮಾಡಬೇಕು. |
| 2. | ಲೆಕ್ಕ ಅಧೀಕ್ಷಕರು | 01 ಹುದ್ದೆ | |
| ಆಯೋಗ ಕಚೇರಿ | | | |
| 3. | ತೀರ್ಪು ಬರಹಗಾರರು ಕಂ. ಶೀಘ್ರಲಿಪಿಗಾರರು | 02 ಹುದ್ದೆಗಳು | ಪ್ರತಿನಿಯೋಜನೆಯ ಮೇಲೆ ಅಥವಾ ಗುತ್ತಿಗೆ ಆಧಾರದ ಮೇಲೆ ಅಥವಾ ಹೊರ ಗುತ್ತಿಗೆ ನೀಡುವುದರ ಮೂಲಕ ಭರ್ತಿ ಮಾಡಬೇಕು. |

ರಾಜ್ಯ ಮಾಹಿತಿ ಆಯೋಗದ ಅಧೀನ ಕಾರ್ಯದರ್ಶಿಗಳು, ಹಣ ಪಡೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಯಾಗಿದ್ದು, ಇವರು ವೇತನ ಮತ್ತಿತರ ಬಿಡುಗಡೆ ಮಾಡುತ್ತಾರೆ. ವೇತನವನ್ನು ರಾಜ್ಯ ಮಾಹಿತಿ ಆಯೋಗದ ಲೆಕ್ಕ ಶೀರ್ಷಿಕೆ 2251-00-090-0-02 ಇದರಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅ.ಟಿ.ಸಂಖ್ಯೆ : ಆಇ 2357 ವೆಚ್ಚ:5/2006, ದಿ : 24.01.2007ರ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

ಬಿ. ಶಿವರುದ್ರಸ್ವಾಮಿ
ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರ)
ಸಿಆಸುಇ (ಆ.ಸು. – ಮಾಹಿತಿ ಹಕ್ಕು)

ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

## ಅಧಿಸೂಚನೆ

ಸಂಖ್ಯೆ: ಡಿಪಿಎಆರ್ 7 ಅರ್‌ಟಿಐ 2006, ಬೆಂಗಳೂರು ದಿನಾಂಕ 10 ಜನವರಿ, 2007

ಮಾಹಿತಿ ಹಕ್ಕು ಅಧಿನಿಯಮ, 2005 (2005ರ 22) ರ 27ನೇ ಪ್ರಕರಣದ (1)ನೇ ಹಾಗೂ (2)ನೇ ಉಪ– ಪ್ರಕರಣಗಳ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಕರ್ನಾಟಕ ಮಾಹಿತಿ ಹಕ್ಕು ನಿಯಮಗಳು, 2005ಕ್ಕೆ ತಿದ್ದುಪಡಿ ಮಾಡಲು ಈ ಮೂಲಕ ಈ ಮುಂದಿನಂತೆ ನಿಯಮಗಳನ್ನು ರಚಿಸಿದೆ. ಎಂದರೆ:–

1. ಹೆಸರು ಮತ್ತು ಪ್ರಾರಂಭ:– (1) ಈ ನಿಯಮಗಳನ್ನು ಕರ್ನಾಟಕ ಮಾಹಿತಿ ಹಕ್ಕು (ತಿದ್ದುಪಡಿ) ನಿಯಮಗಳು, 2007 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು, ಅಧಿಕೃತ ರಾಜಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. ನಿಯಮ 5ರ ತಿದ್ದುಪಡಿ:– ಕರ್ನಾಟಕ ಮಾಹಿತಿ ಹಕ್ಕು ನಿಯಮಗಳು, 2005ರಲ್ಲಿ 5ನೇ ನಿಯಮದ (3)ನೇ ಉಪ–ನಿಯಮದಲ್ಲಿ ಬರುವ "ಸಾರ್ವಜನಿಕ ವಲಯ ಉದ್ಯಮ" ಎಂಬ ಪದಗಳ ತರುವಾಯ "ಅಥವಾ ಗುತ್ತಿಗೆ ಆಧಾರದ ಮೇಲೆ" ಎಂಬ ಪದಗಳನ್ನು ಸೇರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಬಿ. ಶಿವರುದ್ರಸ್ವಾಮಿ
ಡೆಸ್ಕ್ ಆಫೀಸರ್
ಸಿಆಸುಇ (ಆ.ಸು. – ಮಾಹಿತಿ ಹಕ್ಕು)

## ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ
## ಅಧಿಸೂಚನೆ

ಸಂಖ್ಯೆ: ಡಿಪಿಎಆರ್ 2 ಅರ್‌ಟಿಐ 2007, ಬೆಂಗಳೂರು ದಿನಾಂಕ 13 ಫೆಬ್ರವರಿ, 2007
ಮಾಹಿತಿ ಹಕ್ಕು ಅಧಿನಿಯಮ, 2005 (2005ರ 22) ರ 27ನೇ ಪ್ರಕರಣದ (1)ನೇ ಹಾಗೂ (2)ನೇ ಉಪ– ಪ್ರಕರಣಗಳ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಕರ್ನಾಟಕ ಮಾಹಿತಿ ಹಕ್ಕು ನಿಯಮಗಳು, 2005ಕ್ಕೆ ತಿದ್ದುಪಡಿ ಮಾಡಲು ಈ ಮೂಲಕ ಈ ಮುಂದಿನಂತೆ ನಿಯಮಗಳನ್ನು ರಚಿಸಿದೆ. ಎಂದರೆ:–

1. ಹೆಸರು ಮತ್ತು ಪ್ರಾರಂಭ:– (1) ಈ ನಿಯಮಗಳನ್ನು ಕರ್ನಾಟಕ ಮಾಹಿತಿ ಹಕ್ಕು (ತಿದ್ದುಪಡಿ) ನಿಯಮಗಳು, 2007 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು, ಅಧಿಕೃತ ರಾಜಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. 13ನೇ ಹೊಸ ನಿಯಮದ ಸೇರ್ಪಡೆ: ಸದರಿ ನಿಯಮಗಳ ನಿಯಮ 12ರ ತರುವಾಯ, ಈ ಮುಂದಿನ ಹೊಸ ನಿಯಮಗಳನ್ನು ಸೇರಿಸತಕ್ಕದ್ದು. ಎಂದರೆ:–

"13 18ನೇ ನಿಯಮದ (1)ನೇ ಉಪ–ನಿಯಮದ ಮೇರೆಗಿನ ದೂರುಗಳಿಗಾಗಿ ಪ್ರಕ್ರಿಯೆ:– ನಿಯಮ 7, 8, 9 , 10, 11ರ ಅಡಿಯಲ್ಲಿ ಅಪೀಲುಗಳಿಗಾಗಿ ಗೊತ್ತುಪಡಿಸಿದ ಪ್ರಕ್ರಿಯೆಯನ್ನು ಯಥೋಚಿತ್ತ ವ್ಯತ್ಯಾಸಗಳೊಂದಿಗೆ ದೂರುಗಳಿಗೆ ಅನ್ವಯಿಸತಕ್ಕದ್ದು".

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಬಿ. ಶಿವರುದ್ರಸ್ವಾಮಿ
ಡೆಸ್ಕ್ ಆಫೀಸರ್
ಸಿಆಸುಇ (ಆ.ಸು. – ಮಾಹಿತಿ ಹಕ್ಕು)

## ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಸಚಿವಾಲಯ

## ಅಧಿಸೂಚನೆ

ಸಂಖ್ಯೆ: ಡಿಪಿಎಆರ್ 39 ಅರ್‌ಟಿಐ 2006, ಬೆಂಗಳೂರು ದಿನಾಂಕ 11 ಜುಲೈ, 2007

ಮಾಹಿತಿ ಹಕ್ಕು ಅಧಿನಿಯಮ, 2005 (2005ರ 22) ರ 27ನೇ ಪ್ರಕರಣದ (1)ನೇ ಉಪ– ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಕರ್ನಾಟಕ ಮಾಹಿತಿ ಹಕ್ಕು ನಿಯಮಗಳು, 2005ಕ್ಕೆ ತಿದ್ದುಪಡಿ ಮಾಡಲು ಈ ಮೂಲಕ ಈ ಮುಂದಿನಂತೆ ನಿಯಮಗಳನ್ನು ರಚಿಸಿದೆ. ಎಂದರೆ:–

ನಿಯಮಗಳು

1. ಹೆಸರು ಮತ್ತು ಪ್ರಾರಂಭ:– (1) ಈ ನಿಯಮಗಳನ್ನು ಕರ್ನಾಟಕ ಮಾಹಿತಿ ಹಕ್ಕು (ತಿದ್ದುಪಡಿ) ನಿಯಮಗಳು, 2007 ಎಂದು ಕರೆಯತಕ್ಕದ್ದು.

(2) ಈ ನಿಯಮಗಳು, ಅಧಿಕೃತ ರಾಜಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

2. (4)ನೇ ನಿಯಮದ ತಿದ್ದುಪಡಿ:– ಕರ್ನಾಟಕ ಮಾಹಿತಿ ಹಕ್ಕು ನಿಯಮಗಳು, 2005ರ ನಿಯಮ 4ರ ಉಪ– ನಿಯಮ (5) ರ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:–

"(6) ಬಡತನ ರೇಖೆಗಿಂತ ಕೆಳಗಿರುವ (ಬಿಪಿಎಲ್) ಕಾರ್ಡ್ ಧಾರಕರ ಸಂದರ್ಭದಲ್ಲಿ ಕೋರಿದ ಮಾಹಿತಿಯು ಒಂದುನೂರು ಪುಟಗಳೊಳಗಿದ್ದರೆ, ಯಾವುದೇ ಶುಲ್ಕವನ್ನು ವಿಧಿಸತಕ್ಕದ್ದಲ್ಲ. ಕೋರಿದ ಮಾಹಿತಿಯು ಒಂದುನೂರು ಪುಟಗಳಿಗೆ ಮೀರಿದ ಪಕ್ಷದಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಗತ್ಯ ದಸ್ತಾವೇಜುಗಳ ಪರಿಶೀಲನೆಗೆ ಅನುಮತಿಸಬಹುದು. (2)ನೇ ಉಪ–ನಿಯಮದ (ಸಿ) ಖಂಡದ ಮೇರೆಗೆ ಶುಲ್ಕ ವಿಧಿಸಬಹುದು ಅಥವಾ (2)ನೇ ಉಪ–ನಿಯಮದ (ಎಎ) ಖಂಡದ ಮೇರೆಗೆ ಉಪಬಂಧಿಸಲಾದಂತೆ ಗೊತ್ತುಪಡಿಸಿದ ಶುಲ್ಕದ ಸಂದಾಯ ಮಾಡಿದ ಮೇಲೆ ಮಾಹಿತಿಯನ್ನು ಒದಗಿಸಬಹುದು."

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಬಿ. ಶಿವರುದ್ರಸ್ವಾಮಿ
ಡೆಸ್ಕ್ ಆಫೀಸರ್
ಸಿಆಸುಇ (ಆ.ಸು. – ಮಾಹಿತಿ ಹಕ್ಕು)

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ಮಾಹಿತಿ ಹಕ್ಕು ಆಯೋಗಕ್ಕೆ ರಾಜ್ಯ ಮಾಹಿತಿ ಆಯುಕ್ತರ ಹುದ್ದೆಯನ್ನು ಪೂರಕ ಸಿಬ್ಬಂದಿಯೊಂದಿಗೆ ಸೃಜಿಸುವ ಬಗ್ಗೆ.

ಪ್ರಸ್ತಾವನೆ :

ಕರ್ನಾಟಕ ಮಾಹಿತಿ ಹಕ್ಕು ಆಯೋಗವನ್ನು ಮಾಹಿತಿ ಹಕ್ಕು ಅಧಿನಿಯಮ ಸೆಕ್ಷನ್ 15ರ ಅನ್ವಯ ರಚಿಸಲಾಗಿದೆ. ಇದು ಒಬ್ಬ ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಮತ್ತು ಒಬ್ಬ ರಾಜ್ಯ ಮಾಹಿತಿ ಆಯುಕ್ತರನ್ನು ಒಳಗೊಂಡಿದೆ. ಅಗತ್ಯವಿದ್ದಲ್ಲಿ 10ಕ್ಕೆ ಮೀರದಂತೆ ರಾಜ್ಯ ಮಾಹಿತಿ ಆಯುಕ್ತರನ್ನು ನೇಮಕಾತಿ ಮಾಡಲು ಸೆಕ್ಷನ್ 15(2)(ಬಿ)ರಲ್ಲಿ ಅವಕಾಶ ನೀಡಲಾಗಿದೆ. ರಾಜ್ಯ ಮುಖ್ಯ ಮಾಹಿತಿ ಆಯುಕ್ತರು ದಿನಾಂಕ 8.12.2006ರ ತಮ್ಮ ಪತ್ರದಲ್ಲಿ ಮಾಹಿತಿ ಆಯೋಗದಲ್ಲಿ ಇತ್ಯರ್ಥದಲ್ಲಿರುವ ಪ್ರಕರಣಗಳು ಹೆಚ್ಚಾಗಿರುವುದರಿಂದ ಈಗಿರುವ ರಾಜ್ಯ ಮಾಹಿತಿ ಆಯುಕ್ತರ ಜೊತೆಗೆ ಮತ್ತೊಬ್ಬ ಆಯುಕ್ತರನ್ನು ನೇಮಿಸಬೇಕೆಂದು ಕೋರಿದ್ದಾರೆ.

ರಾಜ್ಯ ಮುಖ್ಯ ಮಾಹಿತಿ ಆಯುಕ್ತರ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

ಆದೇಶ ಸಂಖ್ಯೆ: ಸಿಆಸುಇ 17 ಆರ್‌ಟಿಐ 2006 (ಭಾಗ – 2) ದಿನಾಂಕ : 28.6.2007

ಪ್ರಸ್ತಾವನೆಯನ್ನು ವಿವರಗಳ ಹಿನ್ನಲೆಯಲ್ಲಿ ರಾಜ್ಯ ಮಾಹಿತಿ ಆಯೋಗಕ್ಕೆ ಈ ಕೆಳಕಂಡ ಹುದ್ದೆಗಳನ್ನು ಸೃಜಿಸಿ ಆದೇಶ ಹೊರಡಿಸಲಾಗಿದೆ.

| | | | |
|---|---|---|---|
| I. | ರಾಜ್ಯ ಮಾಹಿತಿ ಆಯುಕ್ತರು | – | 1 ಹುದ್ದೆ |
| II. | ರಾಜ್ಯ ಮಾಹಿತಿ ಆಯುಕ್ತರ ಕಛೇರಿಗೆ ಪೂರಕ ಸಿಬ್ಬಂದಿ : | | |
| 1. | ಆಪ್ತ ಸಹಾಯಕರು, ಶೀಘ್ರಲಿಪಿಗಾರರ ವೃಂದದಲ್ಲಿ | – | 1 ಹುದ್ದೆ |
| 2. | ಸಹಾಯಕರು / ಕಿರಿಯ ಸಹಾಯಕರು | – | 1 ಹುದ್ದೆ |
| 3. | ದಲಾಯತ್ | – | 1 ಹುದ್ದೆ |
| 4. | ವಾಹನ ಚಾಲಕರು | – | 1 ಹುದ್ದೆ |
| | ಒಟ್ಟು | – | 4 ಹುದ್ದೆಗಳು |

ರಾಜ್ಯ ಮಾಹಿತಿ ಆಯುಕ್ತರ ಕಛೇರಿಗೆ ಮಂಜೂರಾಗಿರುವ ಮೇಲಿನ ಹುದ್ದೆಗಳನ್ನು ನಿಯೋಜನೆ ಮೇಲೆ ತುಂಬಲು ಆದೇಶಿಸಲಾಗಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆ ತನ್ನ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 551 ವೆಚ್ಚ–5 2007 ದಿನಾಂಕ 24.03.2007 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ,

ಸಹಿ/–
ಬಿ. ಶಿವರುದ್ರಸ್ವಾಮಿ
ಪೀಠಾಧಿಕಾರಿ
ಸಿಆಸುಇ (ಆಸು – ಮಾಹಿತಿ ಹಕ್ಕು)

ಮಾಹಿತಿ ಹಕ್ಕು ಅಧಿನಿಯಮ, 2005

(ಅಧಿನಿಯಮ ಸಂಖ್ಯೆ 2005ರ 22)

ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರದ ಕಾರ್ಯನಿರ್ವಹಣೆಯಲ್ಲಿ ಪಾರದರ್ಶಕತೆ ಮತ್ತು ಉತ್ತರದಾಯಿತ್ವವನ್ನು ಹೆಚ್ಚಿಸುವ ದೃಷ್ಟಿಯಿಂದ ಸರ್ಕಾರೀ ಪ್ರಾಧಿಕಾರಗಳ ನಿಯಂತ್ರಣದಲ್ಲಿರುವ ಮಾಹಿತಿಯನ್ನು ಪಡೆಯಲು ನಾಗರಿಕರಿಗೆ ಮಾಹಿತಿ ಪಡೆಯುವ ಹಕ್ಕಿನ ಕಾರ್ಯರೂಪದ ವ್ಯವಸ್ಥೆಯನ್ನು ರೂಪಿಸುವುದಕ್ಕೆ, ಕೇಂದ್ರ ಮಾಹಿತಿ ಆಯೋಗದ ರಚನೆಗೆ ಮತ್ತು ರಾಜ್ಯ ಮಾಹಿತಿ ಆಯೋಗಗಳ ರಚನೆಗೆ ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಆನುಷಂಗಿಕವಾದ ವಿಷಯಗಳಿಗೆ ಉಪಬಂಧ ಕಲ್ಪಿಸುವ ಅಧಿನಿಯಮ.

ಭಾರತ ಸಂವಿಧಾನವು ಪ್ರಜಾಸತ್ತಾತ್ಮಕ ಗಣರಾಜ್ಯವನ್ನು ಸ್ಥಾಪಿಸಿರುವುದರಿಂದ; ಪ್ರಜಾಪ್ರಭುತ್ವದ ಕಾರ್ಯನಿರ್ವಹಣೆಗೆ ಹಾಗೂ ಭ್ರಷ್ಟಾಚಾರ ನಿಯಂತ್ರಣಕ್ಕೆ ಮತ್ತು ಸರ್ಕಾರಗಳು ಹಾಗೂ ಅವುಗಳ ಅಂಗಸಂಸ್ಥೆಗಳು ಜನರಿಗೆ ಜವಾಬ್ದಾರಿಯಾಗಿರುವಂತೆ ಮಾಡಲು ತಿಳುವಳಿಕೆಯುಳ್ಳ ನಾಗರಿಕರು ಮತ್ತು ಮಾಹಿತಿಯ ಪಾರದರ್ಶಕತೆಯು ಪ್ರಮುಖವಾಗಿರುವುದರಿಂದ; ವಾಸ್ತವಿಕ ಪದ್ಧತಿಯಲ್ಲಿ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ಸರ್ಕಾರಗಳ ದಕ್ಷ ಕಾರ್ಯಾಚರಣೆಗಳು, ಪರಿಮಿತ ಆರ್ಥಿಕ ಸಂಪನ್ಮೂಲಗಳನ್ನು ಗರಿಷ್ಠ ಪ್ರಮಾಣದಲ್ಲಿ ಬಳಸಿಕೊಳ್ಳುವುದು ಮತ್ತು ಸೂಕ್ಷ್ಮಮಾಹಿತಿಯ ಗೌಪ್ಯತೆಯ ಸಂರಕ್ಷಣೆ ಒಳಗೊಂಡಂತೆ ಇತರ ಸಾರ್ವಜನಿಕ ಹಿತಾಸಕ್ತಿಗಳೊಂದಿಗೆ ಸಂಘರ್ಷ ಉಂಟಾಗುವ ಸಾಧ್ಯತೆ ಇರುವುದರಿಂದ; ಪ್ರಜಾಸತ್ತಾತ್ಮಕ ಆದರ್ಶದ ಸಾರ್ವಭೌಮತೆಯನ್ನು ಸಂರಕ್ಷಿಸುವುದರ ಜೊತೆಗೆ ಸಂಘರ್ಷಕ್ಕೊಳಗಾಗುವ ಹಿತಾಸಕ್ತಿಗಳ ನಡುವೆ ಸಾಮರಸ್ಯ ಮೂಡಿಸುವುದು ಅವಶ್ಯವಾಗಿರುವುದರಿಂದ;ಮಾಹಿತಿಯನ್ನು ಪಡೆಯಲಿಚ್ಛಿಸುವ ನಾಗರಿಕರಿಗೆ ಕೆಲವು ಮಾಹಿತಿ ಒದಗಿಸುವುದಕ್ಕೆ ಉಪಬಂಧ ಕಲ್ಪಿಸುವುದು ಈಗ ವಿಹಿತವಾಗಿರುವುದರಿಂದ; ಭಾರತ ಗಣರಾಜ್ಯದ ಐವತ್ತಾರನೇ ವರ್ಷದಲ್ಲಿ ಸಂಸತ್ತಿನಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು:–

# ಅಧ್ಯಾಯ – I
## ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.– (1) ಈ ಅಧಿನಿಯಮವನ್ನು ಮಾಹಿತಿ ಹಕ್ಕು ಅಧಿನಿಯಮ, 2005 ಎಂದು ಕರೆಯತಕ್ಕದ್ದು.
(2) ಇದು ಜಮ್ಮು ಮತ್ತು ಕಾಶ್ಮೀರ ರಾಜ್ಯವನ್ನು ಹೊರತುಪಡಿಸಿ ಇಡೀ ಭಾರತಕ್ಕೆ ವ್ಯಾಪ್ತವಾಗತಕ್ಕದ್ದು.
(3) ಈ ಅಧಿನಿಯಮದ 4ನೇ ಪ್ರಕರಣದ (1)ನೇ ಉಪ ಪ್ರಕರಣ, 5ನೇ ಪ್ರಕರಣದ (1) ಮತ್ತು (2)ನೇ ಉಪ ಪ್ರಕರಣಗಳು, 12, 13, 15, 16, 24, 27 ಮತ್ತು 28ನೇ ಪ್ರಕರಣಗಳ ಉಪಬಂಧಗಳು ಕೂಡಲೇ ಜಾರಿಗೆ ಬರತಕ್ಕದ್ದು ಮತ್ತು ಉಳಿದ ಉಪಬಂಧಗಳು ಇದನ್ನು ಅಧಿನಿಯಮಿತಿಗೊಳಿಸಿದ ಒಂದುನೂರ ಇಪ್ಪತ್ತನೇ ದಿನದಿಂದ ಜಾರಿಗೆ ಬರತಕ್ಕದ್ದು.
2. ಪರಿಭಾಷೆಗಳು.– ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–
(ಎ) "ಸಮುಚಿತ ಸರ್ಕಾರ" ಎಂದರೆ ಸರ್ಕಾರೀ ಪ್ರಾಧಿಕಾರಕ್ಕೆ ಸಂಬಂಧಪಟ್ಟಂತೆ, ಕೇಂದ್ರ ಸರ್ಕಾರದಿಂದ ಅಥವಾ ಕೇಂದ್ರಾಡಳಿತ ಪ್ರದೇಶದ ಆಡಳಿತದಿಂದ ಸ್ಥಾಪಿತವಾದ, ರಚಿತವಾದ, ಅದರ ಒಡೆತನಕ್ಕೆ, ನಿಯಂತ್ರಣಕ್ಕೆ ಒಳಪಟ್ಟ ಅಥವಾ ಕೇಂದ್ರ ಸರ್ಕಾರವು ಅಥವಾ ಕೇಂದ್ರಾಡಳಿತ ಪ್ರದೇಶದ ಆಡಳಿತವು ನೇರವಾಗಿ ಅಥವಾ ಪರೋಕ್ಷವಾಗಿ,–

(i) ಕೇಂದ್ರ ಸರ್ಕಾರ, ಒದಗಿಸಿರುವ ನಿಧಿಗಳಿಂದ ಗಣನೀಯ ಆರ್ಥಿಕ ನೆರವು ಪಡೆದ ಸಾರ್ವಜನಿಕ ಪ್ರಾಧಿಕಾರದ ಸಂದರ್ಭದಲ್ಲಿ, ಕೇಂದ್ರ ಸರ್ಕಾರ;

(ii) ರಾಜ್ಯ ಸರ್ಕಾರ ಒದಗಿಸಿರುವ ನಿಧಿಗಳಿಂದ ಗಣನೀಯ ಆರ್ಥಿಕ ನೆರವು ಪಡೆದಿರುವ ಸಾರ್ವಜನಿಕ ಪ್ರಾಧಿಕಾರದ ಸಂದರ್ಭದಲ್ಲಿ, ರಾಜ್ಯ ಸರ್ಕಾರ;
(ಬಿ) "ಕೇಂದ್ರ ಮಾಹಿತಿ ಆಯೋಗ" ಎಂದರೆ 12ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ರಚಿತವಾದ ಕೇಂದ್ರ ಮಾಹಿತಿ ಆಯೋಗ;
(ಸಿ) "ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ" ಎಂದರೆ, 5ನೇ ಪ್ರಕರಣದ (1)ನೇ ಉಪಪ್ರಕರಣದ ಅಡಿಯಲ್ಲಿ ಹಾಗೆ ಹೆಸರಿಸಲಾದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು ಇದು (2)ನೇ ಉಪಪ್ರಕರಣದ ಅಡಿಯಲ್ಲಿ ಹೆಸರಿಸಲಾದ ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನು ಒಳಗೊಳ್ಳುತ್ತದೆ;

(ಡಿ) "ಮುಖ್ಯ ಮಾಹಿತಿ ಆಯುಕ್ತ" ಮತ್ತು "ಮಾಹಿತಿ ಆಯುಕ್ತ" ಎಂದರೆ 12ನೇ ಪ್ರಕರಣದ (3)ನೇ ಉಪ ಪ್ರಕರಣದ ಅಡಿಯಲ್ಲಿ ನೇಮಕಗೊಂಡ ಮುಖ್ಯ ಮಾಹಿತಿ ಆಯುಕ್ತ ಮತ್ತು ಮಾಹಿತಿ ಆಯುಕ್ತ.
(ಇ) "ಸಕ್ಷಮ ಪ್ರಾಧಿಕಾರ" ಎಂದರೆ,–

(i) ಲೋಕ ಸಭೆ ಅಥವಾ ರಾಜ್ಯದ ವಿಧಾನ ಸಭೆ ಅಥವಾ ಅಂತಹ ವಿಧಾನ ಸಭೆಯನ್ನು ಹೊಂದಿರುವ ಕೇಂದ್ರಾಡಳಿತ ಪ್ರದೇಶದ ವಿಧಾನ ಸಭೆಯ ಸಂದರ್ಭದಲ್ಲಿ ಸಭಾಧ್ಯಕ್ಷ ಮತ್ತು ರಾಜ್ಯ ಸಭೆ ಅಥವಾ ರಾಜ್ಯಗಳ ವಿಧಾನ ಪರಿಷತ್ತುಗಳ ಸಂದರ್ಭದಲ್ಲಿ ಸಭಾಪತಿ;

(ii) ಸರ್ವೋಚ್ಚ ನ್ಯಾಯಾಲಯದ ಸಂದರ್ಭದಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿ;

(iii) ಉಚ್ಚ ನ್ಯಾಯಾಲಯದ ಸಂದರ್ಭದಲ್ಲಿ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ;

(iv) ಸಂವಿಧಾನದ ಮೂಲಕ ಅಥವಾ ಅದರ ಅಡಿಯಲ್ಲಿ ಸ್ಥಾಪಿತವಾದ ಅಥವಾ ರಚಿತವಾದ ಇತರ ಪ್ರಾಧಿಕಾರಗಳ ಸಂದರ್ಭದಲ್ಲಿ ರಾಷ್ಟ್ರಪತಿ ಅಥವಾ ಸಂದರ್ಭಾನುಸಾರ, ರಾಜ್ಯಪಾಲ;

(v) ಸಂವಿಧಾನದ 239ನೇ ಅನುಚ್ಛೇಧದ ಅಡಿಯಲ್ಲಿ ನೇಮಕಗೊಂಡ ಆಡಳಿತಾಧಿಕಾರಿ;
(ಎಫ್) "ಮಾಹಿತಿ" ಎಂದರೆ, ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನ ಅಡಿಯಲ್ಲಿ ಸಾರ್ವಜನಿಕ ಪ್ರಾಧಿಕಾರದಿಂದ ಪಡೆಯಬಹುದಾದ ದಾಖಲೆಗಳು, ದಸ್ತಾವೇಜುಗಳು, ಮೆಮೋಗಳು, ಇ–

ಮೇಲ್‌ಗಳು, ಅಭಿಪ್ರಾಯಗಳು, ಸಲಹೆಗಳು, ಪತ್ರಿಕಾ ಹೇಳಿಕೆಗಳು, ಸುತ್ತೋಲೆಗಳು, ಆದೇಶಗಳು, ಲಾಗ್ ಪುಸ್ತಕಗಳು, ಕರಾರುಗಳು, ವರದಿಗಳು, ಕಾಗದಪತ್ರಗಳು, ನಮೂನೆಗಳು, ಮಾದರಿಗಳು, ಯಾವುದೇ ವಿದ್ಯುನ್ಮಾನ ರೂಪದಲ್ಲಿ ಹೊಂದಿರುವ ದತ್ತಾಂಶ ಮತ್ತು ಯಾವುದೇ ಖಾಸಗಿ ನಿಕಾಯಕ್ಕೆ ಸಂಬಂಧಿಸಿದ ಮಾಹಿತಿ ಒಳಗೊಂಡಂತೆ ಯಾವುದೇ ರೂಪದಲ್ಲಿರುವ ಯಾವುದೇ ವಿಷಯ ಸಾಮಗ್ರಿ;

(ಜಿ) "ಗೊತ್ತುಪಡಿಸಲಾದುದು" ಎಂದರೆ, ಈ ಅಧಿನಿಯಮದಡಿಯಲ್ಲಿ ಸಮುಚಿತ ಸರ್ಕಾರ ಅಥವಾ ಸಂದರ್ಭಾನುಸಾರ, ಸಕ್ಷಮ ಪ್ರಾಧಿಕಾರವು ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ನಿಯಮಗಳ ಮೂಲಕ ಗೊತ್ತುಪಡಿಸಲಾದುದು;

(ಹೆಚ್) "ಸಾರ್ವಜನಿಕ ಪ್ರಾಧಿಕಾರ" ಎಂದರೆ,–

(ಎ) ಸಂವಿಧಾನದ ಮೂಲಕ ಅಥವಾ ಅದರ ಅಡಿಯಲ್ಲಿ;

(ಬಿ) ಸಂಸತ್ತಿನಿಂದ ಮಾಡಲಾದ ಯಾವುದೇ ಇತರ ಕಾನೂನಿನ ಮೂಲಕ;

(ಸಿ) ರಾಜ್ಯ ವಿಧಾನ ಮಂಡಲದಿಂದ ಮಾಡಲಾದ ಯಾವುದೇ ಇತರ ಕಾನೂನಿನ ಮೂಲಕ;

(ಡಿ) ಸಮುಚಿತ ಸರ್ಕಾರದಿಂದ ಹೊರಡಿಸಲಾದ ಅಧಿಸೂಚನೆ ಅಥವಾ ಮಾಡಲಾದ ಆದೇಶದ ಮೂಲಕ

– ಸ್ಥಾಪಿತವಾದ ಅಥವಾ ರಚಿತವಾದ ಯಾವುದೇ ಪ್ರಾಧಿಕಾರ ಅಥವಾ ನಿಕಾಯ ಅಥವಾ ಸ್ವಯಂ ಆಡಳಿತ ಸಂಸ್ಥೆ ಮತ್ತು ಇದು,–

(i) ಸಮುಚಿತ ಸರ್ಕಾರದ ಒಡೆತನಕ್ಕೆ, ನಿಯಂತ್ರಣಕ್ಕೆ ಒಳಪಟ್ಟ ಅಥವಾ ಅಂಥ ಸರ್ಕಾರ ಒದಗಿಸಿದ ನಿಧಿಗಳಿಂದ ನೇರವಾಗಿ ಅಥವಾ ಪರೋಕ್ಷವಾಗಿ ಗಣನೀಯ ಪ್ರಮಾಣದ ಹಣಕಾಸು ನೆರವು ಪಡೆದ ಯಾವುದೇ ನಿಕಾಯವನ್ನು;

(ii) ಸಮುಚಿತ ಸರ್ಕಾರ ಒದಗಿಸಿದ ನಿಧಿಗಳಿಂದ ನೇರವಾಗಿ ಅಥವಾ ಪರೋಕ್ಷವಾಗಿ ಗಣನೀಯ ಪ್ರಮಾಣದ ಹಣಕಾಸು ನೆರವು ಪಡೆದ ಸರ್ಕಾರೇತರ ಸಂಸ್ಥೆಯನ್ನು

– ಒಳಗೊಳ್ಳುತ್ತದೆ.

(ಐ) "ದಾಖಲೆ"ಯು,–

(ಎ) ಯಾವುದೇ ದಸ್ತಾವೇಜು, ಹಸ್ತಪ್ರತಿ ಮತ್ತು ಕಡತವನ್ನು;

(ಬಿ) ಯಾವುದೇ ದಸ್ತಾವೇಜಿನ ಮೈಕ್ರೋಫಿಲಂ, ಮೈಕ್ರೋಫಿಷ್ ಮತ್ತು ಪಡಿಯಚ್ಚು ಪ್ರತಿಯನ್ನು;

(ಸಿ) ಅಂತಹ ಮೈಕ್ರೋಫಿಲಂನಲ್ಲಿ (ಗಾತ್ರವನ್ನು ವಿಸ್ತರಿಸಿರಲಿ ಅಥವಾ ವಿಸ್ತರಿಸದಿರಲಿ) ಸಾಕಾರಗೊಳಿಸಿರುವ ಪ್ರತಿರೂಪ (ಇಮೇಜ್) ಅಥವಾ ಪ್ರತಿರೂಪಗಳ ಮರು ಪ್ರತಿ ಮಾಡುವುದನ್ನು; ಮತ್ತು

(ಡಿ) ಗಣಕಯಂತ್ರ ಅಥವಾ ಯಾವುದೇ ಇತರ ಸಾಧನದ ಮೂಲಕ ಸಿದ್ಧಪಡಿಸಲಾದ ಯಾವುದೇ ಇತರ ವಿಷಯ ಸಾಮಗ್ರಿಯನ್ನು,

– ಒಳಗೊಳ್ಳುತ್ತದೆ.

(ಜೆ) "ಮಾಹಿತಿಗಾಗಿ ಹಕ್ಕು" ಎಂದರೆ ಯಾವುದೇ ಸಾರ್ವಜನಿಕ ಪ್ರಾಧಿಕಾರ ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ, ಈ ಅಧಿನಿಯಮದ ಅಡಿಯಲ್ಲಿ ಪಡೆಯಬಹುದಾದ ಮಾಹಿತಿಯ ಹಕ್ಕು ಮತ್ತು ಇದರಲ್ಲಿ,–

(i) ಕೆಲಸದ, ದಸ್ತಾವೇಜುಗಳ, ದಾಖಲೆಗಳ, ಪರಿವೀಕ್ಷಣೆ ಮಾಡುವ;

(ii) ದಸ್ತಾವೇಜುಗಳ ಅಥವಾ ದಾಖಲೆಗಳ ಟಿಪ್ಪಣಿಗಳನ್ನು, ಉದ್ಧೃತ ಭಾಗಗಳನ್ನು ಅಥವಾ ಪ್ರಮಾಣೀಕೃತ ಪ್ರತಿಗಳನ್ನು ತೆಗೆದುಕೊಳ್ಳುವ;

(iii) ವಿಷಯ ಸಾಮಗ್ರಿಯ ಪ್ರಮಾಣೀಕೃತ ಮಾದರಿಗಳನ್ನು ಪಡೆದುಕೊಳ್ಳುವ;

(iv) ಡಿಸ್ಕೆಟ್‌ಗಳು, ಫ್ಲಾಪಿಗಳು, ಟೇಪುಗಳು, ವಿಡಿಯೋ ಕ್ಯಾಸೆಟ್‌ಗಳ ರೂಪದಲ್ಲಿ ಅಥವಾ ಯಾವುದೇ ಇತರ ವಿದ್ಯುನ್ಮಾನ ವಿಧಾನದಲ್ಲಿ ಅಥವಾ ಅಂತಹ ಮಾಹಿತಿಯನ್ನು ಗಣಕಯಂತ್ರದಲ್ಲಿ ಅಥವಾ ಯಾವುದೇ ಇತರ ಸಾಧನದಲ್ಲಿ ಸಂಗ್ರಹಿಸಿಟ್ಟಿದ್ದರೆ ಅದರ ಮುದ್ರಿತ ಪ್ರತಿಯ ಮೂಲಕ ಮಾಹಿತಿ ಪಡೆಯುವ ಹಕ್ಕು ಒಳಗೊಂಡಿರುತ್ತದೆ.

(ಕೆ) "ರಾಜ್ಯ ಮಾಹಿತಿ ಆಯೋಗ" ಎಂದರೆ 15ನೇ ಪ್ರಕರಣದ (1)ನೇ ಉಪಪ್ರಕರಣದ ಅಡಿಯಲ್ಲಿ ರಚಿತವಾದ ರಾಜ್ಯ ಮಾಹಿತಿ ಆಯೋಗ;

(ಎಲ್) "ರಾಜ್ಯ ಮುಖ್ಯ ಮಾಹಿತಿ ಆಯುಕ್ತ" ಮತ್ತು "ರಾಜ್ಯ ಮಾಹಿತಿ ಆಯುಕ್ತ" ಎಂದರೆ, 15ನೇ ಪ್ರಕರಣದ (3)ನೇ ಉಪ ಪ್ರಕರಣದ ಅಡಿಯಲ್ಲಿ ನೇಮಕಗೊಂಡಿರುವ ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮಾಹಿತಿ ಆಯುಕ್ತ;

(ಎಂ) "ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ" ಎಂದರೆ 5ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ಹೆಸರಿಸಲಾದ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು (2)ನೇ ಉಪ ಪ್ರಕರಣದ ಅಡಿಯಲ್ಲಿ ಹಾಗೆ ಹೆಸರಿಸಲಾದ ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನು ಒಳಗೊಳ್ಳುತ್ತದೆ;

(ಎನ್) "ಮೂರನೇ ಪಕ್ಷಕಾರ" ಎಂದರೆ, ಮಾಹಿತಿಗಾಗಿ ಕೋರಿಕೆ ಸಲ್ಲಿಸುವ ನಾಗರಿಕನನ್ನು ಹೊರತುಪಡಿಸಿದ ವ್ಯಕ್ತಿ ಮತ್ತು ಸಾರ್ವಜನಿಕ ಪ್ರಾಧಿಕಾರವನ್ನು ಒಳಗೊಳ್ಳುತ್ತದೆ.

ಅಧ್ಯಾಯ – II

ಮಾಹಿತಿ ಹಕ್ಕು ಮತ್ತು ಸಾರ್ವಜನಿಕ ಪ್ರಾಧಿಕಾರಗಳ ಹೊಣೆಗಾರಿಕೆ

3. ಮಾಹಿತಿ ಹಕ್ಕು.– ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು, ಎಲ್ಲ ನಾಗರಿಕರು ಮಾಹಿತಿ ಹಕ್ಕನ್ನು ಹೊಂದಿರತಕ್ಕದ್ದು.

4. ಸಾರ್ವಜನಿಕ ಪ್ರಾಧಿಕಾರಗಳ ಹೊಣೆಗಾರಿಕೆ.– (1) ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರವು,–

(ಎ) ಈ ಅಧಿನಿಯಮದ ಅಡಿಯಲ್ಲಿ ಮಾಹಿತಿ ಹಕ್ಕಿಗಾಗಿ ಅನುಕೂಲ ಮಾಡಿಕೊಡುವ ರೀತಿಯಲ್ಲಿ ಮತ್ತು ನಮೂನೆಯಲ್ಲಿ ಕ್ರಮಬದ್ಧ ಸೂಚಿಪಟ್ಟಿ ಮತ್ತು ಸೂಚೀಕರಣಗೊಂಡ ಅದರ ಎಲ್ಲಾ ದಾಖಲೆಗಳನ್ನು ನಿರ್ವಹಿಸತಕ್ಕದ್ದು ಮತ್ತು ಸೂಕ್ತ ಸಮಯದೊಳಗಾಗಿ ಮತ್ತು ಸಂಪನ್ಮೂಲಗಳ ಲಭ್ಯತೆಗೊಳಪಟ್ಟು, ಗಣಕೀಕರಣಕ್ಕೆ ಸೂಕ್ತವಾದ ಎಲ್ಲ ದಾಖಲೆಗಳನ್ನು ಗಣಕೀಕರಿಸುವಂತೆ ಮತ್ತು ಅಂತಹ ದಾಖಲೆಗಳು ಸುಲಭವಾಗಿ ದೊರೆಯುವಂತೆ ದೇಶಾದ್ಯಂತ ವಿವಿಧ ಸಿಸ್ಟಂಗಳಲ್ಲಿ ಸಂಪರ್ಕಜಾಲದ ಮೂಲಕ ಸಂಪರ್ಕ ಕಲ್ಪಿಸುವಂತೆ ಮಾಡತಕ್ಕದ್ದು;

(ಬಿ) ಈ ಅಧಿನಿಯಮವನ್ನು ಅಧಿನಿಯಮಿತಿಗೊಳಿಸಿದ ದಿನಾಂಕದಿಂದ ಒಂದುನೂರ ಇಪ್ಪತ್ತು ದಿನಗಳೊಳಗಾಗಿ,–

(i) ಅದರ ರಚನೆ, ಕಾರ್ಯಗಳು ಮತ್ತು ಕರ್ತವ್ಯಗಳ ವಿವರಗಳನ್ನು;

(ii) ಅದರ ಅಧಿಕಾರಿಗಳ ಮತ್ತು ನೌಕರರ ಅಧಿಕಾರಗಳನ್ನು ಮತ್ತು ಕರ್ತವ್ಯಗಳನ್ನು;

(iii) ಮೇಲ್ವಿಚಾರಣೆ ಮತ್ತು ಹೊಣೆಗಾರಿಕೆಯ ಮಾರ್ಗಗಳು ಸೇರಿದಂತೆ ತೀರ್ಮಾನ ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಅನುಸರಿಸಬೇಕಾದ ಕಾರ್ಯವಿಧಾನವನ್ನು;

(iv) ಅದರ ಕಾರ್ಯಗಳ ನಿರ್ವಹಣೆಗೆ ಅದು ರೂಪಿಸಿರುವ ಸೂತ್ರಗಳನ್ನು;

(v) ಅದರ ಕಾರ್ಯಗಳನ್ನು ನೆರವೇರಿಸುವುದಕ್ಕಾಗಿ ಅದು ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ ಅಥವಾ ಅದರ ಉದ್ಯೋಗಿಗಳು ಬಳಸುವ ನಿಯಮಗಳು, ವಿನಿಯಮಗಳು, ಅನುಸೂಚಿಗಳು, ಕೈಪಿಡಿಗಳು ಮತ್ತು ದಾಖಲೆಗಳನ್ನು;

(vi) ಅದು ಹೊಂದಿರುವ ಅಥವಾ ಅದರ ನಿಯಂತ್ರಣದಲ್ಲಿರುವ ದಸ್ತಾವೇಜುಗಳ ಪ್ರವರ್ಗಗಳ ವಿವರಪಟ್ಟಿಯನ್ನು;

(vii) ಅದರ ಕಾರ್ಯನೀತಿಯ ರಚನೆ ಅಥವಾ ಅದರ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಾರ್ವಜನಿಕರೊಡನೆ ಸಮಾಲೋಚಿಸಲು ಅಥವಾ ಅವರ ಪ್ರಾತಿನಿಧ್ಯವಿರುವಂತೆ ಮಾಡಲು ಇರುವಂಥ ಯಾವುದೇ ವ್ಯವಸ್ಥೆಯ ವಿವರಗಳನ್ನು;

(viii) ಮಂಡಳಿಗಳು, ಪರಿಷತ್ತುಗಳು, ಸಮಿತಿಗಳು ಅಥವಾ ಇತರ ನಿಕಾಯಗಳು ಮತ್ತು ಅದರ ಭಾಗವಾಗಿ ಅಥವಾ ಅದರ ಸಲಹೆಯ ಉದ್ದೇಶಕ್ಕಾಗಿ ರಚಿತವಾದ ಇಬ್ಬರು ಅಥವಾ ಹೆಚ್ಚು ವ್ಯಕ್ತಿಗಳನ್ನೊಳಗೊಂಡ ಮಂಡಳಿಗಳ, ಪರಿಷತ್ತುಗಳ, ಸಮಿತಿಗಳ ಮತ್ತು ಇತರ ನಿಕಾಯಗಳ ಸಭೆಗಳು ಸಾರ್ವಜನಿಕರಿಗೆ ಮುಕ್ತವಾಗಿರುತ್ತವೆಯೇ ಅಥವಾ ಅಂತಹ ಸಭೆಗಳ ನಡಾವಳಿಗಳು ಸಾರ್ವಜನಿಕರಿಗೆ ದೊರೆಯುತ್ತವೆಯೇ ಎಂಬುದರ ವಿವರಪಟ್ಟಿಕೆಯನ್ನು;

(ix) ಅದರ ಅಧಿಕಾರಿಗಳ ಮತ್ತು ನೌಕರರ ನಿರ್ದೇಶಿಕೆಯನ್ನು;

(x) ಅದರ ವಿನಿಯಮಗಳಲ್ಲಿ ಉಪಬಂಧಿಸಿರುವಂತೆ ಪರಿಹಾರದ ವ್ಯವಸ್ಥೆಯೂ ಸೇರಿದಂತೆ ಅದರ ಪ್ರತಿಯೊಬ್ಬ ಅಧಿಕಾರಿ ಮತ್ತು ನೌಕರರು ಪಡೆಯುವ ತಿಂಗಳ ಗೌರವಧನವನ್ನು;

(xi) ಎಲ್ಲ ಯೋಜನೆಗಳ ವಿವರಗಳನ್ನು ಸೂಚಿಸುವ, ಪ್ರಸ್ತಾವಿತ ವೆಚ್ಚಗಳನ್ನು ಮತ್ತು ಮಾಡಲಾದ ಬಟವಾಡೆಗಳ ವರದಿಯನ್ನು ಸೂಚಿಸಿ; ಅದರ ಪ್ರತಿಯೊಂದು ಏಜೆನ್ಸಿಗೆ ಹಂಚಿಕೆ ಮಾಡಲಾದ ಆಯವ್ಯಯವನ್ನು,

(xii) ಹಂಚಿಕೆ ಮಾಡಲಾದ ಮೊಬಲಗನ್ನೊಳಗೊಂಡು, ಸಹಾಯಧನ ಕಾರ್ಯಕ್ರಮಗಳ ಜಾರಿಯ ವಿಧಾನವನ್ನು ಮತ್ತು ಅಂತಹ ಕಾರ್ಯಕ್ರಮಗಳ ಫಲಾನುಭವಿಗಳ ವಿವರಗಳನ್ನು;

(xiii) ಅದು ನೀಡಿರುವ ರಿಯಾಯಿತಿಗಳನ್ನು, ಅನುಮತಿ ಪತ್ರಗಳನ್ನು ಅಥವಾ ಅಧಿಕಾರಪತ್ರಗಳನ್ನು ಪಡೆಯುವವರ ವಿವರಗಳನ್ನು;

(xiv) ಅದರ ಬಳಿ ಲಭ್ಯವಿರುವ ಅಥವಾ ಅದು ಹೊಂದಿರುವ ವಿದ್ಯುನ್ಮಾನ ರೂಪಕ್ಕೆ ಪರಿವರ್ತಿಸಿರುವ, ಮಾಹಿತಿಗೆ ಸಂಬಂಧಿಸಿದ ವಿವರಗಳನ್ನು;

(xv) ಸಾರ್ವಜನಿಕ ಉಪಯೋಗಕ್ಕಾಗಿ ಗ್ರಂಥಾಲಯವನ್ನು ಅಥವಾ ವಾಚನಾಲಯವನ್ನು ನಿರ್ವಹಿಸುತ್ತಿದ್ದಲ್ಲಿ ಅದರ ಕೆಲಸದ ಸಮಯವನ್ನೊಳಗೊಂಡಂತೆ ಮಾಹಿತಿ ಪಡೆಯಲು ಸಾರ್ವಜನಿಕರಿಗೆ ಲಭ್ಯವಿರುವ ಸೌಲಭ್ಯಗಳ ವಿವರಗಳನ್ನು;

(xvi) ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಹೆಸರುಗಳು, ಪದನಾಮಗಳು ಮತ್ತು ಇತರ ವಿವರಗಳನ್ನು; ನಿಯಮಿಸಬಹುದಾದಂತಹ ಇತರ ಮಾಹಿತಿಯನ್ನು ಪ್ರಕಟಿಸತಕ್ಕದ್ದು ಮತ್ತು ಆ ತರುವಾಯ ಪ್ರತಿವರ್ಷ ಈ ಪ್ರಕಟಣೆಗಳನ್ನು ಅಂದಿನವರೆಗೆ ಪರಿಷ್ಕರಿಸತಕ್ಕದ್ದು.

(ಸಿ) ಸಾರ್ವಜನಿಕರಿಗೆ ಸಂಬಂಧಿಸಿದ ಪ್ರಮುಖ ಕಾರ್ಯನೀತಿಗಳನ್ನು ರೂಪಿಸುವಾಗ ಅಥವಾನಿರ್ಧಾರಗಳನ್ನು ಘೋಷಿಸುವಾಗ ಎಲ್ಲ ಸುಸಂಗತ ಸಂಗತಿಗಳನ್ನು ಪ್ರಕಟಿಸತಕ್ಕದ್ದು;

(ಡಿ) ಆಡಳಿತಾತ್ಮಕ ಅಥವಾ ಅರೆನ್ಯಾಯಿಕ ಸ್ವರೂಪದ ನಿರ್ಣಯಗಳಿಂದ ಬಾಧಿತರಾದ ವ್ಯಕ್ತಿಗಳಿಗೆ ಅದರ ಕಾರಣಗಳನ್ನು ಒದಗಿಸತಕ್ಕದ್ದು.

(2) ಮಾಹಿತಿ ಪಡೆಯುವುದಕ್ಕಾಗಿ, ಈ ಅಧಿನಿಯಮದ ಉಪಯೋಗವನ್ನು ಕನಿಷ್ಠ ಪ್ರಮಾಣದಲ್ಲಿ ಅವಲಂಬಿಸುವುದಕ್ಕಾಗಿ ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರವು ಅಂತರ್ಜಾಲವೂ ಸೇರಿದಂತೆ, ಅಂಥ ಮಾಹಿತಿಯನ್ನು ವಿವಿಧ ಸಂಪರ್ಕ ಸಾಧನಗಳ ಮೂಲಕ ನಿಯಮಿತ ಮಧ್ಯಂತರದಲ್ಲಿ (1)ನೇ ಉಪಪ್ರಕರಣದಲ್ಲಿ (ಬಿ) ಖಂಡದ ಅಗತ್ಯಗಳಿಗನುಸಾರವಾಗಿ ಸಾರ್ವಜನಿಕರಿಗೆ ಸಾಕಷ್ಟು ಮಾಹಿತಿ ದೊರಕಿಸಿಕೊಡಲು ಕ್ರಮ ತೆಗೆದುಕೊಳ್ಳುವುದು ಅದರ ನಿರಂತರ ಪ್ರಯತ್ನವಾಗಿರತಕ್ಕದ್ದು.

(3) (1)ನೇ ಉಪಪ್ರಕರಣದ ಉದ್ದೇಶಗಳಿಗಾಗಿ ಪ್ರತಿಯೊಂದು ಮಾಹಿತಿಯನ್ನು, ಸಾರ್ವಜನಿಕರಿಗೆ ಸುಲಭವಾಗಿ ದೊರೆಯುವಂತಹ ನಮೂನೆಯಲ್ಲಿ ಮತ್ತು ವಿಧಾನದಲ್ಲಿ ವ್ಯಾಪಕವಾಗಿ ಪ್ರಸಾರ ಮಾಡತಕ್ಕದ್ದು.

(4) ವೆಚ್ಚದ ಪ್ರಮಾಣವನ್ನು, ಸ್ಥಳೀಯ ಭಾಷೆಯನ್ನು ಮತ್ತು ಆ ಸ್ಥಳೀಯ ಪ್ರದೇಶದಲ್ಲಿನ ಸಂಪರ್ಕದ ಅತ್ಯಂತ ಪರಿಣಾಮಕಾರಿ ವಿಧಾನ ಇವುಗಳನ್ನು ಗಮನದಲ್ಲಿಟ್ಟುಕೊಂಡು ಎಲ್ಲ ವಿಷಯಗಳನ್ನು ಪ್ರಸಾರ ಮಾಡತಕ್ಕದ್ದು ಮತ್ತು ಆ ಮಾಹಿತಿಯು, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ಬಳಿ ಸಾಧ್ಯವಾದಷ್ಟುಮಟ್ಟಿಗೆ ವಿದ್ಯುನ್ಮಾನ ನಮೂನೆಯಲ್ಲಿ ಸುಲಭವಾಗಿ, ಉಚಿತವಾಗಿ ಅಥವಾ ನಿಗದಿಪಡಿಸಬಹುದಾದಂತಹ ಮಾಧ್ಯಮ ವೆಚ್ಚದ ಅಥವಾ ಮುದ್ರಣಕ್ಕೆ ತಗಲುವ ವೆಚ್ಚದ ಬೆಲೆಯಲ್ಲಿ ಲಭ್ಯವಾಗುವಂತಿರತಕ್ಕದ್ದು.

ವಿವರಣೆ:– (3) ಮತ್ತು (4)ನೇ ಉಪ ಪ್ರಕರಣಗಳ ಉದ್ದೇಶಗಳಿಗಾಗಿ "ಪ್ರಸಾರ ಮಾಡಲಾದ" ಎಂದರೆ ಯಾವುದೇ ಸಾರ್ವಜನಿಕ ಪ್ರಾಧಿಕಾರದ ಕಚೇರಿಗಳ ಪರಿಶೀಲನೆಯು ಒಳಗೊಂಡಂತೆ ಮಾಹಿತಿಯನ್ನು ಸೂಚನಾ ಫಲಕಗಳು, ವೃತ್ತ ಪತ್ರಿಕೆಗಳು, ಸಾರ್ವಜನಿಕ ಪ್ರಕಟಣೆಗಳು, ಮಾಧ್ಯಮದ ಮೂಲಕ ಪ್ರಸಾರಗಳು, ಅಂತರ್ಜಾಲ ಅಥವಾ ಯಾವುದೇ ಇತರ ಮಾಧ್ಯಮಗಳ ಮೂಲಕ ಸಾರ್ವಜನಿಕರಿಗೆ ತಿಳಿಯುವಂತೆ ಮಾಡುವುದು ಅಥವಾ ತಿಳಿಸುವುದು.

5. ಸಾರ್ವಜನಿಕ ಮಾಹಿತಿ ಅಧಿಕಾರಿಗಳ ಪದನಾಮೀಕರಿಸುವುದು.– (1) ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರವು, ಈ ಅಧಿನಿಯಮವನ್ನು ಅಧಿನಿಯಮಿತಿಗೊಳಿಸಿದ ದಿನಾಂಕದಿಂದ ನೂರು ದಿನಗಳೊಳಗಾಗಿ, ಈ ಅಧಿನಿಯಮದ ಅಡಿಯಲ್ಲಿ ಮಾಹಿತಿಗಾಗಿ ಕೋರಿಕೆ ಸಲ್ಲಿಸುವ ವ್ಯಕ್ತಿಗಳಿಗೆ ಮಾಹಿತಿ ಒದಗಿಸಲು, ಅದರ ಅಧೀನದಲ್ಲಿರುವ ಎಲ್ಲ ಆಡಳಿತ ಘಟಕಗಳು ಅಥವಾ ಕಚೇರಿಗಳಲ್ಲಿ ಅವಶ್ಯವಾಗಬಹುದಾದಷ್ಟು ಸಂಖ್ಯೆಯ ಅಧಿಕಾರಿಗಳನ್ನು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನಾಗಿ ಅಥವಾ ಸಂದರ್ಭಾನುಸಾರ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನಾಗಿ ಪದನಾಮೀಕರಿಸತಕ್ಕದ್ದು.

(2) (1)ನೇ ಉಪಪ್ರಕರಣದ ಉಪಬಂಧಗಳಿಗೆ ಬಾಧಕವಾಗದಂತೆ, ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರವೂ ಈ ಅಧಿನಿಯಮವನ್ನು ಅಧಿನಿಯಮಿತಿಗೊಳಿಸಿದ ದಿನಾಂಕದಿಂದ ನೂರು ದಿನಗಳೊಳಗಾಗಿ ಪ್ರತಿಯೊಂದು ಉಪ ವಿಭಾಗೀಯ ಮಟ್ಟದಲ್ಲಿ ಅಥವಾ ಇತರ ಉಪ ಜಿಲ್ಲಾ ಮಟ್ಟದಲ್ಲಿ ಈ ಅಧಿನಿಯಮದ ಅಡಿಯಲ್ಲಿ ಮಾಹಿತಿಗಾಗಿ ಅರ್ಜಿಗಳನ್ನು ಅಥವಾ ಅಪೀಲುಗಳನ್ನು ಸ್ವೀಕರಿಸಲು, ಅವುಗಳನ್ನು ಸಂದರ್ಭಾನುಸಾರ, 19ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಹಿರಿಯ ಅಧಿಕಾರಿಗೆ ಅಥವಾ ಕೇಂದ್ರ ಮಾಹಿತಿ ಆಯೋಗಕ್ಕೆ ಅಥವಾ ರಾಜ್ಯ ಮಾಹಿತಿ ಆಯೋಗಕ್ಕೆ ಕೂಡಲೇ ಕಳುಹಿಸಲು ಒಬ್ಬ ಅಧಿಕಾರಿಯನ್ನು ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನಾಗಿ ಅಥವಾ ಸಂದರ್ಭಾನುಸಾರ, ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನಾಗಿ ಪದನಾಮೀಕರಿಸತಕ್ಕದ್ದು:

ಪರಂತು, ಮಾಹಿತಿಗಾಗಿ ಸಲ್ಲಿಸಲಾದ ಅರ್ಜಿಯನ್ನು ಅಥವಾ ಅಪೀಲನ್ನು ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಸಂದರ್ಭಾನುಸಾರ, ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ನೀಡಿದ್ದಲ್ಲಿ, 7ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವಂತೆ ಉತ್ತರ ನೀಡುವ ಅವಧಿಯನ್ನು ಲೆಕ್ಕ ಹಾಕುವಾಗ ಅದಕ್ಕೆ ಐದು ದಿನಗಳ ಅವಧಿಯನ್ನು ಸೇರಿಸತಕ್ಕದ್ದು.

(3) ಪ್ರತಿಯೊಬ್ಬ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಮಾಹಿತಿ ಕೋರುವ ವ್ಯಕ್ತಿಗಳಿಂದ ಬರುವ ಮನವಿಗಳ ಬಗ್ಗೆ ವ್ಯವಹರಿಸತಕ್ಕದ್ದು ಮತ್ತು ಅಂತಹ ಮಾಹಿತಿ ಕೋರುವ ವ್ಯಕ್ತಿಗಳಿಗೆ ಸೂಕ್ತ ನೆರವು ನೀಡತಕ್ಕದ್ದು.

(4) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು, ತನ್ನ ಕರ್ತವ್ಯಗಳನ್ನು ಸರಿಯಾಗಿ ನಿರ್ವಹಿಸಲು ಅವಶ್ಯಕವೆಂದು ಆತನು ಅಥವಾ ಆಕೆ ಪರಿಗಣಿಸುವಂತಹ ಯಾರೇ ಇತರ ಅಧಿಕಾರಿಗಳ ನೆರವು ಪಡೆಯಬಹುದು.

(5) (4)ನೇ ಉಪಪ್ರಕರಣದ ಅಡಿಯಲ್ಲಿ ಯಾರ ನೆರವನ್ನು ಕೋರಲಾಗಿದೆಯೋ ಆ ಅಧಿಕಾರಿಯು, ಆತನ ಅಥವಾ ಆಕೆಯ ನೆರವನ್ನು ಕೋರಿರುವ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಎಲ್ಲಾ ನೆರವನ್ನು ನೀಡತಕ್ಕದ್ದು, ಮತ್ತು ಈ ಅಧಿನಿಯಮದ ಉಪಬಂಧಗಳ ಯಾವುದೇ ಉಲ್ಲಂಘನೆಯ ಉದ್ದೇಶಕ್ಕಾಗಿ, ಅಂತಹ ಇತರ ಅಧಿಕಾರಿಯನ್ನು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ ಎಂದು ಪರಿಗಣಿಸತಕ್ಕದ್ದು.

(6.) ಮಾಹಿತಿ ಪಡೆಯುವುದಕ್ಕಾಗಿ ಕೋರಿಕೆ.– (1) ಈ ಅಧಿನಿಯಮದ ಅಡಿಯಲ್ಲಿ ಯಾವುದೇ ಮಾಹಿತಿಯನ್ನು ಪಡೆಯಲಿಚ್ಛಿಸುವ ವ್ಯಕ್ತಿಯು ಲಿಖಿತದಲ್ಲಿ ಅಥವಾ ವಿದ್ಯುನ್ಮಾನ ಸಾಧನಗಳ ಮೂಲಕ ಇಂಗ್ಲಿಷ್ ಅಥವಾ ಹಿಂದಿಯಲ್ಲಿ ಅಥವಾ ಸಲ್ಲಿಸಲಾಗುತ್ತಿರುವಂಥ ಅಧಿಕೃತ ಪ್ರಾದೇಶಿಕ ಭಾಷೆಯಲ್ಲಿ

ಅರ್ಜಿಯನ್ನು ಆತನು ಅಥವಾ ಆಕೆಯು ಕೋರಿರುವ ಮಾಹಿತಿಯ ವಿವರಗಳನ್ನು ನಿರ್ದಿಷ್ಟಪಡಿಸಿ, ನಿಗದಿಪಡಿಸಬಹುದಾದ ಶುಲ್ಕಗಳೂ ಸೇರಿದಂತೆ ಈ ಮುಂದಿನವರಿಗೆ ಕೋರಿಕೆಯನ್ನು ಸಲ್ಲಿಸತಕ್ಕದ್ದು,–

(ಎ) ಸಂಬಂಧಪಟ್ಟ ಸಾರ್ವಜನಿಕ ಪ್ರಾಧಿಕಾರದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ;

(ಬಿ) ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ:

ಪರಂತು, ಅಂತಹ ಕೋರಿಕೆಯನ್ನು ಲಿಖಿತದಲ್ಲಿ ಸಲ್ಲಿಸಲು ಸಾಧ್ಯವಿಲ್ಲದಿರುವ ಪಕ್ಷದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಮೌಖಿಕವಾಗಿ ಕೋರಿಕೆ ಸಲ್ಲಿಸಿದಗ ವ್ಯಕ್ತಿಗೆ ಅದನ್ನು ಬರವಣಿಗೆ ಮೂಲಕ ಕಾರ್ಯರೂಪಕ್ಕೆ ತರಲು ಎಲ್ಲಾ ಸೂಕ್ತ ನೆರವನ್ನು ನೀಡತಕ್ಕದ್ದು.

(2) ಮಾಹಿತಿಗಾಗಿ ಕೋರಿಕೆ ಸಲ್ಲಿಸುವ ಅರ್ಜಿದಾರನನ್ನು, ಅವನನ್ನು ಸಂಪರ್ಕಿಸಲು ಅವಶ್ಯವಿರುವ ವಿವರಗಳನ್ನು ಹೊರತುಪಡಿಸಿ ಮಾಹಿತಿ ಕೋರಿಕೆಗೆ ಯಾವುದೇ ಕಾರಣವನ್ನು ಅಥವಾ ಯಾವುದೇ ಇತರ ವೈಯಕ್ತಿಕ ವಿವರಗಳನ್ನು ನೀಡುವಂತೆ ಅಗತ್ಯಪಡಿಸತಕ್ಕದ್ದಲ್ಲ.

(3) ಒಬ್ಬ ಅರ್ಜಿದಾರನು,–

(i) ಮತ್ತೊಂದು ಸಾರ್ವಜನಿಕ ಪ್ರಾಧಿಕಾರ ಹೊಂದಿರುವಂಥ ಮಾಹಿತಿಗಾಗಿ; ಅಥವಾ

(ii) ವಸ್ತು ವಿಷಯವು ಮತ್ತೊಂದು ಸಾರ್ವಜನಿಕ ಪ್ರಾಧಿಕಾರದ ಕಾರ್ಯನಿರ್ವಹಣೆಗೆ ನಿಕಟವಾಗಿ ಸಂಬಂಧಿಸಿರುವ ಮಾಹಿತಿಗಾಗಿ,

– ಸಾರ್ವಜನಿಕ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಿದ್ದರೆ, ಯಾವ ಪ್ರಾಧಿಕಾರಕ್ಕೆ ಅರ್ಜಿ ಸಲ್ಲಿಸಲಾಗಿದೆಯೋ ಆ ಸಾರ್ವಜನಿಕ ಪ್ರಾಧಿಕಾರವು ಅರ್ಜಿಯನ್ನು ಅಥವಾ ಸಮುಚಿತವೆನಿಸಬಹುದಾದ ಅದರ ಭಾಗವನ್ನು ಆ ಮತ್ತೊಂದು ಪ್ರಾಧಿಕಾರಕ್ಕೆ ವರ್ಗಾಯಿಸತಕ್ಕದ್ದು ಮತ್ತು ಅಂಥ ವರ್ಗಾವಣೆಯನ್ನು ಕೂಡಲೇ ಅರ್ಜಿದಾರನಿಗೆ ತಿಳಿಸತಕ್ಕದ್ದು:

ಪರಂತು, ಈ ಉಪಪ್ರಕರಣದ ಅನುಸಾರವಾಗಿ ಅರ್ಜಿಯ ವರ್ಗಾವಣೆಯನ್ನು ಕಾರ್ಯಸಾಧ್ಯವಾದಷ್ಟು ಬೇಗನೆ ಮಾಡತಕ್ಕದ್ದು. ಆದರೆ ಯಾವುದೇ ಸಂದರ್ಭದಲ್ಲಿಯೂ ಅರ್ಜಿ ಸ್ವೀಕರಿಸಿದ ದಿನಾಂಕದಿಂದ ಅದು ಐದು ದಿನಗಳನ್ನು ಮೀರತಕ್ಕದ್ದಲ್ಲ.

7. ಕೋರಿಕೆಯ ವಿಲೆ.– (1) 5ನೇ ಪ್ರಕರಣದ (2)ನೇ ಉಪಪ್ರಕರಣದ ಪರಂತುಕಕ್ಕೆ ಅಥವಾ 6ನೇ ಪ್ರಕರಣದ (3)ನೇ ಉಪಪ್ರಕರಣದ ಪರಂತುಕಕ್ಕೆ ಒಳಪಟ್ಟು, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು 6ನೇ ಪ್ರಕರಣದ ಅಡಿಯಲ್ಲಿ ಕೋರಿಕೆಯನ್ನು ಸ್ವೀಕರಿಸಿದ ನಂತರ ತ್ವರಿತವಾಗಿ ಮತ್ತು ಯಾವುದೇ ಸಂದರ್ಭದಲ್ಲಿ ಕೋರಿಕೆ ಸ್ವೀಕರಿಸಿದ ಮೂವತ್ತು ದಿವಸಗಳೊಳಗಾಗಿ, ನಿಗದಿಪಡಿಸಬಹುದಾದಂತಹ ಶುಲ್ಕವನ್ನು ಸಂದಾಯ ಮಾಡಿದ ಮೇಲೆ ಮಾಹಿತಿ ಒದಗಿಸತಕ್ಕದ್ದು ಅಥವಾ 8 ಮತ್ತು 9ನೇ ಪ್ರಕರಣಗಳಲ್ಲಿ ನಿರ್ದಿಷ್ಟಪಡಿಸಿರುವ ಯಾವುವೇ ಕಾರಣಗಳಿಗಾಗಿ ಕೋರಿಕೆಯನ್ನು ತಿರಸ್ಕರಿಸತಕ್ಕದ್ದು:

ಪರಂತು, ಕೋರಿರುವ ಮಾಹಿತಿಯು ಒಬ್ಬ ವ್ಯಕ್ತಿಯ ಜೀವ ಅಥವಾ ಸ್ವಾತಂತ್ರ್ಯಕ್ಕೆ ಸಂಬಂಧಿಸಿದ್ದಲ್ಲಿ ಆ ಮಾಹಿತಿಯ ಕೋರಿಕೆಯನ್ನು ಸ್ವೀಕರಿಸಿದ ನಲವತ್ತೆಂಟು ಗಂಟೆಗಳೊಳಗಾಗಿ ಒದಗಿಸತಕ್ಕದ್ದು.

(2) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು (1)ನೇ ಉಪಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ಅವಧಿಯೊಳಗಾಗಿ

ಮಾಹಿತಿಗಾಗಿ ಮಾಡಿಕೊಂಡ ಕೋರಿಕೆಯ ಮೇಲೆ ತೀರ್ಮಾನ ತೆಗೆದುಕೊಳ್ಳಲು ವಿಫಲನಾದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಕೋರಿಕೆಯನ್ನು ತಿರಸ್ಕರಿಸಿದ್ದಾನೆಂದು ಭಾವಿಸತಕ್ಕದ್ದು.

(3) ಮಾಹಿತಿ ಒದಗಿಸುವುದಕ್ಕೆ ಆಗುವ ವೆಚ್ಚವನ್ನು ಸೂಚಿಸುವ ಯಾವುದೇ ಹೆಚ್ಚಿನ ಶುಲ್ಕವನ್ನು ಸಂದಾಯ ಮಾಡಿದ ಮೇಲೆ ಮಾಹಿತಿ ಒದಗಿಸಬೇಕೆಂಬ ತೀರ್ಮಾನ ತೆಗೆದುಕೊಂಡಿದ್ದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಕೋರಿಕೆ ಸಲ್ಲಿಸಿರುವ ವ್ಯಕ್ತಿಗೆ ಈ ಮುಂದಿನ ವಿವರಗಳನ್ನು ತಿಳಿಸತಕ್ಕದ್ದು,–

(ಎ) (1)ನೇ ಉಪಪ್ರಕರಣದ ಅಡಿಯಲ್ಲಿ ನಿಗದಿಪಡಿಸಿರುವ ಶುಲ್ಕದ ಮೊಬಲಗನ್ನು ನಿರ್ಧರಿಸಲು ಮಾಡಿದ ಲೆಕ್ಕಾಚಾರದೊಂದಿಗೆ ಅವನು ನಿರ್ಧರಿಸಿರುವಂತೆ ಮಾಹಿತಿ ಒದಗಿಸಲು ತಗಲುವ ವೆಚ್ಚವನ್ನು ಸೂಚಿಸುವ ಹೆಚ್ಚಿನ ಶುಲ್ಕದ ವಿವರಗಳು, ಶುಲ್ಕವನ್ನು ಠೇವಣಿ ಇಡುವಂತೆ ಅವನನ್ನು ಕೋರುವುದು ಮತ್ತು ಸದರಿ ಮಾಹಿತಿಯ ರವಾನೆ ಮತ್ತು ಶುಲ್ಕ ಸಂದಾಯದ ನಡುವಿನ ಅವಧಿಯನ್ನು ಆ ಉಪ ಪ್ರಕರಣದಲ್ಲಿ ಉಲ್ಲೇಖಿಸಿರುವ ಮೂವತ್ತು ದಿವಸಗಳ ಅವಧಿಯನ್ನು ಲೆಕ್ಕ ಹಾಕುವ ಉದ್ದೇಶಕ್ಕಾಗಿ ಗಣನೆಗೆ ತೆಗೆದುಕೊಳ್ಳತಕ್ಕದ್ದಲ್ಲ;

(ಬಿ) ಅಪೀಲು ಪ್ರಾಧಿಕಾರ, ಕಾಲಮಿತಿ, ಕಾರ್ಯ ವಿಧಾನ ಮತ್ತು ಯಾವುದೇ ಇತರ ನಮೂನೆಗಳ ವಿವರಗಳು ಸೇರಿದಂತೆ ವಿಧಿಸಲಾದ ಶುಲ್ಕ ಅಥವಾ ಒದಗಿಸಲಾದ ಮಾಹಿತಿ ಪಡೆಯುವ ಅವಕಾಶದ ವಿಧಾನದ ಬಗೆಗಿನ ತೀರ್ಮಾನವನ್ನು ಪುನರ್ ಪರಿಶೀಲಿಸುವ ಸಂಬಂಧದಲ್ಲಿ ಅವನಿಗೆ ಅಥವಾ ಅವಳಿಗೆ ಇರುವ ಹಕ್ಕಿಗೆ ಸಂಬಂಧಿಸಿದ ಮಾಹಿತಿ.

(4) ಈ ಅಧಿನಿಯಮದ ಅಡಿಯಲ್ಲಿ ದಾಖಲೆ ಅಥವಾ ಅದರ ಭಾಗವನ್ನು ನೋಡುವ ಅವಕಾಶ ಕಲ್ಪಿಸುವುದು ಅಗತ್ಯವಾಗಿರುವಲ್ಲಿ ಮತ್ತು ಯಾರಿಗೆ ಆ ಅವಕಾಶ ಕಲ್ಪಿಸಬೇಕಾಗಿದೆಯೋ ಆ ವ್ಯಕ್ತಿಯ ಇಂದ್ರಿಯಗಳಿಗೆ ಸಂಬಂಧಿಸಿದಂತೆ ಅಂಗವಿಕಲನಾಗಿದ್ದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಪರಿಶೀಲನೆಗೆ ಸೂಕ್ತವಾದಂತಹ ನೆರವನ್ನು ಒದಗಿಸುವುದೂ ಒಳಗೊಂಡಂತೆ ಮಾಹಿತಿಯನ್ನು ನೋಡಿ ಪಡೆಯಲು ಸಾಧ್ಯವಾಗುವಂತಹ ನೆರವನ್ನೂ ಒದಗಿಸತಕ್ಕದ್ದು.

(5) ಮಾಹಿತಿ ಪಡೆಯಲು ಒದಗಿಸುವ ಅವಕಾಶವು ಮುದ್ರಣ ಅಥವಾ ಯಾವುದೇ ವಿದ್ಯುನ್ಮಾನ ನಮೂನೆಯಲ್ಲಿದ್ದಲ್ಲಿ ಅರ್ಜಿದಾರನು (6)ನೇ ಉಪಪ್ರಕರಣದ ಉಪಬಂಧಗಳಿಗೊಳಪಟ್ಟು ನಿಗದಿಪಡಿಸಬಹುದಾದಂತಹ ಶುಲ್ಕವನ್ನು ಸಂದಾಯ ಮಾಡತಕ್ಕದ್ದು:

ಪರಂತು, 6ನೇ ಪ್ರಕರಣದ (1)ನೇ ಉಪಪ್ರಕರಣ ಮತ್ತು 7ನೇ ಪ್ರಕರಣದ (1) ಮತ್ತು (5)ನೇ ಉಪಪ್ರಕರಣದ ಅಡಿಯಲ್ಲಿ ನಿಗದಿಪಡಿಸಿರುವ ಶುಲ್ಕವು ಯುಕ್ತವಾಗಿರತಕ್ಕದ್ದು ಮತ್ತು ಸಮುಚಿತ ಸರ್ಕಾರವು ನಿರ್ಧರಿಸಬಹುದಾದಂತೆ ಬಡತನ ರೇಖೆಗಿಂತ ಕೆಳಗಿರುವ ವ್ಯಕ್ತಿಗಳಿಗೆ ಅಂತಹ ಶುಲ್ಕವನ್ನು ವಿಧಿಸತಕ್ಕದ್ದಲ್ಲ.

(6) (5)ನೇ ಉಪಪ್ರಕರಣದಲ್ಲಿ ಏನೇ ಇದ್ದರೂ ಸಾರ್ವಜನಿಕ ಪ್ರಾಧಿಕಾರವು (1)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ಕಾಲಮಿತಿಗಳನ್ನು ಪಾಲಿಸಲು ವಿಫಲವಾದಲ್ಲಿ ಮಾಹಿತಿಗಾಗಿ ಕೋರಿಕೆ ಸಲ್ಲಿಸುವ ವ್ಯಕ್ತಿಗೆ ಮಾಹಿತಿಯನ್ನು, ಶುಲ್ಕವಿಲ್ಲದೆ ಒದಗಿಸತಕ್ಕದ್ದು.

(7) (1)ನೇ ಉಪಪ್ರಕರಣದ ಅಡಿಯಲ್ಲಿ ಯಾವುದೇ ತೀರ್ಮಾನ ತೆಗೆದುಕೊಳ್ಳುವುದಕ್ಕೆ ಮೊದಲು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ

ಅಧಿಕಾರಿಯು 11ನೇ ಪ್ರಕರಣದ ಅಡಿಯಲ್ಲಿ ಮೂರನೇ ಪಕ್ಷಕಾರನು ಸಲ್ಲಿಸಿದ ಮನವಿಯನ್ನು ಗಣನೆಗೆ ತೆಗೆದುಕೊಳ್ಳತಕ್ಕದ್ದು.

(8) ಕೋರಿಕೆಯನ್ನು (1)ನೇ ಉಪಪ್ರಕರಣದ ಅಡಿಯಲ್ಲಿ ನಿರಾಕರಿಸಿದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಕೋರಿಕೆ ಸಲ್ಲಿಸುವ ವ್ಯಕ್ತಿಗೆ,–

(i) ಅಂಥ ನಿರಾಕರಣೆಗೆ ಕಾರಣಗಳನ್ನು;

(ii) ಅಂಥ ನಿರಾಕರಣೆಯ ವಿರುದ್ಧ ಅಪೀಲು ಸಲ್ಲಿಸಲು ಇರುವ ಅವಧಿಯನ್ನು; ಮತ್ತು

(iii) ಅಪೀಲು ಪ್ರಾಧಿಕಾರದ ವಿವರಗಳನ್ನು ತಿಳಿಸತಕ್ಕದ್ದು.

(9) ಮಾಹಿತಿಯನ್ನು, ಸಾರ್ವಜನಿಕ ಪ್ರಾಧಿಕಾರದ ಸಂಪನ್ಮೂಲಗಳು ಅತಿ ಹೆಚ್ಚಿನ ಪ್ರಮಾಣದಲ್ಲಿ ಬಳಕೆಯಾಗುವಂತಿದ್ದ ಹೊರತು, ಅಥವಾ ಪ್ರಶ್ನಿತವಾಗಿರುವ ದಾಖಲೆಯ ಸುರಕ್ಷತೆಗೆ ಅಥವಾ ಸಂರಕ್ಷಣೆಗೆ ಹಾನಿಯುಂಟಾಗುವಂತಿದ್ದ ಹೊರತು, ಸಾಮಾನ್ಯವಾಗಿ ಅದನ್ನು ಕೋರಿದ ನಮೂನೆಯಲ್ಲಿ ಒದಗಿಸತಕ್ಕದ್ದು.

8. ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ವಿನಾಯಿತಿ.– (1) ಈ ಅಧಿನಿಯಮದಲ್ಲಿ ಏನೇ ಇದ್ದರೂ, ಯಾರೇ ನಾಗರಿಕನಿಗೆ ಈ ಮುಂದಿನ ಯಾವುದೇ ಮಾಹಿತಿಯನ್ನು ನೀಡುವುದು ಕಡ್ಡಾಯವಾಗಿರತಕ್ಕದ್ದಲ್ಲ; ಎಂದರೆ,–

(ಎ) ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ಭಾರತದ ಸಾರ್ವಭೌಮತ್ವ ಮತ್ತು ಏಕತೆ, ರಾಷ್ಟ್ರದ ಭದ್ರತೆ, ಕಾರ್ಯ ತಂತ್ರ, ರಾಜ್ಯದ ವೈಜ್ಞಾನಿಕ ಅಥವಾ ಆರ್ಥಿಕ ಹಿತಾಸಕ್ತಿಗಳು, ವಿದೇಶದೊಂದಿಗಿನ ಸಂಬಂಧ ಇವುಗಳ ಮೇಲೆ ಪ್ರತಿಕೂಲ ಪರಿಣಾಮವುಂಟಾಗುತ್ತದೋ ಅಥವಾ ಒಂದು ಅಪರಾಧಕ್ಕೆ ಪ್ರೇರಣೆ ನೀಡುತ್ತದೋ ಅಂಥ ಮಾಹಿತಿ;

(ಬಿ) ಯಾವುದೇ ನ್ಯಾಯಾಲಯ ಅಥವಾ ನ್ಯಾಯಾಧಿಕರಣವು ಯಾವ ಮಾಹಿತಿ ಪ್ರಕಟಣೆಯನ್ನು ಸ್ಪಷ್ಟವಾಗಿ ನಿಷೇಧಿಸಿದೆಯೋ ಅಥವಾ ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ನ್ಯಾಯಾಲಯ ನಿಂದನೆಯಾಗಬಹುದೋ ಅಂಥ ಮಾಹಿತಿ;

(ಸಿ) ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ಸಂಸತ್ತು ಅಥವಾ ರಾಜ್ಯ ವಿಧಾನ ಮಂಡಲದ ಹಕ್ಕುಚ್ಯುತಿ ಉಂಟಾಗುವುದೋ ಅಂಥ ಮಾಹಿತಿ;

(ಡಿ) ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ಮೂರನೇ ಪಕ್ಷದಾರನ ಸ್ಪರ್ಧಾತ್ಮಕತೆಗೆ ತೊಂದರೆಯುಂಟಾಗುತ್ತದೋ ಅಂಥ ವಾಣಿಜ್ಯ ರಹಸ್ಯ, ವ್ಯಾಪಾರ ಗೌಪ್ಯತೆಗಳು ಅಥವಾ ಬೌದ್ಧಿಕ ಆಸ್ತಿಯನ್ನೊಳಗೊಂಡ ಮಾಹಿತಿ, ಅಂಥ ಮಾಹಿತಿಯನ್ನು ಬಹಿರಂಗಪಡಿಸುವುದು ಬಹುಸಂಖ್ಯೆಯ ಸಾರ್ವಜನಿಕರ ಹಿತದೃಷ್ಟಿಯಿಂದ ಅಗತ್ಯವೆಂದು ಸಕ್ಷಮ ಪ್ರಾಧಿಕಾರಿಗೆ ಮನದಟ್ಟಾದ ಹೊರತು;

(ಇ) ತನ್ನ ನಂಬಿಕೆಯ ವಿಶ್ವಾಸದ ಸಂಬಂಧದಲ್ಲಿ ಒಬ್ಬ ವ್ಯಕ್ತಿಗೆ ದೊರಕುವ ಮಾಹಿತಿ, ಅಂಥ ಮಾಹಿತಿಯನ್ನು ಬಹಿರಂಗಪಡಿಸುವುದು ಬಹುಸಂಖ್ಯೆಯ ಸಾರ್ವಜನಿಕರ ಹಿತದೃಷ್ಟಿಯಿಂದ ಅಗತ್ಯವೆಂದು ಸಕ್ಷಮ ಪ್ರಾಧಿಕಾರಿಗೆ ಮನದಟ್ಟಾದ ಹೊರತು;

(ಎಫ್) ವಿದೇಶಿ ಸರ್ಕಾರದಿಂದ ರಹಸ್ಯವಾಗಿ ಪಡೆದ ಮಾಹಿತಿ;

(ಜಿ) ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ಯಾರೇ ವ್ಯಕ್ತಿಯ ಜೀವ ಅಥವಾ ದೈಹಿಕ ಸುರಕ್ಷತೆಗೆ ಅಪಾಯ ಉಂಟಾಗುತ್ತದೋ ಅಂಥ ಮಾಹಿತಿ ಅಥವಾ ಕಾನೂನು ಜಾರಿಯ ಅಥವಾ ಭದ್ರತೆಯ ಉದ್ದೇಶಗಳಿಗಾಗಿ ರಹಸ್ಯವಾಗಿ ನೀಡಿದ ಮಾಹಿತಿಯ ಅಥವಾ ಸಹಾಯದ ಮೂಲವನ್ನು ಗುರುತಿಸಬಹುದಾದಂಥ ಮಾಹಿತಿ;

(ಹೆಚ್) ತನಿಖಾ ಕ್ರಮಕ್ಕೆ ಅಥವಾ ಅಪರಾಧಿಗಳ ದಸ್ತಗಿರಿಗೆ ಅಥವಾ ಪ್ರಾಸಿಕ್ಯೂಷನ್ ಕಾರ್ಯಕ್ಕೆ ಅಡಚಣೆಯನ್ನುಂಟು ಮಾಡುವಂಥ ಮಾಹಿತಿ;

(ಐ) ಮಂತ್ರಿ ಪರಿಷತ್ತಿನ, ಕಾರ್ಯದರ್ಶಿಗಳ ಮತ್ತು ಇತರ ಅಧಿಕಾರಿಗಳ ಚರ್ಚೆಗಳ ದಾಖಲೆಗಳು ಸೇರಿದಂತೆ ಸಚಿವ ಸಂಪುಟದ ಕಾಗದ ಪತ್ರಗಳು;

ಪರಂತು, ಮಂತ್ರಿ ಪರಿಷತ್ತಿನ ನಿರ್ಣಯಗಳು, ಆ ನಿರ್ಣಯಗಳಿಗೆ ಕಾರಣಗಳು ಮತ್ತು ತೆಗೆದುಕೊಂಡ ನಿರ್ಣಯಗಳಿಗೆ ಆಧರಿಸಿದ ವಿಷಯ ಸಾಮಗ್ರಿ ಇವುಗಳನ್ನು, ನಿರ್ಣಯವನ್ನು ತೆಗೆದುಕೊಂಡ ಮತ್ತು ಆ ವಿಷಯ ಪೂರ್ಣಗೊಂಡ ಅಥವಾ ಮುಕ್ತಾಯಗೊಂಡ ತರುವಾಯ ಸಾರ್ವಜನಿಕರಿಗೆ ತಿಳಿಯುವಂತೆ ಮಾಡತಕ್ಕದ್ದು:

ಮತ್ತೂ ಮತ್ತೂ, ಈ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ವಿನಾಯಿತಿಗಳ ಅಡಿಯಲ್ಲಿ ಬರುವಂಥ ವಿಷಯಗಳನ್ನು ಬಹಿರಂಗಪಡಿಸತಕ್ಕದ್ದಲ್ಲ.

(ಜೆ) ಸಂದರ್ಭಾನುಸಾರ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಅಪೀಲು ಪ್ರಾಧಿಕಾರಕ್ಕೆ ಅಂಥ ಮಾಹಿತಿಯನ್ನು ಬಹಿರಂಗಪಡಿಸುವುದು ಬಹುಸಂಖ್ಯೆಯ ಸಾರ್ವಜನಿಕರ ಹಿತದೃಷ್ಟಿಯಿಂದ ನ್ಯಾಯಸಮ್ಮತ ಎಂದು ಮನದಟ್ಟಾದ ಹೊರತು ಯಾವ ಮಾಹಿತಿಯ ಬಹಿರಂಗಪಡಿಸುವಿಕೆಯು ಯಾವುದೇ ಸಾರ್ವಜನಿಕ ಚಟುವಟಿಕೆ ಅಥವಾ ಹಿತಾಸಕ್ತಿಗೆ ಸಂಬಂಧಪಡುವುದಿಲ್ಲವೋ ಅಥವಾ ಯಾವ ಮಾಹಿತಿಯನ್ನು ಬಹಿರಂಗಪಡಿಸುವುದರಿಂದ ವ್ಯಕ್ತಿಗತ ಗೌಪ್ಯತೆಯನ್ನು ಅನಗತ್ಯವಾಗಿ ಅತಿಕ್ರಮಿಸಿದಂತಾಗುತ್ತದೆಯೋ ಅಂಥ ವೈಯಕ್ತಿಕ ಮಾಹಿತಿಗೆ ಸಂಬಂಧಿಸಿದ ಮಾಹಿತಿ:

ಪರಂತು, ಸಂಸತ್ತು ಅಥವಾ ರಾಜ್ಯ ವಿಧಾನ ಮಂಡಲಕ್ಕೆ ನಿರಾಕರಿಸಲಾಗದಂಥ ಮಾಹಿತಿಯನ್ನು ಯಾರೇ ವ್ಯಕ್ತಿಗೆ ನಿರಾಕರಿಸತಕ್ಕದ್ದಲ್ಲ.

(2) ಸರ್ಕಾರಿ ರಹಸ್ಯಗಳ ಅಧಿನಿಯಮ, 1923 (1923ರ 19) ರಲ್ಲಿ ಏನೇ ಇದ್ದರೂ ಅಥವಾ (1)ನೇ ಉಪಪ್ರಕರಣದ ಅನುಸಾರವಾಗಿ ಅನುಮತಿಸಬಹುದಾದ ವಿನಾಯಿತಿಗಳೇನೇ ಇದ್ದರೂ, ಬಹಿರಂಗಪಡಿಸುವುದರಿಂದ ಸಂರಕ್ಷಿತ ಹಿತಾಸಕ್ತಿಗಳಿಗೆ ಉಂಟಾಗುವ ಅಪಾಯಕ್ಕಿಂತ ಸಾರ್ವಜನಿಕ ಹಿತಾಸಕ್ತಿಯೇ ಪ್ರಮುಖವಾಗಿದ್ದರೆ, ಸಾರ್ವಜನಿಕ ಪ್ರಾಧಿಕಾರವು ಆ ಮಾಹಿತಿಯನ್ನು ಪಡೆಯಲು ಅನುಮತಿ ನೀಡಬಹುದು.

(3) 6ನೇ ಪ್ರಕರಣದ ಅಡಿಯಲ್ಲಿ ಕೋರಿಕೆ ಸಲ್ಲಿಸಿದ ದಿನಾಂಕಕ್ಕೆ ಇಪ್ಪತ್ತು ವರ್ಷಗಳಷ್ಟು ಹಿಂದೆ ನಡೆದಿರುವ, ಉಂಟಾಗಿರುವ ಅಥವಾ ಸಂಭವಿಸಿರುವ ಯಾವುದೇ ಘಟನೆ, ಸಂಗತಿ ಅಥವಾ ವಿಷಯಕ್ಕೆ ಸಂಬಂಧಪಟ್ಟ ಯಾವುದೇ ಮಾಹಿತಿಯನ್ನು ಆ ಪ್ರಕರಣದ ಮೇರೆಗೆ ಕೋರಿಕೆ ಸಲ್ಲಿಸುವಂಥ ಯಾರೇ ವ್ಯಕ್ತಿಗೆ (1)ನೇ ಉಪ ಪ್ರಕರಣದ (ಎ) (ಸಿ) ಮತ್ತು (ಐ) ಖಂಡಗಳ ಉಪಬಂಧಗಳಿಗೊಳಪಟ್ಟು ಒದಗಿಸತಕ್ಕದ್ದು:

ಪರಂತು, ಸದರಿ ಇಪ್ಪತ್ತು ವರ್ಷಗಳ ಅವಧಿಯನ್ನು ಯಾವ ದಿನಾಂಕದಿಂದ ಲೆಕ್ಕ ಹಾಕಬೇಕು ಎಂಬ ಬಗ್ಗೆ ಯಾವುದೇ ಪ್ರಶ್ನೆ ಉದ್ಭವಿಸಿದಲ್ಲಿ, ಈ ಅಧಿನಿಯಮದಲ್ಲಿ ಉಪಬಂಧಿಸಲಾದ ಅಪೀಲುಗಳಿಗೆ ಒಳಪಟ್ಟು, ಕೇಂದ್ರ ಸರ್ಕಾರದ ತೀರ್ಮಾನವೇ ಅಂತಿಮವಾಗಿರತಕ್ಕದ್ದು.

9. ಕೆಲವು ಸಂದರ್ಭಗಳಲ್ಲಿ ಮಾಹಿತಿ ಪಡೆಯುವ ಅವಕಾಶದ ನಿರಾಕರಣೆಗೆ ಆಧಾರಗಳು.– 8ನೇ ಪ್ರಕರಣದ ಉಪಬಂಧಗಳಿಗೆ ಬಾಧಕವಾಗದಂತೆ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು, ಅಂಥ ಮಾಹಿತಿಯನ್ನು ಒದಗಿಸುವುದರಿಂದ ರಾಜ್ಯವನ್ನು ಹೊರತುಪಡಿಸಿ ಒಬ್ಬ ವ್ಯಕ್ತಿಯು ಹೊಂದಿರುವ ಕೃತಿಸ್ವಾಮ್ಯದ ಉಲ್ಲಂಘನೆಯಾಗಬಹುದಾದಲ್ಲಿ ಮಾಹಿತಿಗಾಗಿ ಮಾಡಿದ ಕೋರಿಕೆಯನ್ನು ನಿರಾಕರಿಸಬಹುದು.

10. ಪ್ರತ್ಯೇಕಿಸುವಿಕೆ.– (1) ಮಾಹಿತಿ ಪಡೆಯುವುದಕ್ಕಾಗಿ ಸಲ್ಲಿಸಿದ ಕೋರಿಕೆಯನ್ನು, ಕೋರಿರುವ ಮಾಹಿತಿಯು ಬಹಿರಂಗಪಡಿಸುವುದರಿಂದ ವಿನಾಯಿತಿಗೊಳಿಸಿರುವಂಥ ಮಾಹಿತಿಗೆ ಸಂಬಂಧಿಸಿದ್ದಾಗಿದೆ ಎಂಬ ಕಾರಣದ ಮೇಲೆ ತಳ್ಳಿ ಹಾಕಿದಾಗ ಈ ಅಧಿನಿಯಮದಲ್ಲಿ ಏನೇ ಒಳಗೊಂಡಿದ್ದರೂ, ಈ ಅಧಿನಿಯಮದ ಅಡಿಯಲ್ಲಿ ಬಹಿರಂಗಪಡಿಸುವುದರಿಂದ ವಿನಾಯಿತಿಗೊಳಿಸಿರುವಂಥ ಯಾವುದೇ ಮಾಹಿತಿಯನ್ನು ಒಳಗೊಂಡಿರದಂಥ ಹಾಗೂ ವಿನಾಯಿತಿಗೊಳಿಸಿರುವ ಮಾಹಿತಿಯನ್ನೊಳಗೊಂಡ ಯಾವುದೇ ಭಾಗದಿಂದ ಅದನ್ನು ಯುಕ್ತವಾಗಿ ಪ್ರತ್ಯೇಕಿಸಬಹುದಾದಂಥ ದಾಖಲೆಯ ಆ ಭಾಗವನ್ನು ಪಡೆಯಲು ಅವಕಾಶ ನೀಡಬಹುದು.

(2) ಉಪಪ್ರಕರಣ (1)ರ ಮೇರೆಗೆ ದಾಖಲೆಯ ಆ ಭಾಗವನ್ನು ಪಡೆಯುವ ಅವಕಾಶವನ್ನು ನೀಡಿದಾಗ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು,–

(ಎ) ಬಹಿರಂಗಪಡಿಸುವುದರಿಂದ ವಿನಾಯಿತಿಗೊಳಿಸಲಾಗಿರುವಂಥ ಮಾಹಿತಿಯನ್ನು ಒಳಗೊಂಡಿರುವ ದಾಖಲೆಯನ್ನು ಪ್ರತ್ಯೇಕಿಸಿದ ನಂತರ, ಕೋರಲಾಗಿರುವ ದಾಖಲೆಯ ಭಾಗವನ್ನು ಮಾತ್ರ ಒದಗಿಸಲಾಗುತ್ತದೆ ಎಂದು ತಿಳಿಸಿ;

(ಬಿ) ನಿರ್ಣಯಗಳು ಯಾವ ವಿಷಯ ಸಾಮಗ್ರಿಯನ್ನು ಆಧರಿಸಿವೆಯೋ ಆ ವಿಷಯ ಸಾಮಗ್ರಿಯ ಉಲ್ಲೇಖವನ್ನು ಒಳಗೊಂಡಂತೆ ಸಂಗತಿಗೆ ಸಂಬಂಧಿಸಿದ ಯಾವುದೇ ಮುಖ್ಯ ಪ್ರಶ್ನೆಯ ಮೇಲಿನ ಯಾವುದೇ ನಿರ್ಣಯಕ್ಕೆ ಕಾರಣಗಳು;

(ಸಿ) ನಿರ್ಣಯ ನೀಡುವ ವ್ಯಕ್ತಿಯ ಹೆಸರು ಮತ್ತು ಪದನಾಮ;

(ಡಿ) ಆತನು ಅಥವಾ ಆಕೆಯು ಲೆಕ್ಕ ಹಾಕಿದ ಶುಲ್ಕದ ವಿವರಗಳು ಮತ್ತು ಅರ್ಜಿದಾರನು ಠೇವಣಿ ಮಾಡಬೇಕಾದ ಶುಲ್ಕದ ಮೊಬಲಗು; ಮತ್ತು

(ಇ) ಮಾಹಿತಿಯ ಭಾಗವನ್ನು ಬಹಿರಂಗಪಡಿಸದಿರುವುದಕ್ಕೆ ಸಂಬಂಧಿಸಿದ ನಿರ್ಧಾರವನ್ನು ಪುನರ್ ಪರಿಶೀಲಿಸುವುದಕ್ಕೆ ಸಂಬಂಧಪಟ್ಟಂತೆ ಆತನಿಗೆ ಅಥವಾ ಆಕೆಗೆ ಇರುವ ಹಕ್ಕುಗಳು, ವಿಧಿಸಲಾದ ಶುಲ್ಕದ ಮೊಬಲಗು ಅಥವಾ ಮಾಹಿತಿ ಪಡೆಯುವ ಅವಕಾಶದ ರೀತಿ ಹಾಗೂ 19ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ಹಿರಿಯ ಅಧಿಕಾರಿಯ ಅಥವಾ ಕೇಂದ್ರ ಮಾಹಿತಿ ಆಯೋಗದ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗದ ವಿವರಗಳು ಕಾಲಪರಿಮಿತಿ, ಪ್ರಕ್ರಿಯೆ ಹಾಗೂ ಮಾಹಿತಿ ಪಡೆಯುವ ಯಾವುದೇ ಇತರ ರೀತಿ ಇವುಗಳನ್ನು ತಿಳಿಸಿ ಅರ್ಜಿದಾರನಿಗೆ ಒಂದು ನೋಟೀಸು ನೀಡತಕ್ಕದ್ದು.

11. ಮೂರನೇ ಪಕ್ಷದಾರನ ಮಾಹಿತಿ.– (1) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಈ ಅಧಿನಿಯಮದ ಮೇರೆಗೆ ಸಲ್ಲಿಸಿರುವ ಕೋರಿಕೆಯ ಮೇಲೆ ಮೂರನೇ ಪಕ್ಷಕಾರನಿಗೆ ಸಂಬಂಧಿಸಿದ ಅಥವಾ ಆತ ಪೂರೈಸಿದಂಥ ಹಾಗೂ ಆ ಮೂರನೇ ಪಕ್ಷಕಾರನು ರಹಸ್ಯ ಎಂದು ಪರಿಗಣಿಸಿರುವಂಥ ಯಾವುದೇ ಮಾಹಿತಿಯನ್ನು ಅಥವಾ ದಾಖಲೆಯನ್ನು ಅಥವಾ ಅದರ ಭಾಗವನ್ನು ಬಹಿರಂಗಪಡಿಸಲು ಉದ್ದೇಶಿಸಿದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಕೋರಿಕೆಯನ್ನು ಸ್ವೀಕರಿಸಿದ ಐದು ದಿವಸಗಳೊಳಗೆ, ಆ ಕೋರಿಕೆಯನ್ನು ಸಲ್ಲಿಸಿರುವಂಥ ಮೂರನೆ ಪಕ್ಷಕಾರನಿಗೆ ಮಾಹಿತಿಯನ್ನು ಅಥವಾ ದಾಖಲೆಯನ್ನು ಅಥವಾ ಅದರ ಭಾಗವನ್ನು ಬಹಿರಂಗಪಡಿಸಲು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಉದ್ದೇಶಿಸಿದ್ದಾನೆ ಎಂಬ ವಾಸ್ತವ ಸಂಗತಿಯನ್ನು ತಿಳಿಸಿ ಲಿಖಿತ ನೋಟೀಸು ನೀಡತಕ್ಕದ್ದು ಹಾಗೂ ಮಾಹಿತಿಯನ್ನು ಬಹಿರಂಗಪಡಿಸಬೇಕೆ ಎಂಬ ಬಗ್ಗೆ ಲಿಖಿತ ಅಥವಾ

ಮೌಖಿಕ ಹೇಳಿಕೆಯನ್ನು ಸಲ್ಲಿಸುವಂತೆ ಮೂರನೇ ಪಕ್ಷಕಾರನನ್ನು ಕೋರತಕ್ಕದ್ದು ಹಾಗೂ ಮೂರನೆ ಪಕ್ಷಕಾರನು ಸಲ್ಲಿಸಿದ ಅಂಥ ಹೇಳಿಕೆಯನ್ನು, ಮಾಹಿತಿಯನ್ನು ಬಹಿರಂಗಪಡಿಸುವ ಬಗ್ಗೆ ತೀರ್ಮಾನ ತೆಗೆದುಕೊಳ್ಳುವಾಗ ಗಮನದಲ್ಲಿ ಇಟ್ಟುಕೊಳ್ಳತಕ್ಕದ್ದು:

ಪರಂತು, ಕಾನೂನಿನಿಂದ ರಕ್ಷಣೆ ಒದಗಿಸಿರುವಂಥ ವ್ಯಾಪಾರ ಅಥವಾ ವಾಣಿಜ್ಯ ರಹಸ್ಯಗಳ ವಿಷಯದಲ್ಲಿ ಹೊರತು, ಬಹಿರಂಗಪಡಿಸುವುದರಲ್ಲಿರುವ ಸಾರ್ವಜನಿಕ ಹಿತಾಸಕ್ತಿಯು ಅಂಥ ಮೂರನೇ ಪಕ್ಷಕಾರನ ಹಿತಾಸಕ್ತಿಗೆ ಉಂಟಾಗುವ ಯಾವುದೇ ಸಂಭಾವ್ಯ ಹಾನಿ ಅಥವಾ ಕ್ಷತಿಗಿಂತ ಪ್ರಮುಖವೆನಿಸಿದ ಪಕ್ಷದಲ್ಲಿ ಬಹಿರಂಗಪಡಿಸುವುದಕ್ಕೆ ಅನುಮತಿ ನೀಡಬಹುದು.

(2) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು, ಯಾವುದೇ ಮಾಹಿತಿ ಅಥವಾ ದಾಖಲೆ ಅಥವಾ ಅದರ ಭಾಗದ ಸಂಬಂಧದಲ್ಲಿ ಮೂರನೆಯ ಪಕ್ಷಕಾರನಿಗೆ ಉಪಪ್ರಕರಣ (1)ರ ಮೇರೆಗೆ ನೋಟೀಸನ್ನು ಜಾರಿ ಮಾಡಿರುವಲ್ಲಿ, ಅಂಥ ನೋಟೀಸನ್ನು ಸ್ವೀಕರಿಸಿದ ದಿನಾಂಕದಿಂದ ಹತ್ತು ದಿವಸಗಳೊಳಗೆ ಉದ್ದೇಶಿತ ಬಹಿರಂಗಪಡಿಸುವಿಕೆಯ ವಿರುದ್ಧ ಮನವಿಯನ್ನು ಸಲ್ಲಿಸಲು ಮೂರನೆಯ ಪಕ್ಷಕಾರನಿಗೆ ಅವಕಾಶ ನೀಡತಕ್ಕದ್ದು.

(3) 7ನೇ ಪ್ರಕರಣದಲ್ಲಿ ಏನೇ ಒಳಗೊಂಡಿದ್ದರೂ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು, (2)ನೇ ಉಪಪ್ರಕರಣದ ಅಡಿಯಲ್ಲಿ ಮನವಿಯನ್ನು ಸಲ್ಲಿಸಲು ಮೂರನೆಯ ಪಕ್ಷಕಾರನಿಗೆ ಅವಕಾಶ ನೀಡಿದ್ದರೆ 6ನೇ ಪ್ರಕರಣದ ಅಡಿಯಲ್ಲಿ ಸಲ್ಲಿಸಿದ ಕೋರಿಕೆಯನ್ನು ಸ್ವೀಕರಿಸಿದ ನಂತರ ನಲವತ್ತು ದಿವಸಗಳೊಳಗಾಗಿ ಮಾಹಿತಿಯನ್ನು ಅಥವಾ ದಾಖಲೆಯನ್ನು ಅಥವಾ ಅದರ ಭಾಗವನ್ನು ಬಹಿರಂಗಪಡಿಸುವುದಕ್ಕೆ ಅಥವಾ ಬಹಿರಂಗಪಡಿಸದಿರುವುದಕ್ಕೆ ಸಂಬಂಧಪಟ್ಟಂತೆ ನಿರ್ಣಯ ತೆಗೆದುಕೊಂಡು ತನ್ನ ನಿರ್ಣಯವನ್ನು ತಿಳಿಸಿರುವ ಲಿಖಿತ ನೋಟೀಸನ್ನು ಮೂರನೆಯ ಪಕ್ಷಕಾರನಿಗೆ ನೀಡತಕ್ಕದ್ದು.

(4) (3)ನೇ ಉಪಪ್ರಕರಣದ ಅಡಿಯಲ್ಲಿ ನೀಡಲಾದ ನೋಟೀಸಿನಲ್ಲಿ ಯಾರಿಗೆ ನೋಟಿಸನ್ನು ನೀಡಲಾಗಿದೆಯೋ ಅಂಥ ಮೂರನೇ ಪಕ್ಷಕಾರನು ಆ ನಿರ್ಣಯದ ವಿರುದ್ಧ 19ನೇ ಪ್ರಕರಣದ ಮೇರೆಗೆ ಅಪೀಲು ಸಲ್ಲಿಸಲು ಹಕ್ಕುಳ್ಳವನಾಗಿರುತ್ತಾನೆ ಎಂಬ ಹೇಳಿಕೆಯನ್ನು ಒಳಗೊಂಡಿರಕ್ಕದ್ದು.

# ಅಧ್ಯಾಯ – III

## ಕೇಂದ್ರ ಮಾಹಿತಿ ಆಯೋಗ

12. ಕೇಂದ್ರ ಮಾಹಿತಿ ಆಯೋಗದ ರಚನೆ.– (1) ಕೇಂದ್ರ ಸರ್ಕಾರವು, ಅಧಿಕೃತ ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ ಈ ಅಧಿನಿಯಮದ ಮೇರೆಗೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಲು ಮತ್ತು ವಹಿಸಿದ ಪ್ರಕಾರ್ಯಗಳನ್ನು ನಿರ್ವಹಿಸಲು ಕೇಂದ್ರ ಮಾಹಿತಿ ಆಯೋಗ ಎಂಬ ಹೆಸರಿನ ಸಂಸ್ಥೆಯನ್ನು ರಚಿಸತಕ್ಕದ್ದು.

(2) ಕೇಂದ್ರ ಮಾಹಿತಿ ಆಯೋಗವು,–

(ಎ) ಮುಖ್ಯ ಮಾಹಿತಿ ಆಯುಕ್ತರು ಮತ್ತು

(ಬಿ) ಅವಶ್ಯವೆಂದು ಭಾವಿಸಬಹುದಾದಂಥ ಹತ್ತಕ್ಕೆ ಮೀರದಷ್ಟು ಸಂಖ್ಯೆಯ ಕೇಂದ್ರ ಮಾಹಿತಿ ಆಯುಕ್ತರುಗಳನ್ನು ಒಳಗೊಂಡಿರತಕ್ಕದ್ದು.

(3) ಮುಖ್ಯ ಮಾಹಿತಿ ಆಯುಕ್ತ ಹಾಗೂ ಮಾಹಿತಿ ಆಯುಕ್ತರುಗಳನ್ನು,–

(i) ಪ್ರಧಾನ ಮಂತ್ರಿ, ಸಮಿತಿಯ ಅಧ್ಯಕ್ಷರಾಗಿರತಕ್ಕದ್ದು;

(ii) ಲೋಕಸಭೆಯಲ್ಲಿನ ವಿರೋಧಪಕ್ಷದ ನಾಯಕ; ಮತ್ತು

(iii) ಪ್ರಧಾನ ಮಂತ್ರಿಯು ನಾಮನಿರ್ದೇಶಿಸುವಂಥ ಕೇಂದ್ರ ಸಚಿವ ಸಂಪುಟ ದರ್ಜೆಯ ಸಚಿವ – ಇವರನ್ನೊಳಗೊಂಡ ಸಮಿತಿಯ ಶಿಫಾರಸನ್ನು ಆಧರಿಸಿ ರಾಷ್ಟ್ರಪತಿಯವರು ನೇಮಕ ಮಾಡತಕ್ಕದ್ದು.

ವಿವರಣೆ.– ಸಂದೇಹಗಳ ನಿವಾರಣೆಯ ಉದ್ದೇಶಗಳಿಗಾಗಿ, ಲೋಕಸಭೆಯಲ್ಲಿ ವಿರೋಧಪಕ್ಷದ ನಾಯಕನನ್ನು ಆ ರೀತಿ ಮಾನ್ಯ ಮಾಡಿರದಿದ್ದಲ್ಲಿ ಲೋಕಸಭೆಯಲ್ಲಿನ ಸರ್ಕಾರದ ವಿರೋಧಪಕ್ಷಗಳಲ್ಲಿ ಅತ್ಯಂತ ಹೆಚ್ಚು ಸದಸ್ಯರನ್ನೊಳಗೊಂಡ ಪಕ್ಷದ ನಾಯಕನನ್ನು ವಿರೋಧ ಪಕ್ಷದ ನಾಯಕನೆಂದು ಭಾವಿಸತಕ್ಕದ್ದು ಎಂಬುದಾಗಿ ಈ ಮೂಲಕ ಘೋಷಿಸಲಾಗಿದೆ.

(4) ಕೇಂದ್ರ ಮಾಹಿತಿ ಅಯೋಗದ ವ್ಯವಹಾರಗಳ ಸಾಮಾನ್ಯ ಉಸ್ತುವಾರಿ, ನಿರ್ದೇಶನ ಮತ್ತು ನಿರ್ವಹಣೆ ಮುಖ್ಯ ಮಾಹಿತಿ ಆಯುಕ್ತನಲ್ಲಿ ನಿಹಿತವಾಗಿರತಕ್ಕದ್ದು. ಆತನಿಗೆ ಮಾಹಿತಿ ಆಯುಕ್ತರುಗಳು ನೆರವು ನೀಡತಕ್ಕದ್ದು. ಆತ ಈ ಅಧಿನಿಯಮದಡಿಯಲ್ಲಿ ಯಾವುದೇ ಇತರ ಪ್ರಾಧಿಕಾರಿಯು ನೀಡುವ ನಿರ್ದೇಶನಗಳಿಗೆ ಒಳಪಡದೆ ಕೇಂದ್ರ ಮಾಹಿತಿ ಅಯೋಗವು ಚಲಾಯಿಸಬಹುದಾದಂಥ ಎಲ್ಲ ಅಧಿಕಾರಗಳನ್ನು ಆತನು ಸ್ವತಂತ್ರವಾಗಿ ಚಲಾಯಿಸಬಹುದು ಮತ್ತು ನಿರ್ವಹಿಸಬಹುದಾದಂಥ ಎಲ್ಲ ಕಾರ್ಯಗಳನ್ನು ಮತ್ತು ವಿಷಯಗಳನ್ನು ನಿರ್ವಹಿಸಬಹುದು.

(5) ಮುಖ್ಯ ಮಾಹಿತಿ ಆಯುಕ್ತರು ಹಾಗೂ ಮಾಹಿತಿ ಆಯುಕ್ತರುಗಳು ಕಾನೂನು, ವಿಜ್ಞಾನ ಮತ್ತು ತಂತ್ರಜ್ಞಾನ, ಸಮಾಜಸೇವೆ, ವ್ಯವಸ್ಥಾಪನೆ, ಪತ್ರಿಕೋದ್ಯಮ, ಸಮೂಹ ಮಾಧ್ಯಮ, ನಿರ್ವಹಣೆ ಅಥವಾ ಆಡಳಿತ ಈ ಕ್ಷೇತ್ರಗಳಲ್ಲಿ ಆಳವಾದ ಜ್ಞಾನ ಮತ್ತು ಅನುಭವವನ್ನು ಹೊಂದಿರುವುದರೊಂದಿಗೆ, ಸಾರ್ವಜನಿಕ ಜೀವನದಲ್ಲಿ ಉನ್ನತಸ್ಥಾನ ಗಳಿಸಿರುವಂಥ ವ್ಯಕ್ತಿಗಳಾಗಿರತಕ್ಕದ್ದು.

(6) ಮುಖ್ಯ ಮಾಹಿತಿ ಆಯುಕ್ತರು ಅಥವಾ ಸಂದರ್ಭಾನುಸಾರ, ಒಬ್ಬ ಮಾಹಿತಿ ಆಯುಕ್ತನು ಒಬ್ಬ ಸಂಸತ್ ಸದಸ್ಯ ಅಥವಾ ಯಾವುದೇ ರಾಜ್ಯದ ಅಥವಾ ಕೇಂದ್ರಾಡಳಿತ ಪ್ರದೇಶದ ವಿಧಾನಮಂಡಲದ ಸದಸ್ಯನಾಗಿರತಕ್ಕದ್ದಲ್ಲ, ಅಥವಾ ಯಾವುದೇ ಇತರ ಲಾಭದಾಯಕ ಪದನಾಮವನ್ನು ಹೊಂದಿರತಕ್ಕದ್ದಲ್ಲ ಅಥವಾ ಯಾವುದೇ ರಾಜಕೀಯ ಪಕ್ಷದೊಂದಿಗೆ ಸಂಪರ್ಕ ಹೊಂದಿರತಕ್ಕದ್ದಲ್ಲ ಅಥವಾ ಯಾವುದೇ ವ್ಯವಹಾರವನ್ನು ನಡೆಸತಕ್ಕದ್ದಲ್ಲ ಅಥವಾ ಯಾವುದೇ ವೃತ್ತಿಯನ್ನು ಅವಲಂಬಿಸಿರತಕ್ಕದ್ದಲ್ಲ.

(7) ಕೇಂದ್ರ ಮಾಹಿತಿ ಅಯೋಗದ ಕೇಂದ್ರ ಕಚೇರಿ ದೆಹಲಿಯಲ್ಲಿರತಕ್ಕದ್ದು. ಕೇಂದ್ರ ಮಾಹಿತಿ ಆಯೋಗವು, ಕೇಂದ್ರ ಸರ್ಕಾರದ ಪೂರ್ವ ಅನುಮೋದನೆಯೊಂದಿಗೆ ಭಾರತದ ಇತರ ಸ್ಥಳಗಳಲ್ಲಿ ಕಛೇರಿಗಳನ್ನು ಸ್ಥಾಪಿಸಬಹುದು.

13. ಪದಾವಧಿ ಮತ್ತು ಸೇವಾ ಷರತ್ತುಗಳು.– (1) ಮುಖ್ಯ ಮಾಹಿತಿ ಆಯುಕ್ತರು ತನ್ನ ಹುದ್ದೆಯನ್ನು ವಹಿಸಿಕೊಂಡ ದಿನಾಂಕದಿಂದ ಐದು ವರ್ಷಗಳ ಅವಧಿಗೆ ಪದದಲ್ಲಿರತಕ್ಕದ್ದು ಹಾಗೂ ಪುನರ್‌ನೇಮಕಕ್ಕೆ ಅರ್ಹನಾಗಿರತಕ್ಕದ್ದಲ್ಲ:

ಪರಂತು, ಯಾರೇ ಮಾಹಿತಿ ಆಯುಕ್ತರು ಆತನಿಗೆ ಅರವತ್ತೈದು ವರ್ಷ ವಯಸ್ಸಾದ ನಂತರ ಮಾಹಿತಿ ಆಯುಕ್ತರ ಹುದ್ದೆಯನ್ನು ಹೊಂದಿರತಕ್ಕದ್ದಲ್ಲ.

(2) ಪ್ರತಿಯೊಬ್ಬ ಮಾಹಿತಿ ಆಯುಕ್ತರು ತನ್ನ ಹುದ್ದೆಯನ್ನು ವಹಿಸಿಕೊಂಡ ದಿನಾಂಕದಿಂದ ಐದು ವರ್ಷಗಳ ಅವಧಿಗೆ ಅಥವಾ ಆತನಿಗೆ ಅರವತ್ತೈದು ವರ್ಷ ವಯಸ್ಸಾಗುವವರೆಗೆ, ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಹುದ್ದೆಯನ್ನು ಹೊಂದಿರತಕ್ಕದ್ದು ಮತ್ತು ಅಂಥ ಮಾಹಿತಿ ಆಯುಕ್ತರನ್ನಾಗಿ ಪುನರ್‌ನೇಮಕಗೊಳ್ಳುವುದಕ್ಕೆ ಅರ್ಹನಾಗಿರತಕ್ಕದ್ದಲ್ಲ:

ಪರಂತು, ಪ್ರತಿಯೊಬ್ಬ ಮಾಹಿತಿ ಆಯುಕ್ತನು ಈ ಉಪಪ್ರಕರಣದ ಮೇರೆಗೆ ತನ್ನ ಪದವನ್ನು ತೆರವುಗೊಳಿಸಿದ ನಂತರ 12ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ರೀತಿಯಲ್ಲಿ ಮುಖ್ಯ ಮಾಹಿತಿ ಆಯುಕ್ತನಾಗಿ ನೇಮಕಗೊಳ್ಳಲು ಅರ್ಹನಾಗಿರತಕ್ಕದ್ದು.

ಮತ್ತೂ ಪರಂತು, ಮಾಹಿತಿ ಆಯುಕ್ತನು ಮುಖ್ಯ ಮಾಹಿತಿ ಆಯುಕ್ತನಾಗಿ ನೇಮಕಗೊಂಡ ಪಕ್ಷದಲ್ಲಿ ಆತನ ಹುದ್ದೆಯು ಮಾಹಿತಿ ಆಯುಕ್ತ ಮತ್ತು ಮುಖ್ಯ ಮಾಹಿತಿ ಆಯುಕ್ತನಾಗಿ ಒಟ್ಟು ಐದು ವರ್ಷಗಳಿಗಿಂತ ಹೆಚ್ಚಾಗತಕ್ಕದ್ದಲ್ಲ.

(3) ಮುಖ್ಯ ಮಾಹಿತಿ ಆಯುಕ್ತ ಅಥವಾ ಒಬ್ಬ ಮಾಹಿತಿ ಆಯುಕ್ತರು ತನ್ನ ಹುದ್ದೆಯನ್ನು ವಹಿಸಿಕೊಳ್ಳುವುದಕ್ಕೆ ಮುಂಚೆ, ಮೊದಲನೇ ಅನುಸೂಚಿಯಲ್ಲಿ ಪ್ರಮಾಣ ಅಥವಾ ದೃಢೀಕರಣದ ಉದ್ದೇಶಕ್ಕಾಗಿ ರೂಪಿಸಿರುವ ನಮೂನೆಗೆ ಅನುಸಾರವಾಗಿ ರಾಷ್ಟ್ರಪತಿಯ ಅಥವಾ ಆ ಸಂಬಂಧ ರಾಷ್ಟ್ರಪತಿಯವರಿಂದ ನೇಮಕಗೊಂಡ ಇತರ ವ್ಯಕ್ತಿಯ ಮುಂದೆ ಪ್ರಮಾಣ ಅಥವಾ ದೃಢೀಕರಣ ಮಾಡಿ, ಅದಕ್ಕೆ ರುಜುಮಾಡತಕ್ಕದ್ದು.

(4) ಮುಖ್ಯ ಮಾಹಿತಿ ಆಯುಕ್ತ ಅಥವಾ ಒಬ್ಬ ಮಾಹಿತಿ ಆಯುಕ್ತನು ಯಾವುದೇ ಸಮಯದಲ್ಲಿ, ಬರೆದು ತಾನು ಸಹಿ ಹಾಕಿರುವ ರಾಜೀನಾಮೆ ಪತ್ರವನ್ನು ರಾಷ್ಟ್ರಪತಿಗೆ ಸಲ್ಲಿಸುವ ಮೂಲಕ ತನ್ನ ಹುದ್ದೆಗೆ ರಾಜೀನಾಮೆ ನೀಡಬಹುದು:

ಪರಂತು, ಪ್ರಕರಣ 14ರ ಅಡಿಯಲ್ಲಿ ನಿರ್ದಿಷ್ಟಪಡಿಸಿರುವ ರೀತಿಯಲ್ಲಿ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಒಬ್ಬ ಮಾಹಿತಿ ಆಯುಕ್ತನನ್ನು ತೆಗೆದುಹಾಕಬಹುದು.

(5) "(ಎ) ಮುಖ್ಯ ಮಾಹಿತಿ ಆಯುಕ್ತನಿಗೆ ಸಂದಾಯ ಮಾಡತಕ್ಕ ಸಂಬಳ ಮತ್ತು ಭತ್ಯೆಗಳು ಹಾಗೂ ಆತನ ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು, ಮುಖ್ಯ ಚುನಾವಣಾ ಆಯುಕ್ತನ ವೇತನ ಮತ್ತು ಭತ್ಯೆಗಳು ಮತ್ತು ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳಂತೆಯೇ ಇರತಕ್ಕದ್ದು;"

"(ಬಿ) ಒಬ್ಬ ಮಾಹಿತಿ ಆಯುಕ್ತನಿಗೆ ಸಂದಾಯ ಮಾಡತಕ್ಕ ವೇತನ ಮತ್ತು ಭತ್ಯೆಗಳು ಹಾಗೂ ಆತನ ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ಒಬ್ಬ ಚುನಾವಣಾ ಆಯುಕ್ತನ ಸಂಬಳ ಮತ್ತು ಭತ್ಯೆಗಳು ಹಾಗೂ ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳಂತೆಯೇ ಇರತಕ್ಕದ್ದು":

ಪರಂತು, ಮುಖ್ಯ ಮಾಹಿತಿ ಆಯುಕ್ತನು ಅಥವಾ ಒಬ್ಬ ಮಾಹಿತಿ ಅಯುಕ್ತನು ಆತನ ನೇಮಕಾತಿಯ ಸಮಯದಲ್ಲಿ ಭಾರತ ಸರ್ಕಾರದ ಅಡಿಯಲ್ಲಿ ಅಥವಾ ರಾಜ್ಯ ಸರ್ಕಾರದಡಿಯಲ್ಲಿ ಸಲ್ಲಿಸಿದ ಯಾವುದೇ ಹಿಂದಿನ ಸೇವೆಯ ಸಂಬಂಧದಲ್ಲಿ ನಿವೃತ್ತಿ ವೇತನವನ್ನು, ಅಸಮರ್ಥತೆ ಅಥವಾ

ನೋವಿಗಾಗಿನ ನಿವೃತ್ತಿ ವೇತನವನ್ನು ಹೊರತುಪಡಿಸಿ ಪಡೆಯುತ್ತಿದ್ದರೆ, ಮುಖ್ಯ ಮಾಹಿತಿ ಅಯುಕ್ತ ಅಥವಾ ಮಾಹಿತಿ ಆಯುಕ್ತನಾಗಿ ಸಲ್ಲಿಸುತ್ತಿರುವ ಸೇವೆಗೆ ಸಂಬಂಧಪಟ್ಟಂತೆ ಆತನ ವೇತನವನ್ನು, ಪರಿವರ್ತಿಸಿದ ನಿವೃತ್ತಿ ವೇತನದ ಯಾವುದೇ ಭಾಗವನ್ನೊಳಗೊಂಡ ಆ ನಿವೃತ್ತಿ ವೇತನ ಹಾಗೂ ನಿವೃತ್ತಿ ಉಪಾದಾನಕ್ಕೆ ಸಮಾನವಾದ ನಿವೃತ್ತಿ ವೇತನವನ್ನು ಹೊರತುಪಡಿಸಿ ಇತರ ರೀತಿಯ ನಿವೃತ್ತಿ ಪ್ರಯೋಜನಗಳಿಗೆ ಸಮಾನವಾದ ನಿವೃತ್ತಿ ವೇತನದ ಮೊತ್ತದಷ್ಟು ಕಡಿಮೆ ಮಾಡತಕ್ಕದ್ದು:

ಮತ್ತೂ ಪರಂತು, ಮುಖ್ಯ ಮಾಹಿತಿ ಆಯುಕ್ತ ತನ್ನ ನೇಮಕಾತಿಯ ಸಮಯದಲ್ಲಿ ಯಾವುದೇ ಕೇಂದ್ರ ಅಧಿನಿಯಮ ಅಥವಾ ರಾಜ್ಯ ಅಧಿನಿಯಮದಿಂದ ಅಥವಾ ಅದರ ಅಡಿಯಲ್ಲಿ ಸ್ಥಾಪಿತವಾದ ನಿಗಮದಲ್ಲಿ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ಒಡೆತನದಲ್ಲಿ ಅಥವಾ ನಿಯಂತ್ರಣದಲ್ಲಿ ಇರುವ ಸರ್ಕಾರಿ ಕಂಪನಿಯಲ್ಲಿ ಸಲ್ಲಿಸಿದ ಯಾವುದೇ ಹಿಂದಿನ ಸೇವೆಯ ಸಂಬಂಧದಲ್ಲಿ ಪಿಂಚಣಿ ಪ್ರಯೋಜನಗಳನ್ನು ಪಡೆಯುತ್ತಿದ್ದರೆ, ಮುಖ್ಯ ಮಾಹಿತಿ ಆಯುಕ್ತನಾಗಿ ಅಥವಾ ಮಾಹಿತಿ ಆಯುಕ್ತನಾಗಿ ಸಲ್ಲಿಸುವ ಸೇವೆಯ ಸಂಬಂಧದಲ್ಲಿ ಆತನಿಗೆ ನೀಡುವ ಸಂಬಳವನ್ನು ನಿವೃತ್ತಿ ಪ್ರಯೋಜನಗಳಿಗೆ ಸಮನಾದ ನಿವೃತ್ತಿ ವೇತನದ ಮೊತ್ತದಷ್ಟು ಕಡಿಮೆ ಮಾಡತಕ್ಕದ್ದು.

ಅದು ಅಲ್ಲದೇ, ಮುಖ್ಯ ಮಾಹಿತಿ ಆಯುಕ್ತನ ಮತ್ತು ಮಾಹಿತಿ ಆಯುಕ್ತರುಗಳ ಸಂಬಳ, ಭತ್ಯೆಗಳು ಮತ್ತು ಇತರ ಸೇವಾ ಷರತ್ತುಗಳನ್ನು ಅವರನ್ನು ನೇಮಕ ಮಾಡಿದ ನಂತರ ಅವರಿಗೆ ಅನಾನುಕೂಲವಾಗುವ ರೀತಿಯಲ್ಲಿ ವ್ಯತ್ಯಾಸ ಮಾಡತಕ್ಕದ್ದಲ್ಲ.

(6) ಕೇಂದ್ರ ಸರ್ಕಾರವು, ಮುಖ್ಯ ಮಾಹಿತಿ ಆಯುಕ್ತ ಮತ್ತು ಮಾಹಿತಿ ಆಯುಕ್ತರುಗಳಿಗೆ ಈ ಅಧಿನಿಯಮದ ಅಡಿಯಲ್ಲಿ ತಮ್ಮ ಪ್ರಕಾರ್ಯಗಳ ದಕ್ಷ ನಿರ್ವಹಣೆಗಾಗಿ ಅವಶ್ಯವಾಗಬಹುದಾದಂಥ ಅಧಿಕಾರಿಗಳನ್ನು ಮತ್ತು ನೌಕರರನ್ನು ಒದಗಿಸತಕ್ಕದ್ದು ಹಾಗೂ ಈ ಅಧಿನಿಯಮದ ಉದ್ದೇಶಕ್ಕಾಗಿ ನೇಮಕ ಮಾಡಲಾದ ಅಧಿಕಾರಿಗಳಿಗೆ ಮತ್ತು ಇತರೆ ನೌಕರರಿಗೆ ಸಂದಾಯ ಮಾಡತಕ್ಕ ವೇತನ ಮತ್ತು ಭತ್ಯೆಗಳು ಹಾಗೂ ಅವರ ಸೇವಾ ನಿಬಂಧನೆಗಳು ಹಾಗೂ ಷರತ್ತುಗಳು ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

14. ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಮಾಹಿತಿ ಆಯುಕ್ತನನ್ನು ತೆಗೆದುಹಾಕುವುದು.– (1) (3)ನೇ ಉಪಪ್ರಕರಣದ ಉಪಬಂಧಗಳಿಗೊಳಪಟ್ಟು, ಮುಖ್ಯ ಮಾಹಿತಿ ಆಯುಕ್ತ ಅಥವಾ ಯಾರೇ ಮಾಹಿತಿ ಆಯುಕ್ತನನ್ನು, ರಾಷ್ಟ್ರಪತಿಯು ಸರ್ವೋಚ್ಚ ನ್ಯಾಯಾಲಯಕ್ಕೆ ಮಾಡಿದ ಉಲ್ಲೇಖದ ಮೇರೆಗೆ, ಸರ್ವೋಚ್ಚ ನ್ಯಾಯಾಲಯವು ವಿಚಾರಣೆ ನಡೆಸಿದ ತರುವಾಯ, ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಸಂದರ್ಭಾನುಸಾರ, ಯಾರೇ ಮಾಹಿತಿ ಆಯುಕ್ತನನ್ನು ರುಜುವಾತಾದ ದುರ್ವರ್ತನೆ ಅಥವಾ ಅಸಮರ್ಥತೆಯ ಕಾರಣದ ಮೇಲೆ ತೆಗೆದು ಹಾಕಬೇಕೆಂದು ವರದಿ ಮಾಡಿದ ತರುವಾಯ, ಅಂಥ ಕಾರಣದ ಮೇಲೆ ರಾಷ್ಟ್ರಪತಿಯ ಆದೇಶದ ಮೂಲಕ ಮಾತ್ರ ಆತನನ್ನು ಹುದ್ದೆಯಿಂದ ತೆಗೆದುಹಾಕತಕ್ಕದ್ದು.

(2) ರಾಷ್ಟ್ರಪತಿಯು, ಯಾರ ಸಂಬಂಧದಲ್ಲಿ (1)ನೇ ಉಪಪ್ರಕರಣದ ಅಡಿಯಲ್ಲಿ ಸರ್ವೋಚ್ಚ ನ್ಯಾಯಾಲಯಕ್ಕೆ ಉಲ್ಲೇಖವನ್ನು ಮಾಡಿದ್ದಾರೆಯೋ ಆ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಮಾಹಿತಿ ಆಯುಕ್ತನನ್ನು ಅಂಥ ಉಲ್ಲೇಖವನ್ನು ಕುರಿತಂತೆ ಸರ್ವೋಚ್ಚ ನ್ಯಾಯಾಲಯದ ವರದಿಯನ್ನು ಸ್ವೀಕರಿಸಿದ ನಂತರ ರಾಷ್ಟ್ರಪತಿಯು ಆದೇಶಗಳನ್ನು ಹೊರಡಿಸುವವರೆಗೆ ಹುದ್ದೆಯಿಂದ ಅಮಾನತು ಮಾಡಬಹುದು ಮತ್ತು ಅವಶ್ಯವೆಂದು ಭಾವಿಸಿದರೆ ವಿಚಾರಣೆಯ ಅವಧಿಯಲ್ಲಿ ಕಚೇರಿಗೆ ಹಾಜರಾಗುವುದನ್ನು ಸಹ ನಿಷೇಧಿಸಬಹುದು.

(3) (1)ನೇ ಉಪಪ್ರಕರಣದಲ್ಲಿ ಏನೇ ಇದ್ದರೂ, ರಾಷ್ಟ್ರಪತಿಯು, ಮುಖ್ಯ ಮಾಹಿತಿ ಆಯುಕ್ತ ಅಥವಾ ಸಂದರ್ಭಾನುಸಾರ ಮಾಹಿತಿ ಆಯುಕ್ತನು,–

(ಎ) ದಿವಾಳಿ ಎಂದು ನ್ಯಾಯ ನಿರ್ಣೀತನಾಗಿದ್ದರೆ; ಅಥವಾ

(ಬಿ) ನೈತಿಕ ಅಧಃಪತನವನ್ನೊಳಗೊಂಡ ಅಪರಾಧದ ನಿರ್ಣೀತ ಅಪರಾಧಿಯಾಗಿದ್ದಾನೆಂದು ರಾಷ್ಟ್ರಪತಿಯು ಅಭಿಪ್ರಾಯ ಪಟ್ಟರೆ; ಅಥವಾ

(ಸಿ) ತನ್ನ ಪದಾವಧಿಯಲ್ಲಿ, ತನ್ನ ಹುದ್ದೆಯ ಕರ್ತವ್ಯಗಳನ್ನು ಮೀರಿ ಹೊರಗೆ ಯಾವುದೇ ವೇತನ ಪಡೆಯುವ ಉದ್ಯೋಗದಲ್ಲಿ ತೊಡಗಿದ್ದರೆ; ಅಥವಾ

(ಡಿ) ಮಾನಸಿಕ ಅಥವಾ ದೈಹಿಕ ದೌರ್ಬಲ್ಯದ ಕಾರಣದಿಂದ ಹುದ್ದೆಯಲ್ಲಿ ಮುಂದುವರಿಯುವುದಕ್ಕೆ ಅನರ್ಹನಾಗಿದ್ದಾನೆಂದು ರಾಷ್ಟ್ರಪತಿಯು ಅಭಿಪ್ರಾಯಪಟ್ಟರೆ; ಅಥವಾ

(ಇ) ಒಬ್ಬ ಮುಖ್ಯ ಮಾಹಿತಿ ಆಯುಕ್ತನಾಗಿ ಅಥವಾ ಒಬ್ಬ ಮಾಹಿತಿ ಆಯುಕ್ತನಾಗಿ ತನ್ನ ಕಾರ್ಯಗಳಿಗೆ ಪ್ರತಿಕೂಲ ಪರಿಣಾಮವನ್ನುಂಟು ಮಾಡುವ ಸಂಭವವಿರುವಂಥ ಹಣಕಾಸು ಅಥವಾ ಇತರ ಹಿತಾಸಕ್ತಿಯನ್ನು ಹೊಂದಿದ್ದರೆ ರಾಷ್ಟ್ರಪತಿಯು ಆದೇಶದ ಮೂಲಕ ಮುಖ್ಯ ಮಾಹಿತಿ ಆಯುಕ್ತ ಅಥವಾ ಮಾಹಿತಿ ಆಯುಕ್ತನನ್ನು ಹುದ್ದೆಯಿಂದ ತೆಗೆದುಹಾಕಬಹುದು.

(4) ಮುಖ್ಯ ಮಾಹಿತಿ ಆಯುಕ್ತ ಅಥವಾ ಮಾಹಿತಿ ಆಯುಕ್ತನು, ಭಾರತ ಸರ್ಕಾರ ಅಥವಾ ಭಾರತ ಸರ್ಕಾರದ ಪರವಾಗಿ ಮಾಡಿಕೊಂಡ ಯಾವುದೇ ಕರಾರು ಅಥವಾ ಒಪ್ಪಂದದಲ್ಲಿ ಯಾವುದೇ ರೀತಿಯ ಸಂಬಂಧ ಹೊಂದಿದ್ದರೆ ಅಥವಾ ಆಸಕ್ತಿ ಹೊಂದಿದ್ದರೆ ಅಥವಾ ಒಂದು ನಿಗಮಿತ ಕಂಪನಿಯ ಒಬ್ಬ ಸದಸ್ಯನಾಗಿಯಲ್ಲದೆ ಮತ್ತು ಅದರ ಇತರ ಸದಸ್ಯರೊಡನೆ ಒಬ್ಬನಾಗಿಯಲ್ಲದೆ ಅದರ ಲಾಭದಲ್ಲಿ ಅಥವಾ ಅದರಿಂದ ಬರುವ ಯಾವುದೇ ಪ್ರಯೋಜನ ಅಥವಾ ಉಪಲಬ್ಧಿಗಳಲ್ಲಿ ಯಾವುದೇ ರೀತಿಯಲ್ಲಿ ಭಾಗಿಯಾಗಿದ್ದರೆ, (1)ನೇ ಉಪಪ್ರಕರಣದ ಉದ್ದೇಶಗಳಿಗಾಗಿ ಆತನನ್ನು ದುರ್ವರ್ತನೆಗಾಗಿ ತಪ್ಪಿತಸ್ಥನೆಂದು ಭಾವಿಸತಕ್ಕದ್ದು.

# ಅಧ್ಯಾಯ – IV

## ರಾಜ್ಯ ಮಾಹಿತಿ ಆಯೋಗ

15. ರಾಜ್ಯ ಮಾಹಿತಿ ಆಯೋಗದ ರಚನೆ.– (1) ಪ್ರತಿಯೊಂದು ರಾಜ್ಯ ಸರ್ಕಾರವು, ಅಧಿಕೃತ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ, ಈ ಅಧಿನಿಯಮದ ಅಡಿಯಲ್ಲಿ ಅದಕ್ಕೆ ದತ್ತವಾದ ಅಧಿಕಾರಗಳನ್ನು ಚಲಾಯಿಸುವುದಕ್ಕೆ, ಮತ್ತು ಅದಕ್ಕೆ ವಹಿಸಲಾದ ಕಾರ್ಯಗಳನ್ನು ನಿರ್ವಹಿಸುವುದಕ್ಕೆ . . . . . . . . . . . (ರಾಜ್ಯದ ಹೆಸರು) ಮಾಹಿತಿ ಆಯೋಗ ಎಂಬ ಒಂದು ನಿಕಾಯವನ್ನು ರಚಿಸತಕ್ಕದ್ದು.

(2) ರಾಜ್ಯದ ಮಾಹಿತಿ ಆಯೋಗವು ಈ ಮುಂದಿನ ವ್ಯಕ್ತಿಗಳನ್ನು ಒಳಗೊಂಡಿರತಕ್ಕದ್ದು,–

(ಎ) ರಾಜ್ಯದ ಮುಖ್ಯ ಮಾಹಿತಿ ಆಯುಕ್ತ; ಮತ್ತು

(ಬಿ) ಅಗತ್ಯವೆಂದು ಭಾವಿಸಬಹುದಾದಂತೆ ಹತ್ತು ಜನರನ್ನು ಮೀರದಷ್ಟು ಸಂಖ್ಯೆಯ ರಾಜ್ಯ ಮಾಹಿತಿ ಆಯಕ್ತರುಗಳು.

(3) ಈ ಮುಂದಿನ ವ್ಯಕ್ತಿಗಳನ್ನೊಳಗೊಂಡ ಸಮಿತಿಯ ಶಿಫಾರಸಿನ ಮೇರೆಗೆ ರಾಜ್ಯಪಾಲರು ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಮತ್ತು ರಾಜ್ಯ ಮಾಹಿತಿ ಆಯುಕ್ತರುಗಳನ್ನು ನೇಮಕ ಮಾಡತಕ್ಕದ್ದು,–

(i) ಮುಖ್ಯಮಂತ್ರಿ, ಇವರು ಸಮಿತಿಯ ಅಧ್ಯಕ್ಷರಾಗಿರತಕ್ಕದ್ದು;

(ii) ವಿಧಾನ ಸಭೆಯಲ್ಲಿನ ವಿರೋಧ ಪಕ್ಷದ ನಾಯಕ; ಮತ್ತು

(iii) ಮುಖ್ಯಮಂತ್ರಿಯಿಂದ ನಾಮನಿರ್ದೇಶಿತನಾದ ಸಚಿವ ಸಂಪುಟ ದರ್ಜೆಯ ಒಬ್ಬ ಸಚಿವ.

ವಿವರಣೆ.– ಸಂದೇಹಗಳ ನಿವಾರಣೆಯ ಉದ್ದೇಶಗಳಿಗಾಗಿ, ವಿಧಾನಸಭೆಯ ವಿರೋಧ ಪಕ್ಷದ ನಾಯಕನನ್ನು ಆ ರೀತಿ ಮಾನ್ಯ ಮಾಡಿರದಿದ್ದಲ್ಲಿ ವಿಧಾನ ಸಭೆಯಲ್ಲಿ ಸರ್ಕಾರದ ವಿರೋಧ ಪಕ್ಷಗಳಲ್ಲಿ ಅತ್ಯಂತ ಹೆಚ್ಚು ಸದಸ್ಯರನ್ನೊಳಗೊಂಡ ಪಕ್ಷದ ನಾಯಕನನ್ನು ವಿರೋಧ ಪಕ್ಷದ ನಾಯಕನೆಂದು ಭಾವಿಸತಕ್ಕದ್ದು ಎಂಬುದಾಗಿ ಈ ಮೂಲಕ ಘೋಷಿಸಲಾಗಿದೆ.

(4) ರಾಜ್ಯ ಮಾಹಿತಿ ಆಯೋಗದ ವ್ಯವಹಾರಗಳ ಸಾಮಾನ್ಯ ಉಸ್ತುವಾರಿ, ನಿರ್ದೇಶನ ಮತ್ತು ನಿರ್ವಹಣೆಯು ರಾಜ್ಯ ಮುಖ್ಯ ಮಾಹಿತಿ ಆಯುಕ್ತನಲ್ಲಿ ನಿಹಿತವಾಗಿರತಕ್ಕದ್ದು. ಅವನಿಗೆ ರಾಜ್ಯ ಮಾಹಿತಿ ಆಯುಕ್ತರುಗಳು ಸಹಾಯ ನೀಡತಕ್ಕದ್ದು ಮತ್ತು ಅವನು ಈ ಅಧಿನಿಯಮದಡಿಯಲ್ಲಿ ಯಾವುದೇ ಇತರ ಪ್ರಾಧಿಕಾರವು ನೀಡುವ ನಿರ್ದೇಶನಗಳಿಗೆ ಒಳಪಡದೆ ರಾಜ್ಯ ಮಾಹಿತಿ ಆಯೋಗವು ಚಲಾಯಿಸಬಹುದಾದಂಥ ಎಲ್ಲ ಅಧಿಕಾರಗಳನ್ನು ಸ್ವತಂತ್ರವಾಗಿ ಚಲಾಯಿಸಬಹುದು ಮತ್ತು ನಿರ್ವಹಿಸಬಹುದಾದಂಥ ಎಲ್ಲ ಅಂಥ ಕಾರ್ಯಗಳನ್ನು ಮತ್ತು ವಿಷಯಗಳನ್ನು ನಿರ್ವಹಿಸಬಹುದು.

(5) ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮಾಹಿತಿ ಆಯುಕ್ತರುಗಳು ಕಾನೂನು, ವಿಜ್ಞಾನ ಮತ್ತು ತಂತ್ರಜ್ಞಾನ, ಸಮಾಜ ಸೇವೆ, ವ್ಯವಸ್ಥಾಪನೆ, ಪತ್ರಿಕೋದ್ಯಮ, ಸಮೂಹ ಮಾಧ್ಯಮ ಅಥವಾ ನಿರ್ವಹಣೆ ಮತ್ತು ಆಡಳಿತದಲ್ಲಿ ಆಳವಾದ ಜ್ಞಾನ ಮತ್ತು ಅನುಭವ ಹೊಂದಿರುವುದರೊಂದಿಗೆ ಸಾರ್ವಜನಿಕ ಜೀವನದಲ್ಲಿ ಉನ್ನತಸ್ಥಾನಗಳಿಸಿರುವಂಥ ವ್ಯಕ್ತಿಗಳಾಗಿರತಕ್ಕದ್ದು.

(6) ರಾಜ್ಯ ಮುಖ್ಯ ಮಾಹಿತಿ ಆಯುಕ್ತನು ಅಥವಾ ರಾಜ್ಯ ಮಾಹಿತಿ ಆಯುಕ್ತರುಗಳು, ಸಂಸತ್ತಿನ ಸದಸ್ಯರಾಗಿರತಕ್ಕದ್ದಲ್ಲ ಅಥವಾ ಯಾವುದೇ ರಾಜ್ಯದ ಅಥವಾ ಸಂದರ್ಭಾನುಸಾರ ಕೇಂದ್ರಾಡಳಿತ ಪ್ರದೇಶದ ವಿಧಾನಮಂಡಲದ ಸದಸ್ಯರಾಗಿರತಕ್ಕದ್ದಲ್ಲ ಅಥವಾ ಯಾವುದೇ ಇತರ ಲಾಭದಾಯಕ ಹುದ್ದೆಯನ್ನು ಹೊಂದಿರತಕ್ಕದ್ದಲ್ಲ ಅಥವಾ ಯಾವುದೇ ರಾಜಕೀಯ ಪಕ್ಷದೊಂದಿಗೆ ಸಂಪರ್ಕ ಹೊಂದಿರತಕ್ಕದ್ದಲ್ಲ ಅಥವಾ ಯಾವುದೇ ವ್ಯವಹಾರವನ್ನು ನಡೆಸತಕ್ಕದ್ದಲ್ಲ ಅಥವಾ ಯಾವುದೇ ವೃತ್ತಿಯನ್ನು ಅವಲಂಬಿಸಿರತಕ್ಕದ್ದಲ್ಲ.

(7) ರಾಜ್ಯ ಮಾಹಿತಿ ಆಯೋಗದ ಕೇಂದ್ರ ಕಚೇರಿಯು, ರಾಜ್ಯ ಸರ್ಕಾರವು ಅಧಿಕೃತ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ರಾಜ್ಯದ ನಿರ್ದಿಷ್ಟಪಡಿಸಬಹುದಾದಂಥ ಯಾವುದೇ ಸ್ಥಳದಲ್ಲಿರತಕ್ಕದ್ದು ಮತ್ತು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ರಾಜ್ಯ ಮಾಹಿತಿ ಆಯೋಗವು, ರಾಜ್ಯದ ಇತರ ಸ್ಥಳಗಳಲ್ಲಿ ಕಚೇರಿಗಳನ್ನು ಸ್ಥಾಪಿಸಬಹುದು.

16. ಪದಾವಧಿ ಮತ್ತು ಸೇವಾ ಷರತ್ತುಗಳು.– (1) ರಾಜ್ಯ ಮುಖ್ಯ ಮಾಹಿತಿ ಆಯುಕ್ತನು, ತಾನು ಹುದ್ದೆಯನ್ನು ವಹಿಸಿಕೊಂಡ ದಿನಾಂಕದಿಂದ ಐದು ವರ್ಷಗಳ ಅವಧಿಯವರೆಗೆ ಆ ಪದವನ್ನು ಹೊಂದಿರತಕ್ಕದ್ದು ಮತ್ತು ಮರುನೇಮಕಾತಿಗೆ ಅರ್ಹನಾಗಿರತಕ್ಕದ್ದಲ್ಲ:

ಪರಂತು, ಯಾರೇ ರಾಜ್ಯ ಮುಖ್ಯ ಮಾಹಿತಿ ಆಯುಕ್ತನು, ತನಗೆ ಅರವತ್ತೈದು ವರ್ಷವಯಸ್ಸಾದ ನಂತರ ರಾಜ್ಯ ಮುಖ್ಯ ಮಾಹಿತಿ ಆಯುಕ್ತನ ಹುದ್ದೆಯನ್ನು ಹೊಂದಿರತಕ್ಕದ್ದಲ್ಲ.

(2) ಪ್ರತಿಯೊಬ್ಬ ರಾಜ್ಯ ಮಾಹಿತಿ ಆಯುಕ್ತನು, ತಾನು ಹುದ್ದೆಯನ್ನು ವಹಿಸಿಕೊಂಡ ದಿನಾಂಕದಿಂದ ಐದು ವರ್ಷಗಳ ಅವಧಿಯವರೆಗೆ ಅಥವಾ ಆತನಿಗೆ ಅರವತ್ತೈದು ವರ್ಷ ವಯಸ್ಸಾಗುವವರೆಗಿನ ಅವಧಿಯವರೆಗೆ, ಇವುಗಳಲ್ಲಿ ಯಾವುದು ಮೊದಲೋ ಆ ಅವಧಿಯವರೆಗೆ ಪದವನ್ನು ಹೊಂದಿರತಕ್ಕದ್ದು, ಮತ್ತು ಅಂಥ ರಾಜ್ಯ ಮಾಹಿತಿ ಆಯುಕ್ತನಾಗಿ ಮರುನೇಮಕಗೊಳ್ಳುವುದಕ್ಕೆ ಅರ್ಹನಾಗಿರತಕ್ಕದ್ದಲ್ಲ:

ಪರಂತು, ಪ್ರತಿಯೊಬ್ಬ ರಾಜ್ಯ ಮಾಹಿತಿ ಆಯುಕ್ತನು, ಈ ಉಪಪ್ರಕರಣದಡಿಯಲ್ಲಿ ಆತನ ಪದವನ್ನು ತೆರವುಮಾಡಿದ ನಂತರ, 15ನೇ ಪ್ರಕರಣದ (3)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿರುವ ರೀತಿಯಲ್ಲಿ ರಾಜ್ಯ ಮುಖ್ಯ ಮಾಹಿತಿ ಆಯುಕ್ತನಾಗಿ ನೇಮಕಗೊಳ್ಳಲು ಅರ್ಹನಾಗಿರತಕ್ಕದ್ದು:

ಮತ್ತು ಪರಂತು, ರಾಜ್ಯ ಮಾಹಿತಿ ಆಯುಕ್ತನನ್ನು, ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನಾಗಿ ನೇಮಕ ಮಾಡಿದಲ್ಲಿ, ಆತನ ಪದಾವಧಿಯು, ರಾಜ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮುಖ್ಯ ಮಾಹಿತಿ ಆಯುಕ್ತನಾಗಿ ಒಟ್ಟು ಐದು ವರ್ಷಗಳಿಗಿಂತ ಹೆಚ್ಚಾಗತಕ್ಕದ್ದಲ್ಲ.

(3) ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಅಥವಾ ರಾಜ್ಯ ಮಾಹಿತಿ ಆಯುಕ್ತನು, ತಾನು ಪದವನ್ನು ವಹಿಸಿಕೊಳ್ಳುವುದಕ್ಕೆ ಮೊದಲು, ರಾಜ್ಯಪಾಲರ ಅಥವಾ ಈ ಬಗ್ಗೆ ರಾಜ್ಯಪಾಲರಿಂದ ನಿಯೋಜಿತರಾದ ಯಾವುದೇ ಇತರ ವ್ಯಕ್ತಿಯ ಮುಂದೆ, ಪ್ರಮಾಣ ಅಥವಾ ದೃಢೀಕರಣದ ಉದ್ದೇಶಕ್ಕಾಗಿ ಮೊದಲನೇ ಅನುಸೂಚಿಯಲ್ಲಿ ರೂಪಿಸಲಾದ ನಮೂನೆಗನುಸಾರವಾಗಿ ಪ್ರಮಾಣವನ್ನು ಅಥವಾ ದೃಢೀಕರಣವನ್ನು ಮಾಡಿ ಅದಕ್ಕೆ ರುಜುಮಾಡತಕ್ಕದ್ದು.

(4) ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಅಥವಾ ರಾಜ್ಯ ಮಾಹಿತಿ ಆಯುಕ್ತರು, ಯಾವುದೇ ಸಮಯದಲ್ಲಿ, ರಾಜ್ಯಪಾಲನಿಗೆ ಲಿಖಿತದಲ್ಲಿ ತನ್ನ ಸಹಿ ಹಾಕಿರುವ ರಾಜಿನಾಮೆ ಪತ್ರ ನೀಡುವ ಮೂಲಕ ತನ್ನ ಪದಕ್ಕೆ ರಾಜೀನಾಮೆ ಸಲ್ಲಿಸಬಹುದು:

ಪರಂತು, 17ನೇ ಪ್ರಕರಣದಡಿಯಲ್ಲಿ ನಿರ್ದಿಷ್ಟಪಡಿಸಿರುವ ರೀತಿಯಲ್ಲಿ ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ರಾಜ್ಯ ಮಾಹಿತಿ ಆಯುಕ್ತನನ್ನು ತೆಗೆದುಹಾಕಬಹುದು.

(5) (ಎ) ರಾಜ್ಯ ಮುಖ್ಯ ಮಾಹಿತಿ ಆಯುಕ್ತನಿಗೆ ಸಂದಾಯ ಮಾಡತಕ್ಕ ಸಂಬಳ ಮತ್ತು ಭತ್ಯೆಗಳು ಹಾಗೂ ಆತನ ಇತರ ಸೇವಾ ನಿಬಂಧನೆಗಳು ಹಾಗೂ ಷರತ್ತುಗಳು ಚುನಾವಣಾ ಆಯುಕ್ತನ ಸಂಬಳ ಮತ್ತು ಭತ್ಯೆಗಳು ಮತ್ತು ಇತರ ಸೇವಾ ನಿಬಂಧನೆಗಳು ಹಾಗೂ ಷರತ್ತುಗಳಂತೆಯೇ ಇರತಕ್ಕದ್ದು;

(ಬಿ) ರಾಜ್ಯ ಮಾಹಿತಿ ಆಯುಕ್ತನಿಗೆ ಸಂದಾಯ ಮಾಡತಕ್ಕ ಸಂಬಳ ಮತ್ತು ಭತ್ಯೆಗಳು ಹಾಗೂ ಆತನ ಇತರ ಸೇವಾ ನಿಬಂಧನೆಗಳು ಹಾಗೂ ಷರತ್ತುಗಳು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯ ಸಂಬಳ ಮತ್ತು ಭತ್ಯೆಗಳು ಮತ್ತು ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳಂತೆಯೇ ಇರತಕ್ಕದ್ದು:

ಪರಂತು, ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಅಥವಾ ರಾಜ್ಯ ಮಾಹಿತಿ ಆಯುಕ್ತನು, ತನ್ನ ನೇಮಕಾತಿಯ ಸಮಯದಲ್ಲಿ, ಭಾರತ ಸರ್ಕಾರದಡಿಯಲ್ಲಿ ಅಥವಾ ರಾಜ್ಯ ಸರ್ಕಾರದಡಿಯಲ್ಲಿ ಸಲ್ಲಿಸಿದ ಯಾವುದೇ ಹಿಂದಿನ ಸೇವೆಯ ಸಂಬಂಧದಲ್ಲಿ ನಿವೃತ್ತಿ ವೇತನವನ್ನು (ಅಸಮರ್ಥತೆಗಾಗಿ ಅಥವಾ ನೋವಿಗಾಗಿ ಇರುವ ನಿವೃತ್ತಿ ವೇತನವನ್ನು ಹೊರತುಪಡಿಸಿ) ಪಡೆಯುತ್ತಿದ್ದರೆ, ರಾಜ್ಯ ಮುಖ್ಯ ಮಾಹಿತಿ

ಆಯುಕ್ತನಾಗಿ ಅಥವಾ ರಾಜ್ಯ ಮಾಹಿತಿ ಆಯುಕ್ತನಾಗಿ ಸೇವೆ ಸಲ್ಲಿಸುತ್ತಿರುವುದಕ್ಕೆ ಸಂಬಂಧಿಸಿದಂತೆ ಆತನ ಸಂಬಳವನ್ನು, ಪರಿವರ್ತಿಸಲಾದ ನಿವೃತ್ತಿ ವೇತನದ ಯಾವುದೇ ಭಾಗವೂ ಸೇರಿದಂತೆ ಆ ನಿವೃತ್ತಿ ವೇತನ ಮತ್ತು ನಿವೃತ್ತಿ ಉಪಾದಾನಕ್ಕೆ ಸಮನಾದ ಪಿಂಚಣಿಯನ್ನು ಹೊರತುಪಡಿಸಿ ಇತರ ರೀತಿಯ ನಿವೃತ್ತಿ ಪ್ರಯೋಜನಗಳಿಗೆ ಸಮನಾದ ಪಿಂಚಣಿಯ ಮೊತ್ತದಷ್ಟು ಕಡಿತ ಮಾಡತಕ್ಕದ್ದು:

ಮತ್ತು ಪರಂತು, ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಅಥವಾ ರಾಜ್ಯ ಮಾಹಿತಿ ಆಯುಕ್ತನು ಆತನ ನೇಮಕಾತಿಯ ಸಮಯದಲ್ಲಿ, ಯಾವುದೇ ಕೇಂದ್ರ ಅಧಿನಿಯಮ ಅಥವಾ ರಾಜ್ಯ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಸ್ಥಾಪಿತವಾದ ನಿಗಮದಲ್ಲಿ ಅಥವಾ ಕೇಂದ್ರ ಸರ್ಕಾರ ಅಥವಾ ರಾಜ್ಯ ಸರ್ಕಾರದ ಒಡೆತನಕ್ಕೆ ಅಥವಾ ನಿಯಂತ್ರಣಕ್ಕೆ ಒಳಪಟ್ಟ ಸರ್ಕಾರಿ ಕಂಪನಿಯಲ್ಲಿ ಸಲ್ಲಿಸಿದ ಯಾವುದೇ ಹಿಂದಿನ ಸೇವೆಯ ಸಂಬಂಧದಲ್ಲಿ ಪಿಂಚಣಿ ಸೌಲಭ್ಯಗಳನ್ನು ಸ್ವೀಕರಿಸುತ್ತಿದ್ದರೆ, ರಾಜ್ಯ ಮುಖ್ಯ ಮಾಹಿತಿ ಆಯುಕ್ತನಾಗಿ ಅಥವಾ ರಾಜ್ಯ ಮಾಹಿತಿ ಆಯುಕ್ತನಾಗಿ ಸೇವೆ ಸಲ್ಲಿಸುತ್ತಿರುವುದಕ್ಕೆ ಸಂಬಂಧಿಸಿದಂತೆ ಆತನಿಗೆ ನೀಡುವ ವೇತನವನ್ನು ನಿವೃತ್ತಿ ಪ್ರಯೋಜನಗಳಿಗೆ ಸಮನಾದ ಪಿಂಚಣಿಯ ಮೊತ್ತದಷ್ಟು ಕಡಿತ ಮಾಡತಕ್ಕದ್ದು.

ಅದೂ ಅಲ್ಲದೆ, ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮಾಹಿತಿ ಆಯುಕ್ತರುಗಳ ಸಂಬಳಗಳು, ಭತ್ಯೆಗಳು ಮತ್ತು ಇತರ ಸೇವಾ ಷರತ್ತುಗಳನ್ನು ಅವರ ನೇಮಕಾತಿಯ ನಂತರ ಅವರಿಗೆ ಅನಾನುಕೂಲವಾಗುವಂತೆ ವ್ಯತ್ಯಾಸ ಮಾಡತಕ್ಕದ್ದಲ್ಲ.

(6) ರಾಜ್ಯ ಸರ್ಕಾರವು, ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಮತ್ತು ರಾಜ್ಯ ಮಾಹಿತಿ ಆಯುಕ್ತರುಗಳಿಗೆ, ಈ ಅಧಿನಿಯಮದಡಿಯಲ್ಲಿನ ತಮ್ಮ ಕಾರ್ಯಗಳ ದಕ್ಷ ನಿರ್ವಹಣೆಗಾಗಿ ಅವಶ್ಯವಾಗಬಹುದಾದಂಥ ಅಧಿಕಾರಿಗಳನ್ನು ಮತ್ತು ನೌಕರರನ್ನು ಒದಗಿಸತಕ್ಕದ್ದು, ಮತ್ತು ಈ ಅಧಿನಿಯಮದ ಉದ್ದೇಶಕ್ಕಾಗಿ ನೇಮಕ ಮಾಡಲಾದ ಅಧಿಕಾರಿಗಳಿಗೆ ಮತ್ತು ಇತರ ನೌಕರರಿಗೆ ಸಂದಾಯ ಮಾಡತಕ್ಕ ಸಂಬಳ ಮತ್ತು ಭತ್ಯೆಗಳು ಹಾಗೂ ಅವರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

17. ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ರಾಜ್ಯ ಮಾಹಿತಿ ಆಯುಕ್ತರನ್ನು ತೆಗೆದುಹಾಕುವುದು.– (1) (3)ನೇ ಉಪ–ಪ್ರಕರಣದ ಉಪಬಂಧಗಳಿಗೊಳಪಟ್ಟು, ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಯಾರೇ ರಾಜ್ಯ ಮಾಹಿತಿ ಆಯುಕ್ತನನ್ನು, ರಾಜ್ಯಪಾಲನು ಸರ್ವೋಚ್ಚ ನ್ಯಾಯಾಲಯಕ್ಕೆ ಮಾಡಿದ ಉಲ್ಲೇಖದ ಮೇರೆಗೆ, ಸರ್ವೋಚ್ಚ ನ್ಯಾಯಾಲಯವು, ವಿಚಾರಣೆ ನಡೆಸಿದ ತರುವಾಯ, ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ಸಂದರ್ಭಾನುಸಾರ, ಯಾರೇ ರಾಜ್ಯ ಮಾಹಿತಿ ಆಯುಕ್ತನನ್ನು ರುಜುವಾತಾದ ದುರ್ವರ್ತನೆ ಅಥವಾ ಅಸಮರ್ಥತೆಯ ಕಾರಣದ ಮೇಲೆ ತೆಗೆದುಹಾಕಬೇಕೆಂದು ವರದಿ ಮಾಡಿದ ತರುವಾಯ, ಅಂಥ ಕಾರಣದ ಮೇಲೆ ರಾಜ್ಯಪಾಲನು ಆದೇಶ ಹೊರಡಿಸುವ ಮೂಲಕ ಮಾತ್ರವೇ ಆತನನ್ನು ಪದದಿಂದ ತೆಗೆದುಹಾಕತಕ್ಕದ್ದು.

(2) ರಾಜ್ಯಪಾಲನು, ಯಾರ ಸಂಬಂಧದಲ್ಲಿ (1)ನೇ ಉಪ ಪ್ರಕರಣದಡಿಯಲ್ಲಿ ಸರ್ವೋಚ್ಚ ನ್ಯಾಯಾಲಯಕ್ಕೆ ಉಲ್ಲೇಖವನ್ನು ಮಾಡಿದ್ದಾರೆಯೋ ಆ ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಅಥವಾ ರಾಜ್ಯ ಮಾಹಿತಿ ಆಯುಕ್ತನನ್ನು, ಅಂಥ ಉಲ್ಲೇಖದ ಬಗ್ಗೆ ಸರ್ವೋಚ್ಚ ನ್ಯಾಯಾಲಯದ ವರದಿಯನ್ನು ಸ್ವೀಕರಿಸಿದ ನಂತರ ರಾಜ್ಯಪಾಲನು ಆದೇಶಗಳನ್ನು ಹೊರಡಿಸುವವರೆಗೆ, ಪದದಿಂದ ಅವರನ್ನು ಅಮಾನತು ಮಾಡಬಹುದು ಮತ್ತು ಅವಶ್ಯವೆಂದು ಭಾವಿಸಿದರೆ ವಿಚಾರಣೆಯ ಅವಧಿಯಲ್ಲಿ ಕಚೇರಿಗೆ ಹಾಜರಾಗುವುದನ್ನೂ ಸಹ ನಿಷೇಧಿಸಬಹುದು.

(3) (1)ನೇ ಉಪಪ್ರಕರಣದಲ್ಲಿ ಏನೇ ಇದ್ದರೂ, ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯುಕ್ತನು,–

(ಎ) ದಿವಾಳಿ ಎಂದು ನ್ಯಾಯ ನಿರ್ಣೀತನಾಗಿದ್ದರೆ; ಅಥವಾ

(ಬಿ) ನೈತಿಕ ಅಧಃಪತನವನ್ನೊಳಗೊಂಡ ಅಪರಾಧದ ನಿರ್ಣೀತ ಅಪರಾಧಿ ಯಾಗಿರುವನೆಂದು ರಾಜ್ಯಪಾಲರು ಅಭಿಪ್ರಾಯಪಟ್ಟರೆ; ಅಥವಾ

(ಸಿ) ತನ್ನ ಹುದ್ದೆಯ ಅವಧಿಯಲ್ಲಿ, ತನ್ನ ಹುದ್ದೆಯ ಕರ್ತವ್ಯದ ಹೊರಗೆ ಯಾವುದೇ ವೇತನ ಪಡೆಯುವ ಉದ್ಯೋಗದಲ್ಲಿ ತೊಡಗಿದ್ದರೆ; ಅಥವಾ

(ಡಿ) ಮಾನಸಿಕ ಅಥವಾ ದೈಹಿಕ ದೌರ್ಬಲ್ಯದ ಕಾರಣದಿಂದ ಹುದ್ದೆಯಲ್ಲಿ ಮುಂದುವರಿಯುವುದಕ್ಕೆ ಅನರ್ಹನಾಗಿದ್ದಾನೆಂದು ರಾಜ್ಯಪಾಲನು ಅಭಿಪ್ರಾಯಪಟ್ಟರೆ; ಅಥವಾ

(ಇ) ಒಬ್ಬ ರಾಜ್ಯ ಮುಖ್ಯ ಮಾಹಿತಿ ಆಯುಕ್ತನಾಗಿ ಅಥವಾ ಒಬ್ಬ ರಾಜ್ಯ ಮಾಹಿತಿ ಆಯುಕ್ತನಾಗಿ ತನ್ನ ಕಾರ್ಯಗಳಿಗೆ ಪ್ರತಿಕೂಲ ಪರಿಣಾಮವನ್ನುಂಟು ಮಾಡುವ ಸಂಭವವಿರುವಂಥ ಹಣಕಾಸು ಅಥವಾ ಇತರ ಹಿತಾಸಕ್ತಿಯನ್ನು ಹೊಂದಿದ್ದರೆ ರಾಜ್ಯಪಾಲನು ಆದೇಶದ ಮೂಲಕ ರಾಜ್ಯ ಮುಖ್ಯ ಮಾಹಿತಿ ಆಯುಕ್ತನನ್ನು ಅಥವಾ ರಾಜ್ಯ ಮಾಹಿತಿ ಆಯುಕ್ತನನ್ನು ಪದದಿಂದ ತೆಗೆದುಹಾಕಬಹುದು.

(4) ರಾಜ್ಯ ಮುಖ್ಯ ಮಾಹಿತಿ ಆಯುಕ್ತ ಅಥವಾ ರಾಜ್ಯ ಮಾಹಿತಿ ಆಯುಕ್ತನು, ರಾಜ್ಯ ಸರ್ಕಾರ ಅಥವಾ ರಾಜ್ಯ ಸರ್ಕಾರದ ಪರವಾಗಿ ಮಾಡಿಕೊಂಡ ಯಾವುದೇ ಕರಾರು ಅಥವಾ ಒಪ್ಪಂದದಲ್ಲಿ ಯಾವುದೇ ರೀತಿಯ ಸಂಬಂಧ ಹೊಂದಿದ್ದರೆ ಅಥವಾ ಆಸಕ್ತಿ ಹೊಂದಿದ್ದರೆ ಅಥವಾ ಒಂದು ನಿಗಮಿತ ಕಂಪನಿಯ ಒಬ್ಬ ಸದಸ್ಯನಾಗಿಯಲ್ಲದೆ ಮತ್ತು ಅದರ ಇತರ ಸದಸ್ಯರೊಡನೆ ಒಬ್ಬನಾಗಿಯಲ್ಲದೆ ಅದರ ಲಾಭದಲ್ಲಿ ಅಥವಾ ಅದರಿಂದ ಬರುವ ಯಾವುದೇ ಪ್ರಯೋಜನದಲ್ಲಿ ಅಥವಾ ಉಪಲಬ್ಧಿಗಳಲ್ಲಿ ಯಾವುದೇ ರೀತಿಯಲ್ಲಿ ಭಾಗಿಯಾಗಿದ್ದರೆ, ಆತನನ್ನು, (1)ನೇ ಉಪಪ್ರಕರಣದ ಉದ್ದೇಶಗಳಿಗಾಗಿ ದುರ್ವರ್ತನೆಯ ತಪ್ಪಿತಸ್ಥನೆಂದು ಭಾವಿಸತಕ್ಕದ್ದು.

# ಅಧ್ಯಾಯ – V

## ಮಾಹಿತಿ ಆಯೋಗಗಳ ಅಧಿಕಾರಗಳು ಮತ್ತು ಕಾರ್ಯಗಳು, ಅಪೀಲು ಮತ್ತು ದಂಡನೆಗಳು

18. ಮಾಹಿತಿ ಆಯೋಗದ ಅಧಿಕಾರಗಳು ಮತ್ತು ಕಾರ್ಯಗಳು.– (1) (ಎ) ಈ ಅಧಿನಿಯಮದಡಿಯಲ್ಲಿ ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಸಂದರ್ಭಾನುಸಾರ, ರಾಜ್ಯ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಂಥ ಯಾರೇ ಅಧಿಕಾರಿಯನ್ನು ನಿಯೋಜಿಸಲಾಗಿಲ್ಲವೆಂಬ ಕಾರಣದಿಂದ ಅಥವಾ 19ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಲಾದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಹಿರಿಯ ಅಧಿಕಾರಿಗೆ ಅಥವಾ ಕೇಂದ್ರ ಮಾಹಿತಿ ಆಯುಕ್ತ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯುಕ್ತನಿಗೆ ಅದನ್ನು ರವಾನಿಸುವುದಕ್ಕಾಗಿ ಈ ಅಧಿನಿಯಮದಡಿಯಲ್ಲಿ ಮಾಹಿತಿಗಾಗಿ ಸಲ್ಲಿಸಿದ ಆತನ ಅರ್ಜಿಯನ್ನು ಅಥವಾ ಅಪೀಲನ್ನು ಸ್ವೀಕರಿಸಲು ಕೇಂದ್ರ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಸಹಾಯಕ ಮಾಹಿತಿ ಅಧಿಕಾರಿಯು ನಿರಾಕರಿಸಿದನೆಂಬ ಕಾರಣದಿಂದ ಕೋರಿಕೆಯನ್ನು ಸಲ್ಲಿಸಲು ಸಾಧ್ಯವಾಗದಿರುವಂಥ;

(ಬಿ) ಈ ಅಧಿನಿಯಮದಡಿಯಲ್ಲಿ ಕೋರಲಾದ ಯಾವುದೇ ಮಾಹಿತಿ ಪಡೆಯಲು ಅವಕಾಶವನ್ನು ನಿರಾಕರಿಸಲಾಗಿರುವಂಥ;

(ಸಿ) ಮಾಹಿತಿಗಾಗಿ ಮಾಡಿಕೊಂಡ ಮನವಿಗೆ ಈ ಅಧಿನಿಯಮದಡಿಯಲ್ಲಿ ನಿರ್ದಿಷ್ಟಪಡಿಸಲಾದ ಕಾಲಪರಿಮಿತಿಯೊಳಗೆ ಉತ್ತರ ದೊರೆಯದಿರುವಂಥ ಅಥವಾ ಮಾಹಿತಿಯನ್ನು ಒದಗಿಸಿಲ್ಲದಿರುವಂಥ;

(ಡಿ) ಆತನು ಅನುಚಿತವೆಂದು ಪರಿಗಣಿಸುವ ಶುಲ್ಕದ ಮೊತ್ತವನ್ನು ಸಂದಾಯ ಮಾಡುವಂತೆ ಅಗತ್ಯಪಡಿಸಲಾಗಿರುವಂಥ;

(ಇ) ಆತನಿಗೆ, ಈ ಅಧಿನಿಯಮದಡಿಯಲ್ಲಿ ಅಪೂರ್ಣ, ತಪ್ಪುದಾರಿಗೆ ಎಳೆಯುವ ಅಥವಾ ಸುಳ್ಳು ಮಾಹಿತಿಯನ್ನು ನೀಡಿದ್ದಾರೆಂದು ನಂಬುವಂಥ; ಮತ್ತು

(ಎಫ್) ಈ ಅಧಿನಿಯಮದಡಿಯಲ್ಲಿ ದಾಖಲೆಗಳಿಗಾಗಿ ಕೋರುವುದಕ್ಕೆ ಅಥವಾ ದಾಖಲೆಗಳನ್ನು ಪಡೆಯುವುದಕ್ಕೆ ಸಂಬಂಧಿಸಿದ ಯಾವುದೇ ಇತರ ವಿಷಯದ ಸಂಬಂಧದಲ್ಲಿ ಯಾರೇ ವ್ಯಕ್ತಿಯಿಂದ ಈ ಅಧಿನಿಯಮದ ಉಪಬಂಧಗಳಿಗೊಳಪಟ್ಟು ಫಿರ್ಯಾದನ್ನು ಸ್ವೀಕರಿಸಿ ವಿಚಾರಣೆ ನಡೆಸುವುದು ಕೇಂದ್ರ ಮಾಹಿತಿ ಆಯೋಗದ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗದ ಕರ್ತವ್ಯವಾಗಿರತಕ್ಕದ್ದು.

(2) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ಈ ವಿಷಯದ ಬಗ್ಗೆ ವಿಚಾರಣೆ ನಡೆಸುವುದಕ್ಕೆ ಸೂಕ್ತ ಕಾರಣಗಳಿವೆಯೆಂದು ಮನಗಂಡರೆ, ಅದು ಆ ಸಂಬಂಧದಲ್ಲಿ ವಿಚಾರಣೆಯನ್ನು ಪ್ರಾರಂಭಿಸಬಹುದು.

(3) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ಈ ಪ್ರಕರಣದ ಅಡಿಯಲ್ಲಿ ಯಾವುದೇ ವಿಷಯದ ಬಗ್ಗೆ ವಿಚಾರಣೆಯನ್ನು ನಡೆಸುವಾಗ, ಈ ಮುಂದಿನ ವಿಷಯಗಳ ಸಂಬಂಧದಲ್ಲಿ ಸಿವಿಲ್ ಪ್ರಕ್ರಿಯಾ ಸಂಹಿತೆ, 1908ರ ಅಡಿಯಲ್ಲಿ ಹೂಡಿದ ದಾವೆಯನ್ನು ಅಧಿವಿಚಾರಣೆ ಮಾಡುವಾಗ ಸಿವಿಲ್ ನ್ಯಾಯಾಲಯದಲ್ಲಿ ನಿಹಿತಗೊಳಿಸಲಾದಂತಹದೇ ಅಧಿಕಾರಗಳನ್ನು ಹೊಂದಿರತಕ್ಕದ್ದು, ಎಂದರೆ:–

(ಎ) ವ್ಯಕ್ತಿಗಳ ಹಾಜರಾತಿಗಾಗಿ ಸಮನು ಮಾಡುವುದು ಮತ್ತು ಒತ್ತಾಯಿಸುವುದು ಹಾಗೂ ಪ್ರಮಾಣ ವಚನದ ಮೇಲೆ ಮೌಖಿಕ ಅಥವಾ ಲಿಖಿತ ಸಾಕ್ಷ್ಯವನ್ನು ನೀಡುವುದಕ್ಕೆ ಮತ್ತು ದಸ್ತಾವೇಜುಗಳು ಅಥವಾ ವಸ್ತುಗಳನ್ನು ಹಾಜರುಪಡಿಸುವುದಕ್ಕೆ ಅವರನ್ನು ಒತ್ತಾಯಿಸುವುದು;

(ಬಿ) ದಸ್ತಾವೇಜುಗಳ ಶೋಧನೆ ಮತ್ತು ಪರಿಶೀಲನೆಯನ್ನು ಅಗತ್ಯಪಡಿಸುವುದು;

(ಸಿ) ಅಫಿದಾವಿತ್ತಿನ ಮೇಲೆ ಸಾಕ್ಷ್ಯವನ್ನು ಸ್ವೀಕರಿಸುವುದು;

(ಡಿ) ಯಾವುದೇ ನ್ಯಾಯಾಲಯ ಅಥವಾ ಕಚೇರಿಯಿಂದ ಯಾವುದೇ ಸಾರ್ವಜನಿಕ ದಾಖಲೆ ಅಥವಾ ಅದರ ಪ್ರತಿಗಳನ್ನು ಕಡ್ಡಾಯವಾಗಿ ಕೋರುವುದು;

(ಇ) ಸಾಕ್ಷಿದಾರರ ಅಥವಾ ದಸ್ತಾವೇಜುಗಳ ಪರೀಕ್ಷೆಗಾಗಿ ಸಮನ್ಸ್‌ಗಳನ್ನು ಹೊರಡಿಸುವುದು;

(ಎಫ್) ಗೊತ್ತುಪಡಿಸಬಹುದಾದ ಯಾವುದೇ ಇತರ ವಿಷಯ.

(4) ಸಂಸತ್ತಿನ, ಅಥವಾ ಸಂದರ್ಭಾನುಸಾರ, ರಾಜ್ಯ ವಿಧಾನ ಮಂಡಲದ ಯಾವುದೇ ಇತರ ಅಧಿನಿಯಮದಲ್ಲಿ ಅಸಂಗತವಾದುದು ಏನೇ ಇದ್ದರೂ, ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ಈ ಅಧಿನಿಯಮದಡಿಯಲ್ಲಿ ಯಾವುದೇ ದೂರನ್ನು ವಿಚಾರಣೆ ಮಾಡುವ ಅವಧಿಯಲ್ಲಿ ಈ ಅಧಿನಿಯಮವು ಅನ್ವಯಿಸುವ ಸಾರ್ವಜನಿಕ ಪ್ರಾಧಿಕಾರದ ನಿಯಂತ್ರಣದಲ್ಲಿರುವ ಯಾವುದೇ ದಾಖಲೆಯನ್ನು ಪರೀಕ್ಷಿಸಬಹುದು ಮತ್ತು ಅಂಥ ದಾಖಲೆಯನ್ನು ಯಾವುವೇ ಕಾರಣಗಳ ಮೇಲೆ ಅದಕ್ಕೆ ದೊರೆಯದಂತೆ ತಡೆಹಿಡಿಯತಕ್ಕದ್ದಲ್ಲ.

19. ಅಪೀಲು.– (1) 7ನೇ ಪ್ರಕರಣದ (1)ನೇ ಉಪ–ಪ್ರಕರಣದಲ್ಲಿ ಅಥವಾ (3)ನೇ ಉಪಪ್ರಕರಣದ (ಎ) ಖಂಡದಲ್ಲಿ ನಿರ್ದಿಷ್ಟಪಡಿಸಲಾದ ಸಮಯದೊಳಗೆ ನಿರ್ಣಯವನ್ನು ಸ್ವೀಕರಿಸದಿರುವಂಥ ಅಥವಾ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಯ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ನಿರ್ಣಯದಿಂದ ಬಾಧಿತನಾದಂಥ ಯಾರೇ ವ್ಯಕ್ತಿಯು, ಅಂಥ ಅವಧಿಯು ಮುಕ್ತಾಯಗೊಂಡಂದಿನಿಂದ ಅಥವಾ ನಿರ್ಣಯವನ್ನು ಸ್ವೀಕರಿಸಿದ ದಿನದಿಂದ ಮೂವತ್ತು ದಿನಗಳೊಳಗೆ ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಿಂತ ಹಿರಿಯ ದರ್ಜೆಯ ಅಧಿಕಾರಿಗೆ ಅಪೀಲು ಸಲ್ಲಿಸಬಹುದು:

ಪರಂತು, ಅಪೀಲುದಾರನು, ಸಕಾಲದಲ್ಲಿ ಅಪೀಲು ಸಲ್ಲಿಸಲು ಸಾಕಷ್ಟು ಕಾರಣದಿಂದ ಪ್ರತಿಬಂಧಿತನಾಗಿದ್ದಾನೆಂದು ಅಧಿಕಾರಿಗೆ ಮನದಟ್ಟಾದರೆ ಅಂಥ ಅಧಿಕಾರಿಯು ಮೂವತ್ತು ದಿನಗಳ ಅವಧಿ ಮುಗಿದ ತರುವಾಯ ಅಪೀಲನ್ನು ಸ್ವೀಕರಿಸಬಹುದು.

(2) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ಒಬ್ಬ ರಾಜ್ಯ ಮಾಹಿತಿ ಅಧಿಕಾರಿಯು ಮೂರನೇ ಪಕ್ಷದಾರನ ಮಾಹಿತಿಯನ್ನು ಬಹಿರಂಗಪಡಿಸುವಂತೆ 11ನೇ ಪ್ರಕರಣದ ಮೇರೆಗೆ ಮಾಡಿದ ಆದೇಶದ ವಿರುದ್ಧ ಅಪೀಲು ಸಲ್ಲಿಸಿದಲ್ಲಿ ಸಂಬಂಧಪಟ್ಟ ಮೂರನೇ ಪಕ್ಷದಾರನು ಆದೇಶದ ದಿನಾಂಕದಿಂದ ಮೂವತ್ತು ದಿನಗಳೊಳಗೆ ಅಪೀಲು ಸಲ್ಲಿಸತಕ್ಕದ್ದು.

(3) (1)ನೇ ಉಪಪ್ರಕರಣದ ಮೇರೆಗಿನ ನಿರ್ಣಯದ ವಿರುದ್ಧ ಸಲ್ಲಿಸುವ ಎರಡನೇ ಅಪೀಲನ್ನು, ಕೇಂದ್ರ ಮಾಹಿತಿ ಆಯೋಗ ಅಥವಾ ರಾಜ್ಯ ಮಾಹಿತಿ ಆಯೋಗವು ನಿರ್ಣಯವನ್ನು ಮಾಡಬೇಕಿದ್ದ ಅಥವಾ ವಾಸ್ತವವಾಗಿ ಸ್ವೀಕರಿಸಿದ ದಿನಾಂಕದಿಂದ ತೊಂಬತ್ತು ದಿನಗಳ ಒಳಗಾಗಿ ಸಲ್ಲಿಸತಕ್ಕದ್ದು:

ಪರಂತು, ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗಕ್ಕೆ ಅಪೀಲುದಾರನು ಸಕಾಲದಲ್ಲಿ ಅಪೀಲನ್ನು ಸಲ್ಲಿಸಲು ಯುಕ್ತ ಕಾರಣದಿಂದ ಪ್ರತಿಬಂಧಿತನಾಗಿದ್ದಾನೆಂದು ಮನದಟ್ಟಾದರೆ, ತೊಂಭತ್ತು ದಿನಗಳ ಅವಧಿಯು ಮುಗಿದ ತರುವಾಯ ಆ ಅಪೀಲನ್ನು ಸ್ವೀಕರಿಸಬಹುದು.

(4) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಮಾಡಿದ ಯಾವ ನಿರ್ಣಯದ ವಿರುದ್ಧ ಅಪೀಲು ಸಲ್ಲಿಸಲಾಗಿದೆಯೋ ಅದು ಮೂರನೆಯ ಪಕ್ಷಕಾರನ ಮಾಹಿತಿಗೆ ಸಂಬಂಧಿಸಿದ್ದರೆ, ಕೇಂದ್ರ ಮಾಹಿತಿ ಆಯೋಗ ಅಥವಾ

ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು ಮೂರನೆಯ ಪಕ್ಷದಾರನಿಗೆ ತನ್ನ ಅಹವಾಲನ್ನು ಹೇಳಿಕೊಳ್ಳಲು ಸೂಕ್ತ ಅವಕಾಶವನ್ನು ನೀಡತಕ್ಕದ್ದು.

(5) ಯಾವುವೇ ಅಪೀಲು ವ್ಯವಹರಣೆಗಳಲ್ಲಿ, ಕೋರಿಕೆಯ ನಿರಾಕರಣೆ ಸಮರ್ಥನೀಯವಾಗಿತ್ತು ಎಂಬುದನ್ನು ರುಜುವಾತುಪಡಿಸುವ ಹೊಣೆ ಕೋರಿಕೆಯನ್ನು ನಿರಾಕರಿಸಿದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ಮೇಲೆ ಇರತಕ್ಕದ್ದು.

(6) (1)ನೇ ಉಪಪ್ರಕರಣದ ಅಡಿಯಲ್ಲಿ ಅಥವಾ (2)ನೇ ಉಪ ಪ್ರಕರಣದ ಅಡಿಯಲ್ಲಿ ಸಲ್ಲಿಸಲಾದ ಅಪೀಲನ್ನು, ಅದನ್ನು ಸ್ವೀಕರಿಸಿದ ಮೂವತ್ತು ದಿನಗಳೊಳಗೆ ಅಥವಾ ಸಂದರ್ಭಾನುಸಾರ, ಅದನ್ನು ಸಲ್ಲಿಸಿದ ದಿನಾಂಕದಿಂದ ಒಟ್ಟು ನಲವತ್ತೈದು ದಿನಗಳನ್ನು ಮೀರದ ಹಾಗೆ ವಿಸ್ತರಿಸಿದ ಅವಧಿಯೊಳಗೆ ವಿಲೆ ಮಾಡಿ ಅದರ ಕಾರಣಗಳನ್ನು ಲಿಖಿತದಲ್ಲಿ ದಾಖಲಿಸತಕ್ಕದ್ದು.

(7) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗದ ನಿರ್ಣಯಗಳು ಬಂಧಕವಾಗಿರತಕ್ಕದ್ದು.

(8) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ತನ್ನ ನಿರ್ಣಯದಲ್ಲಿ,–

(ಎ) ಈ ಅಧಿನಿಯಮದ ಉಪಬಂಧಗಳನ್ನು ಪಾಲಿಸುವಂತೆ ಮಾಡಲು ಈ ಮುಂದಿನವುಗಳನ್ನು ಒಳಗೊಂಡಂತೆ ಅವಶ್ಯವಾಗಬಹುದಾದಂಥ ಯಾವುವೇ ಕ್ರಮಗಳನ್ನು ಕೈಗೊಳ್ಳಲು ಸಾರ್ವಜನಿಕ ಪ್ರಾಧಿಕಾರವನ್ನು ಅಗತ್ಯಪಡಿಸುವ ಅಧಿಕಾರವನ್ನು ಹೊಂದಿರುತ್ತದೆ.

(i) ನಿರ್ದಿಷ್ಟ ರೀತಿಯಲ್ಲಿ ಮಾಹಿತಿ ಪಡೆಯಲು ಅವಕಾಶ ನೀಡುವಂತೆ ಕೋರಿದರೆ ಆ ರೀತಿಯಲ್ಲಿ ಮಾಹಿತಿ ಪಡೆಯಲು ಅವಕಾಶ ನೀಡುವುದು;

(ii) ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯನ್ನು ನೇಮಿಸುವುದು;

(iii) ಕೆಲವು ಮಾಹಿತಿಯನ್ನು ಅಥವಾ ಮಾಹಿತಿಯ ಪ್ರವರ್ಗಗಳನ್ನು ಪ್ರಕಟಿಸುವುದು;

(iv) ದಾಖಲೆಗಳ ನಿರ್ವಹಣೆ, ವ್ಯವಸ್ಥಾಪನೆ ಮತ್ತು ನಾಶಕ್ಕೆ ಸಂಬಂಧಿಸಿದಂತೆ ತಾನು ಅನುಸರಿಸುತ್ತಿರುವ ಪದ್ಧತಿಗಳಲ್ಲಿ ಅಗತ್ಯ ಬದಲಾವಣೆಗಳನ್ನು ಮಾಡುವುದು;

(v) ಮಾಹಿತಿ ಹಕ್ಕಿನ ಬಗ್ಗೆ ತನ್ನ ಅಧಿಕಾರಿಗಳಿಗೆ ತರಬೇತಿ ಅವಕಾಶವನ್ನು ಹೆಚ್ಚಿಸುವುದು;

(vi) 4ನೇ ಪ್ರಕರಣದ (1)ನೇ ಉಪ ಪ್ರಕರಣದ (ಬಿ) ಖಂಡದ ಪ್ರಕಾರ ವಾರ್ಷಿಕ ವರದಿಯೊಂದನ್ನು ಅದಕ್ಕೆ ಒದಗಿಸುವುದು.

(ಬಿ) ಯಾವುದೇ ನಷ್ಟ ಅಥವಾ ಇತರ ಹಾನಿಗಾಗಿ ಫಿರ್ಯಾದಿಗೆ ನಷ್ಟ ಪರಿಹಾರ ನೀಡುವಂತೆ ಸಾರ್ವಜನಿಕ ಪ್ರಾಧಿಕಾರವನ್ನು ಅಗತ್ಯಪಡಿಸುವುದು;

(ಸಿ) ಈ ಅಧಿನಿಯಮದ ಅಡಿಯಲ್ಲಿ ಉಪಬಂಧಿಸಲಾದ ಯಾವುದೇ ಒಂದು ದಂಡನೆಯನ್ನು ವಿಧಿಸುವುದು;

(ಡಿ) ಅರ್ಜಿಯನ್ನು ತಿರಸ್ಕರಿಸುವುದು.

(9) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ಫಿರ್ಯಾದಿಗೆ ಮತ್ತು ಸಾರ್ವಜನಿಕ ಪ್ರಾಧಿಕಾರಕ್ಕೆ ಅಪೀಲು ಸಲ್ಲಿಸುವ ಹಕ್ಕು ಸೇರಿದಂತೆ ತನ್ನ ನಿರ್ಣಯವನ್ನು ತಿಳಿಸತಕ್ಕದ್ದು.

(10) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು ನಿಯಮಿಸಬಹುದಾದಂಥ ಪ್ರಕ್ರಿಯೆಗನುಸಾರವಾಗಿ ಅಪೀಲಿನ ಬಗ್ಗೆ ತೀರ್ಮಾನ ತೆಗೆದುಕೊಳ್ಳತಕ್ಕದ್ದು.

20. ದಂಡನೆಗಳು.– (1) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ ರಾಜ್ಯ ಮಾಹಿತಿ ಆಯೋಗವು ಯಾವುದೇ ದೂರು ಅಥವಾ ಕೋರಿಕೆಯ ಬಗ್ಗೆ ತೀರ್ಮಾನ ತೆಗೆದುಕೊಳ್ಳುವ ಸಮಯದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು, ಯಾವುದೇ ಯುಕ್ತ ಕಾರಣವಿಲ್ಲದೆ ಮಾಹಿತಿ ಕೋರಿ ಸಲ್ಲಿಸಿದ ಅರ್ಜಿಯನ್ನು ಸ್ವೀಕರಿಸಲು ನಿರಾಕರಿಸಿದ್ದಾನೆಂದು ಅಥವಾ 7ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ನಿರ್ದಿಷ್ಟಪಡಿಸಿದ ಸಮಯದೊಳಗೆ ಮಾಹಿತಿಯನ್ನು ಒದಗಿಸಿಲ್ಲವೆಂದು ಅಭಿಪ್ರಾಯಪಟ್ಟಲ್ಲಿ, ಅಥವಾ ಮಾಹಿತಿಗಾಗಿ ಕೋರಿಕೆಯನ್ನು ದುರುದ್ದೇಶದಿಂದ ನಿರಾಕರಿಸಿದ್ದಾನೆಂದು ಅಥವಾ ಗೊತ್ತಿದ್ದೂ ಸರಿಯಲ್ಲದ, ಅಪೂರ್ಣ ಅಥವಾ ದಾರಿತಪ್ಪಿಸುವ ಮಾಹಿತಿಗಳನ್ನು ನೀಡಿದ್ದಾನೆಂದು ಅಥವಾ ಕೋರಿಕೆಯ ವಿಷಯವಾಗಿದ್ದ ಮಾಹಿತಿಯನ್ನು ನಾಶಪಡಿಸಿದ್ದಾನೆಂದು ಅಥವಾ ಮಾಹಿತಿ ಒದಗಿಸುವುದಕ್ಕೆ ಯಾವುದೇ ರೀತಿಯಿಂದ ಅಡ್ಡಿಪಡಿಸಿದ್ದಾನೆಂದು ಅಭಿಪ್ರಾಯಪಟ್ಟಲ್ಲಿ, ಅರ್ಜಿಯನ್ನು ಸ್ವೀಕರಿಸಿದ ದಿನದವರೆಗೆ ಅಥವಾ ಮಾಹಿತಿಯನ್ನು ಒದಗಿಸಿದ ದಿನದವರೆಗೆ ಪ್ರತಿದಿನಕ್ಕೆ ಎರಡುನೂರ ಐವತ್ತು ರೂಪಾಯಿಗಳ ಜುಲ್ಮಾನೆಯನ್ನು ವಿಧಿಸತಕ್ಕದ್ದು, ಆದರೆ, ಜುಲ್ಮಾನೆಯ ಒಟ್ಟು ಮೊತ್ತವು ಇಪ್ಪತ್ತೈದು ಸಾವಿರ ರೂ.ಗಳನ್ನು ಮೀರತಕ್ಕದ್ದಲ್ಲ:

ಪರಂತು, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಯಾವುದೇ ದಂಡನೆಯನ್ನು ವಿಧಿಸುವ ಮುನ್ನ ಅವನಿಗೆ ತನ್ನ ಅಹವಾಲನ್ನು ಹೇಳಿಕೊಳ್ಳಲು ಯುಕ್ತ ಅವಕಾಶವನ್ನು ನೀಡತಕ್ಕದ್ದು.ಮತ್ತೂ

ಪರಂತು, ತಾನು ಸಮುಚಿತವಾಗಿ ಮತ್ತು ಶ್ರದ್ಧೆಯಿಂದ ಕಾರ್ಯ ನಿರ್ವಹಿಸಿದ್ದೇನೆಂದು ರುಜುವಾತುಪಡಿಸುವುದು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ಹೊಣೆಯಾಗಿರತಕ್ಕದ್ದು.

(2) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ ರಾಜ್ಯ ಮಾಹಿತಿ ಆಯೋಗವು ಯಾವುದೇ ದೂರು ಅಥವಾ ಮನವಿಯ ಬಗ್ಗೆ ನಿರ್ಧಾರ ತೆಗೆದುಕೊಳ್ಳುವ ಸಮಯದಲ್ಲಿ, ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯು ಯಾವುದೇ ಯುಕ್ತ ಕಾರಣವಿಲ್ಲದೆ ಹಾಗೂ ಸತತವಾಗಿ, ಮಾಹಿತಿ ಕೋರಿ ಸಲ್ಲಿಸಿದ ಅರ್ಜಿಯನ್ನು ಸ್ವೀಕರಿಸಲು ವಿಫಲನಾಗಿದ್ದಾನೆಂದು ಅಥವಾ 7ನೇ ಪ್ರಕರಣದ (1)ನೇ ಉಪಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ಸಮಯದೊಳಗೆ ಮಾಹಿತಿ ನೀಡಿಲ್ಲವೆಂದು ಅಥವಾ ದುರುದ್ದೇಶದಿಂದ ಮಾಹಿತಿಯ ಕೋರಿಕೆಯನ್ನು ನಿರಾಕರಿಸಿದ್ದಾನೆಂದು ಅಥವಾ ಗೊತ್ತಿದ್ದೂ ಸರಿಯಲ್ಲದ, ಅಪೂರ್ಣ ಅಥವಾ ದಾರಿ ತಪ್ಪಿಸುವ ಮಾಹಿತಿ ನೀಡಿದ್ದಾನೆಂದು ಅಥವಾ ಕೋರಿಕೆಯ ವಿಷಯವಾಗಿದ್ದ ಮಾಹಿತಿಯನ್ನು ನಾಶಪಡಿಸಿದ್ದಾನೆಂದು ಅಥವಾ ಮಾಹಿತಿ ಒದಗಿಸುವುದಕ್ಕೆ ಯಾವುದೇ ರೀತಿಯಿಂದ ಅಡ್ಡಿಪಡಿಸಿದ್ದಾನೆಂದು ಅಭಿಪ್ರಾಯಪಟ್ಟರೆ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯ ವಿರುದ್ಧ ಅವನಿಗೆ ಅನ್ವಯವಾಗುವ ಸೇವಾ ನಿಯಮಗಳ ಅಡಿಯಲ್ಲಿ ಶಿಸ್ತು ಕ್ರಮ ಕೈಗೊಳ್ಳಲು ಶಿಫಾರಸ್ಸು ಮಾಡತಕ್ಕದ್ದು.

# ಅಧ್ಯಾಯ – VI

## ಸಂಕೀರ್ಣ

21. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.– ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿಸಲಾದ ನಿಯಮಗಳ ಅಡಿಯಲ್ಲಿ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ, ಯಾರೇ ವ್ಯಕ್ತಿಯ ವಿರುದ್ಧ ಯಾವುದೇ ದಾವೆ, ಪ್ರಾಸಿಕ್ಯೂಷನ್ ಅಥವಾ ಇತರ ಕಾನೂನು ಕ್ರಮವನ್ನು ಕೈಗೊಳ್ಳತಕ್ಕದ್ದಲ್ಲ.

22. ಅಧಿನಿಯಮವು ಅಧ್ಯಾರೋಹಿ ಪರಿಣಾಮವನ್ನು ಹೊಂದಿರುವುದು.– ಸರ್ಕಾರಿ ರಹಸ್ಯಗಳ ಅಧಿನಿಯಮ 1923 (1923ರ 19)ರಲ್ಲಿ ಮತ್ತು ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನು ಅಥವಾ ಈ ಅಧಿನಿಯಮದ ಹೊರತಾಗಿ ಇತರ ಯಾವುದೇ ಕಾನೂನಿನ ಬಲದಿಂದ ಪರಿಣಾಮ ಹೊಂದಿರುವ ಯಾವುದೇ ಲಿಖಿತದಲ್ಲಿ ಅಸಂಗತವಾದುದೇನೇ ಇದ್ದರೂ ಈ ಅಧಿನಿಯಮದ ಉಪಬಂಧಗಳು ಪರಿಣಾಮಕಾರಿಯಾಗಿರತಕ್ಕದ್ದು.

23. ನ್ಯಾಯಾಲಯಗಳ ಅಧಿಕಾರ ವ್ಯಾಪ್ತಿಯ ಪ್ರತಿಭಂದಕ :– ಯಾವುದೇ ನ್ಯಾಯಾಲಯವೂ ಈ ಅಧಿನಿಯಮದ ಅಡಿಯಲ್ಲಿ ಮಾಡಲಾದ ಯಾವುದೇ ಆದೇಶದ ಸಂಬಂಧದಲ್ಲಿ ಯಾವುದೇ ದಾವೆ, ಅರ್ಜಿ ಅಥವಾ ಇತರ ವ್ಯವಹರಣೆಯನ್ನು ಸ್ವೀಕರಿಸತಕ್ಕದ್ದಲ್ಲ ಮತ್ತು ಈ ಅಧಿನಿಯಮದ ಅಡಿಯಲ್ಲಿನ ಒಂದು ಅಪೀಲಿನ ಮೂಲಕವಲ್ಲದೆ ಯಾವುದೇ ಅಂಥ ಆದೇಶವನ್ನು ಪ್ರಶ್ನಿಸತಕ್ಕದ್ದಲ್ಲ.

24. ಅಧಿನಿಯಮವು ಕೆಲವು ಸಂಸ್ಥೆಗಳಿಗೆ ಅನ್ವಯಿಸದಿರುವುದು.– (1) ಈ ಅಧಿನಿಯಮದಲ್ಲಿ ಇರುವುದು ಯಾವುದೂ, ಎರಡನೇ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿರುವ, ಕೇಂದ್ರ ಸರ್ಕಾರವು ಸ್ಥಾಪಿಸಿ ನಡೆಸುತ್ತಿರುವ ಸಂಸ್ಥೆಗಳಾಗಿರುವ ಗುಪ್ತ ಮಾಹಿತಿ ಮತ್ತು ಭದ್ರತಾ ಸಂಸ್ಥೆಗಳಿಗೆ ಅಥವಾ ಅಂಥ ಸಂಸ್ಥೆಗಳು ಸರ್ಕಾರಕ್ಕೆ ಒದಗಿಸಿರುವ ಯಾವುವೇ ಮಾಹಿತಿಗಳಿಗೆ ಅನ್ವಯವಾಗತಕ್ಕದ್ದಲ್ಲ:

ಪರಂತು, ಭ್ರಷ್ಟಾಚಾರದ ಆರೋಪಗಳಿಗೆ ಹಾಗೂ ಮಾನವ ಹಕ್ಕುಗಳ ಉಲ್ಲಂಘನೆಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಈ ಉಪ ಪ್ರಕರಣದ ಅಡಿಯಲ್ಲಿ ಹೊರತುಪಡಿಸತಕ್ಕದ್ದಲ್ಲ.ಮತ್ತೂ ಪರಂತು, ಮಾನವ ಹಕ್ಕುಗಳ ಉಲ್ಲಂಘನೆಯ ಆರೋಪಗಳಿಗೆ ಸಂಬಂಧಿಸಿದಂತೆ ಮಾಹಿತಿಯನ್ನು ಕೋರಿರುವ ಸಂದರ್ಭದಲ್ಲಿ, ಕೇಂದ್ರ ಮಾಹಿತಿ ಆಯೋಗವು ಸಮ್ಮತಿಸಿದ ತರುವಾಯ ಮಾತ್ರವೇ ಆ ಮಾಹಿತಿಯನ್ನು ಒದಗಿಸತಕ್ಕದ್ದು ಮತ್ತು 7ನೇ ಪ್ರಕರಣದಲ್ಲಿ ಏನೇ ಇದ್ದರೂ ಮನವಿಯನ್ನು ಸ್ವೀಕರಿಸಿದ ದಿನಾಂಕದಿಂದ ನಲವತ್ತೈದು ದಿನಗಳೊಳಗೆ ಅಂಥ ಮಾಹಿತಿಯನ್ನು ಒದಗಿಸತಕ್ಕದ್ದು.

(2) ಕೇಂದ್ರ ಸರ್ಕಾರವು, ಅಧಿಕೃತ ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ, ಆ ಸರ್ಕಾರದಿಂದ ಸ್ಥಾಪಿಸಲಾದ ಯಾವುದೇ ಇತರ ಗುಪ್ತಮಾಹಿತಿ ಅಥವಾ ಭದ್ರತಾ ಸಂಸ್ಥೆಯನ್ನು ಸೇರಿಸಿ ಅಥವಾ ಅದರಲ್ಲಿ ಈಗಾಗಲೇ ನಿರ್ಧಿಷ್ಟಪಡಿಸಿದ ಯಾವುದೇ ಸಂಸ್ಥೆಯನ್ನು ಅದರಿಂದ ಬಿಟ್ಟು ಅನುಸೂಚಿಯನ್ನು ತಿದ್ದುಪಡಿ ಮಾಡಬಹುದು ಮತ್ತು ಅಂಥ ಅಧಿಸೂಚನೆಯ ಪ್ರಕಟಣೆಯ ನಂತರ ಅಂಥ ಸಂಸ್ಥೆಯನ್ನು ಅನುಸೂಚಿಯಲ್ಲಿ ಸೇರಿಸಲಾಗಿದೆಯೆಂದು ಅಥವಾ ಸಂದರ್ಭಾನುಸಾರ, ಬಿಟ್ಟುಬಿಡಲಾಗಿದೆಯೆಂದು ಭಾವಿಸತಕ್ಕದ್ದು.

(3) (2)ನೇ ಉಪ–ಪ್ರಕರಣದ ಅಡಿಯಲ್ಲಿ ಹೊರಡಿಸಿದ ಪ್ರತಿಯೊಂದು ಅಧಿಸೂಚನೆಯನ್ನು ಸಂಸತ್ತಿನ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

(4) ಈ ಅಧಿನಿಯಮದಲ್ಲಿ ಒಳಗೊಂಡಿರುವ ಯಾವುದೂ, ಸರ್ಕಾರವು ಅಧಿಕೃತ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಕಾಲಕಾಲಕ್ಕೆ ನಿರ್ದಿಷ್ಟಪಡಿಸಬಹುದಾದಂತೆ, ರಾಜ್ಯ ಸರ್ಕಾರದಿಂದ ಸ್ಥಾಪಿಸಲಾದ ಸಂಸ್ಥೆಗಳಾಗಿರುವಂಥ ಗುಪ್ತಮಾಹಿತಿ ಮತ್ತು ಭದ್ರತಾ ಸಂಸ್ಥೆಗಳಿಗೆ ಅನ್ವಯಿಸತಕ್ಕದ್ದಲ್ಲ:
ಪರಂತು, ಭ್ರಷ್ಟಾಚಾರದ ಆಪಾದನೆಗಳಿಗೆ ಸಂಬಂಧಿಸಿದ ಮಾಹಿತಿಯನ್ನು ಈ ಉಪ ಪ್ರಕರಣದ ಅಡಿಯಲ್ಲಿ ಹೊರತುಪಡಿಸತಕ್ಕದ್ದಲ್ಲ:ಮತ್ತೂ

ಪರಂತು, ಮಾನವ ಹಕ್ಕುಗಳ ಉಲ್ಲಂಘನೆಯ ಆಪಾದನೆಗಳ ಸಂಬಂಧದ ಮಾಹಿತಿಯನ್ನು ಕೋರಲಾಗಿರುವ ಸಂದರ್ಭದಲ್ಲಿ, ಆ ಮಾಹಿತಿಯನ್ನು ರಾಜ್ಯ ಮಾಹಿತಿ ಆಯೋಗವು ಅನುಮೋದಿಸಿದ ತರುವಾಯ ಮಾತ್ರವೇ ಒದಗಿಸತಕ್ಕದ್ದು ಮತ್ತು 7ನೇ ಪ್ರಕರಣದಲ್ಲಿ ಏನೇ ಇದ್ದರೂ ಕೋರಿಕೆಯನ್ನು ಸ್ವೀಕರಿಸಿದ ದಿನಾಂಕದಿಂದ ನಲವತ್ತೈದು ದಿನಗಳ ಒಳಗೆ ಅಂಥ ಮಾಹಿತಿಯನ್ನು ಒದಗಿಸತಕ್ಕದ್ದು.

(5) (4)ನೇ ಉಪಪ್ರಕರಣದ ಅಡಿಯಲ್ಲಿ ಹೊರಡಿಸಲಾದ ಪ್ರತಿಯೊಂದು ಅಧಿಸೂಚನೆಯನ್ನು ರಾಜ್ಯ ವಿಧಾನ ಮಂಡಲದ ಮುಂದೆ ಮಂಡಿಸತಕ್ಕದ್ದು.

25. ಮೇಲ್ವಿಚಾರಣೆ ಮತ್ತು ವರದಿ ಮಾಡುವುದು.– (1) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು, ಪ್ರತಿಯೊಂದು ವರ್ಷದ ಮುಕ್ತಾಯದ ನಂತರ, ಸಾಧ್ಯವಾದಷ್ಟು ಬೇಗನೆ, ಆ ವರ್ಷದ ಅವಧಿಯಲ್ಲಿ ಈ ಅಧಿನಿಯಮದ ಉಪಬಂಧಗಳನ್ನು ಕಾರ್ಯಗತಗೊಳಿಸಿದ ಬಗ್ಗೆ ಒಂದು ವರದಿಯನ್ನು ಸಿದ್ಧಪಡಿಸತಕ್ಕದ್ದು ಮತ್ತು ಅದರ ಒಂದು ಪ್ರತಿಯನ್ನು ಸಮುಚಿತ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

(2) ಪ್ರತಿಯೊಂದು ಸಚಿವಾಲಯವು ಅಥವಾ ಇಲಾಖೆಯು ತನ್ನ ಅಧಿಕಾರ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕ ಪ್ರಾಧಿಕಾರಗಳಿಗೆ ಸಂಬಂಧಿಸಿದಂತೆ, ಈ ಪ್ರಕರಣದ ಅಡಿಯಲ್ಲಿ ವರದಿಯನ್ನು ಸಿದ್ಧಪಡಿಸಲು ಅಗತ್ಯಪಡಿಸಲಾದಂಥ ಮಾಹಿತಿಯನ್ನು ಸಂಗ್ರಹಿಸಿ ಕೇಂದ್ರ ಮಾಹಿತಿ ಆಯೋಗಕ್ಕೆ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗಕ್ಕೆ ಒದಗಿಸತಕ್ಕದ್ದು ಮತ್ತು ಆ ಮಾಹಿತಿಯನ್ನು ಒದಗಿಸುವುದಕ್ಕೆ ಸಂಬಂಧಿಸಿದ ಅಗತ್ಯತೆಗಳನ್ನು ಪಾಲಿಸತಕ್ಕದ್ದು ಮತ್ತು ಈ ಪ್ರಕರಣದ ಉದ್ದೇಶಗಳಿಗಾಗಿ ದಾಖಲೆಗಳನ್ನು ಇರಿಸಿಕೊಳ್ಳತಕ್ಕದ್ದು.

(3) ವರದಿಯ ವರ್ಷಕ್ಕೆ ಸಂಬಂಧಿಸಿದಂತೆ ಪ್ರತಿಯೊಂದು ವರದಿಯಲ್ಲಿ ಈ ಮುಂದಿನವುಗಳನ್ನು ತಿಳಿಸತಕ್ಕದ್ದು,–

(ಎ) ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರಕ್ಕೆ ಸಲ್ಲಿಸಿದ ಕೋರಿಕೆಗಳ ಸಂಖ್ಯೆ;

(ಬಿ) ಕೋರಿಕೆಗಳ ಅನುಸರಣೆಯಲ್ಲಿ ಅರ್ಜಿದಾರರಿಗೆ ದಾಖಲೆಗಳನ್ನು ನೋಡುವ ಹಕ್ಕಿಲ್ಲವೆಂದು ತೆಗೆದುಕೊಂಡ ತೀರ್ಮಾನಗಳ ಸಂಖ್ಯೆ, ಈ ತೀರ್ಮಾನಗಳನ್ನು ಈ ಅಧಿನಿಯಮದ ಯಾವ ಉಪಬಂಧಗಳ ಅಡಿಯಲ್ಲಿ ಕೈಗೊಳ್ಳಲಾಗಿದೆಯೋ ಆ ಉಪಬಂಧಗಳು ಮತ್ತು ಇಂಥ ಉಪಬಂಧಗಳನ್ನು ಅನ್ವಯಿಸಿರುವ ಪ್ರಕರಣಗಳ ಸಂಖ್ಯೆ;

(ಸಿ) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗಕ್ಕೆ ಪುನರವಲೋಕನಕ್ಕಾಗಿ ಸಲ್ಲಿಸಲಾದ ಅಪೀಲುಗಳ ಸಂಖ್ಯೆ, ಅಪೀಲುಗಳ ಸ್ವರೂಪ ಮತ್ತು ಅಪೀಲುಗಳಲ್ಲಿ ಕೈಗೊಂಡ ನಿರ್ಧಾರ;

(ಡಿ) ಈ ಅಧಿನಿಯಮವನ್ನು ಅನ್ವಯಿಸುವ ಸಂಬಂಧದಲ್ಲಿ ಯಾವುದೇ ಅಧಿಕಾರಿಯ ವಿರುದ್ಧ ತೆಗೆದುಕೊಂಡ ಯಾವುದೇ ಶಿಸ್ತು ಕ್ರಮದ ವಿವರಗಳು;

(ಇ) ಈ ಅಧಿನಿಯಮದ ಅಡಿಯಲ್ಲಿ ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರದಿಂದ ಸಂಗ್ರಹಿಸಲಾದ ಶುಲ್ಕಗಳ ಮೊತ್ತ;

(ಎಫ್) ಈ ಅಧಿನಿಯಮದ ಆಶಯ ಮತ್ತು ಉದ್ದೇಶಗಳನ್ನು ಜಾರಿಗೊಳಿಸಲು ಮತ್ತು ಕಾರ್ಯರೂಪಕ್ಕೆ ತರಲು ಸಾರ್ವಜನಿಕ ಪ್ರಾಧಿಕಾರಗಳು ಮಾಡಿದ ಪ್ರಯತ್ನವನ್ನು ಸೂಚಿಸುವ ಯಾವುವೇ ಸಂಗತಿಗಳು;

(ಜಿ) ನಿರ್ದಿಷ್ಟ ಸಾರ್ವಜನಿಕ ಪ್ರಾಧಿಕಾರಗಳಿಗೆ ಸಂಬಂಧಿಸಿದಂತೆ ಅಭಿವೃದ್ಧಿ, ಪ್ರಗತಿ (ಬೆಳವಣಿಗೆ), ಆಧುನೀಕರಣ, ಸುಧಾರಣೆಗೆ ಮಾಡುವ ಶಿಫಾರಸುಗಳನ್ನು ಒಳಗೊಂಡಂತೆ ಸುಧಾರಣೆಗೆ ಸಂಬಂಧಿಸಿದ ಶಿಫಾರಸುಗಳು ಅಥವಾ ಈ ಅಧಿನಿಯಮಕ್ಕೆ ಅಥವಾ ಇತರ ಶಾಸನಕ್ಕೆ ಅಥವಾ ಸಾಮಾನ್ಯ ಕಾನೂನಿಗೆ ತಿದ್ದುಪಡಿ ಅಥವಾ ಮಾಹಿತಿ ಪಡೆಯುವ ಹಕ್ಕನ್ನು ಕಾರ್ಯಾಚರಣೆಗೊಳಿಸುವುದಕ್ಕೆ ಸುಸಂಗತವಾದ ಯಾವುದೇ ಇತರ ವಿಷಯ.

(4) ಕೇಂದ್ರ ಸರ್ಕಾರವು ಅಥವಾ ಸಂದರ್ಭಾನುಸಾರ, ರಾಜ್ಯ ಸರ್ಕಾರವು ಪ್ರತಿಯೊಂದು ವರ್ಷ ಮುಕ್ತಾಯಗೊಂಡ ನಂತರ ಕಾರ್ಯಸಾಧ್ಯವಾದಷ್ಟು ಬೇಗನೆ, ಕೇಂದ್ರ ಮಾಹಿತಿ ಆಯೋಗದ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗದ ವರದಿಯ ಒಂದು ಪ್ರತಿಯನ್ನು ಸಂಸತ್ತಿನ ಪ್ರತಿಯೊಂದು ಸದನದ ಮುಂದೆ ಅಥವಾ ಸಂದರ್ಭಾನುಸಾರ, ರಾಜ್ಯ ವಿಧಾನ ಮಂಡಲದಲ್ಲಿ, ಎರಡು ಸದನಗಳಿರುವಲ್ಲಿ ಪ್ರತಿಯೊಂದು ಸದನದ ಮುಂದೆ ಮತ್ತು ಒಂದು ಸದನವಿರುವಲ್ಲಿ ಆ ಸದನದ ಮುಂದೆ ಮಂಡಿಸುವಂತೆ ಮಾಡಬಹುದು.

(5) ಈ ಅಧಿನಿಯಮದ ಅಡಿಯಲ್ಲಿ ತನ್ನ ಕಾರ್ಯಗಳನ್ನು ನಿರ್ವಹಿಸುವುದಕ್ಕೆ ಸಂಬಂಧಿಸಿದಂತೆ, ಸಾರ್ವಜನಿಕ ಪ್ರಾಧಿಕಾರವು ಅನುಸರಿಸುತ್ತಿರುವ ಪದ್ಧತಿಯು ಈ ಅಧಿನಿಯಮದ ಉಪಬಂಧಗಳಿಗೆ ಅಥವಾ ಆಶಯಕ್ಕೆ ಅನುಗುಣವಾಗಿಲ್ಲವೆಂದು ಕೇಂದ್ರ ಮಾಹಿತಿ ಆಯೋಗಕ್ಕೆ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗಕ್ಕೆ ಕಂಡು ಬಂದಲ್ಲಿ, ತನ್ನ ಅಭಿಪ್ರಾಯದಲ್ಲಿ ಅದಕ್ಕೆ ಅನುಗುಣವಾಗಿರುವ ಅಂಥ ಪದ್ಧತಿಯನ್ನು ಮತ್ತು ತೆಗೆದುಕೊಳ್ಳಬೇಕಾದ ಕ್ರಮಗಳನ್ನು ನಿರ್ದಿಷ್ಟಪಡಿಸಿ ಪ್ರಾಧಿಕಾರಕ್ಕೆ ಶಿಫಾರಸು ಮಾಡಬಹುದು.

26. ಸಮುಚಿತ ಸರ್ಕಾರವು ಕಾರ್ಯಕ್ರಮಗಳನ್ನು ಸಿದ್ಧಪಡಿಸುವುದು.– (1) ಸಮುಚಿತ ಸರ್ಕಾರವು ಹಣಕಾಸು ಮತ್ತು ಇತರ ಸಂಪನ್ಮೂಲಗಳು ಲಭ್ಯವಿರುವಷ್ಟರ ಮಟ್ಟಿಗೆ,–

(ಎ) ಈ ಅಧಿನಿಯಮದ ಅಡಿಯಲ್ಲಿ ಉದ್ದೇಶಿಸಿದ ಹಕ್ಕುಗಳನ್ನು ಹೇಗೆ ಚಲಾಯಿಸಬೇಕೆಂಬ ಬಗ್ಗೆ ಸಾರ್ವಜನಿಕರ ಅದರಲ್ಲೂ ವಿಶೇಷವಾಗಿ ಅವಕಾಶ ವಂಚಿತ ಸಮುದಾಯಗಳ ತಿಳಿವಳಿಕೆ ಮಟ್ಟವನ್ನು ಹೆಚ್ಚಿಸಲು ಶೈಕ್ಷಣಿಕ ಕಾರ್ಯಕ್ರಮಗಳನ್ನು ರೂಪಿಸಬಹುದು ಮತ್ತು ಸಂಘಟಿಸಬಹುದು;

(ಬಿ) (ಎ) ಖಂಡದಲ್ಲಿ ಉಲ್ಲೇಖಿಸಿರುವ ಕಾರ್ಯಕ್ರಮಗಳನ್ನು ರೂಪಿಸುವುದರಲ್ಲಿ ಮತ್ತು ಸಂಘಟಿಸುವುದರಲ್ಲಿ ಭಾಗವಹಿಸಲು ಮತ್ತು ಅಂಥ ಕಾರ್ಯಕ್ರಮಗಳನ್ನು ಸ್ವತಃ ತಾವೇ ಕೈಗೊಳ್ಳಲು ಸಾರ್ವಜನಿಕ ಪ್ರಾಧಿಕಾರಗಳನ್ನು ಪ್ರೋತ್ಸಾಹಿಸಬಹುದು;

(ಸಿ) ಸಾರ್ವಜನಿಕ ಪ್ರಾಧಿಕಾರಗಳು ತಮ್ಮ ಕಾರ್ಯಚಟುವಟಿಕೆಗಳ ಬಗ್ಗೆ ನಿಖರವಾದ ಮಾಹಿತಿಯನ್ನು ಸಕಾಲದಲ್ಲಿ ಮತ್ತು ಪರಿಣಾಮಕಾರಿ ರೀತಿಯಲ್ಲಿ ಪ್ರಸಾರ ಮಾಡುವುದಕ್ಕೆ ಉತ್ತೇಜಿಸಬಹುದು; ಮತ್ತು

(ಡಿ) ಸಾರ್ವಜನಿಕ ಪ್ರಾಧಿಕಾರಗಳ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನು ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗಳನ್ನು ತರಬೇತುಗೊಳಿಸಬಹುದು ಮತ್ತು ಸಾರ್ವಜನಿಕ ಪ್ರಾಧಿಕಾರಗಳು ತಮ್ಮ ಬಳಕೆಗಾಗಿ ಸುಸಂಗತ ತರಬೇತಿ ಪರಿಕರಗಳನ್ನು ತಾವೇ ತಯಾರಿಸಿಕೊಳ್ಳಬಹುದು.

(2) ಸಮುಚಿತ ಸರ್ಕಾರವು, ಈ ಅಧಿನಿಯಮವು ಪ್ರಾರಂಭವಾದಂದಿನಿಂದ ಹದಿನೆಂಟು ತಿಂಗಳುಗಳೊಳಗೆ, ಈ ಅಧಿನಿಯಮದಲ್ಲಿ ನಿರ್ದಿಷ್ಟಪಡಿಸಿದ ಯಾವುದೇ ಹಕ್ಕನ್ನು ಚಲಾಯಿಸಲು ಇಚ್ಛಿಸುವ ವ್ಯಕ್ತಿಗೆ ಯುಕ್ತವಾಗಿ ಅಗತ್ಯವಾಗಬಹುದಾದಂಥ ಮಾಹಿತಿಯನ್ನು ಸುಲಭವಾಗಿ ತಿಳಿಯುವ ರೂಪವನ್ನು ಮತ್ತು ರೀತಿಯನ್ನು ಒಳಗೊಂಡ ಮಾರ್ಗದರ್ಶಿ ಪುಸ್ತಿಕೆಯನ್ನು ತನ್ನ ಅಧಿಕೃತ ಭಾಷೆಯಲ್ಲಿ ಸಂಕಲಿಸತಕ್ಕದ್ದು.

(3) ಸಮುಚಿತ ಸರ್ಕಾರವು, ಅಗತ್ಯವೆನಿಸಿದಲ್ಲಿ (2)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿರುವ ಮಾರ್ಗದರ್ಶಿ ಸೂತ್ರಗಳನ್ನು ನಿಯತ ಅಂತರಗಳಲ್ಲಿ ನಿರ್ದಿಷ್ಟವಾಗಿ ಮತ್ತು (2)ನೇ ಉಪಪ್ರಕರಣದ ಸಾಮಾನ್ಯ ಅನ್ವಯಕ್ಕೆ ಬಾಧಕವಾಗದಂತೆ ಆ ದಿನದವರೆಗೆ ಸಿದ್ಧಪಡಿಸಿ ಪ್ರಕಟಿಸತಕ್ಕದ್ದು ಮತ್ತು ಇದು ಕೆಳಗಿನವುಗಳನ್ನು ಒಳಗೊಂಡಿರತಕ್ಕದ್ದು:–

(ಎ) ಈ ಅಧಿನಿಯಮದ ಉದ್ದೇಶಗಳು;

(ಬಿ) 5ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ನೇಮಕಗೊಂಡ ಪ್ರತಿಯೊಂದು ಸಾರ್ವಜನಿಕ ಪ್ರಾಧಿಕಾರದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ

ಸಾರ್ವಜನಿಕ ಮಾಹಿತಿ ಅಧಿಕಾರಿಯ ಅಂಚೆ ಮತ್ತು ರಸ್ತೆ ವಿಳಾಸ, ದೂರವಾಣಿ ಹಾಗೂ ಫ್ಯಾಕ್ಸ್ ಸಂಖ್ಯೆ ಹಾಗೂ ಲಭ್ಯವಿದ್ದಲ್ಲಿ ಇ–ಮೇಲ್ ವಿಳಾಸ;

(ಸಿ) ಮಾಹಿತಿಯನ್ನು ಪಡೆಯಲು ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಗೆ ಮಾಹಿತಿ ಪಡೆಯಲು ಕೋರಿಕೆಯನ್ನು ಸಲ್ಲಿಸುವ ವಿಧಾನ ಮತ್ತು ನಮೂನೆ;

(ಡಿ) ಈ ಅಧಿನಿಯಮದ ಅಡಿಯಲ್ಲಿ ಸಾರ್ವಜನಿಕ ಪ್ರಾಧಿಕಾರದ ಕೇಂದ್ರ ಸಾರ್ವಜನಿಕ ಮಾಹಿತಿ ಅಧಿಕಾರಿ ಅಥವಾ ಸಂದರ್ಭಾನುಸಾರ, ರಾಜ್ಯ ಸಾರ್ವಜನಿಕ ಮಾಹಿತಿ ಅಧಿಕಾರಿಯಿಂದ ದೊರೆಯುವಂಥ ನೆರವು ಮತ್ತು ಈ ಅಧಿಕಾರಿಗಳ ಕರ್ತವ್ಯಗಳು;

(ಇ) ಕೇಂದ್ರ ಮಾಹಿತಿ ಆಯೋಗ ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗದಿಂದ ದೊರೆಯುವ ನೆರವು;

(ಎಫ್) ಆಯೋಗಕ್ಕೆ ಅಪೀಲನ್ನು ಸಲ್ಲಿಸುವ ವಿಧಾನವನ್ನೂ ಒಳಗೊಂಡಂತೆ, ಈ ಅಧಿನಿಯಮದ ಮೂಲಕ ಪ್ರದತ್ತವಾದ ಅಥವಾ ವಿಧಿಸಲಾದ ಹಕ್ಕು ಅಥವಾ ಕರ್ತವ್ಯಕ್ಕೆ ಸಂಬಂಧಪಟ್ಟಂತೆ ಕೈಗೊಂಡ ಕ್ರಮಕ್ಕೆ ಅಥವಾ ಕ್ರಮ ಕೈಗೊಳ್ಳಲು ವಿಫಲವಾದುದಕ್ಕೆ ಸಂಬಂಧಿಸಿದಂತೆ ಕಾನೂನಿನಲ್ಲಿ ಲಭ್ಯವಿರುವ ಎಲ್ಲ ಪರಿಹಾರಗಳು;

(ಜಿ) 4ನೇ ಪ್ರಕರಣಕ್ಕೆ ಅನುಸಾರವಾಗಿ ದಾಖಲೆಗಳ ಪ್ರವರ್ಗಗಳನ್ನು ಸ್ವಯಿಚ್ಛೆಯಿಂದ ಬಹಿರಂಗಪಡಿಸಲು ಕಲ್ಪಿಸಲಾದ ಉಪಬಂಧಗಳು;

(ಎಚ್) ಮಾಹಿತಿಯನ್ನು ಪಡೆಯಲು ಸಲ್ಲಿಸಲಾದ ಕೋರಿಕೆಗಳಿಗೆ ಸಂಬಂಧಿಸಿದಂತೆ ಸಂದಾಯ ಮಾಡಬೇಕಾದ ಶುಲ್ಕಕ್ಕೆ ಸಂಬಂಧಪಟ್ಟ ನೋಟೀಸುಗಳು;

(ಐ) ಈ ಅಧಿನಿಯಮಕ್ಕೆ ಅನುಸಾರವಾಗಿ ಮಾಹಿತಿಯನ್ನು ಪಡೆಯುವುದಕ್ಕೆ ಸಂಬಂಧಿಸಿದಂತೆ ಮಾಡಲಾದ ಅಥವಾ ಹೊರಡಿಸಲಾದ ಹೆಚ್ಚುವರಿ ವಿನಿಯಮನಗಳು ಅಥವಾ ಸುತ್ತೋಲೆಗಳು.

(4) ಸಮುಚಿತ ಸರ್ಕಾರವು, ಅವಶ್ಯವೆನಿಸಿದರೆ ನಿಯತ ಅಂತರಗಳಲ್ಲಿ ಮಾರ್ಗದರ್ಶಿ ಸೂತ್ರಗಳನ್ನು ಆ ದಿನದವರೆಗೆ ಸಿದ್ಧಪಡಿಸಿ ಪ್ರಕಟಿಸತಕ್ಕದ್ದು.

27. ಸಮುಚಿತ ಸರ್ಕಾರದ ನಿಯಮ ರಚನಾಧಿಕಾರ.– (1) ಸಮುಚಿತ ಸರ್ಕಾರವು, ಅಧಿಕೃತ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸಲು ನಿಯಮಗಳನ್ನು ರಚಿಸಬಹುದು.

(2) ವಿಶೇಷವಾಗಿ, ಮತ್ತು ಈ ಹಿಂದೆ ಹೇಳಿದ ಅಧಿಕಾರದ ಸಾಮಾನ್ಯ ಅನ್ವಯಕ್ಕೆ ಬಾಧಕವಾಗದಂತೆ ಅಂಥ ನಿಯಮಗಳು ಈ ಕೆಳಕಂಡ ಎಲ್ಲ ಅಥವಾ ಯಾವುವೇ ವಿಷಯಗಳ ಬಗ್ಗೆ ಉಪಬಂಧ ಕಲ್ಪಿಸಬಹುದು, ಎಂದರೆ,–

(ಎ) 4ನೇ ಪ್ರಕರಣದ (4)ನೇ ಉಪ ಪ್ರಕರಣದ ಅಡಿಯಲ್ಲಿ ಪ್ರಸಾರ ಮಾಡಬೇಕಾದ ವಿಷಯ ಸಾಮಗ್ರಿಗಳ ಬೆಲೆ, ಮಾಧ್ಯಮದ ವೆಚ್ಚ ಅಥವಾ ಮುದ್ರಣ ವೆಚ್ಚ;

(ಬಿ) 6ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ಸಂದಾಯ ಮಾಡಬೇಕಾದ ಶುಲ್ಕ;

(ಸಿ) 7ನೇ ಪ್ರಕರಣದ (1) ಮತ್ತು (5)ನೇ ಉಪ ಪ್ರಕರಣಗಳ ಅಡಿಯಲ್ಲಿ ಸಂದಾಯ ಮಾಡಬೇಕಾದ ಶುಲ್ಕ;

(ಡಿ) 13ನೇ ಪ್ರಕರಣದ (7)ನೇ ಉಪಪ್ರಕರಣ ಹಾಗು 16ನೇ ಪ್ರಕರಣದ (6)ನೇ ಉಪಪ್ರಕರಣದ ಮೇರೆಗೆ ಅಧಿಕಾರಿಗಳಿಗೆ ಮತ್ತು ಇತರ ನೌಕರರಿಗೆ ಸಂದಾಯ ಮಾಡಬೇಕಾದ ವೇತನ ಮತ್ತು ಭತ್ಯೆಗಳು ಹಾಗು ಅವರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(ಇ) 19ನೇ ಪ್ರಕರಣದ (10)ನೇ ಉಪ ಪ್ರಕರಣದ ಅಡಿಯಲ್ಲಿ ಅಪೀಲುಗಳನ್ನು ತೀರ್ಮಾನಿಸುವಲ್ಲಿ ಕೇಂದ್ರ ಮಾಹಿತಿ ಆಯೋಗವು ಅಥವಾ ಸಂದರ್ಭಾನುಸಾರ, ರಾಜ್ಯ ಮಾಹಿತಿ ಆಯೋಗವು ಅನುಸರಿಸಬೇಕಾದ ಕಾರ್ಯವಿಧಾನ; ಮತ್ತು

(ಎಫ್) ನಿಯಮಿಸಬೇಕಾದ ಅಥವಾ ನಿಯಮಿಸಬಹುದಾದ ಯಾವುದೇ ಇತರ ವಿಷಯ.

28. ಸಕ್ಷಮ ಪ್ರಾಧಿಕಾರದಿಂದ ನಿಯಮ ರಚನಾಧಿಕಾರ.– (1) ಸಕ್ಷಮ ಪ್ರಾಧಿಕಾರವು, ಅಧಿಕೃತ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಈ ಅಧಿನಿಯಮದ ಉಪಬಂಧಗಳ ನಿರ್ವಹಣೆಗೆ ಸಂಬಂಧಿಸಿದಂತೆ ನಿಯಮಗಳನ್ನು ರಚಿಸಬಹುದು.

(2) ವಿಶೇಷವಾಗಿ ಮತ್ತು ಈ ಹಿಂದೆ ಹೇಳಿದ ಅಧಿಕಾರದ ಸಾಮಾನ್ಯಾನ್ವಯಕ್ಕೆ ಬಾಧಕವಾಗದಂತೆ ಅಂಥ ನಿಯಮಗಳು ಈ ಕೆಳಕಂಡ ಎಲ್ಲ ಅಥವಾ ಯಾವುವೇ ವಿಷಯಗಳ ಬಗ್ಗೆ ಉಪಬಂಧ ಕಲ್ಪಿಸಬಹುದು, ಎಂದರೆ:–

(i) 4ನೇ ಪ್ರಕರಣದ (4)ನೇ ಉಪ ಪ್ರಕರಣದ ಅಡಿಯಲ್ಲಿ ಪ್ರಸಾರ ಮಾಡಬೇಕಾದ ವಿಷಯ ಸಾಮಗ್ರಿಗಳ ಬೆಲೆ, ಮಾಧ್ಯಮದ ವೆಚ್ಚ ಅಥವಾ ಅವುಗಳ ಮುದ್ರಣ ವೆಚ್ಚ ;

(ii) 6ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ಸಂದಾಯ ಮಾಡಬೇಕಾದ ಶುಲ್ಕ;

(iii) 7ನೇ ಪ್ರಕರಣದ (1)ನೇ ಉಪ ಪ್ರಕರಣದ ಅಡಿಯಲ್ಲಿ ಸಂದಾಯ ಮಾಡಬೇಕಾದ ಶುಲ್ಕ; ಮತ್ತು

(iv) ನಿಯಮಿಸಬೇಕಾದ ಅಥವಾ ನಿಯಮಿಸಬಹುದಾದ ಯಾವುದೇ ಇತರ ವಿಷಯ.

29. ನಿಯಮಗಳನ್ನು ಮಂಡಿಸುವುದು.– (1) ಕೇಂದ್ರ ಸರ್ಕಾರವು, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ ಸಾಧ್ಯವಾದಷ್ಟು ಬೇಗನೆ, ಸಂಸತ್ತಿನ ಪ್ರತಿಯೊಂದು ಸದನದ ಮುಂದೆ, ಅದು ಒಟ್ಟು ಮೂವತ್ತು ದಿವಸಗಳ ಅವಧಿಯವರೆಗೆ ಅಡಕವಾಗಬಹುದಾದ ಅಧಿವೇಶನದಲ್ಲಿರುವಾಗ ಒಂದು ಅಥವಾ ಒಂದಾದ ಮೇಲೊಂದರಂತೆ ಬರುವ ಎರಡು ಅಥವಾ ಹೆಚ್ಚು ಅಧಿವೇಶನಗಳಲ್ಲಿ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ಒಂದಾದ ಮೇಲೊಂದರಂತೆ ಬರುವ ಅಧಿವೇಶನಗಳ ನಿಕಟೋತ್ತರ ಅಧಿವೇಶನವು ಮುಕ್ತಾಯಗೊಳ್ಳುವುದಕ್ಕೆ ಮುಂಚೆ ಆ ನಿಯಮದಲ್ಲಿ ಯಾವುದೇ ಮಾರ್ಪಾಟನ್ನು ಮಾಡಬೇಕೆಂದು ಎರಡೂ ಸದನಗಳು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸಕೂಡದೆಂದು ಎರಡೂ ಸದನಗಳು ಒಪ್ಪಿದರೆ, ಆ ತರುವಾಯ ಆ ನಿಯಮವು ಹಾಗೆ ಮಾರ್ಪಾಟಾದ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರ, ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ, ಅಂಥ ಯಾವುದೇ ಮಾರ್ಪಾಟು ಅಥವಾ ರದ್ದತಿಯೂ ಆ ನಿಯಮದ ಮೇರೆಗೆ ಹಿಂದೆ ಮಾಡಿದ ಯಾವುದೇ ಕಾರ್ಯದ ಸಿಂಧುತ್ವಕ್ಕೆ ಬಾಧಕವಾಗತಕ್ಕದ್ದಲ್ಲ.

(2) ಈ ಅಧಿನಿಯಮದ ಅಡಿಯಲ್ಲಿ ರಾಜ್ಯ ಸರ್ಕಾರವು ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ಅಧಿಸೂಚಿಸಿದ ತರುವಾಯ ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಮುಂದೆ ಮಂಡಿಸತಕ್ಕದ್ದು.

30. ತೊಂದರೆಗಳನ್ನು ನಿವಾರಿಸುವ ಅಧಿಕಾರ.– (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ಅಂಥ ತೊಂದರೆಯನ್ನು ನಿವಾರಿಸಲು ಕೇಂದ್ರ ಸರ್ಕಾರವು, ರಾಜಪತ್ರದಲ್ಲಿ ಪ್ರಕಟಿಸಿದ ಆದೇಶದ ಮೂಲಕ, ತನಗೆ ಅವಶ್ಯ ಅಥವಾ ವಿಹಿತ ಎಂದು ಕಂಡುಬರಬಹುದಾದಂಥ ಮತ್ತು ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗಿರದಂಥ ಉಪಬಂಧಗಳನ್ನು ಕಲ್ಪಿಸಬಹುದು:

ಪರಂತು, ಅಂಥ ಯಾವುದೇ ಆದೇಶವನ್ನು ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಎರಡು ವರ್ಷಗಳ ಅವಧಿ ಪೂರ್ಣಗೊಂಡ ನಂತರ ಮಾಡತಕ್ಕದ್ದಲ್ಲ.

(2) ಈ ಪ್ರಕರಣದ ಮೇರೆಗೆ ಮಾಡಲಾದ ಪ್ರತಿಯೊಂದು ಆದೇಶವನ್ನು, ಅದನ್ನು ಮಾಡಿದ ತರುವಾಯ ಸಾಧ್ಯವಾದಷ್ಟು ಬೇಗನೆ, ಸಂಸತ್ತಿನ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.
31. ನಿರಸನ.– ಮಾಹಿತಿ ಸ್ವಾತಂತ್ರ್ಯ ಅಧಿನಿಯಮ, 2002ನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

## ಮೊದಲನೇ ಅನುಸೂಚಿ

[13 (3) ಮತ್ತು 16 (3) ಪ್ರಕರಣಗಳನ್ನು ನೋಡಿ]

ಮುಖ್ಯ ಮಾಹಿತಿ ಆಯುಕ್ತ/ ಮಾಹಿತಿ ಆಯುಕ್ತ/ ರಾಜ್ಯ ಮುಖ್ಯ ಮಾಹಿತಿ ಆಯುಕ್ತ/ ರಾಜ್ಯ ಮಾಹಿತಿ ಆಯುಕ್ತರು ಕೈಗೊಳ್ಳಬೇಕಾದ ಪ್ರಮಾಣ ವಚನದ ಅಥವಾ ದೃಢೀಕರಣದ ನಮೂನೆ

"ಮುಖ್ಯ ಮಾಹಿತಿ ಆಯುಕ್ತ/ ಮಾಹಿತಿ ಆಯುಕ್ತ/ ರಾಜ್ಯ ಮುಖ್ಯ ಮಾಹಿತಿ ಆಯುಕ್ತ/ ರಾಜ್ಯ ಮಾಹಿತಿ ಆಯುಕ್ತನಾಗಿ ನೇಮಕಗೊಂಡ ................................ ಆದ ನಾನು, ಕಾನೂನಿನ ಮೂಲಕ ಸ್ಥಾಪಿತವಾದ ಸಂವಿಧಾನಕ್ಕೆ ಸರಿಯಾದ ಶ್ರದ್ಧೆ ಮತ್ತು ನಿಷ್ಠೆಯನ್ನು ಹೊಂದಿರುತ್ತೇನೆಂದು, ಭಾರತದ ಅಖಂಡತೆ ಮತ್ತು ಸಾರ್ವಭೌಮತ್ವವನ್ನು ಎತ್ತಿಹಿಡಿಯುತ್ತೇನೆಂದು, ನನ್ನ ಪದದ ಕರ್ತವ್ಯಗಳನ್ನು ಯಾವುದೇ ಭಯ ಅಥವಾ ಪಕ್ಷಪಾತ, ಒಲವು ಅಥವಾ ದ್ವೇಷವಿಲ್ಲದೆ ವಿಧ್ಯುಕ್ತವಾಗಿ ಮತ್ತು ನಿಷ್ಠೆಯಿಂದ ಹಾಗೂ ನನ್ನ ಸಾಮರ್ಥ್ಯ, ತಿಳಿವಳಿಕೆ ಮತ್ತು ವಿವೇಚನೆಯನುಸಾರ ನೆರವೇರಿಸುತ್ತೇನೆಂದು ಮತ್ತು ಸಂವಿಧಾನ ಮತ್ತು ಕಾನೂನುಗಳನ್ನು ಎತ್ತಿಹಿಡಿಯುತ್ತೇನೆಂದು ದೇವರ ಹೆಸರಿನಲ್ಲಿ ಪ್ರಮಾಣ ಮಾಡುತ್ತೇನೆ/ ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ.

## ಎರಡನೆಯ ಅನುಸೂಚಿ

(24ನೇ ಪ್ರಕರಣ ನೋಡಿ)

ಕೇಂದ್ರ ಸರ್ಕಾರದಿಂದ ಸ್ಥಾಪಿಸಲಾಗಿರುವ ಗುಪ್ತಮಾಹಿತಿ ಮತ್ತು ಭದ್ರತಾ ಸಂಸ್ಥೆಗಳು

### ಗುಪ್ತಮಾಹಿತಿ ಸಂಸ್ಥೆ

1. ಸಚಿವ ಸಂಪುಟ ಸಚಿವಾಲಯದ ಸಂಶೋಧನೆ ಮತ್ತು ವಿಶ್ಲೇಷಣಾ ವಿಭಾಗ
2. ರಾಜಸ್ವ ಗುಪ್ತ ಮಾಹಿತಿ ನಿರ್ದೇಶನಾಲಯ
3. ಕೇಂದ್ರ ಆರ್ಥಿಕ ಗುಪ್ತಮಾಹಿತಿ ಸಂಸ್ಥೆ
4. ಜಾರಿ ನಿರ್ದೇಶನಾಲಯ
5. ಮಾದಕ ವಸ್ತುಗಳ ನಿಯಂತ್ರಣಾ ಸಂಸ್ಥೆ
6. ವಾಯುಯಾನ ಸಂಶೋಧನಾ ಕೇಂದ್ರ
7. ವಿಶೇಷ ಸರಹದ್ದು ದಳ
8. ಗಡಿ ಭದ್ರತಾ ದಳ
9. ಕೇಂದ್ರ ಮೀಸಲು ಪೊಲೀಸ್ ದಳ
10. ಇಂಡೋ – ಟಿಬೆಟಿಯನ್ ಗಡಿ ಪೊಲೀಸ್
11. ಕೇಂದ್ರ ಕೈಗಾರಿಕಾ ಭದ್ರತಾ ದಳ
12. ರಾಷ್ಟ್ರೀಯ ಭದ್ರತಾ ರಕ್ಷಕರು
13. ಅಸ್ಸಾಮ್ ರೈಫಲ್ಸ್
14. ಶಸ್ತ್ರ ಸೀಮಾ ಬಲ
15. ವಿಶೇಷ ವಿಭಾಗ (ಸಿ.ಐ.ಡಿ.), ಅಂಡಮಾನ್ ಮತ್ತು ನಿಕೋಬಾರ್
16. ಅಪರಾಧ ವಿಭಾಗ–ಸಿ.ಐ.ಡಿ– ಸಿ.ಬಿ. ದಾದ್ರಾ ಮತ್ತು ನಗರ್ ಹವೇಲಿ
17. ವಿಶೇಷ ವಿಭಾಗ, ಲಕ್ಷ ದ್ವೀಪ ಪೊಲೀಸ್.
18. ವಿಶೇಷ ರಕ್ಷಕ ದಳ.

19. ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ.
20. ಗಡಿರಸ್ತೆ ಅಭಿವೃದ್ಧಿ ಮಂಡಳಿ.
21. ಹಣಕಾಸು ಗುಪ್ತ ಮಾಹಿತಿ ಘಟಕ, ಭಾರತ]1

1. ದಿನಾಂಕ 28.9.2005ರ ಜಿ.ಎಸ್.ಆರ್. 347ರ ಮೂಲಕ ಪ್ರತಿಯೋಜಿಸಲಾಗಿದೆ. ದಿನಾಂಕ 8.10.2005ರ ಭಾರತ ರಾಜಪತ್ರದ ಭಾಗ– II – ಪ್ರಕರಣ 3–(i)ನೇ ಉಪಪ್ರಕರಣವನ್ನು ನೋಡಿ.